

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 22, ಸಂಚಿಕೆ: 18, ಪುಟಗಳು: 8, ಭಾನುವಾರ, 27 ಅಕ್ಟೋಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3


ಸುಭಾಷಿತ

ಎಷ್ಟು ದೇವರ ನೀನೆಷ್ಟು ನಂಬಿದರೇನೊಂದಿಷ್ಟು
ನೀ ನಂಬದಿರೆ ನಿನ್ನ ನೀನು

। ಕುವೆಂಪು

## ಪಂಚಾಂಗ

(ಭಾನುವಾರ 27, ಅಕ್ಟೋಬರ್-2024)

- ಸಂವತ್ಸರ: ಕ್ರೋಧಿ
- ಋತು: ಶರತ್
- ಅಯನ: ದಕ್ಷಿಣಾಯನ
- ಮಾಸ: ಆಶ್ವಯುಜ
- ಪಕ್ಷ: ಕೃಷ್ಣ
- ತಿಥಿ: ಏಕಾದಶಿ
- ನಕ್ಷತ್ರ: ಮಖ
- ರಾಹುಕಾಲ: 04:27 - 05:54
- ಗುಳಿಕಕಾಲ: 02:59 - 04:27
- ಯಮಗಂಡಕಾಲ: 12:03 - 01:31






# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines


## ಸಂಕ್ಷಿಪ್ತ ಸುದ್ದಿ

### 2000 ಹೆಚ್ಚುವರಿ ಬಸ್ ವ್ಯವಸ್ಥೆ

**ಬೆಂಗಳೂರು:** ಕನ್ನಡ ರಾಜ್ಯೋತ್ಸವ, ದೀಪಾವಳಿ ಮತ್ತು ವಾರಾಂತ್ಯದ ದಿನಗಳು ಒಟ್ಟೊಟ್ಟಿಗೆ ಬಂದಿವೆ. ಹೀಗಾಗಿ ಊರಿಗೆ, ಪ್ರವಾಸಕ್ಕೆ ಹೋಗುವವರ ಸಂಖ್ಯೆ ಹೆಚ್ಚಲಿರುವ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿ 2000 ವಿಶೇಷ ಬಸ್‌ಗಳನ್ನು ರಸ್ತೆಗಿಳಿಸಲು ನಿರ್ಧರಿಸಿದೆ. ಅ.30ರಿಂದ ನ.2ರವರೆಗೆ 4 ದಿನ ಬೆಂಗಳೂರಿನಿಂದ ವಿವಿಧ ಪ್ರದೇಶಗಳಿಗೆ ಹಾಗೂ ನ.3 ಮತ್ತು 4ರಂದು ವಿವಿಧೆಡೆಯಿಂದ ಬೆಂಗಳೂರಿಗೆ ವಿಶೇಷ ಸಾರಿಗೆ ಇರಲಿದೆ. ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣಗಳಿಂದ ಬಸ್‌ಗಳು ಸಂಚರಿಸಲಿವೆ. ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್ ಮುಂತಾದ ಸ್ಥಳಗಳಿಗೆ ವಿಶೇಷ ಬಸ್ ಇರಲಿದೆ.

ಪುಟ 2



### ಒಂದೇ ದಿನ 2 ಬಾರಿ ಹೆಜ್ಜೇನು ದಾಳಿ



**ಶಿವಮೊಗ್ಗ:** ಒಂದೇ ದಿನ ಎರಡು ಬಾರಿ ಹೆಜ್ಜೇನು ದಾಳಿ ನಡೆಸಿದ್ದು, 7 ಜನರು ಗಾಯಗೊಂಡಿದ್ದು, ಓರ್ವನ ಸ್ಥಿತಿ ಗಂಭೀರವಾಗಿದೆ. ಜಿಲ್ಲೆಯ ಹೊಸನಗರ ತಾಲೂಕಿನ ಚಿಕ್ಕಪೇಟೆ ನಗರದಲ್ಲಿ ಈ ಘಟನೆ ನಡೆದಿದ್ದು, ಚಿಕ್ಕಪೇಟೆನಗರದ ಭಾಷಾ ಎಂಬುವವರ ಮನೆ ಸಮೀಪ ಸಂಜೆ 5 ಗಂಟೆ ಸುಮಾರಿಗೆ ಹೆಜ್ಜೇನು ದಾಳಿ ನಡೆಸಿದೆ.

ಕಾಂಗ್ರೆಸ್‌ಗೆ ಮಾಸ್ಟರ್ ಸ್ಟ್ರೋಕ್ ನೀಡಲು

# ರೆಡ್ಡಿ ಗೇಮ್!



**ಬಳ್ಳಾರಿ:** ಸಂಡೂರು ಉಪ ಚುನಾವಣೆಯಲ್ಲಿ ಜನಾರ್ದನ ರೆಡ್ಡಿ ಸದ್ದಿಲ್ಲದೇ ಆಪರೇಷನ್ ಮಾಡಿ ಕಾಂಗ್ರೆಸ್‌ಗೆ ಮಾಸ್ಟರ್ ಸ್ಟ್ರೋಕ್ ನೀಡುತ್ತಾರಾ ಎಂಬ ಪ್ರಶ್ನೆ ಎದ್ದಿದೆ. ಸಂಡೂರಿನಲ್ಲೇ ಮನೆ ಮಾಡಿರುವ ಜನಾರ್ದನ ರೆಡ್ಡಿ ಗೌಪ್ಯವಾಗಿ ಕಾಂಗ್ರೆಸ್ ಅತೃಪ್ತರ ಮುಖಂಡರ ಸಂಪರ್ಕ ಮಾಡುತ್ತಿದ್ದಾರೆ ಎನ್ನಲಾಗಿದೆ.

ಪುಟ 2

## ವೀಕೆಂಡ್‌ನಲ್ಲಿ ಹಾಸನಾಂಬೆ ದರ್ಶನಕ್ಕೆ ಭಕ್ತಸಾಗರ

**ಹಾಸನ:** ವರ್ಷಕ್ಕೊಮ್ಮೆ ದರ್ಶನ ನೀಡುವ ಹಾಸನಾಂಬಾ ದೇವಿಯ ದರ್ಶನ ಪಡೆಯಲು ಅಪಾರ ಸಂಖ್ಯೆಯಲ್ಲಿ ಭಕ್ತರು ಬರುತ್ತಿದ್ದಾರೆ. ಭಾನುವಾರ ವೀಕೆಂಡ್ ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ. ತಡರಾತ್ರಿಯಿಂದಲೇ ಸರತಿ ಸಾಲಿನಲ್ಲಿ ನಿಂತಿದ್ದ ಭಕ್ತರು ಬೆಳಗ್ಗೆ ದೇವಿ ದರ್ಶನ ಪಡೆದು ಪುನೀತರಾದರು. 1,000 ರೂ., 300 ರೂ. ಶುಲ್ಕವಿರುವ ವಿಶೇಷ ದರ್ಶನದ ಸಾಲುಗಳು ಕೂಡ ಭರ್ತಿಯಾಗಿವೆ. ರಾಜ್ಯ, ದೇಶ-ವಿದೇಶಗಳಿಂದ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವಿ ದರ್ಶನ ಪಡೆಯುತ್ತಿದ್ದಾರೆ. ಇಂದು ಬೆಳಗ್ಗೆ 10 ಗಂಟೆಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಹಾಸನಾಂಬೆ ದೇವಿ ದರ್ಶನ ಪಡೆಯಲಿದ್ದಾರೆ.





## ಕುಡಿದ ಮತ್ತಿನಲ್ಲಿ ಬಿಎಂಟಿಸಿ ನಿರ್ವಾಹಕ ಚಾಲಕನ ಮೇಲೆ ಹಲ್ಲೆ

# ಎಫ್‌ಐಆರ್ ದಾಖಲು





**ಬೆಂಗಳೂರು:** ಕ್ಷುಲ್ಲಕ ಕಾರಣಕ್ಕೆ ಬೆಂಗಳೂರು ಮಹಾನಗರ ಸಾರಿಗೆ ಬಸ್ ನಿರ್ವಾಹಕ ಮತ್ತು ಚಾಲಕನ ಮೇಲೆ ಕಿಡಿಗೇಡಿಗಳು ಹಲ್ಲೆ ಮಾಡಿರುವ ಘಟನೆ ನಗರದ ಟ್ಯಾನರಿ ರಸ್ತೆಯಲ್ಲಿ ಶನಿವಾರ ಸಂಜೆ ನಡೆದಿದೆ. ಕಿಡಿಗೇಡಿಗಳು ಕುಡಿದ ಮತ್ತಿನಲ್ಲಿ ನಿರ್ವಾಹಕ ಶಿವಕುಮಾರ್ ಮತ್ತು ಚಾಲಕ ಗಗನ್ ಮೇಲೆ ಹಲ್ಲೆ ಮಾಡಿದ್ದಾರೆ. ಘಟನೆ ಸಂಬಂಧ ಕೆ.ಜಿ.ಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ನಿನ್ನೆ ಸಂಜೆ 3:40ರ ಸುಮಾರಿಗೆ ಬಿಎಂಟಿಸಿ 290ಇ ಎಲೆಕ್ಟ್ರಿಕ್ ಬಸ್ ಯಲಹಂಕದಿಂದ ಶಿವಾಜಿನಗರಕ್ಕೆ ಹೊರಟಿತ್ತು. ಸಂಜೆ 5.25ಕ್ಕೆ ಟ್ಯಾನರಿ ರಸ್ತೆಯಲ್ಲಿ ಕೆನರಾ ಬ್ಯಾಂಕ್ ಬಸ್ ನಿಲ್ದಾಣದಲ್ಲಿ ಬಸ್ ನಿಲುಗಡೆಯಾಗಿದೆ. ಈ ವೇಳೆ ಸ್ಕೂಟಿ ದ್ವಿಚಕ್ರ ವಾಹನದಲ್ಲಿ ಬಂದ ಇಬ್ಬರು ವ್ಯಕ್ತಿಗಳು ವಾಹನದ ಮುಂಭಾಗಲಿನಿಂದ ಒಳ ಬಂದು ಕರ್ತವ್ಯದಲ್ಲಿದ್ದ ಚಾಲಕ ಗಗನ್ ಅವರಿಗೆ ಏಕಾಏಕಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಕೈ ತಿರುವಿ, ಮುಖಕ್ಕೆ ಗುದ್ದಿದ್ದಾರೆ. ಈ ವೇಳೆ ನಿರ್ವಾಹಕ ಶಿವಕುಮಾರ ತಡೆಯಲು ಹೋದಾಗ, ಅವರನ್ನು ಹೊರಗಡೆ ಎಳೆದು ಬಸ್ಸಿನ ಮುಂಭಾಗದಲ್ಲಿ ನಿಲ್ಲಿಸಿ ಥಳಿಸಿ ಮುಖ, ಕತ್ತು ಮತ್ತು ಸೊಂಟದ ಭಾಗಕ್ಕೆ ಗುದ್ದಿ ಹಲ್ಲೆ ಮಾಡಿದ್ದಾರೆ.

ಕರ್ತವ್ಯ ನಿರ್ವಹಿಸುತ್ತಿರುವಾಗ ಬಂದು ಅಡ್ಡಿಪಡಿಸಿ ಅವಾಚ್ಯ ಶಬ್ದಗಳಿಂದ ಬೈದು ಕೈಗಳಿಂದ ಹೊಡೆದು ಹಲ್ಲೆ ಮಾಡಿರುವ ಆರೋಪಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಚಾಲಕ ಗಗನ್ ದೂರು ದಾಖಲಿಸಿದ್ದಾರೆ.

ಇತ್ತೀಚಿಗೆ ನಗರದಲ್ಲಿ ದಿನದಿಂದ ದಿನಕ್ಕೆ ಬಿಎಂಟಿಸಿ ನೌಕರರ ಮೇಲೆ ಹಲ್ಲೆ ಪ್ರಕರಣಗಳು ಹೆಚ್ಚಾಗುತ್ತಿವೆ. ಈ ತಿಂಗಳ ಆರಂಭದಲ್ಲಿ ಬೆಂಗಳೂರಿನ ವೈಟ್‌ಫೀಲ್ಡ್‌ನಲ್ಲಿ ಬಿಎಂಟಿಸಿ ವೋಲ್ವೋ ಬಸ್ ಪ್ರಯಾಣಿಕನೊಬ್ಬ ಕಂಡಕ್ಟರ್‌ಗೆ ಚಾಕುವಿನಿಂದ ಇರಿದ ಘಟನೆ ಭಾರೀ ಸಂಚಲನ ಸೃಷ್ಟಿಸಿತ್ತು.

ಈ ಪ್ರಕರಣ ಬೆನ್ನಲ್ಲೇ ಪ್ರಯಾಣಿಕನೊಬ್ಬ ಕಲ್ಲಿನಿಂದ ಕಂಡಕ್ಟರ್ ತಲೆಯನ್ನು ಜಜ್ಜಲು ಬಂದಿದ್ದನು. ಕಂಡಕ್ಟರ್ ತಲೆಗೆ ಕಲ್ಲು ಬೀಸಿ ಎಸ್ಕೇಪ್ ಆಗಲು ಯತ್ನಿಸಿದ್ದ ಘಟನೆ ಟಿನ್ ಫ್ಯಾಕ್ಟರಿ ಬಳಿ ನಡೆದಿತ್ತು. ಎಂ-14ಈ1107 ನಂಬರಿನ ಬಿಎಂಟಿಸಿ ಬಸ್‌ನಲ್ಲಿ ಈ ಘಟನೆ ನಡೆದಿತ್ತು. ಈ ಹಿನ್ನೆಲೆಯಲ್ಲಿ ಬಸ್ ಕಂಡಕ್ಟರ್‌ಗಳ ಸುರಕ್ಷತೆಯ ಬಗ್ಗೆ ಮತ್ತೆ ಆತಂಕ ಸೃಷ್ಟಿಯಾಗಿದೆ. ಕಳೆದ ಎರಡು ತಿಂಗಳಲ್ಲಿ ಬೆಂಗಳೂರಿನ ಬಸ್ ಕಂಡಕ್ಟರ್ ಮೇಲೆ ಹಲ್ಲೆ ನಡೆದಿರುವ ನಾಲ್ಕು ಘಟನೆ ನಡೆದಿದೆ.

## ಸಿಎಂ ಹೇಳಿದ್ರೂ ಕೇಳಲ್ಲ, ಡಿಸಿಎಂ ಹೇಳಿದ್ರೂ ಕೇಳಲ್ಲ!



**ಹಾವೇರಿ:** ಶಿಗ್ಗಾವಿ ವಿಧಾನಸಭಾ ಉಪ ಚುನಾವಣಾ ಕಣ ರಂಗೇರುತ್ತಿದೆ. ಬಿಜೆಪಿಯಿಂದ ಬಸವರಾಜ ಬೊಮ್ಮಾಯಿ ಪುತ್ರ ಭರತ್ ಬೊಮ್ಮಾಯಿ ಕಣದಲ್ಲಿದ್ದರೆ, ಮಾಜಿ ಸಿಎಂ ಪುತ್ರನಿಗೆ ಸೋಲುಣಿಸುವ ಹುಮ್ಮಸ್ಸಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹ್ಮದ್ ಖಾನ್ ಪಠಾಣ್ ಇದ್ದಾರೆ. ಈ ನಡುವೆ ಕಾಂಗ್ರೆಸ್ ಟಿಕೆಟ್ ವಂಚಿತ ಅಜ್ಜಂಪೀರ್ ಖಾದ್ರಿ, ಬಂಡಾಯವೆದ್ದು, ಪಕ್ಷೇತರರಾಗಿ ನಾಮಪತ್ರ ಸಲ್ಲಿಸಿದ್ದರು. ಆದರೆ ಸಂಧಾನದ ಬಳಿಕ ಖಾದ್ರಿ, ನಾಮಪತ್ರ ವಾಪಸ್ ಪಡೆದು, ಕಣ್ಣೀರಿಟ್ಟಿದ್ದಾರೆ. ಆದರೆ ಮತ್ತೋರ್ವ ಟಿಕೆಟ್ ವಂಚಿತ ಮಂಜುನಾಥ್ ಕುನ್ನೂರ್ ಕೂಡ ಈಗಾಗಲೇ ಪಕ್ಷೇತರರಾಗಿ ಕಣದಲ್ಲಿದ್ದಾರೆ. ನಾನು ಯಾವುದೇ ಕಾರಣಕ್ಕೂ ನಾಮಪತ್ರ ಹಿಂಪಡೆಯೋದಿಲ್ಲ, ಚುನಾವಣಾ ಕಣದಿಂದ ಹಿಂದೆ ಸರಿಯೋ ಮಾತೇ ಇಲ್ಲ ಎಂದಿದ್ದಾರೆ.

ಪುಟ 2

ದೀಪಾವಳಿಗೆ ಪಟಾಕಿ ಸಿಡಿಸಲು ಸಮಯ ನಿಗದಿ

## ಹಸಿರು ಪಟಾಕಿಗೆ ಅವಕಾಶ

**ಬೆಂಗಳೂರು:** ದೀಪಾವಳಿಗೆ ಮೊದಲೇ ದೆಹಲಿ ಗ್ಯಾಸ್ ಚೇಂಬರ್ ಆಗಿ ಬದಲಾಗಿದೆ. ದೆಹಲಿಯ ಗಾಳಿ ಗುಣಮಟ್ಟ ಕುಸಿದಿದೆ. ಇದ್ರಿಂದ ಎಚ್ಚೆತ್ತ ಕರ್ನಾಟಕ ಸರ್ಕಾರ, ಸುಪ್ರೀಂ ಕೋರ್ಟ್ ಆದೇಶದ ಅನುಸಾರ ರಾತ್ರಿ 8 ರಿಂದ 10 ಗಂಟೆ ತನಕ ಹಸಿರು ಪಟಾಕಿ ಹೊಡೆಯಬೇಕು ಎಂದು ಎಚ್ಚರಿಕೆ ನೀಡಿದೆ. ಈ ಸಂಬಂಧ ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಿಎಂ, ರಾತ್ರಿ 8 ಗಂಟೆಯಿಂದ 10 ಗಂಟೆ ತನಕ ಪಟಾಕಿ ಹೊಡೆಯಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ದೀಪಾವಳಿ ಸಂದರ್ಭದಲ್ಲಿ ಹಸಿರು ಪಟಾಕಿಗೆ ಮಾತ್ರ ಅವಕಾಶವಿದೆ ಎಂದಿದ್ದಾರೆ.



ಪುಟ 2

ಮಾಲೀಕಯ್ಯ ಗುತ್ತೇದಾರ್‌ಗೆ ಮಹಿಳೆಯಿಂದ ಬ್ಲ್ಯಾಕ್‌ಮೇಲ್

## 20 ಲಕ್ಷಕ್ಕೆ ಬೇಡಿಕೆ



**ಬೆಂಗಳೂರು:** ಸಲುಗೆ ಮಾತುಕತೆಯ ಆಡಿಯೋ-ವಿಡಿಯೋ ಬಿಡುಗಡೆ ಮಾಡದೇ ಇರಲು 20 ಲಕ್ಷ ರು. ಹಣ ನೀಡುವಂತೆ ಕಾಂಗ್ರೆಸ್ ಮುಖಂಡ, ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ್ ಅವರಿಗೆ ಬ್ಲ್ಯಾಕ್‌ಮೇಲ್ ಮಾಡಿದ ಘಟನೆ ನಡೆದಿದೆ. ಈ ಪ್ರಕರಣ ಸಂಬಂಧ ಕಲಬುರಗಿ ಜಿಲ್ಲೆಯ ಮಹಮ್ಮದ್ ನಲಪಾಡ್ ಬ್ರಿಗೇಡ್ ಅಧ್ಯಕ್ಷೆ ಹಾಗೂ ಆಕೆಯ ಪತಿಯನ್ನು ಪೊಲೀಸರು ಬಂಧಿಸಿದ್ದಾರೆ. ಶನಿವಾರ ಕಲಬುರಗಿ ನಗರದ ಆಳಂದ ನಿವಾಸಿಗಳಾದ ಮಂಜುಳಾ, ಆಕೆಯ ಪತಿ ಶಿವರಾಜ್ ಪಾಟೀಲ್ ಬಂಧಿತರಾಗಿದ್ದು, ಆರೋಪಿಗಳಿಂದ ಪೊಲೀಸರು ಮೊಬೈಲ್ ಜಪ್ತಿ ಮಾಡಿದ್ದಾರೆ.

ಪುಟ 2

ತನಿಖೆ ಪ್ರಕರಣಗಳ ವಿಚಾರಣೆಗೆ

## ವಿಶೇಷ ಕೋರ್ಟ್?

**ಬೆಂಗಳೂರು:** ತಾನು ತನಿಖೆ ನಡೆಸುವ ಪ್ರಕರಣಗಳನ್ನು ವಿಚಾರಣೆಗೆ ಜನಪ್ರತಿನಿಧಿಗಳ ನ್ಯಾಯಾಲಯ ಮಾದರಿ ವಿಶೇಷ ನ್ಯಾಯಾಲಯ ಸ್ಥಾಪಿಸುವಂತೆ ರಾಜ್ಯ ಸರ್ಕಾರಕ್ಕೆ ಅಪರಾಧ ತನಿಖಾ ಇಲಾಖೆ (ಸಿಐಡಿ) ಪ್ರಸ್ತಾವನೆ ಸಲ್ಲಿಸಿದೆ. ಈ ಪ್ರಸ್ತಾವನೆಗೆ ಗೃಹ ಇಲಾಖೆ ಕೂಡ ಸಕಾರಾತಾತ್ಮಕವಾಗಿ ಸ್ಪಂದಿಸಿದ್ದು, ಕಾನೂನು ಇಲಾಖೆ ಜತೆ ಸಮಾಲೋಚಿಸಿ ವಿಶೇಷ ನ್ಯಾಯಾಲಯ ಸ್ಥಾಪನೆಗೆ ನಿರ್ಧಾರವನ್ನು ಸರ್ಕಾರ ಪ್ರಕಟಿಸಲಿದೆ ಎಂದು ತಿಳಿದು ಬಂದಿದೆ. ಪ್ರಸುತ್ತ ಅಪರಾಧ ಕೃತ್ಯಗಳ ಸಂಬಂಧ ಎಫ್ ಐಆರ್ ದಾಖಲಾಗುವ ವ್ಯಾಪ್ತಿಯ ನ್ಯಾಯಾಲಯಕ್ಕೆ ಸಿಐಡಿ ಆರೋಪ ಪಟ್ಟಿ ಸಲ್ಲಿಸುತ್ತಿದ್ದು, ಆ ನ್ಯಾಯಾಲದಲ್ಲಿ ಪ್ರಕರಣಗಳ ವಿಚಾರಣೆ ನಡೆಯುತ್ತದೆ.



ಪುಟ 2

ಗಂಡನಿಗೆ ಊಟದಲ್ಲಿ ವಿಷ ಬೆರೆಸಿ ಕೊಡ್ತಿದ್ದ ಸುಂದರಿ

## ಸ್ಲೋ ಪಾಯ್ಸನ್ ಯಾವುದು?

**ಉಡುಪಿ:** ಕರಿಮಣಿ ಮಾಲೀಕ ನೀನಲ್ಲ ಎನ್ನುತ್ತಾ ವಿಷ ಹಾಕಿ.. ಉಸಿರುಗಟ್ಟಿಸಿ ಕೊಂದ ರಿಲ್ಸ್ ರಾಣಿ ಪ್ರತಿಮಾ ಕಂಬಿ ಎಣಿಸುತ್ತಿದ್ದಾಳೆ. ಕೊಲೆ ಕೃತ್ಯದಲ್ಲಿ ಪ್ರಮುಖ ಪಾತ್ರವಹಿಸಿದ ಆಕೆಯ ಸ್ನೇಹಿತ ದಿಲೀಪ್ ಹೆಗ್ಡೆಯ ತೀವ್ರ ವಿಚಾರಣೆ ನಡೆಸಲಾಗುತ್ತಿದೆ. ಹೊಸ ಮನೆ ಕಟ್ಟಿಸಿ ಒಂದು ವರ್ಷ ಕಳೆಯುವ ಮೊದಲೇ ಬೆಡ್‌ರೂಮ್‌ನಲ್ಲಿ ಗಂಡನ ಉಸಿರು ನಿಲ್ಲಿಸಿದ ಕಥೆ ನಿಜಕ್ಕೂ ರೋಚಕ.. ಭಯಾನಕ? ಉಡುಪಿ ಜಿಲ್ಲೆ ಕಾರ್ಕಳದ ಪ್ರತಿಮಾ ಎಂಬ ರಿಲ್ಸ್ ರಾಣಿ ತನ್ನ ಪ್ರಿಯಕರ ದಿಲೀಪ್ ಹೆಗ್ಡೆ ಜೊತೆ ಸೇರಿ, ಮುಗ್ಧ ಪತಿ ಬಾಲಕೃಷ್ಣ ಪೂಜಾರಿಯನ್ನು ಕೊಂದಿರುವ ಅಮಾನವೀಯ ಘಟನೆ ಎಲ್ಲರನ್ನೂ ಬೆಚ್ಚಿ ಬೀಳಿಸಿದೆ. ಪ್ರಿಯಕರ ತಂದುಕೊಟ್ಟ ಸ್ಲೋ ಪಾಯ್ಸನನ್ನು ಸ್ವಲ್ಪ ಸ್ವಲ್ಪವೇ ಕೊಟ್ಟು, ಆರೋಗ್ಯ ಹದಗೆಡುವಂತೆ ಮಾಡಿದ ಪ್ರತಿಮಾ, ಕೊನೆಗೆ ಗೆಳೆಯನ ಜೊತೆ ಸೇರಿ ಉಸಿರುಗಟ್ಟಿಸಿ ಪತಿಯನ್ನು ಕೊಂದ ಪ್ರಕರಣವಿದು. ಇದೀಗ ಆರೋಪಿಗಳಿಬ್ಬರು ಪೊಲೀಸರ ಅತಿಥಿಗಳಾಗಿದ್ದಾರೆ. ತನ್ನ ಸಹೋದರನ ಮುಂದೆ ಎಲ್ಲಾ ಸತ್ಯವನ್ನು ಬಿಚ್ಚಿಟ್ಟ ಪ್ರತಿಮಾ, ಅಜೆಕಾರು ಪೊಲೀಸರ ಮುಂದೆ ತಾನೇ ಕೊಲೆ ಮಾಡಿರುವುದನ್ನು ಒಪ್ಪಿಕೊಂಡಿದ್ದಾಳೆ. ಆಕೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು ನೇರವಾಗಿ 14 ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ. ಕಂಬಿ ಹಿಂದೆ ಸೇರುವ ಮೊದಲೇ ಪತ್ನಿ ಪ್ರತಿಮಾ ಎಲ್ಲಾ ದುಷ್ಟ ಕೃತ್ಯವನ್ನು ಪೊಲೀಸರ ಮುಂದೆ ಬಿಚ್ಚಿಟ್ಟಿದ್ದಾಳೆ. ತನ್ನ ಪ್ರಿಯತಮೆಗೆ ವಿಷ ತಂದುಕೊಟ್ಟು ಕೊಲೆಯಲ್ಲಿ ಪ್ರಮುಖ ಪಾತ್ರ ವಹಿಸಿದ, ಪ್ರಿಯಕರ ದಿಲೀಪ್ ಹೆಗ್ಡೆ, ಬಾಯಿಬಿಡಲು ನಕ್ರಾ ಮಾಡುತ್ತಿದ್ದಾನೆ. ಈತನಿಂದ ಸಾಕಷ್ಟು ಸತ್ಯಗಳನ್ನು ಹೊರ ತರುವುದು ಬಾಕಿ ಇದೆ. ಹಾಗಾಗಿ ಇವನನ್ನು 5 ದಿನಗಳ ಪೊಲೀಸ್ ಕಸ್ಟಡಿಗೆ ನೀಡಿ ನ್ಯಾಯಾಲಯ ಆದೇಶ ಮಾಡಿದೆ.



ಪುಟ 2

ಮಹಾರಾಷ್ಟ್ರ ಚುನಾವಣೆಯಲ್ಲಿ ಎಎಪಿ ಸ್ಪರ್ಧಿಸಲ್ಲ

## ಮಹಾ ಚುನಾವಣೆಯಲ್ಲಿ ಎಎಪಿ ಸ್ಪರ್ಧಿಸಲ್ಲ



**ಮುಂಬೈ:** ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ ಸ್ಪರ್ಧಿಸುವುದಿಲ್ಲ. ಮಹಾ ವಿಕಾಸ್ ಅಘಾಡಿ ಒಕ್ಕೂಟದ ಪರ ಪ್ರಚಾರ ನಡೆಸಲಿದೆ ಎಂದು ಎಎಪಿ ನಾಯಕ ಸಂಜಯ್ ಸಿಂಗ್ ತಿಳಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಅವರು, ಮಹಾರಾಷ್ಟ್ರ ಚುನಾವಣೆಯಲ್ಲಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರು ಎಂವಿಎ ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ. ಆಮ್ ಆದ್ಮಿ ಪಕ್ಷವು ಮಹಾರಾಷ್ಟ್ರದಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದಾರೆ.

ಮಹಾರಾಷ್ಟ್ರದಲ್ಲಿ ಅರವಿಂದ್ ಕೇಜ್ರಿವಾಲ್ ಪ್ರಚಾರ ಮಾಡುತ್ತಿರುವ ಬಗ್ಗೆ ಶಿವಸೇನೆ (ಯುಬಿಟಿ) ಮತ್ತು ಎನ್‌ಸಿಪಿ-ಎಸ್‌ಪಿ ಪಕ್ಷವನ್ನು ಸಂಪರ್ಕಿಸಿವೆ. ಜಾರ್ಖಂಡ್ ವಿಧಾನಸಭಾ ಚುನಾವಣೆಯಲ್ಲಿ ಹೇಮಂತ್ ಸೋರೆನ್ ಅವರ ಆಡಳಿತಾರೂಢ ಜಾರ್ಖಂಡ್ ಮುಕ್ತಿ ಮೋರ್ಚಾ ಪರ ಪ್ರಚಾರ ಮಾಡಲು ಅರವಿಂದ್ ಕೇಜ್ರಿವಾಲ್ ಕೂಡ ಸಿದ್ಧರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಎಂವಿಎ ಒಕ್ಕೂಟವು ಉದ್ಧವ್ ಠಾಕ್ರೆ ಅವರ ಶಿವಸೇನೆ (ಯುಬಿಟಿ), ಶರದ್ ಪವಾರ್ ಅವರ ಎನ್‌ಸಿಪಿ-ಎಸ್‌ಪಿ ಮತ್ತು ಕಾಂಗ್ರೆಸ್ ಅನ್ನು ಒಳಗೊಂಡಿದೆ.

ಮಹಾರಾಷ್ಟ್ರದಲ್ಲಿ 288 ವಿಧಾನಸಭಾ ಸ್ಥಾನಗಳಿದ್ದು, ನ.20 ರಂದು ಮತದಾನ ನಡೆಯಲಿದೆ. ಜಾರ್ಖಂಡ್‌ನಲ್ಲಿ ನ.13 ಮತ್ತು 20 ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, ಎರಡೂ ರಾಜ್ಯಗಳ ಮತ ಎಣಿಕೆ ನವೆಂಬರ್ 23 ರಂದು ನಡೆಯಲಿದೆ.

ಎಎಪಿ ಮತ್ತು ಎಂವಿಎ ಘಟಕಗಳು ಬಿಜೆಪಿಯನ್ನು ಎದುರಿಸಲು 2024 ರ ಲೋಕಸಭಾ ಚುನಾವಣೆಯ ಮೊದಲು ರಚಿಸಲಾದ ಭಾರತೀಯ ರಾಷ್ಟ್ರೀಯ ಅಭಿವೃದ್ಧಿ ಅಂತರ್ಗತ ಒಕ್ಕೂಟದ (ಭಾರತ) ಭಾಗವಾಗಿದೆ.

# ಮಳೆ ಹಾನಿ ಬಗ್ಗೆ ಸಿಎಂ ಸಿದ್ದರಾಮಯ್ಯ ಸಭೆ

**ಬೆಂಗಳೂರು:** ಕಳೆದ 15 ದಿನದಿಂದ ಕರ್ನಾಟಕದೆಲ್ಲೆಡೆ ಆರ್ಭಟಿಸುತ್ತಿರುವ ಮಳೆಯಿಂದಾಗಿ ಅವಾಂತರಗಳಿಗೆ ಕೊನೆಯಿಲ್ಲದಂತಾಗಿದೆ. ಸ್ವಲ್ಪ ಮಳೆ ಕಡಿಮೆಯಾಗಿದ್ರೂ ನಿತ್ಯ ಒಂದೊಂದೇ ಹೊಸ ಸಮಸ್ಯೆಗಳು ಸೃಷ್ಟಿಯಾಗುತ್ತಿವೆ. ಹೀಗಾಗಿ ನಿನ್ನೆ ಡಿಸಿಎಂ ಡಿಕೆ ಶಿವಕುಮಾರ್ ವಿಪತ್ತು ನಿರ್ವಹಣೆ ಕುರಿತು ಬಿಬಿಎಂಪಿ ಮುಖ್ಯ ಕಚೇರಿಯಲ್ಲಿ ಸಭೆ ಮಾಡಿ ಕೆಲ ನಿರ್ಧಾರಗಳನ್ನು ಕೈಗೊಂಡಿದ್ದರು. ಇದೀಗ ಸಿಎಂ ಸಿದ್ದರಾಮಯ್ಯ ಕೂಡ ಮಳೆ ಹಾನಿ ಸಂಬಂಧ ಡಿಸಿ, ಜಿ.ಪಂ. ಸಿಇಓಗಳ ಜತೆ ಸಿಎಂ ಸಭೆ ಮಾಡಿದ್ದು, ಪ್ರಮುಖ ಸೂಚನೆಗಳನ್ನು ನೀಡಿದ್ದಾರೆ.

ತಕ್ಷಣ ಪರಿಹಾರಕ್ಕೆ ಡಿಸಿಗಳಿಗೆ ಸೂಚನೆ: ನೆರೆ ಪೀಡಿತ ಪ್ರದೇಶಗಳಿಗೆ ಸ್ವತಃ ಡಿಸಿಗಳು ಭೇಟಿ ನೀಡಬೇಕು. ಪರಿಶೀಲನೆ ಮಾಡಿ ತಕ್ಷಣ ಪರಿಹಾರ ನೀಡಬೇಕು. ಯಾವುದೇ ಅನಾಹುತ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದ್ದಾರೆ. ರಾಜ್ಯದ ಹಲವು ಭಾಗಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಲಿದೆ. ಅಕ್ಟೋಬರ್‌ನಿಂದ ಡಿಸೆಂಬರ್‌ವರೆಗೆ ಮಳೆ ಮುನ್ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಪ್ರಮುಖ ಡ್ಯಾಂಗಳ ಒಟ್ಟು ಸಂಗ್ರಹಣಾ ಸಾಮರ್ಥ್ಯ 895.62 ಟಿಎಂಸಿ ಇದ್ದು, ಪ್ರಮುಖ ಡ್ಯಾಂಗಳಲ್ಲಿ ಪ್ರಸ್ತುತ 871.26 ಟಿಎಂಸಿ ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಇದು 505.81 ಟಿಎಂಸಿ ನೀರು ಇತ್ತು. ಈ ಬಾರಿ ಜಲವಿದ್ಯುತ್ ಉತ್ಪಾದನೆಗೆ ಉತ್ತಮ ಪ್ರಮಾಣದ ನೀರು ಲಭ್ಯವಾಗಿದೆ ಎಂದಿದ್ದಾರೆ. ಕಾವೇರಿ ಕಣಿವೆ ಮತ್ತು ಕೃಷ್ಣಾ ಕಣಿವೆಯಲ್ಲೂ ಉತ್ತಮ ನೀರು ಸಂಗ್ರಹವಿದೆ. ನೀರಾವರಿಗೆ ಸಮರ್ಪಕವಾಗಿ ನೀರು ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು, ಜಿ.ಪಂ. ಸಿಇಓಗಳಿಗೆ ಸಿಎಂ ಸಿದ್ದರಾಮಯ್ಯ ಸೂಚಿಸಿದ್ದಾರೆ. ರಾಜ್ಯದಲ್ಲಿ ಈವರೆಗೆ 25 ಜನರು ಮಳೆಯಿಂದ ಮೃತಪಟ್ಟಿದ್ದಾರೆ ಎಂದ ಸಿಎಂ ಸಭೆ ಬಳಿಕ ಗೃಹಕಚೇರಿ ಕೃಷ್ಣಾದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಳೆ ಹಾನಿ ಬಗ್ಗೆ ಡಿಸಿ, ಸಿಇಓಗಳು, ಎಸ್‌ಪಿಗಳ ಸಭೆ ಮಾಡಿದ್ದೇನೆ. ಬೆಂಗಳೂರು ಸೇರಿ ಹಲವೆಡೆ ಹಿಂಗಾರು ಮಳೆಯಿಂದ ಹಾನಿಯಾಗಿದೆ. ಅಕ್ಟೋಬರ್ 1ರಿಂದ 25ರವರೆಗೆ 181 ಮೀ.ಮೀ ಅಂದರೆ ಅತೀ ಹೆಚ್ಚು ಮಳೆಯಾಗಿದೆ ಎಂದಿದ್ದಾರೆ. ರಾಜ್ಯದಲ್ಲಿ ಈವರೆಗೆ 25 ಜನರು ಮಳೆಯಿಂದ ಮೃತಪಟ್ಟಿದ್ದಾರೆ. ಈ ಅವಧಿಯಲ್ಲಿ ಮಳೆಯಿಂದಾಗಿ 84 ಮನೆಗಳು ಸಂಪೂರ್ಣ ಹಾನಿಯಾಗಿದ್ದು, ರಾಜ್ಯದ ಹಲವೆಡೆ 2,074 ಮನೆಗಳು ಭಾಗಶಃ ಹಾನಿಗೀಡಾಗಿವೆ. ಪೂರ್ತಿ ಮನೆ ಹಾನಿಗೆ 1.20 ಲಕ್ಷ ರೂ. ಪರಿಹಾರ ನೀಡಬೇಕು. ಸಣ್ಣಪುಟ್ಟ ಹಾನಿಯಾದರೆ 50 ಸಾವಿರ ರೂ. ಪರಿಹಾರ ಕೊಡುತ್ತೇವೆ. ಈ ಪರಿಹಾರ ನವೆಂಬರ್, ಅಕ್ಟೋಬರ್ ತಿಂಗಳಲ್ಲೂ ಅನ್ವಯ ಆಗಲಿದೆ. ಜತೆಗೆ ಮನೆ ನಿರ್ಮಾಣ ಮಾಡಲು ಈಗಾಗಲೇ ಆದೇಶಿಸಲಾಗಿದೆ ಎಂದು ತಿಳಿಸಿದ್ದಾರೆ.



## 80 ಸಾವಿರ ಹೆಕ್ಟೇರ್ ಬೆಳೆಹಾನಿ

**ಬೆಳೆ ಹಾನಿ ಸುಮಾರು 105900 ಹಾನಿಯಾಗಿದೆ. ಜಂಟಿ ಸರ್ವೇ ಮಾಡಿ ವಾರದೊಳಗೆ ವರದಿ ನೀಡಲು ಹೇಳಿದ್ದೇವೆ. ಕೃಷಿ ಜಮೀನು 9000 ಸಾವಿರ ಹೆಕ್ಟೇರ್, 30 ಸಾವಿರ ಹೆಕ್ಟೇರ್ ತೋಟಗಾರಿಕಾ ಪ್ರದೇಶ ಹಾನಿಯಾಗಿದೆ. 48 ಗಂಟೆಯಲ್ಲಿ ಪರಿಹಾರ ನೀಡಲು ಹೇಳಿದ್ದೇನೆ. ಡಿಸಿ, ಸಿಇಓಗಳ ಬಳಿ 666 ಕೋಟಿ ರೂ. ಹಣ ಇದೆ. 80 ಸಾವಿರ ಹೆಕ್ಟೇರ್ ಬೆಳೆಹಾನಿಯಾಗಿದೆ. ಕೆರೆ ಒತ್ತುವರಿ ತೆರವು ಗೊಳಿಸಲು ಹೇಳಿದ್ದೇನೆ. ಕ್ಯಾಷ್ಮೆಂಟೇರಿಯಾದಲ್ಲಿ ಒತ್ತುವರಿ ಆಗಿದೆ ತೆರವು ಮಾಡಬೇಕು. ಹೂಳು ತೆಗೆಯುವುದಕ್ಕೂ ಹೇಳಿದ್ದೇವೆ ಎಂದಿದ್ದಾರೆ. ಬಿತ್ತನೆ ಬೀಜ ನಷ್ಟ ಆಗಿದ್ದರೆ ಬೀಜ ಸರಬರಾಜು ಮಾಡಲು ಸೂಚನೆ ನೀಡಿದ್ದೇವೆ. ಜಿಲ್ಲಾ ಮಂತ್ರಿಗಳಿಗೆ ಪತ್ರ ಬರೆದಿದ್ದೇನೆ. ಎಲ್ಲಿ ಪ್ರವಾಹ ಮನೆ ಹಾನಿ, ಜೀವ ಹಾನಿ, ಜಾನುವಾರ ಹಾನಿ ಆಗಿದೆ, ಅಲ್ಲಿ ಭೇಟಿ ನೀಡಿ ಸಾಂತ್ವನ ಹೇಳಿ ಪರಿಹಾರ ನೀಡಲು ಸೂಚಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.**

# ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರನ್ನ ಭೇಟಿಯಾದ ಉಪರಾಷ್ಟ್ರಪತಿ

**ಬೆಂಗಳೂರು:** ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರನ್ನು ಪದ್ಮನಾಭನಗರದ ನಿವಾಸದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಭೇಟಿಯಾದರು.

ಬೆಳಗ್ಗೆ 9 ಗಂಟೆಗೆ ಮಾಜಿ ಪ್ರಧಾನಿಗಳ ನಿವಾಸಕ್ಕೆ ಆಗಮಿಸಿದ ಉಪರಾಷ್ಟ್ರಪತಿ, ಒಂದು ಗಂಟೆಗೂ ಹೆಚ್ಚು ಕಾಲ ಇದ್ದು, ಚನ್ನಮ್ಮ ದೇವೇಗೌಡರ ಆರೋಗ್ಯದ ಬಗ್ಗೆ ದೇವೇಗೌಡರಲ್ಲಿ ವಿಚಾರಿಸಿದರು.

ಚನ್ನಮ್ಮ ಅವರು ಆದಷ್ಟು ಬೇಗ ಗುಣಮುಖರಾಗಲಿ. ಆ ನಂತರ ಅವರನ್ನು ತಾವು ದೆಹಲಿಗೆ ಕರೆದುಕೊಂಡು ಬನ್ನಿ ಎಂದು ಮಾಜಿ ಪ್ರಧಾನಿಗಳಿಗೆ ತಿಳಿಸಿದರು. ಇದಕ್ಕೆ ಮಾಜಿ ಪ್ರಧಾನಿಗಳು ಸಮ್ಮತಿಸಿ, ನಮ್ಮ ಮೇಲೆ ತಾವು ಇರಿಸಿರುವ ಪ್ರೀತಿ ವಿಶ್ವಾಸ, ಅಭಿಮಾನಕ್ಕೆ ನನ್ನ ಹೃದಯ ತುಂಬಿ ಬಂದಿದೆ. ತಮ್ಮ ಆಗಮನ ನಮ್ಮ ಇಡೀ ಕುಟುಂಬಕ್ಕೆ ಬಹಳ ಸಂತೋಷ ಉಂಟು ಮಾಡಿದೆ ಎಂದು ಉಪರಾಷ್ಟ್ರಪತಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಜಗದೀಪ್ ಧನಕರ್ ಹಾಗೂ ಪತ್ನಿ ಸುದೇಶ್ ಧನಕರ್ ಅವರು, ಮಾಜಿ ಪ್ರಧಾನಿಗಳು, ಕೇಂದ್ರ ಸಚಿವ ಹೆಚ್ .ಡಿ.ಕುಮಾರಸ್ವಾಮಿ ಅವರ ಜೊತೆಯಲ್ಲಿಯೇ ಉಪಾಹಾರ



ಸೇವಿಸಿದರು. ಈ ಸಂದರ್ಭದಲ್ಲಿ ಅವರೆಲ್ಲರೂ ರಾಷ್ಟ್ರದ ಅಭಿವೃದ್ಧಿಯ ಬಗ್ಗೆ ಚರ್ಚೆ ನಡೆಸಿದರು. ಬಳಿಕ ಕುಟುಂಬದ ಎಲ್ಲಾ ಸದಸ್ಯರ ಕುಶಲೋಪರಿ ವಿಚಾರಿಸಿದರು. ವಿಶೇಷವಾಗಿ ಪುಟ್ಟ ಮಕ್ಕಳ ಜೊತೆ ಉಪರಾಷ್ಟ್ರಪತಿಗಳು ಕೆಲ ಕಾಲ ಕಳೆದರು.

ಮಾಜಿ ಪ್ರಧಾನಿಗಳ ನಿವಾಸಕ್ಕೆ ಆಗಮಿಸಿದ ಉಪರಾಷ್ಟ್ರಪತಿಗಳನ್ನು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಬರಮಾಡಿಕೊಂಡರು. ಬೀಳ್ಕೊಟ್ಟ ನಂತರ ಮಾಧ್ಯಮಗಳ ಜತೆ ಮಾತನಾಡಿದ ಹೆಚ್‌ಡಿಕೆ, ಉಪರಾಷ್ಟ್ರಪತಿಗಳು ಹಾಗೂ ಮಾಜಿ ಪ್ರಧಾನಿಗಳ ನಡುವೆ ಸ್ನೇಹಪೂರ್ವಕ ಬಾಂಧವ್ಯ ಇದೆ. ಇಬ್ಬರೂ ಪರಸ್ಪರ ಗೌರವಭಾವ ಇರಿಸಿಕೊಂಡಿದ್ದಾರೆ. ಇದನ್ನು ಅನೇಕ ಸಲ ಕಣ್ಣಾರೆ ಕಂಡಿದ್ದೇನೆ ಎಂದರು.

ಇಬ್ಬರೂ ನಾಯಕರು ರೈತ ಕುಟುಂಬದ ಹಿನ್ನೆಲೆಯಿಂದ ಬಂದವರು. ಹೀಗಾಗಿ ಅವರಿಬ್ಬರ ಚರ್ಚೆ ಬಹುತೇಕ ಕೃಷಿ ಕೇಂದ್ರಿತವಾಗಿತ್ತು. ರೈತರ ಅಭಿವೃದ್ಧಿಯ ಬಗ್ಗೆ ಅವರು ಅನೇಕ ಮಹತ್ವದ ವಿಚಾರಗಳ ಬಗ್ಗೆ ಚರ್ಚೆ ನಡೆಸಿದರು ಎಂದು ಮಾಹಿತಿ ಹಂಚಿಕೊಂಡರು. ನಂತರ ಉಪರಾಷ್ಟ್ರಪತಿ ದಂಪತಿ ಜೊತೆಗೆ ದೇವೇಗೌಡರ ಕುಟುಂಬ ಸದಸ್ಯರೆಲ್ಲರೂ ಸೇರಿ ಫೋಟೋ ತೆಗೆಸಿಕೊಂಡರು. ಉಪರಾಷ್ಟ್ರಪತಿಗಳು ಅನೇಕ ಸಲ ಬೆಂಗಳೂರಿಗೆ ಬಂದಾಗ ದೇವೇಗೌಡರ ನಿವಾಸಕ್ಕೆ ಭೇಟಿ ನೀಡುವ ಇಂಗಿತ ವ್ಯಕ್ತಪಡಿಸಿದ್ದರು. ಅದರಂತೆ ಇವತ್ತು ಭೇಟಿ ನೀಡಿದ್ದಾರೆ. ಇನ್ನೂ ನಮ್ಮ ತಾಯಿ ಅವರು ಆಸ್ಪತ್ರೆಯಲ್ಲೇ ಇದ್ದಾರೆ. ವಿಶೇಷವಾಗಿ ಉಪರಾಷ್ಟ್ರಪತಿಗಳು ನಮ್ಮ ತಾಯಿಯವರ ಆರೋಗ್ಯ ವಿಚಾರಿಸಿ, ಆದಷ್ಟು ಬೇಗ ಗುಣಮುಖರಾಗಬೇಕು ಎಂದು ಹಾರೈಸಿದರು. ಅವರು ತೋರಿದ ಪ್ರೀತಿ, ವಿಶ್ವಾಸ ಅಭಿಮಾನಕ್ಕೆ ನಮ್ಮ ಕುಟುಂಬ ಚಿರಋಣಿ ಆಗಿರುತ್ತದೆ ಎಂದು ಕುಮಾರಸ್ವಾಮಿ ಹೇಳಿದರು.

### ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪ

# ವಿರೋಧ ಪಕ್ಷಗಳ ಮೇಲೆ ಕೈ ದಬ್ಬಾಳಿಕೆ

**ಬೆಂಗಳೂರು:** ಚನ್ನಪಟ್ಟಣ ಉಪಚುನಾವಣೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷ ವಿರೋಧ ಪಕ್ಷಗಳ ಮೇಲೆ ದಬ್ಬಾಳಿಕೆ ನಡೆಸುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು ನಾಮಪತ್ರ ಸಲ್ಲಿಸಿದ್ದಾರೆ. ಆ ಸಂದರ್ಭದಲ್ಲಿ ಕ್ಷೇತ್ರದ ಕಾರ್ಯಕರ್ತರು, ಸಾರ್ವಜನಿಕರು ಸೇರಿದ್ದರು. ಎನ್‌ಡಿಎ ಮೈತ್ರಿಕೂಟದ ನಾಯಕರು ದೊಡ್ಡ ಪ್ರಮಾಣದಲ್ಲಿ ಸೇರಿದ್ದರು. ಇದು ಐತಿಹಾಸಿಕ ಸಭೆ ಆಗಿತ್ತು. ಇದು ಕಾಂಗ್ರೆಸ್ ನಾಯಕರ ಕಣ್ಣು ಕುಕ್ಕಿದೆ ಎಂದು ದೂರಿದರು.

ಈ ಸರ್ಕಾರ ದಬ್ಬಾಳಿಕೆ ನಡೆಸುತ್ತಿದೆ. ಜನ ಕಾರ್ಯಕ್ರಮಕ್ಕೆ ಬರಬಾರದಾ? ಶುಕ್ರವಾರ ನಾಮಪತ್ರ ಸಲ್ಲಿಕೆಯ ನಂತರ ಒಂದು ನೋಟೀಸ್ ಕೊಟ್ಟಿದ್ದಾರೆ. ಬರುವವರ ಮೇಲೆಲ್ಲಾ ಕೇಸ್ ಹಾಕಿಕೊಂಡು ಇವರು ಚುನಾವಣೆ ನಡೆಸಲು ಹೊರಟಿದ್ದಾರೆ. ಶುಕ್ರವಾರ ನಮ್ಮ ಪಕ್ಷದ ಅಧ್ಯಕ್ಷರಿಗೆ ನೋಟೀಸ್ ಕೊಟ್ಟಿದ್ದಾರೆ. ಇದಕ್ಕೆಲ್ಲಾ ನಾವು ಹೆದರುವ ಪ್ರಶ್ನೆ ಇಲ್ಲ. ಜನರ ಬಳಿ ನಾವು ಮತ ಕೇಳುತ್ತೇವೆ. ಅವರೇ ತೀರ್ಪು ಕೊಡುತ್ತಾರೆ ಎಂದು ಗುಡುಗಿದರು.

ಸರ್ಕಾರ ಈ ಕಾರ್ಯಕ್ರಮಕ್ಕೆ ಬಂದ ವಾಹನಗಳಿಗೆ ನೋಟೀಸ್ ನೀಡಿದೆ. ಸಿಎಂ, ಡಿಸಿಎಂ ಆದಿಯಾಗಿ ಅವರ ಕಡೆಯಿಂದ ಎಲ್ಲಾರೂ ಚನ್ನಪಟ್ಟಣಕ್ಕೆ ಹೀಗಿದ್ದರಲ್ಲವೇ?



ಹಾಗಿದ್ದರೆ, ಅವರ ಸಭೆಗಳಿಗೆ ಬಂದ ಜನರಿಗೆ ವಾಹನದ ವ್ಯವಸ್ಥೆ ಮಾಡೇ ಇರಲಿಲ್ಲವೇ? ಎಂದು ಖಾರವಾಗಿ ಪ್ರಶ್ನಿಸಿದರು.

ಶನಿವಾರ ನಮ್ಮ ಕಾರ್ಯಕ್ರಮಕ್ಕೆ ಬಂದವರ ವಿಡಿಯೋ ಮಾಡಿಕೊಂಡು, ಅಧಿಕಾರಿಗಳಿಗೆ ಹೇಳಿ ಕೇಸ್ ಹಾಕಿಸಿ ಯಾವ ಚುನಾವಣೆ ನಡೆಸಲು ಹೋಗುತ್ತಿದ್ದಾರೆ ಇವರು? ನಮ್ಮ ಪಕ್ಷದ ಅಧ್ಯಕ್ಷರಿಗೆ ಇದರ ಬಗ್ಗೆ ಒಂದು ನೋಟಿಸ್ ಕೊಟ್ಟಿದ್ದಾರೆ. ದಬ್ಬಾಳಿಕೆ ಮೂಲಕ ಇವರು ಚುನಾವಣೆ ನಡೆಸಲು ಹೋಗುತ್ತಿದ್ದಾರೆ. ಅಧಿಕಾರ ದುರುಪಯೋಗ ಮಾಡುತ್ತಿದೆ ಸರ್ಕಾರ. ಇದೆಲ್ಲವನ್ನೂ ನಾವು ಮೊದಲೇ ನಿರೀಕ್ಷೆ ಮಾಡಿದ್ದೆವು ಎಂದು ಕಿಡಿಕಾರಿದರು.

ಚನ್ನಪಟ್ಟಣ, ಸಂಡೂರು, ಶಿಗ್ಗಾಂವಿ ಸೇರಿದಂತೆ ಮೂರೂ ಕ್ಷೇತ್ರಗಳಲ್ಲೂ ನಮ್ಮ ಅಭ್ಯರ್ಥಿಗಳು ದೊಡ್ಡ ಅಂತರದಲ್ಲಿ ಗೆಲುವು ಸಾಧಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಾವು ಮೂರೂ ಕ್ಷೇತ್ರ ಗೆದ್ದಾಗಿದೆ ಎಂದು ಸಿಎಂ ಹೇಳುತ್ತಿದ್ದಾರೆ. ಕುಮಾರಸ್ವಾಮಿಯವರ ಭಾವನಾತ್ಮಕ ಮಾತು ಮತ್ತು ಕಣ್ಣೀರು ಜನರಿಗೆ ಬೇಸರವಾಗಿ ಹೋಗಿದೆ ಅಂದಿದ್ದಾರೆ. ಪಾಪ.. ಇವರು ಎಂದೂ ಜನರ ಮುಂದೆ ಕಣ್ಣೀರೇ ಹಾಕಿಲ್ಲವೇ? ಹೌದು, ನಾನು ಜನರ ಕಷ್ಟ ನೋಡಿ ಕಣ್ಣೀರು ಹಾಕ್ತಿದ್ದೇನೆ. ಇವರು ಅಧಿಕಾರ, ಹಣದ ದುರ್ಬಳಕೆಯಿಂದ ಗೆದ್ದಾಗಿದೆ ಎಂದು ಬೀಗುತ್ತಿದ್ದಾರೆ. ಇವರಿಗೆ ಚನ್ನಪಟ್ಟಣದಲ್ಲಿ ನಿಲ್ಲಿಸೋಕೆ ಕಾಂಗ್ರೆಸ್ ಪಕ್ಷದಿಂದ ಒಬ್ಬ ಅಭ್ಯರ್ಥಿ ಸಿಗಲಿಲ್ಲ. ಬಿಜೆಪಿಯಿಂದ ಅಭ್ಯರ್ಥಿ ಹೈಜಾಕ್ ಮಾಡಿಕೊಂಡು ಹೋಗಿದ್ದಾರೆ. ಇಷ್ಟಾದರೂ ಕುತಂತ್ರ ಬೇರೆ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾನು ಇಡೀ ದೇಶಕ್ಕೆ ಕೆಲಸ ಮಾಡುತ್ತಿದ್ದೇನೆ: ಕುಮಾರಸ್ವಾಮಿ ಮಂಡ್ಯಕ್ಕೆ ಮಾತ್ರ ಸೀಮಿತಾರಾಗಿದ್ದಾರೆ ಎಂಬ ಸಿಎಂ ಹೇಳಿಕೆಗೆ ಹೆಚ್ಡಿಕೆ ತಿರುಗೇಟು ಕೊಟ್ಟರಲ್ಲದೆ, ಕಳೆದ ನಾಲ್ಕು ತಿಂಗಳ ನನ್ನ ಟಿಪಿ ನೋಡಿದ್ದಾರಾ ಅವರು? ನನ್ನ ಇಲಾಖೆಗೆ ಸಂಬಂಧಿಸಿ ಹಲವು ರಾಜ್ಯಗಳಿಗೆ ಹೋಗಿದ್ದೇನೆ. ನಾಗಾಲ್ಯಾಂಡ್, ಅರುಣಾಚಲ ಪ್ರದೇಶ, ಅಸ್ಸಾಂ, ಛತ್ತೀಸಗಢ, ಆಂಧ್ರ ಪ್ರದೇಶ, ತೆಲಂಗಾಣ, ತಮಿಳುನಾಡಿಗೆ ಹೋಗಿ ಬಂದಿದ್ದೇನೆ. ನಾನು ಎಷ್ಟು ರಾಜ್ಯಗಳಿಗೆ ಹೋಗಿದ್ದೇನೆ ಗೊತ್ತಿದೆಯಾ ಅವರಿಗೆ? ದೆಹಲಿಯಲ್ಲಿ ಸಮಯ ವ್ಯರ್ಥ ಮಾಡದೇ ಕೆಲಸ ಮಾಡುತ್ತಿದ್ದೇನೆ. ಇವರಿಂದ ನಾನು ಸರ್ಟಿಫಿಕೇಟ್ ತೆಗೆದುಕೊಳ್ಳುವ ಅಗತ್ಯ ಇಲ್ಲ. ಹಾಗಾದರೆ, ಕರ್ನಾಟಕಕ್ಕೆ ಬರಲೇಬಾರದಾ ನಾನು? ನನ್ನನ್ನು ಗೆಲ್ಲಿಸಿದ ಜನರ ಕಷ್ಟ ಕೇಳಲು ಬರಲೇಬಾರದಾ? ನಾನು ಕರ್ನಾಟಕಕ್ಕೆ ಬಂದರೆ ಇವರು ನಿದ್ದೆಗೆಡುತ್ತಾರೆ ಎಂದು ಅವರು ಕಿಡಿಕಾರಿದರು.

### ಬೆಂಗಳೂರಲ್ಲಿ ಡಿ.6ಕ್ಕೆ ದಿಲ್ಜಿತ್ ಶೋ; ಅಕ್ರಮ ಟಿಕೆಟ್ ಮಾರಾಟ ಆರೋಪ

# ಕರ್ನಾಟಕ ಸೇರಿ 5 ರಾಜ್ಯಗಳಲ್ಲಿ ಇಡಿ ದಾಳಿ

**ನವದೆಹಲಿ:** ಬೆಂಗಳೂರಿನಲ್ಲಿ ಇದೇ ಡಿಸೆಂಬರ್ 6 ರಂದು ದಿಲ್ಜಿತ್ ದೋಸಾಂಜ್ ಅವರ ಸಂಗೀತ ಕಾರ್ಯಕ್ರಮ ನಡೆಯಲಿದ್ದು, ಸಮಾರಂಭದ ಟಿಕೆಟ್‌ಗಳ ಅಕ್ರಮ ಮಾರಾಟಕ್ಕೆ ಸಂಬಂಧಿಸಿದಂತೆ ದೇಶದ ಹಲವೆಡೆ ಇ.ಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಕೋಲ್ಡ್‌ಪ್ಲೇ ಮತ್ತು ದಿಲ್‌ಜೀತ್ ದೋಸಾಂಜ್ ಅವರ 'ದಿಲ್-ಲುಮಿನಾಟಿ' ಬಹುನಿರೀಕ್ಷಿತ ಸಂಗೀತ ಕಛೇರಿಯ ಟಿಕೆಟ್‌ಗಳ ಅಕ್ರಮ ಮಾರಾಟಕ್ಕೆ ಸಂಬಂಧಿಸಿದಂತೆ ಕರ್ನಾಟಕ, ದೆಹಲಿ, ಮುಂಬೈ, ಜೈಪುರ, ಚಂಡೀಗಢ ರಾಜ್ಯಗಳಲ್ಲಿ ಜಾರಿ ನಿರ್ದೇಶನಾಲಯ ಬೃಹತ್ ಶೋಧ ಕಾರ್ಯಾಚರಣೆ ನಡೆಸಿದೆ. ಅಕ್ರಮ ಟಿಕೆಟ್ ಮಾರಾಟದ ಬಗ್ಗೆ ವಿವಿಧ ರಾಜ್ಯಗಳಲ್ಲಿ ಅನೇಕ ಎಫ್‌ಐಆರ್ ದಾಖಲಾಗಿವೆ. ಈ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳಲಾಗಿದೆ.

ಕೋಲ್ಡ್‌ಪ್ಲೇ ಅವರ (ಬ್ರಿಟಿಷ್ ರಾಕ್ ಬ್ಯಾಂಡ್) 'ಮ್ಯೂಸಿಕ್ ಆಫ್ ದಿ ಸ್ಪಿಯರ್ಸ್ ವರ್ಲ್ಡ್ ಟೂರ್' ಸಂಗೀತ ಕಾರ್ಯಕ್ರಮವು ನ.18, 19, 21 ರಂದು ಮುಂಬೈನಲ್ಲಿ ನಡೆಯಲಿದೆ. ಜೊತೆಗೆ ದಿಲ್ಜೀತ್ ದೋಸಾಂಜ್ ಅವರ 'ದಿಲ್-ಲುಮಿನಾಟಿ' ಸಂಗೀತ ಕಾರ್ಯಕ್ರಮ ಬೆಂಗಳೂರಿನಲ್ಲಿ ಡಿ.6 ರಂದು ನಡೆಯಲಿದೆ. ಜನಪ್ರಿಯ ಶೋಗಳಿಗೆ ಟಿಕೆಟ್ ಬೇಡಿಕೆ ಹೆಚ್ಚಾಗಿದ್ದು, ಬುಕ್‌ಮೈಶೋ ಮತ್ತು ಜೊಮ್ಯಾಟೊ ಲೈವ್‌ನಂತಹ ಅಧಿಕೃತ ವೇದಿಕೆಗಳಲ್ಲಿ



ಟಿಕೆಟ್‌ಗಳ ತ್ವರಿತ ಮಾರಾಟಕ್ಕೆ ಕಾರಣವಾಯಿತು. ಆದರೆ, ಕೆಲವರು ಹೆಚ್ಚಿನ ಬೆಲೆಗೆ ಅಕ್ರಮವಾಗಿ ಟಿಕೆಟ್ ಮಾರಾಟ ಮಾಡುತ್ತಿರುವ ಆರೋಪಗಳು ಕೇಳಿಬಂದಿವೆ.

ಬುಕ್‌ಮೈಶೋ ಹಲವಾರು ಶಂಕಿತರ ವಿರುದ್ಧ ಎಫ್‌ಐಆರ್ ದಾಖಲಿಸಿದೆ. ಕೆಲವರು ನಕಲಿ ಟಿಕೆಟ್‌ಗಳನ್ನು ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿದೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ಐದು ರಾಜ್ಯಗಳಾದ್ಯಂತ 13 ಕ್ಕೂ ಹೆಚ್ಚು ಸ್ಥಳಗಳಲ್ಲಿ ಶೋಧಕಾರ್ಯ ನಡೆಸಲಾಗಿದೆ. ಅಕ್ರಮದಲ್ಲಿ ಬಳಸಲಾದ ಮೊಬೈಲ್ ಫೋನ್‌ಗಳು, ಲ್ಯಾಪ್‌ಟಾಪ್‌ಗಳು ಮತ್ತು ಸಿಮ್ ಕಾರ್ಡ್‌ಗಳನ್ನು ವಶಕ್ಕೆ ಪಡೆಯಲಾಗಿದೆ.

## ಶಿಗ್ಗಾಂವಿ ಕಾಂಗ್ರೆಸ್ ಬಂಡಾಯ ಶಮನ: ಅಜ್ಜಂಪೀರ್ ಮನವೊಲಿಸುವಲ್ಲಿ ಸಿಎಂ ಯಶಸ್ವಿ

**ಬೆಂಗಳೂರು/ಹಾವೇರಿ:** ಶಿಗ್ಗಾಂವಿ ಉಪಚುನಾವಣೆಗೆ ಕಾಂಗ್ರೆಸ್‌ನಿಂದ ಟಿಕೆಟ್ ಸಿಗದಿದ್ದಕ್ಕೆ ಬಂಡಾಯವೆದ್ದಿದ್ದ ಅಜ್ಜಂಪೀರ್ ಖಾದ್ರಿ ಮನವೊಲಿಸುವಲ್ಲಿ ಸಿಎಂ ಸಿದ್ದರಾಮಯ್ಯ ಯಶಸ್ವಿಯಾಗಿದ್ದಾರೆ.

ತೀವ್ರ ಪೈಪೋಟಿ ನಡುವೆ ಶಿಗ್ಗಾಂವಿ ಕಾಂಗ್ರೆಸ್ ಟಿಕೆಟ್ ಯಾಸಿರ್ ಅಹ್ಮದ್ ಖಾನ್ ಪಠಾಣ್ ಪಾಲಾಯ್ತು. ಪಠಾಣ್ ಶುಕ್ರವಾರ ನಾಮಪತ್ರ ಸಲ್ಲಿಕೆ ಮಾಡಿದರು. ತನಗೆ ಟಿಕೆಟ್ ಸಿಗಲಿಲ್ಲ ಎಂದು ಅಜ್ಜಂಪೀರ್ ಮುನಿಸಿಕೊಂಡಿದ್ದರು. ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದರು.

ಬಂಡಾಯ ಶಮನ ಜವಾಬ್ದಾರಿಯನ್ನು ಜಮೀರ್‌ಗೆ ವಹಿಸಲಾಗಿತ್ತು. ಅಜ್ಜಂಪೀರ್ ಮನವೊಲಿಸುವ ಸಚಿವ ಜಮೀರ್ ಅವರ ಪ್ರಯತ್ನ ವಿಫಲವಾಗಿತ್ತು. ಈ ಹಿನ್ನೆಲೆಯಲ್ಲಿ ಶನಿವಾರ ಸಿಎಂ ನಿವಾಸಕ್ಕೆ ರೆಬೆಲ್ ನಾಯಕನನ್ನು ಕರೆತಂದಿದ್ದರು. ಸಿಎಂ ಸಿದ್ದರಾಮಯ್ಯ ಅವರು ಮಾತುಕತೆ ನಡೆಸಿ ಅಜ್ಜಂಪೀರ್ ಬಂಡಾಯ ಶಮನಗೊಳಿಸಿದ್ದಾರೆ. ಇದರಿಂದ ಶಿಗ್ಗಾಂವಿಯಲ್ಲಿ ಕಾಂಗ್ರೆಸ್ ಮತ ವಿಭಜನೆಯ ಆತಂಕ ದೂರವಾಗಿದೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಸಿಎಂ, ಶಿಗ್ಗಾಂವ್ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿರುವ ಅಜ್ಜಂಪೀರ್ ಖಾದ್ರಿ ಅವರ ಜೊತೆ ಮಾತುಕತೆ ನಡೆಸಿ, ಪಕ್ಷದ ಹಿತದೃಷ್ಟಿಯಿಂದ ನಾಮಪತ್ರ ಹಿಂಪಡೆಯುವಂತೆ ತಿಳಿಸಿದೆ. ಈ ವೇಳೆ ಅವರು ತಮ್ಮ ನಾಮಪತ್ರ



ಹಿಂಪಡೆಯುವ ಜೊತೆಗೆ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಸಕ್ರಿಯವಾಗಿ ಕೆಲಸ ಮಾಡುವುದಾಗಿ ವಾಗ್ದಾನ ನೀಡಿದ್ದಾರೆ ಎಂದಿದ್ದಾರೆ.

ಶಿಗ್ಗಾಂವಿಯಲ್ಲಿ ಖಾದ್ರಿ ತಮ್ಮದೇ ಆದ ವರ್ಚಸ್ಸು ಹೊಂದಿದ್ದಾರೆ. ಕಳೆದ ಚುನಾವಣೆಗಳಲ್ಲಿ ಬಸವರಾಜ ಬೊಮ್ಮಾಯಿ ವಿರುದ್ಧ ಕಡಿಮೆ ಅಂತರದಲ್ಲಿ ಸೋಲನುಭವಿಸಿದ್ದರು. ಆದರೆ, ಉಪಚುನಾವಣೆಗೆ ಟಿಕೆಟ್ ನಿರೀಕ್ಷೆಯಲ್ಲಿದ್ದ ಅವರಿಗೆ ನಿರಾಸೆಯಾಯಿತು. ಬಂಡಾಯವೆದ್ದು ನಾಮಪತ್ರ ಸಲ್ಲಿಕೆ ಮಾಡಿದ್ದರು.

ಈ ನಡುವೆ ಕಾಂಗ್ರೆಸ್ ಅಭ್ಯರ್ಥಿ ಯಾಸಿರ್ ವಿರುದ್ಧ ಡ್ಯಾಮೇಜಿಂಗ್ ಹೇಳಿಕೆಗಳು ಹೊರಬಂದವು. ಯಾಸಿರ್ ಒಬ್ಬ ರೌಡಿಶೀಟರ್ ಎಂದೆಲ್ಲ ಬಿಂಬಿಸಲಾಯಿತು. ಇದು ಪಕ್ಷಕ್ಕೆ ಸಮಸ್ಯೆಯಾಗಬಹುದು ಎಂಬುದನ್ನು ಅರಿತು ಖಾದ್ರಿ ಮನವೊಲಿಸುವ ಪ್ರಯತ್ನ ನಡೆಯಿತು. ಈ ಪ್ರಯತ್ನದಲ್ಲಿ ಸಿಎಂ ಕೊನೆಗೂ ಯಶಸ್ವಿಯಾಗಿದ್ದಾರೆ.

## ಕಾಂಗ್ರೆಸ್‌ನ ಪಠಾಣ್ ರೌಡಿಶೀಟರ್ ಅಂದಿದ್ದು ಅವರ ಪಕ್ಷದವರೇ, ಅವ್ರೇ ಸ್ಪಷ್ಟೀಕರಣ ಕೊಡಲಿ

**ಹಾವೇರಿ:** ಯಸೀರ್ ಖಾನ್ ಪಠಾಣ್ ರೌಡಿಶೀಟರ್ ಎಂದು ಅವರ ಪಕ್ಷದವರೇ ಮಾತಾಡಿದ್ದಾರೆ. ಅವರ ಪಕ್ಷದವರೇ ಸ್ಪಷ್ಟೀಕರಣ ಕೊಡಲಿ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಶಿಗ್ಗಾಂವಿ ಉಪಚುನಾವಣೆ ಕಾವು ದಿನದಿಂದ ದಿನಕ್ಕೆ ರಂಗುಪಡೆಯುತ್ತಿದೆ. ಶಿಗ್ಗಾಂವಿಯಲ್ಲಿ ಲಿಂಗಾಯತ ಪಂಚಮಸಾಲಿ ಮುಖಂಡರ ಮನೆಮನೆಗೆ ಭೇಟಿ ನೀಡಿ ಬಸವರಾಜ ಬೊಮ್ಮಾಯಿ ಮತಯಾಚನೆ ಮಾಡಿದ್ದಾರೆ. ಪುತ್ರ ಭರತ್ ಬೊಮ್ಮಾಯಿ ಬೆಂಬಲಿಸುವಂತೆ ಮನವಿ ಮಾಡುತ್ತಿದ್ದಾರೆ. ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯಾವ ಗ್ಯಾರಂಟಿನೂ ಕೈ ಹಿಡಿದಿಲ್ಲ, ಏನೂ ಹಿಡಿದಿಲ್ಲ. ನಾನು ಹೆಚ್ಚಿನ ಸಮಯ ಹಾವೇರಿ ಗದಗ ಲೋಕಸಭಾ ಕ್ಷೇತ್ರದಲ್ಲಿ ಇದ್ದ ಕಾರಣ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಶಿಗ್ಗಾಂವಿ ಕ್ಷೇತ್ರದಲ್ಲಿ ಸ್ವಲ್ಪ ಹೆಚ್ಚು ಕಡಿಮೆ ಆಗಿದೆ. ಈ ಎಲ್ಲಾ ವಿಚಾರ ನಮ್ಮ ಕಾರ್ಯಕರ್ತರಿಗೆ ಮನದಟ್ಟಾಗಿದೆ. ಕ್ಷೇತ್ರದಲ್ಲಿ 2023ರ ವಿಧಾನಸಭಾ ಚುನಾವಣೆ ವಾತಾವರಣ ಇದೆ. ಕಾಂಗ್ರೆಸ್‌ನವರು ಕನಸು ಕಾಣುತ್ತಿದ್ದಾರೆ. ಅವರ ಕನಸು ನನಸಾಗಲ್ಲ ಎಂದರು.



ಶಿಗ್ಗಾಂವಿ ಕ್ಷೇತ್ರದಲ್ಲಿ ಬೊಮ್ಮಾಯಿ ಒಂದೇ ಒಂದು ಮನೆ ಕೊಟ್ಟಿಲ್ಲ ಎಂಬ ಸಚಿವ ಜಮೀರ್ ಅಹ್ಮದ್ ಹೇಳಿಕೆ ವಿಚಾರವಾಗಿ ಮಾತನಾಡಿ, ಇದು ಹಾಸ್ಯಾಸ್ಪದ ಅಷ್ಟೆ, ಹೋಗಿ ನೋಡಿಕೊಂಡು ಬರಲಿ. ಕಾಂಗ್ರೆಸ್ ನಾಯಕರ ಭಾಷಣ ಸುಳ್ಳಿನ ಕಂತೆ ಅಷ್ಟೆ. ನಾವು ಎಲ್ಲರೂ ಒಗ್ಗಟ್ಟಿನಲ್ಲಿದ್ದೇವೆ. ನನಗಿಂತ ಹೆಚ್ಚು ಬೆಂಬಲ ಭರತ್‌ಗೆ ಸಿಕ್ಕಿದೆ. ದೊಡ್ಡ ಪ್ರಮಾಣದಲ್ಲಿ ಎಲ್ಲಾ ಸಮುದಾಯದವರು ಭರತ್‌ಗೆ ಬೆಂಬಲ ವ್ಯಕ್ತಪಡಿಸ್ತಿದ್ದಾರೆ. ಹೆಚ್ಚು ಮತಗಳ ಅಂತರದಿಂದ ಭರತ್ ಗೆಲ್ಲುತ್ತಾನೆ. ಖಾದ್ರಿ ಮನವೊಲಿಕೆ ಆದರೆ ಅದು ನಮಗೇನೂ ಪರಿಣಾಮ ಬೀರಲ್ಲ ಎಂದು ಹೇಳಿದರು. ಕ್ಷೇತ್ರದಲ್ಲಿ ಕಾಂಗ್ರೆಸ್ ಸರ್ಕಾರದ ಸಚಿವರು, ಶಾಸಕರ ದಂಡೇ ಪ್ರಚಾರಕ್ಕೆ ಬರುವ ವಿಚಾರ ಕೇಳಿದಾಗ, ದಯವಿಟ್ಟು ಬರಲಿ ಬಂದರೆ ಸ್ವಾಗತ ಎಂದರು.

## ಸಿಎಂ ಹೇಳಿದ್ರೂ ಕೇಳಲ್ಲ, ಡಿಸಿಎಂ ಹೇಳಿದ್ರೂ ಕೇಳಲ್ಲ!

**ಕಾಂಗ್ರೆಸ್ ನಾಯಕರಿಗೆ ಕುನ್ನೂರು ಟಾಂಗ್:** ಶಿಗ್ಗಾವಿಯ ತಮ್ಮ ನಿವಾಸದಲ್ಲಿ ಬೆಂಬಲಿಗರೊಂದಿಗೆ ಸಭೆ ಮಾಡಿ ಮಾತನಾಡಿದ ಮಾಜಿ ಸಂಸದ, ಹಾಲಿ ಕಾಂಗ್ರೆಸ್ ಬಂಡಾಯ ಅಭ್ಯರ್ಥಿ ಮಂಜುನಾಥ್ ಕುನ್ನೂರು, ಕಾಂಗ್ರೆಸ್ ನಾಯಕರಿಗೆ ಟಾಂಗ್ ಕೊಟ್ರು. ನನಗೆ ಯಾರ ಕರೆಯೂ ಬಂದಿಲ್ಲ, ಬಂದರೂ ಕೂಡಾ ನಾನು ಸಂಧಾನ ಮಾಡಿಕೊಳ್ಳೊಲ್ಲ ಅಂತ ಹೇಳಿದ್ದಾರೆ.

ಇಂದಿಗೂ ಶಿಗ್ಗಾವಿ ಸವಣೂರು ಕ್ಷೇತ್ರದಲ್ಲಿ ಜನರೊಂದಿಗೆ ಸಂಪರ್ಕದಲ್ಲೇ ಇದ್ದೇನೆ. ಮೂಲತಃ ನಾನು ಕಾಂಗ್ರೆಸ್ ಪಕ್ಷದವನು, ಆದರೆ ನನ್ನ ಮಗನಿಗೆ ಟಿಕೆಟ್ ಕೊಡಲಿಲ್ಲ. ನನ್ನನ್ನು ಕಾಂಗ್ರೆಸ್ ಹಾಗೂ ಬಿಜೆಪಿ ನಾಯಕರು ಸೈಡ್ ಲೈನ್ ಮಾಡಿದ್ದಾರೆ ಅಂತ ಕುನ್ನೂರು ಆರೋಪಿಸಿದ್ರು. ನನ್ನ ರಾಜಕೀಯ ಭವಿಷ್ಯ ಹಾಳು ಮಾಡಿದ್ದಾರೆ. ಕಾರಣ ನಾನು ದೊಡ್ಡ ರಾಜಕಾರಣಿ ಆಗುತ್ತೇನೆಂಬ ಕಾರಣಕ್ಕೆ ತುಳಿದಿದ್ದಾರೆ ಅಂತ ಕುನ್ನೂರು ಆರೋಪಿಸಿದ್ರು. ಸ್ಥಳೀಯವಾಗಿ ಒಬ್ಬ ಅಭ್ಯರ್ಥಿಗೆ ಟಿಕೆಟ್ ಕೊಡುವ ಶಕ್ತಿ ಇಲ್ಲ ಇವರಿಗೆ. ಎರಡು ಪಕ್ಷದ ಅಭ್ಯರ್ಥಿಗಳು ಹೊರಗಿನವರೇ, ಸ್ಥಳೀಯರನ್ನು ಸಂಪೂರ್ಣವಾಗಿ ಕಡೆಗಣಿಸಿದ್ದಾರೆ ಅಂತ ಅವರು ಆರೋಪಿಸಿದ್ರು.

ನನಗೆ ನೋವಾಗಿದ್ದು ನಿಜ, ಸುಮ್ಮನೆ ಕುಳಿತರೆ ಆಗೊಲ್ಲ ಎಂದು ಸ್ಪರ್ಧೆ ಮಾಡುತ್ತಿದ್ದೇನೆ. ಇಲ್ಲಿ ಅಭಿವೃದ್ಧಿ ಆಗಿದ್ದರೆ ಅದು ನನ್ನಿಂದ ಮಾತ್ರ ಅಂತ ಮಂಜುನಾಥ್ ಕುನ್ನೂರ್ ಹೇಳಿದ್ದಾರೆ. ಕೆಲಸ ಮಾಡಿದ್ದು ನಾನು, ಆದರೆ ಇವರು ಬಣ್ಣ ಹಚ್ಚಿಕೊಂಡು ಮಾತಾಡ್ತಾರೆ. ಕೆರೆಗೆ ನೀರು ತುಂಬಿಸಿ ಅಭಿವೃದ್ಧಿ ಮಾಡಿದ್ದೇನೆಂದರೆ ನಡೆಯುತ್ತದಾ? ಇವರು ಜೇಬು ತುಂಬಿಸಿಕೊಂಡು ಅಭಿವೃದ್ಧಿ ಆಗಿದ್ದಾರೆ ಅಂತ ಕುನ್ನೂರು ಗಂಭೀರ ಆರೋಪ ಮಾಡಿದ್ರು.

ಯಾರು ಏನ್ ಹೇಳಿದರೂ ಕೂಡಾ ನಾನು ಚುನಾವಣೆಯಿಂದ ಹಿಂದೆ ಸರಿಯೋದಿಲ್ಲ ಅಂತ ಕುನ್ನೂರು ಸ್ಪಷ್ಟಪಡಿಸಿದ್ದಾರೆ. ಸಿಎಂ ಆಗಲಿ, ಡಿಸಿಎಂ ಆಗಲಿ ಯಾರು ಹೇಳಿದರು ಕೇಳೋದಿಲ್ಲ. ಈ ಇಬ್ಬರು ಹೊರಗಿನ ಅಭ್ಯರ್ಥಿಗಳನ್ನು ಹೊರಗಡೆ ಹಾಕಿ, ಗೆಲ್ಲೊದಕ್ಕೆ ಸ್ಪರ್ಧೆ ಮಾಡುತ್ತಿದ್ದೇನೆ. ಕ್ಷೇತ್ರದಲ್ಲಿ ಹಣ ದೊಡ್ಡದೋ, ಗುಣ ದೊಡ್ಡದೋ ಎನ್ನುವುದು ನಿರ್ಧಾರವಾಗಲಿದೆ. ಚುನಾವಣೆ ಅಖಾಡದಿಂದ ಹಿಂದೆ ಸರಿಯೋ ಮಾತೇ ಇಲ್ಲ ಅಂತ ಸ್ಪಷ್ಟಪಡಿಸಿದ್ದಾರೆ.

ಶಿಗ್ಗಾಂವಿಯಲ್ಲಿ ಕಾಂಗ್ರೆಸ್ ವಿರುದ್ಧ ಬಂಡೆದ್ದ ಅಜ್ಜಂಪೀರ್ ಖಾದ್ರಿ, ಕೊನೆ ಗಳಿಗೆಯಲ್ಲಿ ನಿನ್ನೆ ನಾಮಪತ್ರ ಸಲ್ಲಿಸಿದ್ದರು. ಅವರ ಮನವೊಲಿಸಲು ಸಚಿವ ಜಮೀರ್ ಅಹ್ಮದ್ ಖಾನ್ ಅವರು ಸಿಎಂ ಸಿದ್ದರಾಮಯ್ಯ ಬಳಿಗೆ ಬೆಳಿಗ್ಗೆ ಕರೆದುಕೊಂಡು ಬಂದಿದ್ದರು. ಆದರೆ ಒಲ್ಲದ ಮನಸ್ಸಿನಿಂದಲೇ ಸ್ಪರ್ಧೆಯಿಂದ ಹಿಂದೆ ಸರಿಯುವುದಾಗಿ ಹೇಳಿದ್ದರು. ಆನಂತರ ಅವರು ಗೊಂದಲದ ಹೇಳಿಕೆ ನೀಡಿದ್ದರು. ಇದೀಗ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿ ನಡೆಸಿ ಅಖಾಡದಿಂದ ಹಿಂದೆ ಸರಿಯುವುದಾಗಿ ಘೋಷಿಸಿದ್ದಾರೆ.

ಮೊದಲನೇ ಪುಟದಿಂದ...

## ಸ್ಲೋ ಪಾಯ್ಸನ್ ಯಾವುದು?

ಪ್ರಕರಣದ ಕುರಿತು ಉಡುಪಿ ಎಸ್ಪಿ ಡಾ. ಅರುಣ್ ಕುಮಾರ್ ಮಾಹಿತಿ ನೀಡಿದ್ದಾರೆ. ಪತಿ ಬಾಲಕೃಷ್ಣನಿಂದ ಇದ್ದರೆ ನಮ್ಮ ಸ್ನೇಹಕ್ಕೆ ಅಡ್ಡಿಯಾಗುತ್ತದೆ ಎಂದು ಪತ್ನಿ ಕೊಲೆ ಮಾಡಿದ್ದಾಳೆ. ಇಬ್ಬರ ಅಕ್ರಮ ಸಂಬಂಧಕ್ಕೆ ಪತಿ ಬದುಕಿರೋದೇ ಸಮಸ್ಯೆ ಎಂದು ಕೊಲೆಮಾಡಿರುವುದು ಸಾಬೀತಾಗಿದೆ. ಅಲ್ಲದೇ ಪ್ರತಿನಿತ್ಯ ಊಟದಲ್ಲಿ ಪತಿಗೆ ವಿಷ ಬೆರೆಸಿಕೊಡುತ್ತಿದ್ದ ಪತ್ನಿ ಪ್ರತಿಮಾ, ಪ್ಲ್ಯಾನ್ ಪ್ರಕಾರ ಪತಿಯನ್ನು ಸಾಯಿಸಲು ಪ್ರಿಯಕರನನ್ನ ಮನೆಗೆ ಕರೆಸಿದ್ದಳು ಎಂದು ಒಪ್ಪಿಕೊಂಡಿರುವುದಾಗಿ ತಿಳಿಸಿದ್ದಾರೆ. 1 ವರ್ಷದ ಮನೆ ಕಟ್ಟಿಸಿ ಹೆಂಡತಿ ಮಕ್ಕಳನ್ನ ಪ್ರೀತಿಯಿಂದ ನೋಡಿಕೊಳ್ಳುತ್ತಿದ್ದ ಬಾಲಕೃಷ್ಣ ಪೂಜಾರಿಯನ್ನು ಪತ್ನಿ ಕೊಂದಿದ್ದಾಳೆ. ಮನೆ ತುಂಬಾ ಅನ್ಯೋನ್ಯವಾಗಿ ಇರುವ ಫೋಟೋಗಳನ್ನು ಜೋಡಿಸಿರುವ ಕತರ್ನಾಕ್ ಸುಂದರಿ ಗಂಡನ ಜೊತೆ ಮಲಗಿ ಸುಖ ಸಂಸಾರ ಮಾಡಿದ ಬೆಡ್ ರೂಮ್ ನಲ್ಲೆ ಉಸಿರು ನಿಲ್ಲಿಸಿ ಬಿಟ್ಟಿದ್ದಾಳೆ.

## ರೆಡ್ಡಿ ಗೇಮ್!

ತುಕಾರಾಂ ಪತ್ನಿ ಅನ್ನಪೂರ್ಣ ಅವರಿಗೆ ಟಿಕೆಟ್ ಸಿಕ್ಕಿದ್ದಕ್ಕೆ ಕಾಂಗ್ರೆಸ್ ಕೆಲ ಮುಖಂಡರಿಗೆ ಒಳಗೊಳಗೆ ಅಸಮಾಧಾನ ಇದೆ. ಹೀಗಾಗಿ ಇದರ ಲಾಭ ಪಡೆಯಲು ಜನಾರ್ದನ ರೆಡ್ಡಿ ತೆರೆಮರೆಯ ಕಸರತ್ತು ನಡೆಸಿದ್ದಾರೆ

ಇತಿಹಾಸದಲ್ಲಿ ಇಲ್ಲಿಯವರೆಗೆ ಸಂಡೂರಿನಲ್ಲಿ ಬಿಜೆಪಿ ಗೆಲುವು ಸಾಧಿಸಿಲ್ಲ. ಹೀಗಾಗಿ ಈ ಬಾರಿ ಹೇಗಾದರೂ ಮಾಡಿ ಕಮಲ ಅರಳಿಸಲೇಬೇಕು ಎಂದು ಹಠಕ್ಕೆ ಬಿದ್ದಿದ್ದಾರೆ. ಇದೇ ಕಾರಣಕ್ಕೆ ಏನೆಲ್ಲಾ ಸಾಧ್ಯವೋ ಅದೆಲ್ಲವನ್ನೂ ಮಾಡುತ್ತಿರುವ ರೆಡ್ಡಿ ಬಿಜೆಪಿ ಅಭ್ಯರ್ಥಿ ಬಂಗಾರು ಹನುಮಂತ ಗೆಲುವಿಗಾಗಿ ಟೊಂಕ ಕಟ್ಟಿ ನಿಂತಿದ್ದಾರೆ.

ನಾಮಪತ್ರ ಸಲ್ಲಿಕೆಯ ಬಳಿಕ ಶ್ರೀರಾಮುಲು ಸಹಿತ ಅಖಾಡಕ್ಕೆ ಇಳಿದಿದ್ದು, ಜಂಟಿಯಾಗಿ ಪ್ರಚಾರ ನಡೆಸುವ ಜೊತೆ ಜೊತೆಗೆ ಕಾಂಗ್ರೆಸ್ ಕೆಲ ಅತೃಪ್ತರನ್ನ ಪಕ್ಷಕ್ಕೆ ಸೆಳೆಯುವ ಕೆಲಸ ಮಾಡುತ್ತಿದ್ದಾರೆ.

## ಹಸಿರು ಪಟಾಕಿಗೆ ಅವಕಾಶ

ಪರಿಸರಕ್ಕೆ ಹಾನಿಯಾಗುವ ಪಟಾಕಿಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಪಟಾಕಿ ದಾಸ್ತಾನು, ಮಾರಾಟ ಪ್ರಕ್ರಿಯೆಯಲ್ಲಿ ಸುರಕ್ಷತೆ ವಿಷಯದಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಬೇಕು. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಈ ಕುರಿತು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದ್ದೇನೆ. ಪಟಾಕಿಯಿಂದ ಆರೋಗ್ಯದ ಮೇಲೆ ಪರಿಣಾಮ ಬೀರಬಾರದು ಎಂದು ಸೂಚನೆ ನೀಡಿದ್ದಾರೆ. ಇದೇ ವೇಳೆ ಬೆಂಗಳೂರು ನಗರದ ಮಳೆಹಾನಿ ಕುರಿತು ಮಾತನಾಡಿದ ಸಿಎಂ, ಮಳೆಹಾನಿ ಬಗ್ಗೆ ಪರಿಶೀಲನೆ ಮಾಡಿದ್ದೇವೆ. ಬೆಂಗಳೂರಲ್ಲಿ ಅತಿ ಹೆಚ್ಚು ಮಳೆ ಆಗಿದೆ. ಸುಮಾರು 275 ಮಿಲಿ ಮೀಟರ್ ಮಳೆ, ನೂರು ವರ್ಷಗಳಲ್ಲಿ 3ನೇ ಅತಿ ಹೆಚ್ಚು ಮಳೆಯಾಗಿದೆ. ಪ್ರತಿ ಸಲ ಹೆಚ್ಚು ಮಳೆ ಬಂದಾಗ, ಪ್ರವಾಹ ಬಂದಾಗ ಹಾನಿ ಆಗುತ್ತಿದೆ. ಹಿಂದೆ ಸಿಎಂ ಆಗಿದ್ದಾಗ ರಾಜಕಾಲುವೆಗಳನ್ನ ಒತ್ತುವರಿ ತೆರವಿಗೆ ಸೂಚಿಸಿದ್ದೆ. 450 ಕಿಮೀ ರಾಜಕಾಲುವೆ ಅಭಿವೃದ್ಧಿ ಆಗಿತ್ತು, 173 ಕಿಮೀ ಉಳಿದುಕೊಂಡಿದೆ, ಅಲ್ಲದೇ 80 ಕಿಮೀ ಉಳಿದ ಕಾಲುವೆಗಳನ್ನ ಸರಿಪಡಿಸಬೇಕಿದೆ. ವಿಶ್ವಬ್ಯಾಂಕ್ 7,000 ಕೋಟಿ ರೂ. ಸಾಲ ನೀಡಲು ಒಪ್ಪಿದೆ. 3-4 ತಿಂಗಳಲ್ಲಿ ಅಂತಿಮವಾಗುತ್ತೆ ಎಂದು ಸಿಎಂ ಹೇಳಿದ್ದಾರೆ.

## 20 ಲಕ್ಷಕ್ಕೆ ಬೇಡಿಕೆ

ಬ್ಲಾಕ್‌ಮೇಲ್ ಹಣವನ್ನು ಗುತ್ತೇದಾರ್ ಪುತ್ರನಿಂದ ಸ್ವೀಕರಿಸಲು ಬೆಂಗಳೂರಿನ ಮಾಲ್‌ವೊಂದರ ಬಳಿ ಮಂಜುಳಾ ದಂಪತಿ ಬಂದಿದ್ದಾಗ ಸಿಸಿಬಿ ಬಲೆಗೆ ಬಿದ್ದಿದ್ದಾರೆ. ಹಲವು ವರ್ಷಗಳಿಂದ ಕಾಂಗ್ರೆಸಲ್ಲಿ ಸಕ್ರಿಯವಾಗಿದ್ದ ಮಂಜುಳಾ, ಜಿಲ್ಲೆಯ ಮಹಮ್ಮದ್ ನಲಪಾಡ್ ಬ್ರಿಗೇಡ್ ಅಧ್ಯಕ್ಷೆಯಾಗಿದ್ದಳು. ಪಕ್ಷದಲ್ಲಿದ್ದ ಕಾರಣ ಮಾಲೀಕಯ್ಯಗೆ ಆಕೆಯ ಪರಿಚಯವಾಗಿತ್ತು. ಬಳಿಕ ಇಬ್ಬರೂ ನಿತ್ಯ ಮೊಬೈಲ್‌ನಲ್ಲಿ ಸಲುಗೆಯಲ್ಲಿ ಮಾತನಾಡುತ್ತಿದ್ದರು. ಈ ನಡುವೆ ವಿಡಿಯೋ ಕಾಲ್‌ಗಳನ್ನು ರೆಕಾರ್ಡ್ ಮಾಡಿಕೊಂಡಿದ್ದ ಆಕೆ, ಬಳಿಕ ಇವುಗಳನ್ನು ಮುಂದಿಟ್ಟು ಹಣಕ್ಕೆ ಬ್ಲ್ಯಾಕ್ ಮೇಲ್ ಮಾಡಲಾರಂಭಿಸಿದ್ದಳು. 2 ದಿನ ಹಿಂದೆ ಬೆಂಗಳೂರಿನಲ್ಲಿ ನೆಲೆಸಿರುವ ಮಾಲೀಕಯ್ಯ ಪುತ್ರ ರಿತೀಶ್ ಭೇಟಿಯಾಗಿ ಡೀಲ್ ನಡೆಸಲು ಮಂಜುಳಾ ದಂಪತಿ ಮುಂದಾಗಿದ್ದರು. ಈ ಬಗ್ಗೆ ರಿತೇಶ್ ನೀಡಿದ್ದ ದೂರಿನ ಆಧಾರದಲ್ಲಿ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದಾರೆ.

## ವಿಶೇಷ ಕೋರ್ಟ್?

ಹೀಗಾಗಿ ಬೆಂಗಳೂರಿನಲ್ಲೇ ಸಿಐಡಿ ವಿಶೇಷ ನ್ಯಾಯಾಲಯ ಸ್ಥಾಪಿಸುವಂತೆ ಸರ್ಕಾರಕ್ಕೆ ಸಿಐಡಿ ಡಿಜಿಪಿ ಡಾ. ಎಂ.ಎ.ಸಲೀಂ ಮನವಿ ಮಾಡಿದ್ದಾರೆ. ಸಿಐಡಿ ಕೇಂದ್ರ ಸ್ಥಾನವು ಬೆಂಗಳೂರಿನಲ್ಲಿದೆ. ರಾಜ್ಯದ ವಿವಿಧೆಡೆ ವರದಿಯಾಗುವ ಬಹುಮುಖ್ಯ ಪ್ರಕರಣಗಳು ತನಿಖೆಗೆ ಸಿಐಡಿಗೆ ವರ್ಗಾವಣೆಯಾಗುತ್ತದೆ. ಆದರೆ ತನಿಖೆ ಪೂರ್ಣಗೊಳಿಸಿ ಆರೋಪ ಪಟ್ಟಿ ಸಲ್ಲಿಸಿದ ಬಳಿಕ ನ್ಯಾಯಾಲಯದ ವಿಚಾರಣೆಗೆ ಜಿಲ್ಲೆಗಳಿಗೆ ಪ್ರತಿ ಬಾರಿ ಸಿಐಡಿ ಅಧಿಕಾರಿಗಳು ತೆರಳಬೇಕಾಗುತ್ತದೆ. ಇದರಿಂದ ಅಧಿಕಾರಿಗಳಿಗೆ ಪ್ರಯಾಣ ಮಾತ್ರವಲ್ಲದೆ ಪ್ರಕರಣಗಳ ಮೇಲೆನಿ ಗಾವಹಿಸಲು ಕೂಡ ಅನಾನುಕೂಲವಾಗುತ್ತದೆ. ಈ ಸಮಸ್ಯೆ ಹಿನ್ನಲೆಯಲ್ಲಿ ಸಿಐಬಿ ಮಾದರಿ ವಿಶೇಷ ನ್ಯಾಯಾಲಯ ಸ್ಥಾಪಿಸುವಂತೆ ಡಿಜಿಪಿ ಕೋರಿದ್ದಾರೆ. ಜನಪ್ರತಿನಿಧಿಗಳ ವಿರುದ್ಧ ರಾಜ್ಯದಲ್ಲಿ ದಾಖಲಾಗುವ ಪ್ರಕರಣಗಳನ್ನು ಬೆಂಗಳೂರಿನ ವಿಶೇಷ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ. ಇದರಿಂದ ಆ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೂ ಅನುಕೂಲವಾಗಿದೆ ಎಂದು ಅಧಿಕಾರಿಗಳು ಹೇಳುತ್ತಾರೆ.

## 2000 ಹೆಚ್ಚುವರಿ ಬಸ್ ವ್ಯವಸ್ಥೆ

ಮೈಸೂರು ರಸ್ತೆಯ ಸ್ಯಾಟಲೈಟ್ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಮಾರ್ಗದ ಕಡೆ ವಿಶೇಷ ಬಸ್‌ಗಳು ಕಾರ್ಯಾಚರಣೆ ನಡೆಸಲಿವೆ.

ತಮಿಳುನಾಡು ಮತ್ತು ಕೇರಳ ಕಡೆಗೆ ಅಂದರೆ ಮಧುರೈ, ಕುಂಬಕೋಣಂ, ಚೆನ್ನೈ, ಕೊಯಮತ್ತೂರು, ತಿರುಚ್ಚಿ, ಪಾಲಕ್ಕಾಡ್, ತ್ರಿಶೂರ್, ಎರ್ನಾಕುಲಂ, ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ಹೋಗುವ ಸಾರಿಗೆ ಸಂಸ್ಥೆಯ ಪ್ರತಿಷ್ಠಿತ ಬಸ್‌ಗಳು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ಹೊರಡಲಿವೆ.

ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಬಸ್‌ಗಳ ಆಸನಗಳನ್ನು ಮುಂಗಡವಾಗಿ ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.

ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆ ಸಾರಿಗೆ ನಿಗಮವು ಕೋರಿದೆ. ಇ-ಟಿಕೆಟ್ ಬುಕಿಂಗ್‌ನ್ನು www.ksrtc.karnataka.gov.in ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿದೆ. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಕಾಯ್ದಿರಿಸಿದಲ್ಲಿ ಶೇ. 5ರಷ್ಟು ರಿಯಾಯಿತಿ, ಹೋಗುವ ಮತ್ತು ಬರುವ ಪ್ರಯಾಣದ ಟಿಕೆಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಲ್ಲಿ ಬರುವ ಪ್ರಯಾಣ ದರದಲ್ಲಿ ಶೇ. 10ರಷ್ಟು ರಿಯಾಯಿತಿ ನೀಡಲಾಗುವುದು ಎಂದು ಸಂಸ್ಥೆಯು ಹೇಳಿದೆ.

## ಒಂದೇ ದಿನ 2 ಬಾರಿ ಹೆಜ್ಜೇನು ದಾಳಿ

ಭಾಷಾ, ಪತ್ನಿ ಅಸ್ಮಾ, ಮಕ್ಕಳಾದ ಆರೀಫ್, ಅನೀಫ್, ಭಾಷಾ ಪಕ್ಕದ ಮನೆ ನಿವಾಸಿ ಯಾಸೀನ್, ಹಾಸಿಗೆ ರಿಪೇರಿಗಾಗಿ ತೆರಳಿದ್ದ ಹುಸೇನ್ ಸಾಬ್, ಬಾಬಾ ಸಾಬ್ ಮೇಲೆ ದಾಳಿ ನಡೆಸಿದೆ. ಗಾಯಾಳುಗಳನ್ನು ನಗರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಹುಸೇನ್ ಸಾಬ್ (68) ಎಂಬುವವರ ಸ್ಥಿತಿ ಗಂಭೀರವಾಗಿದ್ದು, ಹೊಸನಗರದ ಸರ್ಕಾರಿ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಇರಿಸಲಾಗಿದೆ. ಅದೇ ದಿನ ಮತ್ತೇ ಹೆಜ್ಜೇನು ದಾಳಿ ನಡೆಸಿದ್ದು, ಭಾಷಾ ಪುತ್ರ ಆರೀಫ್ ಮೇಲೆ ಮತ್ತೆ ದಾಳಿಸಿದೆ. ಒಂದೇ ದಿನ ಎರಡು ಬಾರಿ ಹೆಜ್ಜೇನು ದಾಳಿ ನಡೆಸಿದ್ದು, ಸ್ಥಳೀಯರಲ್ಲಿ ಆತಂಕ ಸೃಷ್ಟಿಸಿದೆ.

## ಮುಸ್ಲಿಂ ಮತಗಳ ಮೇಲೆ ಯೋಗೇಶ್ವರ್, ಜೆಡಿಎಸ್ ಕಣ್ಣು

**ರಾಮನಗರ:** ಕರ್ನಾಟಕದ ಮೂರು ಕ್ಷೇತ್ರಗಳಿಗೆ ನಡೆಯಲಿರುವ ಉಪ ಚುನಾವಣೆಯ ಪೈಕಿ ಚನ್ನಪಟ್ಟಣದಲ್ಲಿ ಹೈವೋಲ್ಟೇಜ್ ಕದನ ಏರ್ಪಡಲಿದೆ. ಎನ್‌ಡಿಎ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ಅಖಾಡಕ್ಕಿಳಿದಿದ್ದಾರೆ. ಆದರೆ ಇದು ಜೆಡಿಎಸ್ ವರ್ಸಸ್ ಕಾಂಗ್ರೆಸ್ ಮಧ್ಯೆಯ ಯುದ್ಧವಾಗಿದೆ. ಹೇಳಿ ಕೇಳಿ ಚನ್ನಪಟ್ಟಣ ಜೆಡಿಎಸ್ ಭದ್ರಕೋಟೆಯಾಗಿದೆ. ಇಲ್ಲಿ ಒಕ್ಕಲಿಗ ಮತಗಳೇ ನಿರ್ಣಾಯಕ, ಆದರೆ ಅಲ್ಪಸಂಖ್ಯಾತ ಮತಗಳು ಗೆಲುವಿನಲ್ಲಿ ಹೆಚ್ಚು ಪಾತ್ರವಹಿಸುತ್ತವೆ. ಇದನ್ನು ಅರಿತಿರುವ ಕುಮಾರಸ್ವಾಮಿ ತೆರೆಮರೆಯಲ್ಲೇ ತಂತ್ರಗಾರಿಕೆ ನಡೆಸುತ್ತಿದ್ದಾರೆ. ಇದಕ್ಕೆ ಇಂಬು ಕೊಡುವಂತೆ ಶುಕ್ರವಾರ ನಾಮಪತ್ರ ಸಲ್ಲಿಕೆ ವೇಳೆ ಕುಮಾರಸ್ವಾಮಿ ಮುಸ್ಲಿಂ ಮತದಾರರಿಗೆ ಕಾಂಗ್ರೆಸ್ ಕುತಂತ್ರಕ್ಕೆ ಬಲಿಯಾಗಬೇಡಿ ಎಂದಿದ್ದರು.

ಮಿನಿ ಕುಸ್ತಿಯಲ್ಲಿ ದಳಪತಿಗಳಿಗೆ ಗಲುವು ಪ್ರತಿಷ್ಠೆಯಾಗಿದೆ. ಸಿಪಿಯೋಗೇಶ್ವರ್ ಆಟ, ಡಿಕೆ ಸಹೋದರರ ತಂತ್ರಕ್ಕೆ ತಕ್ಕ ಪಾಠ ಕಲಿಸುವುದು ಕುಮಾರಸ್ವಾಮಿಯ ಉದ್ದೇಶ ಆಗಿದೆ. ಈಗಾಗಲೇ ಕೆಲ ಮುಸ್ಲಿಂ ಮುಖಂಡರು ನಿಖಿಲ್‌ಗೆ ಬೆಂಬಲವನ್ನೂ ಸೂಚಿಸಿದ್ದಾರೆ. ಹೀಗಾಗಿ ಶತಾಯಗತಾಯ ನಿಖಿಲ್‌ನನ್ನ ಗೆಲ್ಲಿಸಲೇಬೇಕು ಎಂದು ಪಣತೊಟ್ಟಿರುವ ಹೆಚ್. ಡಿ ಕುಮಾರಸ್ವಾಮಿ, ಹೊಸ ಟಾಸ್ಕ್ ಕೊಟ್ಟಿದ್ದಾರೆ.

ಪಕ್ಷದ ಮುಖಂಡರಿಗೆ ನಿಖಿಲ್ ಗೆಲ್ಲಿಸಲು ಕುಮಾರಸ್ವಾಮಿ ಟಾಸ್ಕ್ ಕೊಟ್ಟಿದ್ದಾರೆ. ಹಾಲಿ, ಮಾಜಿ ಶಾಸಕರು, ಮುಖಂಡರ ಜೊತೆ ಹೆಚ್‌ಡಿಕೆ ಸಭೆ ಮಾಡಿದ್ದಾರೆ. ಒಬ್ಬ ಶಾಸಕನಿಗೆ ಒಂದೊಂದು ಗ್ರಾಮ ಪಂಚಾಯ್ತಿಯ ಜವಾಬ್ದಾರಿ ಕೊಡಲಾಗಿದೆ. ತಳಮಟ್ಟದಿಂದಲೇ ಮತಬೇಟೆಗೆ ಸೂಚನೆ ನೀಡಲಾಗಿದೆ. ಇನ್ನು ಬೇರೆ ಬೇರೆ ಸಮುದಾಯದ ಮತ ಸೆಳೆಯಲು ತಂತ್ರ ಮಾಡಲಾಗಿದೆ. ಅನಗತ್ಯವಾಗಿ ಹೇಳಿಕೆ ಕೊಡದಂತೆ ಕುಮಾರಸ್ವಾಮಿ ಸೂಚನೆ ನೀಡಿದ್ದಾರೆ. ಸೋಮವಾರದಿಂದಲೇ ದಳ ನಾಯಕರು ಅಖಾಡದಲ್ಲಿ ಮತ ಶಿಕಾರಿಗೆ ಇಳಿಯಲಿದ್ದಾರೆ.

# ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ



**ಮೈಸೂರು:** ಕಳೆದ ಬಾರಿಯಂತೆ ಈ ಬಾರಿಯೂ ಕನ್ನಡ ರಾಜ್ಯೋತ್ಸವದ ಅಂಗವಾಗಿ ನವೆಂಬರ್ 1 ರಂದು ಕರ್ನಾಟಕ ಕಲಾಮಂದಿರದಲ್ಲಿ ಸಂಜೆ 5 ಗಂಟೆಗೆ ವಿವಿಧ ಕಲಾತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ ಸುದರ್ಶನ್ ಅವರು ತಿಳಿಸಿದರು.

ಇಂದು ಹಳೇ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ನಡೆದ ಸಾಂಸ್ಕೃತಿಕ ಉಪ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ನವೆಂಬರ್ 1 ರಂದು ಬೆಳಿಗ್ಗೆ 9 ಗಂಟೆಗೆ ಕಲಾಮಂದಿರದಲ್ಲಿ ಧ್ವಜಾರೋಹಣ ನೆರವೇರಿಸಲಾಗುವುದು. ಅಂದು ಸಂಜೆ 5 ಗಂಟೆಗೆ ನಡೆಯಲಿರುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿವಿಧ ಶಾಲಾ ಕಾಲೇಜುಗಳ ಸುಮಾರು 6 ರಿಂದ 8 ತಂಡದ 230 ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದ್ದು, ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಹಾಗೂ ತಂಡಕ್ಕೆ ನೆನಪಿನ ಕಾಣಿಕೆಯನ್ನು ನೀಡಲಾಗುವುದು ಎಂದು ತಿಳಿಸಿದರು.

ಸಾರ್ವಜನಿಕ ಮತ್ತು ಖಾಸಗಿ ಶಾಲೆಗಳನ್ನೊಳಗೊಂಡಂತೆ ಕನ್ನಡ ಮಾಧ್ಯಮದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿರುವ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಸ್ನ್ಯಾಕ್ಸ್ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಜವರೇಗೌಡ, ಮೈಸೂರು ಮಹಾನಗರ ಪಾಲಿಕೆಯ ಅಧಿಕಾರಿ ಸೇರಿದಂತೆ ನೆಹರು ಯುವ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

# ಪೊಲೀಸರಿಗೆ ವಿಚಾರಣ ಸಂಕಿರಣ

**ಮೈಸೂರು:** ನಗರದ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ತರಬೇತಿ ವಿಭಾಗದ ಎಡಿಜಿಪಿಗಳಾದ ಅಲೋಕ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಜರ್ಮನಿ ದೇಶದ ಬವೇರಿಯಾ ರಾಜ್ಯದ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಎರಡು ದಿನಗಳ ವಿಚಾರಣ ಸಂಕಿರಣವನ್ನು ಏರ್ಪಡಿಸಲಾಗಿತ್ತು.

ವಿಚಾರ ಸಂಕಿರಣದಲ್ಲಿ ಕರ್ನಾಟಕ ಸರ್ಕಾರ ಮತ್ತು ಜರ್ಮನಿ ದೇಶಗಳ ಬಾಂದವ್ಯ ವೃದ್ಧಿ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಮತ್ತು ಜರ್ಮನಿ ದೇಶದ ಬವೇರಿಯಾ ರಾಜ್ಯದ ಪೊಲೀಸ್ ಇಲಾಖೆಯೊಂದಿಗೆ 2016 ರಿಂದ ತರಬೇತಿ ವಿಭಾಗದಲ್ಲಿ ಪರಸ್ಪರ ಮಾಹಿತಿ, ಕೌಶಲ್ಯ ಅಭಿವೃದ್ಧಿ ಮತ್ತು ವೃತ್ತಿಪರತೆ, ಕುರಿತು ಸಹಕಾರ ವೃದ್ದಿಸಲು ಒಪ್ಪಂದ ಮಾಡಿಕೊಂಡಿದ್ದು, ಅದರ ಅನ್ವಯ ಎರಡು ರಾಜ್ಯಗಳ ಅಧಿಕಾರಿಗಳು ತರಬೇತಿ ಕುರಿತು ಭೇಟಿ ಹಾಗೂ ಸನ್ನಿವೇಶ ಆಧಾರಿತ ತರಬೇತಿ (ಖಛಿಜಟಿಚಿಡಿಠ ಃಚಿಜಜ ಐಜಚಿಡಿಟಿಟಿರ) ಅಭಿವೃದ್ಧಿಪಡಿಸಲು ಹಲವಾರು ಕ್ರಮಗಳನ್ನು ಕೈಗೊಳ್ಳಲಾಯಿತು.

ಬವೇರಿಯಾ ರಾಜ್ಯದ ಜನಸಂಖ್ಯೆ ಅಂದಾಜು 7 ಕೋಟಿಯಷ್ಟಿದ್ದು ಯುರೋಪಿನಲ್ಲಿಯೇ ಉತ್ತಮ ಪೊಲೀಸ್ ವ್ಯವಸ್ಥೆಯನ್ನು ಹೊಂದಿದೆ. ಎರಡೂ ರಾಜ್ಯಗಳ ಪೊಲೀಸ್ ಅಧಿಕಾರಿಗಳಿಗೆ ಕಾನೂನು ಮತ್ತು ಸುವ್ಯವಸ್ಥೆ, ಅಪರಾಧಗಳ ಪತ್ತೆ ಮತ್ತು ನಿಯಂತ್ರಣ, ಮಹಿಳೆಯರ ಮತ್ತು ಮಕ್ಕಳ ವಿರುದ್ಧದ ಅಪರಾಧಗಳು, ಸಂಚಾರ ನಿರ್ವಹಣೆ ಹಾಗೂ ಸೈಬರ್ ಅಪರಾಧಗಳ ಪತ್ತೆ ಮತ್ತು ತಡೆಗಟ್ಟುವಿಕೆ ಕುರಿತು ಪರಿಣಾಮಕಾರಿಯಾಗಿ ಅಧಿಕಾರಿಗಳಿಗೆ ಸನ್ನಿವೇಶ ಆಧಾರಿತ ತರಬೇತಿ ನೀಡುವ ಕುರಿತು ಕೌಶಲ್ಯ ಅಭಿವೃದ್ಧಿಪಡಿಸುವ ಬಗ್ಗೆ ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಯಿತು.



ಬವೇರಿಯಾ ರಾಜ್ಯದ ತರಬೇತಿ ಮುಖ್ಯಸ್ಥರಾದ ಶ್ರೀ ಆಂಡ್ರಿಯನ್ ಡೈಟೆಲ್‌ರವರು ಕರ್ನಾಟಕ ಪೊಲೀಸ್‌ನ ಎಲ್ಲಾ ತರಬೇತಿ ಶಾಲೆಗಳ ಮುಖ್ಯಸ್ಥರೊಂದಿಗೆ ವಿಚಾರ ವಿನಿಮಯ ಮಾಡಿದರು.

# ನಾಮ ನಿರ್ದೇಶನಕ್ಕೆ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು 2024-25ನೇ ಸಾಲಿನ ಕೆ.ಎಸ್.ಟಿ.ಎ. ವಾರ್ಷಿಕ ಬಹುಮಾನ (ದಿವ್ಯಾಂಗ)ಕ್ಕೆ ಅರ್ಹರಿಂದ ಅರ್ಜಿ/ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ. ಅರ್ಜಿ/ನಾಮ ನಿರ್ದೇಶನವನ್ನು ಸಲ್ಲಿಸಲು 2025ರ ಜನವರಿ 28 ಕೊನೆಯ ದಿನಾಂಕವಾಗಿದ್ದು, ಆಯ್ಕೆಯಾದ ವ್ಯಕ್ತಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್ ಸೈಟ್ - www.kstacademy.in ನಲ್ಲಿ ಮಾರ್ಗಸೂಚಿಯನ್ನು ವೀಕ್ಷಿಸಿ, ನಿಗದಿತ ಅರ್ಜಿ ನಮೂನೆಯನ್ನು ಡೌನ್ ಲೋಡ್ ಮಾಡಿಕೊಂಡು ಅರ್ಜಿ ಸಲ್ಲಿಸಬೇಕಾಗಿರುತ್ತದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎ.ಎಂ ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ವತಿಯಿಂದ ಕೇಂದ್ರ ಸರ್ಕಾರದ ಯೋಜನೆಯಾದ ಪ್ರಧಾನ ಮಂತ್ರಿಗಳ ಸೃಜನ ಯೋಜನೆ (ಪಿ.ಎಂ.ಇ.ಜಿ.ಪಿ)ಯಡಿ ನಿರುದ್ಯೋಗ ಯುವಕ-ಯುವತಿಯರಿಗೆ ಆರ್ಥಿಕ ಸಾಲ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. 18 ವರ್ಷ ಮೇಲ್ಪಟ್ಟ ಪುರುಷರು, ಮಹಿಳೆಯರು /ಪ.ಜಾ, ಪ.ಪಂ, ಹಿಂದುಳಿದ ವರ್ಗ, ಅಲ್ಪ ಸಂಖ್ಯಾತರು, ಮಾಜಿ ಸೈನಿಕರು, ಅಂಗವಿಕಲರು ಅರ್ಜಿ ಸಲ್ಲಿಸಬಹುದು. ವಿವಿಧ ಹಣಕಾಸು ಸಂಸ್ಥೆಗಳು (ಬ್ಯಾಂಕುಗಳ) ಮೂಲಕ ಸಾಲ ಸೌಲಭ್ಯ ನೀಡಲಾಗುವುದು. ಯಾವುದೇ ಆದಾಯದ ಮಿತಿ ಇರುವುದಿಲ್ಲ. ಅಸಕ್ತಿ ಹೊಂದಿರುವ ಉದ್ಯಮಶೀಲರು www.kviconline.gov.in ವೆಬ್ ಸೈಟ್ ನಲ್ಲಿ ಇತಥ ಏಜೆನ್ಸಿ ಲಾಗಿನ್ ಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಜಿಲ್ಲಾ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಕಛೇರಿ ದೂರವಾಣಿ ಸಂಖ್ಯೆ. 9480825612 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಲಚೇತನರ ಸೌಲಭ್ಯಕ್ಕಾಗಿ ಹಣ ಕೇಳಿದರೆ ದೂರು ದಾಖಲಿಸಿ

**ಬೆಂಗಳೂರು ಗ್ರಾಮಾಂತರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಇಲಾಖೆ ವತಿಯಿಂದ ಹಾಗೂ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅರ್ಹ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ಸಂಪೂರ್ಣ ಉಚಿತವಾಗಿ ವಿತರಿಸಲಾಗುತ್ತಿದ್ದು, ಇಲಾಖೆಯಿಂದ ಯಾವುದೇ ರೀತಿಯ ಶುಲ್ಕವನ್ನು ನಿಗಧಿಪಡಿಸಿರುವುದಿಲ್ಲ.

ಆದರೆ ಮಧ್ಯವರ್ತಿಗಳು ಸೌಲಭ್ಯ ದೊರಕಿಸಿಕೊಡುವುದಾಗಿ ಫಲಾನುಭವಿಗಳನ್ನು ನಂಬಿಸಿ ಹಣ ವಸೂಲಿ ಮಾಡುತ್ತಿರುವ ಜಾಲದ ಬಗ್ಗೆ ಮಾಹಿತಿಯು ಇಲಾಖೆಯ ಗಮನಕ್ಕೆ ಕಂಡುಬಂದಿರುತ್ತದೆ.

ವಿಕಲಚೇತನರ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆಯು ಸೇರಿದಂತೆ ಇಲಾಖೆಯ ಎಲ್ಲಾ ಯೋಜನೆಗಳು ಸಂಪೂರ್ಣ ಉಚಿತವಾಗಿದ್ದು, ಈ ರೀತಿಯಲ್ಲಿ ಸೌಲಭ್ಯಕ್ಕಾಗಿ ಹಣ ಕೇಳುವ ಯಾವುದೇ ವ್ಯಕ್ತಿ ಅಥವಾ ಜಾಲ ತಮ್ಮ ಗಮನಕ್ಕೆ ಬಂದರೆ ಕೂಡಲೇ ಕಡ್ಡಾಯವಾಗಿ ಹತ್ತಿರದ ಪೊಲೀಸ್ ಠಾಣೆಯಲ್ಲಿ / ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಸಹಾಯವಾಣಿ ಸಂಖ್ಯೆಗಳಾದ 080-22375014 ಮತ್ತು 080-220011298 ಹಾಗೂ ಟೋಲ್ ಫ್ರೀ ಮೊಬೈಲ್ ಸಂಖ್ಯೆ 1800 4255320 ಗೆ ಕರೆ ಮಾಡಿ ದೂರು ದಾಖಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಮಾಹಿತಿ ಸಲಹಾಕೇಂದ್ರ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಜಿಲ್ಲಾಡಳಿತ ಭವನ ಬೀರಸಂದ್ರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ದೂರವಾಣಿ ಸಂಖ್ಯೆ 080-29787441 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜಗದೀಶ.ಎನ್.ಎಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತುಮಕೂರು ಜಿಲ್ಲೆಯ ಹೆಗ್ಗರೆ ಗೇಟ್ ರಸ್ತೆ ಮೇಲ್ಸೇತುವೆ ಹಾಗೂ ಬಿಳಿಪಾಳ್ಯ ಗೇಟ್ ರಸ್ತೆ ಕೆಳಸೇತುವೆ ನಿರ್ಮಾಣಕ್ಕೆ ಒಟ್ಟು 35.61 ಕೋಟಿ ಬಿಡುಗಡೆ

ನವದೆಹಲಿ/ಬೆಂಗಳೂರು,

ತುಮಕೂರು ಲೋಕಸಭಾ ಕ್ಷೇತ್ರದ ಸಂಪೂರ್ಣ ಅಭಿವೃದ್ಧಿ ಹೊಣೆಯನ್ನು ಹೊಂದಿರುವ ಹಾಗೂ ಕ್ಷೇತ್ರದ ಸಾರ್ವಜನಿಕರ ಹಿತದೃಷ್ಟಿಯಿಂದ ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣರವರ ವಿಶೇ? ಕಾಳಜಿಯಿಂದ ಒಟ್ಟು ರೂ 35.61 ಕೋಟಿ ರೂ ವೆಚ್ಚದಲ್ಲಿ ಹೆಗ್ಗರೆ ಗೇಟ್ ರೈಲ್ವೆ ನಿಲ್ದಾಣ ರಸ್ತೆ ಮೇಲ್ಸೇತುವೆ ( ಎಲ್ ಸಿ ನಂ 44) ಕಾಮಗಾರಿಗೆ ಅಂದಾಜು ಮೊತ್ತ ? ರೂ 28.53 ಕೋಟಿ ಹಾಗೂ ಬಿಳಿಪಾಳ್ಯ ಗೇಟ್, ರಸ್ತೆ ಕೆಳಸೇತುವೆ (ಎಲ್ ಸಿ ನಂ. 50) ಕಾಮಗಾರಿಗೆ ಅಂದಾಜು ಮೊತ್ತ ? ರೂ 7.08 ಕೋಟಿ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ.

ಈ ಕಾಮಗಾರಿಯು ಸಂಪೂರ್ಣ ಶೇಕಡ 100 ರಷ್ಟು ರೈಲ್ವೆ ವೆಚ್ಚದ ಅನುದಾನದಡಿಯಲ್ಲಿ ನಡೆಯಲಿದೆ. ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವರು ಈಗಾಗಲೆ ಸರಿ ಸುಮಾರು ರೂ. 440 ಕೋಟಿ ಯೋಜನಾ ಮೊತ್ತವನ್ನು ಖಔಃ , ಖಗಃ ಅಭಿವೃದ್ಧಿಗೆ ತಮ್ಮ ತುಮಕೂರು ಲೋಕಸಭಾ ಕ್ಷೇತ್ರಕ್ಕೆ ದೊರಕಿಸಿ ಕೊಟ್ಟಿದ್ದಾರೆ. ಇದಕ್ಕೆ ಸಂಪೂರ್ಣ ಬೆಂಬಲವಾಗಿ ಸಹಕರಿಸಿದ ಪ್ರಧಾನಿ ನರೇಂದ್ರ ಮೋದಿಯವರಿಗೆ ಹಾಗೂ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈ?ವ ಅವರಿಗೆ ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ಸೋಮಣ್ಣನವರು ತುಮಕೂರಿನ ಜನತೆಯ ಪರವಾಗಿ ಧನ್ಯವಾದಗಳನ್ನು ತಿಳಿಸಿದ್ದಾರೆ.

# ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯಿಂದ ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ

**ಬೆಂಗಳೂರು:** ಬೆಂಗಳೂರು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ವತಿಯಿಂದ ಅಕ್ಟೋಬರ್ 28ರಂದು ಸಂಜೆ 6.00 ಗಂಟೆಗೆ ಬೆಂಗಳೂರು ಜೆ.ಸಿ. ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ 2023-24 ಮತ್ತು 2024-25ನೇ ಸಾಲಿನ ''ಕರ್ನಾಟಕ ಕಲಾಶ್ರೀ'' ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ್ ಎಸ್ ತಂಗಡಗಿ ಅವರು ಸಮಾರಂಭದ ಉದ್ಘಾಟನೆ ನೆರವೇರಿಸಿ, ಪ್ರಶಸ್ತಿ ಪುರಸ್ಕೃತರಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಿರುವರು.

ಮಾನ್ಯ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಲೋಕಸಭಾ ಸದಸ್ಯರಾದ ಪಿ.ಸಿ ಮೋಹನ್ ಅವರು ಪ್ರಶಸ್ತಿ ಪುರಸ್ಕೃತರ ಪರಿಚಯ ಪುಸ್ತಕವನ್ನು ಬಿಡುಗಡೆ ಮಾಡಲಿರುವರು ಹಾಗೂ ಸಮಾರಂದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿಗಳಾದ ಡಾ. ಅಜಯ್ ನಾಗಭೂಷಣ್ ಎಂ.ಎನ್ ಮತ್ತು ನಿರ್ದೇಶಕರಾದ ಡಾ. ಧರಣೀದೇವಿ ಮಾಲಗತ್ತಿಯವರು ಉಪಸ್ಥಿತರಿರುವರು.

ಸಮಾರಂಭದ ಅಧ್ಯಕ್ಷತೆಯನ್ನು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಉದಯ್ ಬಿ. ಗರುಡಾಚಾರ್ ಅವರು ವಹಿಸಲಿದ್ದು, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಅಧ್ಯಕ್ಷರಾದ ಶುಭಾ ಧನಂಜಯ ಅವರು ಪ್ರಾಸ್ತಾವಿಕವಾಗಿ ಮಾತನಾಡಲಿರುವರು.

**ಪ್ರಶಸ್ತಿ ಪುರಸ್ಕೃತರು:** 2023-24ನೇ ಸಾಲಿನಲ್ಲಿ ಹಿಂದುಸ್ತಾನಿ ಸಂಗೀತ ಗಾಯನದಲ್ಲಿ ಬಳ್ಳಾರಿಯ ಡಿ ಕುಮಾರದಾಸ್ ಹಾಗೂ ಸುಗಮ ಸಂಗೀತದಲ್ಲಿ ರಾಯಚೂರಿನ ಅಂಜಯ್ಯ ನುಲಿ ಅವರು ''ಕರ್ನಾಟಕ ಕಲಾಶ್ರೀ'' ಗೌರವ ಪ್ರಶಸ್ತಿಗೆ ಪುರಸ್ಕೃತರಾಗಿದ್ದರೆ, ಕರ್ನಾಟಕ ಸಂಗೀತ ವಿಭಾಗದಲ್ಲಿ ಹಾಡುಗಾರಿಕೆಯಲ್ಲಿ ಬೆಂಗಳೂರಿನ ಪದ್ಮಾ ಗುರುದತ್, ವೀಣೆಯಲ್ಲಿ ಮೈಸೂರಿನ ಶ್ರೀಮತಿ ರೇವತಿ ಕಾಮತ್, ನಾದಸ್ವರದಲ್ಲಿ ಕೋಲಾರದ ವಿ. ರಮೇಶ್, ಸ್ಯಾಕ್ಸೋಫೋನ್‌ನಲ್ಲಿ ಮಂಗಳೂರಿನ ಕದ್ರಿ ರಮೇಶ್‌ನಾಥ್ ಅವರು ''ಕರ್ನಾಟಕ ಕಲಾಶ್ರೀ'' ವಾರ್ಷಿಕ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಹಿಂದೂಸ್ತಾನಿ ಸಂಗೀತದಲ್ಲಿ ಗಾಯನ - ಕೊಪ್ಪಳದ ವಿರೂಪಾಕ್ಷ ರೆಡ್ಡಿ, ಸಿತಾರ ಧಾರವಾಡದ ಶಫೀಕ್ ಖಾನ್, ತಬಲ - ಹುಬ್ಬಳಿಯ ಸತೀಶ್ ಹಂಪಿಹೋಳಿ ಅವರು ಪ್ರಶಸ್ತಿ ಪುರಸ್ಕೃತರಾಗಿದ್ದಾರೆ. ನೃತ್ಯ - ಬೆಂಗಳೂರಿನ ಶ್ರೀಮತಿ ಅರುಣ, ಬೆಂಗಳೂರಿನ ಶ್ರೀಮತಿ ಮಾಲಾ ಶಶಿಕಾಂತ್, ಒಡಿಸ್ಸಿ -ಬೆಂಗಳೂರಿನ ಶ್ರೀಮತಿ ಶರ್ಮಿಳಾ ಮುಖರ್ಜಿ, ಆನೇಕಲ್‌ನ ಸೈಯದ್ ಸಲ್ಲಾವುದ್ದೀನ್ ಪಾಷಾ ಅವರು ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಸುಗಮ ಸಂಗೀತ- ಬೆಂಗಳೂರಿನ ಆನಂದ ಮಾದಲಗೆರೆ, ಕಥಾಕೀರ್ತನ ಮಂಡ್ಯದ ಎಸ್.ಎಂ.ನಾಗಾರಾಜಾಚಾರ್, ಗಮಕ-ವಾಚನ ಬೆಂಗಳೂರಿನ ಜಿ.ಎಸ್.ನಾರಾಯಣ, ಹೊರದೇಶ ಕನ್ನಡ ಕಲಾವಿದರಿಂದ ಭರತನಾಟ್ಯದಲ್ಲಿ ಅಮೇರಿಕಾದ ಕೆ.ಆರ್.ಎಸ್. ಪ್ರಸನ್ನ ಕಸ್ತೂರಿ, ಸಂಘ ಸಂಸ್ಥೆ ವಿಭಾಗದಿಂದ ಬೆಂಗಳೂರಿನ ವಾಣಿ ಸ್ಕೂಲ್ ಎಜುಕೇಶನ್ ಟ್ರಸ್ಟ್ ಪ್ರಶಸ್ತಿಗೆ ಭಾಜನರಾಗಿದ್ದಾರೆ.

2024-25 ನೇ ಸಾಲಿನಲ್ಲಿ ಕರ್ನಾಟಕ ಸಂಗೀತ ಗಾಯನ ವಿಭಾಗದಿಂದ ಭಾನುಮತಿ ನರಸಿಂಹನ್ ಹಾಗೂ ನೃತ್ಯ ಗುರು ವಿಭಾಗದಿಂದ ಹಾಸನದ ಶ್ರೀಮತಿ ಗಾಯತ್ರಿ ಕೇಶವನ್ ಅವರುಗಳು ಕರ್ನಾಟಕ ಕಲಾಶ್ರೀ ಗೌರವ ಪ್ರಶಸ್ತಿ ಪುರಸ್ಕೃತರಾಗಿದ್ದರೆ, ಕರ್ನಾಟಕ ಸಂಗೀತ ವಿಭಾಗದಿಂದ ಹಾಡುಗಾರಿಕೆಯಲ್ಲಿ ಕೋಲಾರದ ವಾನರಾಶಿ ಬಾಲಕೃಷ್ಣ ಭಾಗವತ್, ಮೃದಂಗದಲ್ಲಿ ಬೆಂಗಳೂರಿನ ಎಸ್.ವಿ.ಗಿರಿಧರ್, ಪಿಟೀಲು - ಹೊಸಕೋಟೆಯ ಕೆ.ಎಸ್.ನಾಗಭೂಷಣಯ್ಯ ಅವರು ಕರ್ನಾಟಕ ಕಲಾಶ್ರೀ ವಾರ್ಷಿಕ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ. ಹಿಂದೂಸ್ತಾನಿ ವಿಭಾಗದಿಂದ ಗಾಯನ-ಕಲಬುರಗಿಯ ಮಹದೇವಪ್ಪ ಪೂಜಾರ್, ಹಾರ್ಮೋನಿಯಂ - ಬೆಳಗಾವಿಯ ರವೀಂದ್ರ ಗುರುರಾಜ ಕಾಟೋಟಿ, ಗಾಯನ- ಉತ್ತರಕನ್ನಡ ಆನಂದ್ ಭಾಗವತ್, ನೃತ್ಯ ವಿಭಾಗದಲ್ಲಿ ಬೆಳಗಾವಿಯ ಟಿ.ರವೀಂದ್ರ ಶರ್ಮ, ಬೆಂಗಳೂರಿನ ಅನುರಾಧ ವಿಕ್ರಾಂತ್, ಬೆಂಗಳೂರಿನ ಸುಗ್ಗನಹಳ್ಳಿ ಷಡಕ್ಷರಿ, ನೃತ್ಯ ಪಿಟೀಲು - ಬೆಂಗಳೂರಿನ ಟಿ.ಆರ್.ಹೇಮಂತ್ ಕುಮಾರ್, ಸುಗಮ ಸಂಗೀತದಲ್ಲಿ ರಾಯಚೂರಿನ ಸೂಗೂರೇಶ ಅಸ್ಕಿಹಾಳ್, ಪಕ್ಕವಾದ್ಯ ? ತಬಲ ಬೆಂಗಳೂರಿನ ಎಸ್‌ಎಲ್.ಶಿವಶಂಕರ್, ಕಥಾಕೀರ್ತನ ವಿಭಾಗದಿಂದ ಕೋಲಾರದ ಕೆ.ಎನ್.ಕೃಷ್ಣಪ್ಪ, ಗಮಕ ವಿಭಾಗದಿಂದ ವಾಖ್ಯಾನ - ಹಾಸನದ ಶ್ರೀಮತಿ ರತ್ನಮೂರ್ತಿ ಹಾಗೂ ಸಂಘಸಂಸ್ಥೆಯ ವಿಭಾಗದಿಂದ ಗದಗದ ಶ್ರೀ ವೀರೇಶ್ವರ ಪುಣ್ಯಾಶ್ರಮ ಮತ್ತು ಬೆಂಗಳೂರಿನ ಸುನಾದ ನಾದ ಕಲ್ಚರಲ್ ಸೆಂಟರ್ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ವಾಲ್ಮೀಕಿ ಸಂಶೋಧನಾ ಕೇಂದ್ರ ಸ್ಥಾಪನೆಗೆ ಶೀಘ್ರ ಕ್ರಮ: ಮುನಿಯಪ್ಪ

**ಬೆಂಗಳೂರು ಗ್ರಾಮಾಂತರ:** ಅಕ್ಟೋಬರ್ ದೇವನಹಳ್ಳಿ ತಾಲ್ಲೂಕಿನ ಹುರುಳುಗುರ್ಕಿ ಬಳಿ ವಾಲ್ಮೀಕಿ ಸಂಶೋಧನಾ ಕೇಂದ್ರ ಸ್ಥಾಪನೆಗೆ ಜಾಗ ಗುರ್ತಿಸಲಾಗಿದ್ದು ಜಾಗಕ್ಕೆ ಕಂಪೌಂಡ್ ನಿರ್ಮಾಸಲು ಶಾಸಕರ ನಿಧಿಯಿಂದ 10 ಲಕ್ಷ ರೂ. ಬಿಡುಗಡೆಗೊಳಿಸಿ ಶೀಘ್ರ ಕಾಮಗಾರಿ ಆರಂಭಿಸಲಾಗುವುದು ಎಂದು ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್. ಮುನಿಯಪ್ಪ ಅವರು ಹೇಳಿದರು.



ದೇವನಹಳ್ಳಿ ಟೌನ್ ನ ಡಾ. ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿದ್ದ 'ಶ್ರೀ ಮಹರ್ಷಿ ವಾಲ್ಮೀಕಿ'ರವರ ಜಯಂತ್ಯೋತ್ಸವ ಕಾರ್ಯಕ್ರಮನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀ ಮಹರ್ಷಿ ವಾಲ್ಮೀಕಿ ರವರು ಮಹಾನ್ ವ್ಯಕ್ತಿ, ಕಾಲಜ್ಞಾನಿ. ಅವರು ನಡೆದ ಹಾದಿ ನಮ್ಮೆಲ್ಲರಿಗೂ ಮಾರ್ಗದರ್ಶನವಾಗಬೇಕು. ಮಹರ್ಷಿ ವಾಲ್ಮೀಕಿ ಬರೆದ ರಾಮಾಯಣ ಎಂದೆಂದಿಗೂ ಸಾರ್ವಕಾಲಿಕ. ಪ್ರತಿಯೊಬ್ಬರೂ ವಾಲ್ಮೀಕಿಯವರ ಆದರ್ಶ ಜೀವನವನ್ನು ತಮ್ಮ ಬದುಕಿನಲ್ಲಿ ರೂಡಿಸಿಕೊಂಡು ನಡೆಯಬೇಕಿದೆ ಎಂದರು.

ನಾನು ಲೋಕಸಭಾ ಸದಸ್ಯನಾಗಿದ್ದಾಗ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 4 ವಾಲ್ಮೀಕಿ ವಸತಿ ಶಾಲೆಗಳನ್ನು ಆರಂಭಿಸಿದೆ. ಇದರಿಂದ ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆದು ಉನ್ನತ ಹುದ್ದೆ ಅಲಂಕರಿಸುವ ಮೂಲಕ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತಿದೆ ಎಂದು ಹೇಳಿದರು.

ರಾಜ್ಯದ ವಾಲ್ಮೀಕಿ ಸಮುದಾಯದ ಅಭಿವೃದ್ಧಿಗೆ ಸರ್ಕಾರ. ಹೆಚ್ಚಿನ ಒತ್ತು ನೀಡುತ್ತಿದೆ. ವಾಲ್ಮೀಕಿ ವಸತಿ ಶಾಲೆಗಳು ಆರಂಭಿಸುವ ಮೂಲಕ ಗುಣಮಟ್ಟದ ಶಿಕ್ಷಣದ ಜತೆಗೆ ಮಕ್ಕಳ ಸರ್ವೋತೋಮುಖ ಅಭಿವೃದ್ಧಿ ಮಾಡುವ ಕನಸು ಕಂಡಿದ್ದೇವೆ.

ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗದ ಬಾಲಕಿಯರ ವಸತಿ ಶಾಲೆ ಶೀಘ್ರದಲ್ಲೇ ಆರಂಭಿಸಲಾಗುವುದು. ದೇವನಹಳ್ಳಿ ತಾಲ್ಲೂಕಿನ ಗೋಕರೆ ಬಳಿಯ ವಾಲ್ಮೀಕಿ ಭವನದ ಬಾಕಿ ಉಳಿದಿರುವ ಕಾಮಗಾರಿಗೆ 1 ಕೋಟಿ ರೂಗಳ ಅನುದಾನ ಬೇಕಿದ್ದು, ತಕ್ಷಣ 50 ಲಕ್ಷ ರೂಗಳ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು. ವಿಜಯಪುರದಲ್ಲಿ ವಾಲ್ಮೀಕಿ ಬಾಲಕಿಯರ ವಸತಿ ಶಾಲೆ ನಿರ್ಮಿಸಲು, ವಾಲ್ಮೀಕಿ ಸಂಶೋಧನಾ ಕೇಂದ್ರ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಶೀಘ್ರದಲ್ಲೇ ಅನುದಾನವನ್ನು ಬಿಡುಗಡೆ ಮಾಡಿಸುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಆದಿಕವಿ ಮಹರ್ಷಿ ವಾಲ್ಮೀಕಿ ಅವರ ಜೀವನ ಚರಿತ್ರೆ ಹಾಗೂ ಸಮಾಜಕ್ಕೆ ಕೊಡುಗೆ ಕುರಿತು ವಿಶೇಷ ಉಪನ್ಯಾಸವನ್ನು ತಿಮ್ಮೇಶ ಪ್ರಭು ಅವರು ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದ ಸಾಧಕರು ಹಾಗೂ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನಿಸಿ, ಗೌರವಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನದಿಂದ ಡಾ. ಬಿ.ಆರ್ ಅಂಬೇಡ್ಕರ್ ಭವನದ ವರೆಗೆ ಶ್ರೀ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರ ಮೆರವಣಿಗೆ ಜರುಗಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ರಾಜಣ್ಣ, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರದ ಅಧ್ಯಕ್ಷ ವಿ. ಶಾಂತಕುಮಾರ್, ದೇವನಹಳ್ಳಿ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಜಗನ್ನಾಥ, ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕೆ.ಎನ್ ಅನುರಾಧ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಪಾಂಡುರಂಗ, ದೇವನಹಳ್ಳಿ ತಹಶೀಲ್ದಾರ್ ಬಾಲಕೃಷ್ಣ , ತಾಲೂಕು ಪಂಚಾಯಿತಿ ಇಒ ಶ್ರೀನಾಥಗೌಡ, ದೇವನಹಳ್ಳಿ ತಾಲೂಕು ಸಮುದಾಯದ ಅಧ್ಯಕ್ಷರಾದ ಜಿ.ನಾಗೇಶ್ ಬಾಬು ಹಾಗೂ ಜಿಲ್ಲಾ ಮಟ್ಟದ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಸಮುದಾಯದ ವಿವಿಧ ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

# ಪತ್ರಕರ್ತರಿಗೆ ಮೀಡಿಯಾ ಕಿಟ್‌ಗೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2024-25ನೇ ಸಾಲಿಗೆ ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ ''ಮೀಡಿಯಾ ಕಿಟ್'' ವಿತರಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮಾಧ್ಯಮ ಮಾನ್ಯತೆ ಪಡೆದ ಪತ್ರಕರ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅಥವಾ ಆಯಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಂದ ಅರ್ಜಿ ನಮೂನೆಯನ್ನು ಪಡೆದುಕೊಂಡು, ಇಲಾಖೆಯ ಮಾನ್ಯತಾ ಕಾರ್ಡು (ಂಛಿಛಿಡಿಜಣಚಿಣಠಟಿ ಅಚಿಡಿಜ) , ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ (ಉಪಜಾತಿ), ಪತ್ರಿಕಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೇವಾನುಭವ, ವೇತನ ವಿವರಗಳನ್ನೊಳಗೊಂಡ ಮಾಹಿತಿಯನ್ನು ಭರ್ತಿ ಮಾಡಿ ಸ್ವ-ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬೇಕು.

ಅರ್ಜಿ ಸಲ್ಲಿಸಬಯಸುವವರು ಅರ್ಜಿಯೊಂದಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 2024-25ನೇ ಸಾಲಿನಲ್ಲಿ ವಿತರಿಸಲಾಗಿರುವ ಮಾಧ್ಯಮ ಮಾನ್ಯತಾ ಕಾರ್ಡು ಹೊಂದಿರುವ ಬಗ್ಗೆ ದೃಢೀಕೃತ ಜೆರಾಕ್ಸ್ ಪ್ರತಿ, ಜಾತಿ ದೃಢೀಕರಣಕ್ಕಾಗಿ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಹಾಗೂ ಅರ್ಜಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಮಾಹಿತಿಗಳಿಗೆ ಅಧಿಕೃತ ಪೂರಕ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕದೊಳಗಾಗಿ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರ್ಕಾರದ ವ್ಯಾಪ್ತಿಗೆ ಒಳಪಡುವ ನಿಗಮ, ಮಂಡಳಿಗಳಿಂದ ಹಾಗೂ ಸರ್ಕಾರದ ಯಾವುದೇ ಇಲಾಖೆಗಳಿಂದ ಈ ಯೋಜನೆಯಡಿ ಮಾಧ್ಯಮ ಕಿಟ್ಗಳನ್ನು ಪಡೆದಿರುವುದಿಲ್ಲ ಎಂದು ರೂ. 100 ರ ಬಾಂಡ್ ನಲ್ಲಿ ಮುಚ್ಚಳಿಕೆ ಪತ್ರವನ್ನು ಸಲ್ಲಿಸಬೇಕು.

ಮಾಧ್ಯಮ ಕಿಟ್ ಒದಗಿಸಲು ಪತ್ರಕರ್ತರ ಸೇವಾ ಹಿರಿತನ, ವಯೋಮಿತಿ ಹಾಗೂ ಸೇವಾನುಭವದ ಗರಿಷ್ಠತೆಯನ್ನು ಪರಿಗಣಿಸಲಾಗುವುದು. ಅರ್ಜಿಯೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ವಿವರ, ಪ್ರಸಾರ ಸಂಖ್ಯೆ, ಪತ್ರಿಕೆಯ ಮಾಧ್ಯಮ ಪಟ್ಟಿಯ ವಿವರ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 10-11-2024 ರ ಸಂಜೆ 5:00 ಗಂಟೆಯೊಳಗೆ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು. ಲಕೋಟೆಯ ಮೇಲ್ಭಾಗದಲ್ಲಿ ''ಪ.ಜಾ ಹಾಗೂ ಪ.ಪಂ.ಮಾಧ್ಯಮ ಮಾನ್ಯತೆ ಪತ್ರಕರ್ತರಿಗೆ ಮೀಡಿಯಾ ಕಿಟ್ ಗಾಗಿ ಅರ್ಜಿ'' ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಪರಾಷ್ಟ್ರಪತಿಗೆ ಆತ್ಮೀಯ ಸ್ವಾಗತ

**ಬೆಂಗಳೂರು:** ಭಾರತದ ಘನತೆವೆತ್ತ ಗೌರವಾನ್ವಿತ ಉಪರಾಷ್ಟ್ರಪತಿ ಜಗದೀಪ್ ಧನಕರ್ ಹಾಗೂ ಸುದೇಶ್ ಧನಕರ್ ಅವರು ಕರ್ನಾಟಕ ಪ್ರವಾಸಕ್ಕಾಗಿ ಇಂದು ಬೆಂಗಳೂರಿನ ಹೆಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ಭಾರತೀಯ ವಾಯುಸೇನೆಯ ವಿಶೇಷ ವಿಮಾನದ ಮೂಲಕ ಆಗಮಿಸಿದರು.



ಭಾರತದ ಘನತೆವೆತ್ತ ಗೌರವಾನ್ವಿತ ಉಪರಾಷ್ಟ್ರಪತಿ ಹಾಗೂ ಸುದೇಶ್ ಧನಕರ್ ಅವರನ್ನು ಗೌರವಾನ್ವಿತ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಆತ್ಮೀಯವಾಗಿ ಸ್ವಾಗತಿಸಿದರು.

ಬೆಂಗಳೂರಿಗೆ ಆಗಮಿಸಿದ ಉಪರಾಷ್ಟ್ರಪತಿಗಳು ನಂತರ ಹೆಚ್.ಎ.ಎಲ್ ವಿಮಾನ ನಿಲ್ದಾಣದಿಂದ ವಿಶೇಷ ಹೆಲಿಕ್ಯಾಪ್ಟರ್ ಮೂಲಕ ಮಂಡ್ಯ ಜಿಲ್ಲೆಯ ನಾಗಮಂಗಲದ ಬಿ.ಜಿ. ನಗರದಲ್ಲಿರುವ ಆದಿಚುಂಚನಗಿರಿ ವಿಶ್ವವಿದ್ಯಾಲಯವು ಆಯೋಜಿಸಿರುವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವ ಸಲುವಾಗಿ ಆದಿಚುಂಚನಗಿರಿಗೆ ಪ್ರಯಾಣ ಕೈಗೊಂಡರು.

ಈ ಸಂದರ್ಭದಲ್ಲಿ ಕೃಷಿ ಸಚಿವ ಎನ್ ಚೆಲುವರಾಯಸ್ವಾಮಿ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಕಾರ್ಯದರ್ಶಿಗಳಾದ ಸತ್ಯವತಿ ಜಿ, ಕರ್ನಾಟಕ ಪೊಲೀಸ್ ಮಹಾ ನಿರ್ದೇಶಕರಾದ ಅಲೋಕ್ ಮೋಹನ್, ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಜಗದೀಶ್ ಜಿ, ಬೆಂಗಳೂರು ಪೊಲೀಸ್ ಆಯುಕ್ತರಾದ ಬಿ. ದಯಾನಂದ ಸೇರಿದಂತೆ ಗಣ್ಯರು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



# ಮೇವು ಮೇಳ

ಬೆಂಗಳೂರು ನಗರ ಜಿಲ್ಲೆ, ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್, ಪಶುವೈದ್ಯಕೀಯ ಮಹಾವಿದ್ಯಾಲಯ, ಹೆಬ್ಬಾಳ ಮತ್ತು ಭಾರತೀಯ ಡೈರಿ ಅಸೋಸಿಯೇಷನ್-ದಕ್ಷಿಣ ವಲಯ ಇವರಸಂಯುಕ್ತಾಶ್ರಯದಲ್ಲಿ ನಗರದ ಹೆಬ್ಬಾಳದಲ್ಲಿರುವ ಪಶುವೈದ್ಯಕೀಯ ಕಾಲೇಜು, ಬಾಲಕರ ಹಾಸ್ಟೆಲ್ ಮೈದಾನದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಮೇವು ಮೇಳ ಕಾರ್ಯಕ್ರಮವನ್ನು ಬೀದರ, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಕೆ.ಸಿ.ವೀರಣ್ಣ ಅವರು ಉದ್ಘಾಟಿಸಿದರು. ಮೇಳದ ಮುಖ್ಯ ಅತಿಥಿಗಳಾಗಿ ಪಶುಪಾಲನ ಮತ್ತು ಪಶು ವೈದ್ಯ ಸೇವಾ ಇಲಾಖೆ ನಿರ್ದೇಶಕರಾದ ಡಾ. ಮಂಜುನಾಥ್ ಎಸ್ ಪಾಳೇಗಾರ್, ಪಶು ವೈದ್ಯಕೀಯ ಮಹಾವಿದ್ಯಾಲಯ ಡಾ. ಏನ್ ಕೆ ಎಸ್ ಗೌಡ, ಕರ್ನಾಟಕ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಪದ್ಮ ಪ್ರಕಾಶ್, ವ್ಯವಸ್ಥಾಪಕ ಮಂಡಳಿ ಸದಸ್ಯರಾದ ಡಾ. ಎಂ ಹೆಚ್ ಜಯಪ್ರಕಾಶ್, ಲತಾ ಡಿ ಎಚ್. ಸಂಗಪ್ಪ ದೊಡ್ಡಬಸಪ್ಪ, ಬೀದರ್ ವಿಶ್ವವಿದ್ಯಾಲಯ ಸಂಶೋಧನಾ ನಿರ್ದೇಶಕರಾದ ಶಿವಪ್ರಕಾಶ್, ಹೆಚ್. ಸಿ ಇಂದ್ರೇಶ್, ಸೇರಿದಂತೆ ಅಧಿಕಾರಿಗಳು, ರೈತಾಪಿ ವರ್ಗದವರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಚನ್ನಪಟ್ಟಣ ಉಪಚುನಾವಣೆ: ಎನ್‌ಡಿಎ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ನಾಮಪತ್ರ

**ಚನ್ನಪಟ್ಟಣ:** ಚನ್ನಪಟ್ಟಣ ಉಪಚುನಾವಣೆಗೆ ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ಶುಕ್ರವಾರ ನಾಮಪತ್ರ ಸಲ್ಲಿಸಿದರು. ಗುರುವಾರವಷ್ಟೇ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಿಪಿ ಯೋಗೇಶ್ವರ್ ನಾಮಪತ್ರ ಸಲ್ಲಿಸಿದ್ದರು. ಇದೀಗ ಎನ್‌ಡಿಎ ಅಭ್ಯರ್ಥಿ ನಾಮಪತ್ರ ಸಲ್ಲಿಕೆಯೊಂದಿಗೆ ಚನ್ನಪಟ್ಟಣದ ಚುನಾವಣಾ ಅಖಾಡ ರಂಗೇರಿದೆ.

ನಿಖಿಲ್ ಕುಮಾರಸ್ವಾಮಿ ಚನ್ನಪಟ್ಟಣದಲ್ಲಿ ಜೆಡಿಎಸ್ -ಬಿಜೆಪಿ ನಾಯಕರ ಸಮ್ಮುಖದಲ್ಲಿ ಶಕ್ತಿ ಪ್ರದರ್ಶನ ಮಾಡಿದ್ದಾರೆ. ಬಳಿಕ ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ.

ನಾಮಪತ್ರ ಸಲ್ಲಿಕೆಗೆ ಮುನ್ನ ನಿಖಿಲ್ ಕುಮಾರಸ್ವಾಮಿ ದೇವರ ಮೊರೆ ಹೋಗಿದ್ದಾರೆ. ಚನ್ನಪಟ್ಟಣ ಕೆಂಗಲ್ ಆಂಜನೇಯ ದೇವಸ್ಥಾನಕ್ಕೆ ಭೇಟಿ ಕೊಟ್ಟು ವಿಶೇಷ ಪೂಜೆ ಮಾಡಿಸಿದ್ದಾರೆ. ಇನ್ನು ಮೊಮ್ಮಗನಿಗೆ ಒಳ್ಳೆಯದಾಗಲಿ ಎಂದು ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರು ಪ್ರಾರ್ಥನೆ ಸಲ್ಲಿಸಿದ್ದಾರೆ. ಬೆಂಗಳೂರಿನ ಜೆಪಿ ನಗರದಲ್ಲಿರೋ ಲಕ್ಷ್ಮೀ ವೆಂಕಟೇಶ್ವರ ದೇಗುಲದಲ್ಲಿ ಪೂಜೆ ಸಲ್ಲಿಸಿದ್ದಾರೆ.

ಇನ್ನು ದೋಸ್ತಿ ನಾಯಕರು ಹೂಗಳಿಂದ ಸಿಂಗಾರಗೊಂಡಿರುವ ಚನ್ನಪಟ್ಟಣ ನಗರದಲ್ಲಿ ಅಬ್ಬರದ ರೋಡ್ ಶೋ ನಡೆಸಿದರು. ಶೇರ್ವಾ ಸರ್ಕಲ್‌ನಿಂದ ತಾಲೂಕು ಕಚೇರಿವರೆಗೆ ಬೃಹತ್ ರ್ಯಾಲಿ ನಡೆಸಿದರು.



**ಕಾಂಗ್ರೆಸ್ ಕುತಂತ್ರದಿಂದಲೇ ಹಿಂದೆ ನಿಖಿಲ್ ಸೋತಿದ್ರು: ಕುಮಾರಸ್ವಾಮಿ:** ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರು ಪುತ್ರನ ಎರಡು ಚುನಾವಣೆಗಳನ್ನ ನೆನೆಪು ಮಾಡಿಕೊಂಡರು. ಕಾಂಗ್ರೆಸ್ ಕುತಂತ್ರಕ್ಕೆ ಈ ಹಿಂದೆ ನಿಖಿಲ್ ಸೋತಿದ್ದರು. ಈ ಬಾರಿ ಚನ್ನಪಟ್ಟಣದ ಜನ ಬಲಿಯಾಗಲ್ಲ ಎನ್ನುವ ಮೂಲಕ ಗೆಲ್ಲುವ ವಿಶ್ವಾಸ ವ್ಯಕ್ತಪಡಿಸಿದರು.

**ಬಿಜೆಪಿಗೆ ನಷ್ಟ: ಅಶ್ವತ್ಥನಾರಾಯಣ:** ನಿಖಿಲ್ ಕುಮಾರಸ್ವಾಮಿ ಬೆನ್ನಿಗೆ ಬಿಜೆಪಿ ನಾಯಕರು ಪ್ರಬಲವಾಗಿ ನಿಂತಿದ್ದಾರೆ. ಇವತ್ತು ರಾಮನಗರದಲ್ಲಿ ಸುದ್ದಿ ಗೋಷ್ಠಿ ಕೂಡ ನಡೆಸಿ, ಒಗ್ಗಟ್ಟಾಗಿದ್ದೇವೆ ಎಂಬ ಸಂದೇಶ ಸಾರಿದ್ದಾರೆ. ಇದೇ ವೇಳೆ, ಬಿಜೆಪಿ ತೊರೆದು ಕಾಂಗ್ರೆಸ್ ಸೇರಿರುವ ಸಿಪಿವೈ ಚರ್ಚೆ ಕೂಡ ಮುನ್ನೆಲೆಗೆ ಬಂದಿದೆ. ಸಿಪಿವೈ ನಿರ್ಗಮನದಿಂದ ಬಿಜೆಪಿಗೆ ಹಿನ್ನಡೆ ಆಗಿದೆ ಎಂದು ಅಶ್ವತ್ಥನಾರಾಯಣ ಒಪ್ಪಿಕೊಂಡರೆ, ಯೋಗೇಶ್ವರ್ ಹರಕೆಯ ಕುರಿ ಎಂದು ಅಶೋಕ್ ಹೇಳಿದರು. ನಿಖಿಲ್ ಕುಮಾರಸ್ವಾಮಿ ಅಖಾಡಕ್ಕೆ ಇಳಿಯುತ್ತಿದ್ದಂತೆಯೇ ಕಾಂಗ್ರೆಸ್ ಎಚ್ಚೆತ್ತುಕೊಂಡಿದೆ ಆಗಿದೆ. ಗುರುವಾರ ತಡರಾತ್ರಿವರೆಗೂ ಡಿಸಿಎಂ ಡಿಕೆ ಶಿವಕುಮಾರ್ ಸಭೆ ನಡೆಸಿದ್ದಾರೆ. ಸಂಸದ ಡಿಕೆ ಸುರೇಶ್, ಮಾಗಡಿ ಬಾಲಕೃಷ್ಣ, ಎಂಎಲ್‌ಸಿ ಪುಟ್ಟಣ್ಣ ಸೇರಿದಂತೆ ಸ್ಥಳೀಯ ಮುಖಂಡರಿಗೆ ಡಿಕೆ ಪ್ರಚಾರದ ರೂಪುರೇಷೆ ತಿಳಿಸಿದ್ದಾರೆ.

ಇತ್ತ ಕಾಂಗ್ರೆಸ್ ನಾಯಕರು ನಿಖಿಲ್ ಸ್ಪರ್ಧೆಗೆ ವ್ಯಂಗ್ಯವಾಡಿದ್ದಾರೆ. ನಿಖಿಲ್ ಮೈತ್ರಿ ಅಭ್ಯರ್ಥಿಯಾಗುತ್ತಾರೆಂದು ಎಲ್ಲರಿಗೂ ಗೊತ್ತಿತ್ತು ಎಂದು ಮಾಜಿ ಸಂಸದ ಡಿಕೆ ಸುರೇಶ್ ಲೇವಡಿ ಮಾಡಿದ್ದಾರೆ.

ಈ ನಡುವೆ ಸಂಡೂರು ಮತ್ತು ಶಿಗ್ಗಾಂವಿಯಲ್ಲಿ ಬಿಜೆಪಿ ಅಭ್ಯರ್ಥಿಗಳು ಶಕ್ತಿ ಪ್ರದರ್ಶನ ಮಾಡಿದ್ದಾರೆ. ಸಂಡೂರಿನಲ್ಲಿ ಬಂಗಾರು ಹನುಮಂತು ವಿಜಯೇಂದ್ರ ನೇತೃತ್ವದಲ್ಲಿ ಅಬ್ಬರದ ರೋಡ್ ಶೋ ನಡೆಸಿದರೆ, ಶಿಗ್ಗಾಂವಿಯಲ್ಲಿ ಭರತ್ ಬೊಮ್ಮಾಯಿ ಕೂಡ ಮೆರವಣಿಗೆ ಮಾಡಿ, ತಮ್ಮ ನಾಯಕರ ಸಮ್ಮುಖದಲ್ಲಿ ಉಮೇದುವಾರಿಕೆ ಸಲ್ಲಿಸಿದರು.

## ಮತದಾನಜಾಗೃತಿಗಾಗಿಜಾಥ

**ರಾಮನಗರ:** ಚನ್ನಪಟ್ಟಣತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದಚನ್ನಪಟ್ಟಣ ವಿಧಾನಸಭಾಕ್ಷೇತ್ರದ ಉಪ ಚುನಾವಣೆ-2024ರ ಅಂಗವಾಗಿ ಅ.25ರ ಶುಕ್ರವಾರ ಚನ್ನಪ್ಟಣತಾಲ್ಲೂಕಿನಕೋಡಂಬಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಆಯೋಜಿಸಲಾಗಿದ್ದಮತದಾನ ಜಾಗೃತಿ ಜಾಥಕ್ಕೆ ಚನ್ನಪಟ್ಟಣ ತಾಲ್ಲೂಕು ಪಂಚಾಯಿತಿಯೋಜನಾಧಿಕಾರಿಸಿದ್ದರಾಜಮ್ಮ ಹಾಗೂ ಕೋಡಂಬಳ್ಳಿ ಗ್ರಾಮ ಪಂಚಾಯಿತಿಅಭಿವೃದ್ಧಿಅಧಿಕಾರಿ ಭಾಗ್ಯಲಕ್ಷ್ಮಮ್ಮ ಚಾಲನೆ ನೀಡಿದರು. ಮೊದಲಿಗೆ ಸರ್ಕಾರಿ ಶಾಲೆಯಿಂದಜಾಥವನ್ನು ಪ್ರಾರಂಭಿಸಿ ಕೋಡಂಬಳ್ಳಿ ಸರ್ಕಲ್ ವರೆಗೂಜಾಥ ಮುಂದುವರೆದು ಮತದಾನಕ್ಕಿಂತಇನ್ನೊಂದಿಲ್ಲ ನಾನು ಖಚಿವಾಗಿ ಮತದಾನ ಮಾಡುವೆ ಎಂಬ ಘೋಷವಾಖ್ಯಾ ಮೊಳಗುವುದರ ಮೂಲಕ ಮತದಾನಜಾಗೃತಿ ಮೂಡಿಸಲಾಯಿತು. ಜಾಥಕಾರ್ಯಕ್ರಮದಲ್ಲಿ, ತಾಲ್ಲೂಕು ಪಂಚಾಯಿತಿಎನ್‌ಆರ್‌ಎಲ್‌ಎಂ ಸಿಬ್ಬಂದಿ ಹರೀಶ್ ಬಾಬು, ಗೌರಮ್ಮ, ತಾಲ್ಲೂಕು ಐಇಸಿ ಸಂಯೋಜಕರಾದ ಭವ್ಯ, ಎನ್ ಆರ್‌ಎಲ್‌ಎಂ ಸಂಘದ ಮಹಿಳೆಯರು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು, ಗ್ರಾಮಸ್ಥರು ಭಾಗಿಯಾಗಿದ್ದರು.



## ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆ

**ಬೆಂಗಳೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿಯ ಅಂಗವಾಗಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕನ್ನಡ ಮತ್ತು ಆಂಗ್ಲಭಾಷೆಯಲ್ಲಿ ಪ್ರತ್ಯೇಕವಾಗಿ ಜಿಲ್ಲಾ ಮತ್ತು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ಸ್ಪರ್ಧೆಗೆ ಪ್ರಬಂಧದ ವಿಷಯ: ''ಬಾಪೂಜಿ ಮತ್ತು ವಿಜ್ಞಾನ ತಂತ್ರಜ್ಞಾನ'' ಬರೆದು ಅಕ್ಟೋಬರ್ 31 ರೊಳಗಾಗಿ ಅಂಚೆ ಅಥವಾ ಖುದ್ದಾಗಿ ಅಥವಾ ಇ-ಮೇಲ್ ಮೂಲಕ kstaessay.kannada@gmail.com & kstaessay.english@gmail.com ಗೆ ಕಳುಹಿಸಿಕೊಡುವುದು. ರಾಜ್ಯ ಮಟ್ಟದ ಸ್ಪರ್ಧೆಗೆ ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು 2024 ನೇ ನವೆಂಬರ್ 12 ರಂದು ನಡೆಯುವ ಪ್ರಬಂಧ ಸ್ಪರ್ಧೆ ವಿಷಯವಾದ '' ವಿಜ್ಞಾನ ತಂತ್ರಜ್ಞಾನ ಚಾಲಿತ ಪ್ರಪಂಚದಲ್ಲಿ ಗಾಂಧೀಜಿ ಚಿಂತನೆಗಳ ಪ್ರಸ್ತುತತೆ'' ಕುರಿತ ಪ್ರಬಂಧಗಳನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಪ್ರೊ.ಯು. ಆರ್.ರಾವ್ ವಿಜ್ಞಾನ ಭವನ, ತೋಟಗಾರಿಕಾ ವಿಜ್ಞಾನಗಳ ಕಾಲೇಜು ಮಹಾದ್ವಾರ ಪಕ್ಕ, ಜಿಕೆವಿಕೆ ಆವರಣ, ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆ, ದೊಡ್ಡ ಬೆಟ್ಟಹಳ್ಳಿ ಬಸ್ ನಿಲ್ದಾಣ, ವಿದ್ಯಾರಣ್ಯಪುರ ಪೋಸ್ಟ್, ಬೆಂಗಳೂರು- 560097 ಇಲ್ಲಿ ಸ್ಥಳದಲ್ಲೇ ಬರೆಯಬೇಕಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ದೂ. ಸಂ. 080-29721550 ಅಥವಾ ಅಕಾಡೆಮಿಯ ವೆಬ್ ಸೈಟ್ ತಿತಿತಿ.ಇಣಚಿಛಿಚಿಜಜಟಥಿ.ಟ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎ.ಎಂ.ರಮೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಾಮುವಿ ಪ್ರಾದೇಶಿಕ ಕೇಂದ್ರ, ಕಚೇರಿ ಕಾರ್ಯ ನಿರ್ವಹಣೆ

**ಬೆಂಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು 2024-25ರ ಜುಲೈ ಆವೃತ್ತಿಗೆ ಯುಜಿಸಿ ಅನುಮೋದಿತ ಶಿಕ್ಷಣಕ್ರಮಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಿದೆ. ಸ್ನಾತಕ/ ಸ್ನಾತಕೋತ್ತರ ಪದವಿಗಳು, ಡಿಪ್ಲೊಮಾ ಹಾಗೂ ಯುಜಿ/ಪಿಜಿ, ಸರ್ಟಿಫಿಕೇಟ್ ಶಿಕ್ಷಣ ಕ್ರಮಗಳಿಗೆ ಜುಲೈ 22 ರಿಂದ ಬೆಂಗಳೂರು ಪ್ರಾದೇಶಿಕ ಕೇಂದ್ರ-01 ಬಾಪೂಜಿನಗರ ಇಲ್ಲಿ ಆನ್ ಲೈನ್ ಮೂಲಕ ಪ್ರವೇಶಾತಿಯನ್ನು ಪ್ರಾರಂಭಿಸಲಾಗಿದ್ದು, ವಿಶ್ವವಿದ್ಯಾನಿಲಯದ ಅಧಿಕೃತ ಜಾಲತಾಣ www.ksoumysuru.ac.in ದಲ್ಲಿ ಲಭ್ಯವಿದೆ. ವಿದ್ಯಾರ್ಥಿಗಳು ಅರ್ಹ ಶಿಕ್ಷಣ ಕ್ರಮಗಳಿಗೆ ಆನ್ ಲೈನ್ ಅಡ್ಮಿಷನ್ ಪೋರ್ಟಲ್ ಮೂಲಕ ಅಥವಾ ಖುದ್ದು ಅಗತ್ಯ ದಾಖಲಾತಿಗಳೊಂದಿಗೆ ಪ್ರಾದೇಶಿಕ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶಾತಿ ಪೂರ್ಣಪ್ರಕ್ರಿಯೆಯನ್ನು ಮಾಡಿಕೊಳ್ಳಲು ಅಕ್ಟೋಬರ್ 31 ಅಂತಿಮ ದಿನಾಂಕವಾಗಿರುತ್ತದೆ. ಇನ್ನೂ ಪ್ರವೇಶಾತಿ ಪಡೆಯದ ವಿದ್ಯಾರ್ಥಿಗಳು ಹಾಗೂ ಪ್ರವೇಶಾತಿ ಪಡೆಯಲು ಆಸಕ್ತರಿರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಪ್ರಾದೇಶಿಕ ಕೇಂದ್ರ-01, ಬಾಪೂಜಿನಗರ ಕಚೇರಿಯು ಸಾರ್ವಜನಿಕ ರಜಾ ದಿನಗಳಾದ ಅಕ್ಟೋಬರ್ 26ರ 4ನೇ ಶನಿವಾರ, ಅಕ್ಟೋಬರ್ 27 ರ ಭಾನುವಾರ ಹಾಗೂ ಅಕ್ಟೋಬರ್ 31 ರ ಗುರುವಾರ ಪ್ರವೇಶಾತಿ ಪ್ರಕ್ರಿಯೆಗಳಿಗಾಗಿ ಕಾರ್ಯ ನಿರ್ವಹಿಸುತ್ತದೆ. ವಿದ್ಯಾರ್ಥಿಗಳು ಈ ದಿನಾಂಕಗಳಂದು ಅಗತ್ಯವಿರುವ ದಾಖಲೆಗಳೊಂದಿಗೆ ಕಚೇರಿಗೆ ಭೇಟಿ ನೀಡಿ ಪ್ರವೇಶಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು ಪ್ರಾದೇಶಿಕ ಕೇಂದ್ರ-01, ಮೊದಲನೇ ಮಹಡಿ, ಸ್ಯಾಟಲೈಟ್ ಬಸ್ ನಿಲ್ದಾಣ, ಮೈಸೂರು ರಸ್ತೆ, ಬಾಪೂಜಿನಗರ, ಬೆಂಗಳೂರು-26, ಕಛೇರಿ ದೂರವಾಣಿ ಸಂಖ್ಯೆ: 080-26603664 ಮೊಬೈಲ್ ಸಂಖ್ಯೆ 98449-65515 ನ್ನು ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕರಾದ ದಿಲೀಪ, ಡಿ. ತಿಳಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣಾ ಶಿಬಿರ



**ಬೆಂಗಳೂರು:** ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಮಾರಪ್ಪನ ಪಾಳ್ಯ ವಾರ್ಡಿನ ಕೃಷ್ಣಾನಂದ ನಗರ ಕರ್ನಾಟಕ ಪಬ್ಲಿಕ್ ಸ್ಕೂಲ್ ನಲ್ಲಿ ಶಾಸಕರಾದ ಕೆ.ಗೋಪಾಲಯ್ಯರವರ ನೇತೃತ್ವದಲ್ಲಿ, ಬೃಹತ್ ಪ್ರಮಾಣದಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಶ್ರೀ ಮಹಾಲಕ್ಷ್ಮೀ ಎಜುಕೇಷನಲ್ ಟ್ರಸ್ಟ್, ಮತ್ತು ಲಯನ್ಸ್ ಇಂಟರ್‌ನ್ಯಾಷನಲ್, ಮಾತೃ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ಬಸವೇಶ್ವರನಗರ ಅಪೋಲೋ ಆಸ್ಪತ್ರೆ, ವೈಷ್ಣವಿ ಲಯನ್ಸ್ ಕ್ಲಬ್, ಪುಣ್ಯ ಆಸ್ಪತ್ರೆ, ಮೋದಿ ಕಣ್ಣಿನ ಆಸ್ಪತ್ರೆ, ಕರ್ನಾಟಕ ಕ್ಯಾನ್ಸರ್ ಸೊಸೈಟಿ ಇವರುಗಳ ಸಹಯೋಗದೊಂದಿಗೆ ಶಿಬಿರವನ್ನು ನಡೆಸಲಾಯಿತು. ಇಲ್ಲಿ ವಿಶೇಷವಾಗಿ ಬಿ.ಪಿ. ಡಯಾಬಿಟೀಸ್, ಲಿವರ್ ಫಂಕ್ಷನ್, ಥೈರಾಯ್ಡ್, ಮೂಳೆ ದಂತ, ಸ್ತ್ರೀರೋಗ,ಇನ್ನಿತರ ಖಾಯಿಲೆಗಳ ಪರೀಕ್ಷೆ ಮಾಡಿ ಉಚಿತ ಔಷಧಿ ವಿತರಿಸಲಾಯಿತು. ವಿಶೇಷವಾಗಿ ಸ್ತನ ಕ್ಯಾನ್ಸರ್ ಕಾಯಿಲೆಯ ತಪಾಸಣೆ ನಡೆಸಿ ಸಲಹೆ ಮತ್ತು ಔಷಧಿ ನೀಡಲಾಯಿತು. ಕಣ್ಣಿನ ದೋಷ ಇರುವವರಿಗೆ ಆಧುನಿಕ ತಂತ್ರಜ್ಞಾನದಲ್ಲಿ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ವ್ಯವಸ್ಥೆಯನ್ನು ಕಲ್ಪಿಸಲಾಯಿತು. ಸುಮಾರು2000 ಜನ ಈ ಶಿಬಿರದ ಪ್ರಯೋಜನವನ್ನು ಪಡೆದರು ಎಲ್ಲರಿಗೂ ಉಪಹಾರದ ವ್ಯವಸ್ಥೆ ಕಲ್ಪಿಸಲಾಗಿತ್ತು.

ಮಾತೃ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಮಹೇಂದ್ರ ರವರು ಶಾಸಕರ ಪುತ್ರರಾದ ಡಾ. ಜಿ ಮಂಜುನಾಥ್ ಗೌಡ, ಡಾ. ಜಿ.ಸಂಜಯ್ ಗೌಡರವರು, ಬಿಬಿಎಂಪಿ ವೈದ್ಯಕೀಯ ಸಿಬ್ಬಂದಿ ಪಾಲ್ಗೊಂಡಿದ್ದರು. ಮಾಜಿ ಉಪ ಮಹಾಪೌರರಾದ ಹೇಮಲತಾ ಗೋಪಾಲಯ್ಯ, ಶ್ರೀ ಮಹಾಲಕ್ಷ್ಮಿ ಎಜುಕೇಶನಲ್ ಟ್ರಸ್ಟ್ ಅಧ್ಯಕ್ಷರಾದ ಜಯರಾಮ್, ಖಜಾಂಚಿ ವೆಂಕಟೇಶ್ ರವರು, ಕ್ಷೇತ್ರದ ಸ್ಥಳೀಯ ಮುಖಂಡರುಗಳಾದ ಮಾಜಿ ಬಿಬಿಎಂಪಿ ಸದಸ್ಯ ಮಹದೇವ್ , ಚಿಕ್ಕೇಗೌಡ,ವೆಂಕಟೇಶ್ ಮೂರ್ತಿ, ಶಿವಾನಂದಮೂರ್ತಿ, ಡಾಕ್ಟರ್ ನಾಗೇಂದ್ರ, ಪುಟ್ಟಣ್ಣ, ರೈಲ್ವೆ ನಾರಾಯಣ್, ರಾಘವೇಂದ್ರ ನಾಗರಾಜ್ ,ಮತ್ತು ಕಾರ್ಯಕರ್ತರು ಶಿಬಿರದಲ್ಲಿ ಪಾಲ್ಗೊಳ್ಳುವ ಜತೆಗೆ ಸ್ವಯಂ ಸೇವೆ ಸಲ್ಲಿಸಿದರು.




**ಇಂಡಿಯನ್ ನ್ಯಾಷನಲ್ ಬಿಲ್ಡಿಂಗ್ ಕನ್ಸ್ಟ್ರಕ್ಷನ್ ಪಾರೆಸ್ಟ್ ವುಡ್ ವರ್ಕರ್ಸ್ ಪೆಡೇರೆಷನ್ ಐಎನ್ ಬಿ ಸಿ ಡಬ್ಲೂ ಎಫ್ ವತಿಯಿಂದ ಕರ್ನಾಟಕ ರಾಜ್ಯ ಮಹಿಳಾ ಕಾರ್ಯಕಾರಣಿ ಸಭೆ ಕೆಪಿಸಿಸಿ ಕಚೇರಿಯಲ್ಲಿ, ಆಯೋಜಿಸಿದ್ದ ಕಾರ್ಯಕ್ರಮವನ್ನು INBCWF ರಾಜ್ಯಧ್ಯಕ್ಷರಾದ ಜಿ ಆರ್ ದಿನೇಶ್. ಕೆಪಿಸಿಸಿ ರಾಜ್ಯ ಮಹಿಳಾ ಅಧ್ಯಕ್ಷರಾದ ಸೌಮ್ಯ ರೆಡ್ಡಿ. ಕೆಪಿಸಿಸಿ ಕಾರ್ಯಧ್ಯಕ್ಷರಾದ ಜಿ ಸಿ ಚಂದ್ರಶೇಖರ್. ಮಂಜುನಾಥ್ ಬಂಡಾರಿ. ಉದ್ಘಾಟಿಸಿದರು ಇದೇ ಸಂದರ್ಭದಲ್ಲಿ ಅನೇಕ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.**

## ಚುನಾವಣಾಆಯೋಗದಿಂದ ಸಾಮಾನ್ಯ, ವೆಚ್ಚ ವೀಕ್ಷಕರ ನೇಮಕ

**ರಾಮನಗರ:** 185-ಚನ್ನಪಟ್ಟಣ ವಿಧಾನಸಭಾಕ್ಷೇತ್ರದಉಪ ಚುನಾವಣೆ ನಡೆಯುತ್ತಿರುವ ಹಿನ್ನಲೆಯಲ್ಲಿಚನ್ನಪಟ್ಟಣ ವಿಧಾನಸಭಾಕ್ಷೇತ್ರಕ್ಕೆಕೇಂದ್ರಚುನಾವಣಾಆಯೋಗವು ಸಾಮಾನ್ಯ ವೀಕ್ಷಕರು ಹಾಗೂ ವೆಚ್ಚ ವೀಕ್ಷಕರನ್ನು ನಿಯೋಜಿಸಿದೆ. ಸಾಮಾನ್ಯವೀಕ್ಷಕರನ್ನಾಗಿಐಎಎಸ್ ಅಧಿಕಾರಿರೀತುಹಾಗೂ ವೆಚ್ಚ ವೀಕ್ಷಕರನ್ನಾಗಿಐಆರ್‌ಎಸ್‌ಅಧಿಕಾರಿಪ್ರಶಾಂತ್‌ಗಡೇಕರ್ ಅವರುಚನ್ನಪಟ್ಟಣಕ್ಕೆ ಆಗಮಿಸಿದ್ದಾರೆ. ಸಾಮಾನ್ಯ ವೀಕ್ಷಕರಾದರೀತುಅವರುಚನ್ನಪಟ್ಟಣಟೌನ್‌ನ ಬಿ.ಎಂ.ರಸ್ತೆಯಲ್ಲಿರುವ ಪರಿವೀಕ್ಷಣಾ ಮಂದಿರದಲ್ಲಿ ಬೆಳಿಗ್ಗೆ11ರಿಂದ ಮಧ್ಯಾಹ್ನ1ಗಂಟೆಯವರೆಗೆ ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ ಹಾಗೂ ಉಪ ಚುನಾವಣೆಕುರಿತಾದ ದೂರುಗಳಿದ್ದಲ್ಲೀ ಅವರಮೊಬೈಲ್‌ಸಂಖ್ಯೆ: 8050465792ಅನ್ನು ಸಂಪರ್ಕಿಸಬಹುದು.

# ವಿವಿಧ ರೂಪಗಳಲ್ಲಿ ಉಳಿತಾಯ ಮಾಡಿ, ಹೆಚ್ಚಿನ ಲಾಭ ಪಡೆಯಿರಿ

**ಬೆಂಗಳೂರು:** ದುಡ್ಡಿನ ಕಂತೆಯನ್ನು ಕೂಡಿಡುವುದು ಉಳಿತಾಯವಲ್ಲ, ವಿವಿದೆಡೆ ಹಣವನ್ನು ಹೂಡಿಕೆ ಮಾಡಿ ಹೆಚ್ಚು ಲಾಭ ಗಳಿಸುವ ಜಾಣ್ಮೆ ರೂಢಿಸಿಕೊಳ್ಳಬೇಕು ಎಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಆಯುಕ್ತರಾದ ಗುಂಜನ್ ಕೃಷ್ಣ ಸಲಹೆ ನೀಡಿದ್ದಾರೆ.




ಬೆಂಗಳೂರು ಪ್ರೆಸ್ ಕ್ಲಬ್‌ನಲ್ಲಿ ಶನಿವಾರ ಆಯೋಜಿಸಿದ್ದ ಹಣಕಾಸಿನ ಶಿಸ್ತು ಕುರಿತ ಕಾರ್ಯಾಗಾರ ಉದ್ಘಾಟನೆ ನಂತರ ಮಾತನಾಡಿದ ಅವರು, ಎಲ್ಲರೂ ಅದರಲ್ಲೂ ವಿಶೇಷವಾಗಿ ನಮ್ಮ ಹೆಣ್ಣು ಮಕ್ಕಳು ಹಣದ ಉಳಿತಾಯಕ್ಕೆ ಒತ್ತು ನೀಡಬೇಕು. ದುಡ್ಡಿನ ಕಂತೆಯನ್ನು ಕೂಡಿಡುವುದಕ್ಕಿಂತ ಹಲವು ಕ್ಷೇತ್ರಗಳಲ್ಲಿ ಹಣವನ್ನು ಹೂಡಿಕೆ ಮಾಡಿದರೆ ಹೆಚ್ಚು ಲಾಭ ಗಳಿಸಬಹುದು,ಎಂದರು. ಉಳಿತಾಯದ ಹಣ ನಮ್ಮ ವೃದ್ಧಾಪ್ಯದಲ್ಲಿ ಅನುಕೂಲಕ್ಕೆ ಬರುವಂತೆ ಹೂಡಿಕೆ ಮಾಡಬೇಕು. ಪಿಪಿಎಫ್, ಭೂಮಿ, ಚಿನ್ನ, ಷೇರು, ಮ್ಯೂಚಯಲ್ ಫಂಡ್, ವಿಮೆ ಮುಂತಾದ ಹಲವು ರೂಪದಲ್ಲಿ ನಮ್ಮ ಹಣದ ಹೂಡಿಕೆ ಮಾಡುವುದು ಬಹಳ ಮುಖ್ಯ. ದುಡಿದ ಹಣವನ್ನು ಒಂದೇ ಕಡೆ ಹಾಕಿ ಆರ್ಥಿಕ ನಷ್ಟ ಎದುರಿಸುವಂತಾಗಬಾರದು. ಜಾಣ್ಮೆಯಿಂದ ಹೂಡಿಕೆ ಮಾಡಿದರೆ, ನಿವೃತ್ತಿಯ ನಂತರ ನಾನಾ ಮೂಲಗಳಿಂದ ಆದಾಯ ಪಡೆಯಬಹುದು,ಎಂದರು. ಸುದ್ದಿಗಾಗಿ ಹಗಲಿರುಳು ದುಡಿಯುವ ಪತ್ರಕರ್ತರು ಅದರಲ್ಲೂ ಈ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡಿರುವ ಹೆಣ್ಣು ಮಕ್ಕಳ ಬಗ್ಗೆ ನನಗೆ ವಿಶೇಷ ಗೌರವವಿದೆ. ಸರ್ಕಾರಿ ಅಧಿಕಾರಿಗಳಂತೆ ಪತ್ರಕರ್ತರಿಗೆ ಕೆಲಸದ ಭದ್ರತೆ, ಪಿಂಚಣಿಯಂಥ ಸವಲತ್ತುಗಳು ಇರುವುದಿಲ್ಲ, ಹಾಗಾಗಿ, ಆರ್ಥಿಕ ಶಿಸ್ತು ರೂಢಿಸಿಕೊಂಡಾಗ ಮಾತ್ರ ಆರ್ಥಿಕ ಭದ್ರತೆ ಇರಲು ಸಾಧ್ಯ. ಈ ನಿಟ್ಟಿನಲ್ಲಿ ಎಲ್ಲರೂ ಚಿಂತಿಸಲೇಬೇಕು. ದುಡಿಯುವ ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಗಮನಕೊಡಲೇ ಬೇಕು. ಅದಕ್ಕಾಗಿಯೂ ಒಂದಿಷ್ಟು ಹಣ ವಿನಿಯೋಗಿಸಬೇಕು. ದುಡಿದ ಅಷ್ಟೂ ಹಣವನ್ನು ಕೇವಲ ಉಳಿತಾಯ ಮಾಡುವ ಬದಲು ನಮ್ಮ ಖುಷಿ ಹಾಗೂ ಆರೋಗ್ಯ ವೃದ್ಧಿಗೆ ಬಳಸಿಕೊಳ್ಳಬೇಕು. ಆಗ ನಮ್ಮ ದುಡಿಮೆ ಸಾರ್ಥಕವಾಗುತ್ತದೆ, ಎಂದು ಹೇಳಿದರು. ಕಲಿಕೆಯ ಹಸಿವು ಇರಬೇಕು, ಹೊಸದನ್ನು ಮೈಗೂಡಿಸಿಕೊಳ್ಳುವ ಮನಸ್ಸಿರಬೇಕು ಆಗಷ್ಟೇ ವೃತ್ತಿ ಜೀವನದಲ್ಲಿ ಅಪ್ಡೇಟ್ ಆಗಲು ಸಾಧ್ಯ. ಏನನ್ನಾದರೂ ಸಾಧಿಸಬೇಕಾದರೆ ಮೊದಲು ಗುರಿ ಇಟ್ಟುಕೊಳ್ಳಬೇಕು, ಅದನ್ನು ತಲುಪಲು ಸತತ ಪ್ರಯತ್ನ ಇರಬೇಕು. ಅದಕ್ಕೆ ಕಂಫರ್ಟ್ ಝೋನ್ ನಿಂದ ಆಚೆ ಬರಬೇಕು. ಆಗಲೇ ನಾವು ಏನನ್ನಾದರೂ ಸಾಧಿಸಲು ಸಾಧ್ಯ. ಇದೆಲ್ಲದರ ಜತೆಗೆ ಸಹಾಯದ ಅವಶ್ಯಕತೆ ಇದ್ದಾಗ ಮಹಿಳೆಯರು ಹಿಂದೇಟು ಹಾಕದೇ ಕೇಳಬೇಕು. ಸಲಹೆ, ಸಹಕಾರ ಕೇಳಿ ನಮ್ಮ ಗುರಿ ಸಾಧಿಸಬೇಕು. ಅದಕ್ಕಾಗಿ ಮಹಿಳೆಯರು ತಮ್ಮ ನೆಟ್‌ವರ್ಕ್ ವಿಸ್ತರಿಸಿಕೊಳ್ಳಬೇಕು, ಎಂದರು.

ಕಾರ್ಯಕ್ರಮದ ಕೇಂದ್ರ ಬಿಂದುವಾಗಿದ್ದ ಶರತ್ ಎಂ. ಎಸ್. ಹಾಗೂ ಅಭಿಷೇಕ ರಾಮಪ್ಪ ಕಾರ್ಯಾಗಾರವನ್ನು ಬಹಳ ಅಚ್ಚುಕಟ್ಟಾಗಿ ನಡೆಸಿಕೊಟ್ಟರು. ಆರ್ಥಿಕ ಸಾಕ್ಷರತೆ ಮಹತ್ವವನ್ನು ಎಳೆ ಎಳೆಯಾಗಿ ಹಂಚಿಕೊಂಡಿರು. ನಾವು ದುಡಿದ ದುಡ್ಡನ್ನು ದುಡಿಸುವುದು ಹೇಗೆ ಅಥವಾ ಎರಡನೇ ಆದಾಯ ಹೇಗಿರಬೇಕು? ಮೊದಲನೇ ಆದಾಯದಿಂದ ಉಳಿತಾಯ ಹೇಗೆ ಮಾಡಬೇಕು? ಉಳಿತಾಯದಿಂದ ಹೂಡಿಕೆ ಎಡೆಗೆ ಹೋಗೋದು ಹೇಗೆ? ಹೂಡಿಕೆ ವೇಳೆ ತಾಳ್ಮೆ ಎಷ್ಟಿರಬೇಕು ಎನ್ನುವುದನ್ನು ಎಂ ಎಸ್ ಶರತ್ ಸಂಕ್ಷಿಪ್ತವಾಗಿ ವಿವರಿಸಿದರು. ಇನ್ನು ವೃದ್ಧಾಪ್ಯ ಜೀವನಕ್ಕೆ ಬೇಕಾದ ದುಡ್ಡನ್ನು ಹೇಗೆ ಸಂಗ್ರಹಿಸಿ ಇಟ್ಟುಕೊಳ್ಳಬೇಕು? ಆ ಸಮಯದಲ್ಲಿ ದುಡ್ಡಿನ ತೊಂದರೆ ಇಲ್ಲದೆ ಜೀವನ ಸಾಗಿಸುವುದು ಹೇಗೆ ? ಅದಕ್ಕಾಗಿ ಈಗನಿಂದಲೇ ಉಳಿತಾಯ ಮಾಡುವುದು ಹೇಗೆ ಎಂಬ ಬಗ್ಗೆ ಅಭಿಷೇಕ ರಾಮಪ್ಪ ವಿವರಿಸಿದರು.

## ಭೇತಾಳ ಪೀಠದಲ್ಲಿ ಅಘೋರಿ ಚಂದ್ರನಾಥ ಸ್ವಾಮಿಯಿಂದ ಮದ್ಯವರ್ಜನ ಕಾರ್ಯಕ್ರಮ

**ಕೋಲಾರ:** ಅಘೋರಿಗಳೆಂದರೆ ಭೀಬತ್ಸ, ಶವ ಬಂಜಕರು, ಮದ್ಯ ಸೇವನೆ ಸಾಮಾನ್ಯ ಎಂಬುದು ಸಾಂಪ್ರದಾಯಿಕ ಹೇಳಿಕೆಯಾಗಿದ್ದು ಇದಕ್ಕೆ ಅಪವಾದ ಎಂಬಂತೆ ಕೆಜಿಎಫ್ ಸಮೀಪದ ಐವಾರಹಳ್ಳಿ ರಸ್ತೆಯಲ್ಲಿನ ಭದ್ರಕಾಳಿ ಭೇತಾಳ ಮಹಾಶಕ್ತಿ ಪೀಠಂನಲ್ಲಿ ಶುಕ್ರವಾರ ಕಾಟೇರಮ್ಮನ ಪೂಜೆ ಅದ್ದೂರಿಯಾಗಿ ನಡೆಸಿ ಮದ್ಯವರ್ಜನ ಶಿಬಿರ ಹಾಗೂ ಬಿಪಿ,ಶುಗರ್ ,ಗ್ಯಾಸ್ಟಿಕ್ ಚಿಕಿತ್ಸೆ ನೀಡಲಾಯಿತು. ಹೌದು, ದೇವಾಲಯವೀಗ ಆರೋಗ್ಯ ಕೇಂದ್ರವಾಗಿ ಮಾರ್ಪಟ್ಟಿದ್ದು ಭಕ್ತರ ಜತೆಗೆ ರೋಗಿಗಳೂ ಸಹಾ ಕಾಟೇರಮ್ಮನ ಬಳಿಗೆ ಬರುತ್ತಿದ್ದು ಅಘೋರಿ ಚಂದ್ರನಾಥ ಸ್ವಾಮಿಗಳು ಪೂಜೆ ಜತೆಗೆ ಗಿಡಮೂಲಿಕೆಗಳ ಮೂಲಕ ಭಕ್ತರ ನಾನಾ ರೋಗಗಳಿಗೆ ಟ್ರೀಟ್ಮೆಂಟ್ ಕೊಡುತ್ತಿದ್ದಾರೆ. ಮದ್ಯವರ್ಜನಕ್ಕಾಗಿ ಮಹಿಳೆಯರು ತಮ್ಮ ಕುಟುಂಬದಲ್ಲಿನ ಪುರುಷರನ್ನು ಕರೆತಂದು ಮದ್ಯ ಕುಡಿಯುವುದನ್ನು ಬಿಡಿಸಲು ಮುಂದಾಗಿದ್ದಾರೆ. ಮದ್ಯ ವರ್ಜನ ಶಿಬಿರ ಧರ್ಮ,ಜಾತ್ಯತೀತವಾಗಿ ನಡೆಯುತ್ತಿದ್ದು ಹಿಂದೂ ಭಕ್ತರ ಜತೆಗೆ ಕೆಲ ಮುಸ್ಲಿಂ ರೋಗಿಗಳೂ ಸಹಾ ಕಾಟೇರಮ್ಮನ ದೇಗುಲಕ್ಕೆ ಬಂದು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುತ್ತಿರುವುದು ಭೇತಾಳ ಮಹಾಶಕ್ತಿ ಪೀಠ ಕೋಮು ಸೌಹಾರ್ಧ ಕೇಂದ್ರ ಎಂಬುದನ್ನು ಸಾಬೀತುಪಡಿಸಿದೆ. 108 ಅಡಿಗಳ ಬೇತಾಳ ವಿಗ್ರಹ, ಭದ್ರಕಾಳಿ, ಕಾಲಭೈರವ, ಪ್ರತಿಂಗೀರ, ಕಾಟೇರಮ್ಮ, ಪಾರ್ವತಿದೇವಿ, ನಾಗಮ್ಮ, ವಿಷ್ಣುಮಾಯ, ಕರಿಕುಟ್ಟಿ, ಚಾಟ ದೇವರುಗಳಿಗೆ ಸಂಪ್ರದಾಯದಂತೆ ಶುಕ್ರವಾರ ಬೆಳಿಗ್ಗೆಯಿಂದ ಮಧ್ಯಾಹ್ನದ ವರೆವಿಗೂ ವಿಶೇಷ ಪೂಜೆಗಳು ನಡೆದು ಮಹಾಮಂಗಳಾರತಿ ಮತ್ತು ಭಕ್ತರಿಗೆ ಪ್ರಸಾದವಿನಿಯೋಗ ನಡೆಯಿತು.



ಪ್ರತೀ ಶುಕ್ರವಾರದಂದು ಜಿಲ್ಲೆಯ ಮತ್ತು ಪಕ್ಕದ ರಾಜ್ಯಗಳಾದ ಆಂಧ್ರ,ತೆಲಂಗಾಣ ,ತಮಿಳ್ನಾಡು ಮತ್ತು ಕೇರಳದಿಂದ ಭಕ್ತಾದಿಗಳೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗುತ್ತಾರೆ ಎಂದರು. ಚಂದ್ರನಾಥ ಸ್ವಾಮಿಗಳು ಭಕ್ತರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಸೂಚಿಸಿದರು. ಪ್ರಶ್ನೆ ಕೇಳಲು ನೂರಾರು ಭಕ್ತರು ಸಾಲುಗಟ್ಟಿ ನಿಂತಿದ್ದು ಸಂಜೆವರೆಗೆ ಚಂದ್ರನಾಥ ಸ್ವಾಮಿಗಳು ಭಕ್ತರೊಟ್ಟಿಗೆ ಸಂವಾದ ನಡೆಸಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಿದರು. ಮಹಿಳಾ ಭಕ್ತರ ದಂಡು ಮೇಳೈಸಿತ್ತು. ಈ ಸಂದರ್ಭದಲ್ಲಿ ಪ್ರತಿಕ್ರಿಯಿಸಿದ ಕೆಜಿಎಫ್ ಯೋಗೇಶ್ವರಿ ನನ್ನ ಪತಿ ಮದ್ಯ ದಾಸನಾಗಿದ್ದು ಐದಾರು ಶುಕ್ರವಾರದಿಂದ ಪೀಠಕ್ಕೆ ಬಂದು ಮದ್ಯವರ್ಜನ ಚಿಕಿತ್ಸೆ ಕೊಡಿಸುತ್ತಿದ್ದು ಇದೀಗ ಗಂಡ ಕುಡಿಯುವುದನ್ನು ಬಿಟ್ಟ ಕಾರಣ ಮನೆಯಲ್ಲಿ ಶಾಂತಿ ಮನೆ ಮಾಡಿದೆ ಎಂದು ಸಂತಸ ವ್ಯಕ್ತಪಡಿಸಿದರು. ಗೊಲ್ಲಗೊರವನಹಳ್ಳಿ ಜ್ಯೋತಿ ಮಾತನಾಡಿ, ಶುಕ್ರವಾರ ದೇವಾಲಯಕ್ಕೆ ಬಂದು ಪೂಜೆ ಮಾಡಿಸುತ್ತಿರುವುದರಿಂದಾಗಿ ಕುಟುಂಬದಲ್ಲಿ ಆರೋಗ್ಯ,ಶಾಂತಿ, ಸೌಹಾರ್ಧತೆ ಮೇಳೈಸಿದೆ ಎಂದು ಅನುಭವ ಬಿಚ್ಚಿಟ್ಟರು. ಬೆಮೆಲ್ ಉದ್ಯೋಗಿ ರಾಜಶೇಖರ್ ಮಾತನಾಡಿ, ಕಾಟೇರಮ್ಮನ ದೇವಸ್ಥಾನದ ಭೇಟಿಯಿಂದಾಗಿ ಕಷ್ಟಗಳ ನಿವಾರಣೆ ಆಗಿದ್ದು ಜಾಗದ ಮಹಿಮೆ ಹೇಳತೀರದು ಎಂದು ಪ್ರತಿಕ್ರಿಯಿಸಿದರು.

# ಸಂಘದ ಅಭಿವೃದ್ಧಿಗೆ ದುಡಿಯಬೇಕು

**ಮಂಡ್ಯ:** ನಗರದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ತಾಲೂಕು ಅಧ್ಯಕ್ಷರನ್ನಾಗಿ ಎಂ ಎಸ್ ಅಣ್ಣಯ್ಯ ಮತ್ತು ಪ್ರಧಾನ ಕಾರ್ಯದರ್ಶಿಯಾಗಿ ಆನಂದ್ ಕುಮಾರ್ ಅವರನ್ನು ಸಂಘದ ವತಿಯಿಂದ ಆಯ್ಕೆ ಮಾಡಲಾಯಿತು,

ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಕೆಂಪೇಗೌಡ ಮಾತನಾಡಿ ನೂತನವಾಗಿ ತಾಲೂಕು ಅಧ್ಯಕ್ಷ ಉಪಾಧ್ಯಕ್ಷ ಸೇರಿದಂತೆ ಪದಾಧಿಕಾರಿಗಳನ್ನು ನೇಮಕ ಮಾಡಿದ್ದು ರೈತ ಸಂಘದ ಚಟುವಟಿಕೆಯಲ್ಲಿ ಭಾಗವಹಿಸಿ ಸಂಘದ ಅಭಿವೃದ್ಧಿಗೆ ದುಡಿಯಬೇಕು ಕಾಯ ವಾಚ ಮನಸ ರೈತರ ಸಂಘಕ್ಕೆ ದುಡಿದು ಯಾರ ಮೇಲೂ ದ್ವೇಷ ಕಟ್ಟಿಕೊಳ್ಳದೆ ನ್ಯಾಯಯುತವಾಗಿ ಕೆಲಸಗಳನ್ನು ಮಾಡಿ ನಿಮಗೆ ನಮ್ಮ ರೈತ ಸಂಘದ ಬೆಂಬಲ ವಾಗಿ ನಿಲ್ಲುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬೂದನೂರು ಪುಟ್ಟಸ್ವಾಮಿ , ಭೂತನ ಹೊಸೂರು ಸಂತೋಷ್ ,ಮೊತ್ತಳ್ಳಿ ಮಾದೇಗೌಡ, ಮಾರಗೌಡನಹಳ್ಳಿ ನಿಂಗೇಗೌಡ, ಚಿಕ್ಕಬಳ್ಳಿ ನಿಂಗೇಗೌಡ, ಹಂಪಾಪುರ ನಾಗರಾಜ್ ಭಾಗವಹಿಸಿದ್ದರು.



# ಪಡಿತರ ಸಾಮಾಗ್ರಿಗಳ ವಿತರಣೆ

**ಬೆಂಗಳೂರು:** ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ವಿವಿಧ ವಾರ್ಡುಗಳಲ್ಲಿನ ಸುಮಾರು 126 ಮನೆಗಳಿಗೆನೀರುನುಗ್ಗಿಮನೆಗಳಲ್ಲಿನಪಡಿತರ ಸಾಮಾಗ್ರಿಗಳು ಹಾನಿಗೊಳಗಾಗಿರುವ ಹಿನ್ನೆಲೆಯಲ್ಲಿ, ವಿವಿಧ ಸಂಘಟನೆಗಳ ಸಹಯೋಗದೊಂದಿಗೆ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು, ಅಲ್ಲಿನ ನಿವಾಸಿಗಳಿಗೆ 5 ಕೆ.ಜಿ. ಅಕ್ಕಿ, 5 ಕೆ.ಜಿ. ಗೋಧಿ ಹಿಟ್ಟು, 1 ಕೆ.ಜಿ. ಅಡುಗೆ ಎಣ್ಣೆ, 1 ಕೆ.ಜಿ. ತೊಗರಿ ಬೇಳೆ, 2 ಕೆ.ಜಿ. ರವೆ, 1 ಕೆ.ಜಿ. ಸಕ್ಕರೆ, 1 ಕೆ.ಜಿ. ಉಪ್ಪು ಮತ್ತು ದನಿಯ ಪುಡಿ, ಒಣಮೆಣಸಿನಕಾಯಿ ಪುಡಿ, ಹರಿಷಿಣ ಮೊದಲಾದ ಸಾಂಬಾರು ಪದಾರ್ಥಗಳನ್ನು ಹೊಂದಿರುವ ಆಹಾರ ಕಿಟ್ ಗಳನ್ನು ಹಾಗೂ ಬ್ಲಾಂಕೆಟ್ ಗಳನ್ನು ವಿತರಣೆ ಮಾಡಿದರು. ಬಳಿಕ ಮಾತನಾಡಿದ ಅವರು, ಬಿಬಿಎಂಪಿ ವತಿಯಿಂದ ಭರವಸೆ ನೀಡಿರುವಂತೆ, ಸಂತ್ರಸ್ತರುಗಳ ಕುಟುಂಬಗಳಿಗೆ ತಲಾ ಹತ್ತು ಸಾವಿರ ರೂ ಪರಿಹಾರವನ್ನು ಶೀಘ್ರದಲ್ಲೇ ಕೊಡಿಸಲಾಗುವುದು ಎಂದು ಭರವಸೆ ನೀಡಿದರು.



ಇದೇ ಸಂದರ್ಭದಲ್ಲಿ ವಿವಿಧ ಸಂಘ ಸಂಸ್ಥೆಗಳ ಪ್ರಮುಖರಾದ ಕುಮಾರ್, ಶ್ರಾವಣಿ ಹಾಗೂ ಸ್ಥಳೀಯ ಮುಖಂಡರಾದ ಜಯರಾಮ್, ರೈಲ್ವೆ ನಾರಾಯಣ, ಶಿವಾನಂದ ಮೂರ್ತಿ, ಪುಟ್ಟಸ್ವಾಮಿ, ಸಿಮೆಂಟ್ ಶ್ರೀನಿವಾಸ್ ಮತ್ತು ಬಿಬಿಎಂಪಿ ಅಧಿಕಾರಿಗಳು ಹಾಜರಿದ್ದರು.

# ತಾಂತ್ರಿಕ ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳು ಅಗತ್ಯ

**ತುಮಕೂರು:** ವಿದ್ಯಾರ್ಥಿಗಳು ವಿದ್ಯಾಭ್ಯಾಸದಲ್ಲಿ ಯಾವ ರೀತಿ ಪ್ರಾಮುಖ್ಯತೆ ನೀಡಬೇಕಾಗುತ್ತದೆ, ಅಲ್ಲದೇ ಮಾನವೀಯ ಮೌಲ್ಯಗಳು ಯಾವ ರೀತಿಯಲ್ಲಿ ಬೆಳೆಸಿಕೊಳ್ಳಬೇಕು, ಇಂದಿನ ದಿನಗಳಲ್ಲಿ ತಂದೆ-ತಾಯಿಗಳಲ್ಲಿ ಕನಸ್ಸನ್ನು ಕಾಣುವುದು ಅದನ್ನು ವಿದ್ಯಾರ್ಥಿಗಳು ನಿಜ ಮಾಡಬೇಕು ಹಾಗೂ ವಿದ್ಯಾರ್ಥಿಗಳ ಜೀವನದಲ್ಲಿ ಶಿಕ್ಷಣ ಜೊತೆ ಜೊತೆಯಲ್ಲಿಯೇ ಮಾನವೀಯ ಮೌಲ್ಯಗಳು ಅತ್ಯಗತ್ಯವಾಗಿದೆ. ತಾಂತ್ರಿಕ ಪಠ್ಯಕ್ರಮದ ಮಹತ್ವ ಬಗ್ಗೆ ಸ್ವವಿಸ್ತಾರವಾಗಿ ಎಂದು ಬೆಂಗಳೂರಿನ ತಪಾಸಣಾ ಇಲಾಖೆಯ ತಾಂತ್ರಿಕ ಶಿಕ್ಷಣ ಮಂಡಳಿಯ ಜಂಟಿ ನಿರ್ದೇಶಕರಾದ ಶೇಖರ್‌ರವರು ನುಡಿದರು.



ನಗರದ ಶಿರಾರಸ್ತೆಯ ಶ್ರೀದೇವಿ ಪಾಲಿಟೆಕ್ನಿಕ್ ಕಾಲೇಜು ವತಿಯಿಂದ ಶ್ರೀ ಸಂಭ್ರಮ ವಾರ್ಷಿಕೋತ್ಸವ-2024 ಕಾರ್ಯಕ್ರಮವನ್ನು ಅ.25 ರಂದು ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಆಡಿಟೋರಿಯಂ ಆವರಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಅವರು ವೃತ್ತಿ ಜೀವನದಲ್ಲಿ ಪ್ರತಿಯೊಬ್ಬರು ವಿದ್ಯಾರ್ಥಿಯೂ ಮಾನವೀಯ ಮೌಲ್ಯಗಳು ಮತ್ತು ನೈತಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಮತ್ತು ಅಲ್ಟಿಮೇಟ್ ಖೋ-ಖೋ ಕ್ರೀಡಾಪಟು ಕೆ.ಹೆಚ್.ಪಜ್ವಲ್‌ರವರು ಮಾತನಾಡುತ್ತಾ ದೈಹಿಕವಾಗಿ ಸಧೃಡತೆ ಹೊಂದಲು ಕ್ರೀಡೆ ಬಹಳ ಮುಖ್ಯವಾಗಿದೆ. ಉತ್ತಮ ಫಲಿತಾಂಶ ಪಡೆದವರು ಉದ್ಯೋಗವನ್ನು ಸುಲಭವಾಗಿ ಪಡೆಯಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಯ ಜೊತೆಗೆ ಕ್ರೀಡೆಯೂ ಅವಶ್ಯಕವಾಗಿದೆ, ಕ್ರೀಡೆಯಿಂದ ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢತೆಯನ್ನು ಹೊಂದಬಹುದು ವಿದ್ಯಾರ್ಥಿಗಳ ಉತ್ತಮ ವಿದ್ಯಾಭ್ಯಾಸ ಮಾಡಿದರೆ ಉತ್ತಮ ಜೀವನದ ಶಿಖರಕ್ಕೆ ಏರಬಹುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಂ.ಆರ್.ಹುಲಿನಾಯ್ಕರ್‌ರವರು ಮಾತನಾಡುತ್ತಾ ಪಾಲಿಟೆಕ್ನಿಕ್ ಕೋರ್ಸ್ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶದ ಬಗ್ಗೆ ವಿವರಿಸುತ್ತಾ, ವಿದ್ಯಾರ್ಥಿಗಳಿಗೆ ಸಮಯ ಪ್ರಜ್ಞೆ, ಕರ್ತವ್ಯ ಪ್ರಜ್ಞೆಯನ್ನು ಬಗ್ಗೆ ಸ್ವವಿವರವಾಗಿ ವಿವರಿಸಿದರು. ವಿದ್ಯಾರ್ಥಿ ತನ್ನ ವಿದ್ಯಾಭ್ಯಾಸದ ಸಂದರ್ಭದಲ್ಲಿಯೇ ತನ್ನ ಮುಂದಿನ ಭವಿಷ್ಯದ ಬಗ್ಗೆ ಕನಸನ್ನು ಕಂಡಾಗ ಅಂತಹ ವಿದ್ಯಾರ್ಥಿ ಯಶಸ್ಸನ್ನುಗಳಿಸುತ್ತಾನೆ. ಉತ್ತಮ ಫಲಿತಾಂಶ ಪಡೆದವರು ಉದ್ಯೋಗವನ್ನು ಸುಲಭವಾಗಿ ಪಡೆಯಲು ಸಾಧ್ಯವಾಗುತ್ತದೆ.

ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್.ಪಾಟೀಲ್‌ರವರು ಮಾತನಾಡುತ್ತಾ ವಿದ್ಯಾರ್ಥಿಗಳು ಸದ್ಯದ ಪಠ್ಯಕ್ರಮದೊಂದಿಗೆ ಉದ್ಯೋಗಕ್ಕೆ ಅನುಕೂಲವಾಗುವ ಕೌಶಲ್ಯವನ್ನು ಕಲಿಯಬೇಕು. ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆದವರು ಉದ್ಯೋಗವನ್ನು ಸುಲಭವಾಗಿ ಪಡೆಯಲು ಸಾಧ್ಯವಾಗುತ್ತದೆ ಹಾಗೂ ಸಮಯಕ್ಕೆ ಹೆಚ್ಚು ಪ್ರಾಮುಖ್ಯತೆ ನೀಡಿದರೆ ಉತ್ತಮ ಗುರಿಮುಟ್ಟಲ್ಲೂ ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಬಿ.ಎಸ್.ಲೋಕೇಶ್‌ರವರು ವಾರ್ಷಿಕ ವರದಿಯನ್ನು ಮಂಡಿಸುತ್ತಾ ವಿದ್ಯಾರ್ಥಿಗಳು ತಮ್ಮ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಲು ಹೆಚ್ಚುಶ್ರಮ ವಹಿಸಿ, ಅತ್ಯುತ್ತಮ ಶ್ರೇಣಿಯ ರೀತಿಯಲ್ಲಿ ಮುಂಬರುವ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದವರಿಗೆ ಶಿಕ್ಷಣ ಸಂಸ್ಥೆಯೂ ಎಲ್ಲ ಅನುಕೂಲತೆಗಳನ್ನು ಕಲ್ಪಿಸುತ್ತಿದೆ. ಇವುಗಳನ್ನು ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಮತ್ತು ಪದಕವನ್ನು ವಿತರಿಸಲಾಗಿತ್ತು. ಇದೇ ಸಂದರ್ಭದಲ್ಲಿ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ನರೇಂದ್ರ ವಿಶ್ವನಾಥ್, ಕಾರ್ಯಕ್ರಮದ ಮುಖ್ಯಸಂಯೋಜಕರಾದ ಪ್ರೊ.ಬಿ.ಸಿ.ಪ್ರದೀಪ್‌ಕುಮಾರ್ ಹಾಗೂ ಶ್ರೀದೇವಿ ಪಾಲಿಟೆಕ್ನಿಕ್ ಕಾಲೇಜಿನ ಮುಖ್ಯಸ್ಥರು, ಸಿಬ್ಬಂದಿ ವರ್ಗದವರಾದ ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು. ಕಾರ್ಯಕ್ರಮದ ವಿದ್ಯಾರ್ಥಿನಿಯಾದ ಕು.ಉಷಾರವರು ಪ್ರಾರ್ಥಿಸಿ, ಪ್ರೊ.ರಾಮಮೂರ್ತಿರವರು ಸ್ವಾಗತಿಸಿದರು, ದೇವರಾಜುರವರು ನಿರೂಪಿಸಿ, ಪ್ರೊ.ಸುಧಾರಾಣಿರವರು ವಂದಿಸಿದರು.

# ಸುವರ್ಣ ಭಾರತೀ ನಮ: ಶಿವಾಯ ಸ್ತೋತ್ರಮಹಾಸಮರ್ಪಣೆ

**ಬೆಂಗಳೂರು:** ಸನಾತನಧರ್ಮಸಂಸ್ಕೃತಿಯಪ್ರಚಾರ ಏಳಿಗೆಗೆ ಕಾರಣೀಕೃತರಾದವರು-ಜಗದ್ಗುರು ಶಂಕರಾಚಾರ್ಯರು. ದೇಶದುದ್ದಗಲಕ್ಕೂ ಇವರು ಸಂಚರಿಸಿ ಶೃಂಗೇರಿ ಪೀಠವನ್ನು ಸ್ಥಾಪಿಸಿದರು ಎಂದು ಭಾರತದ ಉಪರಾಷ್ಟ್ರಪತಿಗಳಾದ ಜಗದೀಪ್ ಧನಕರ್ ಅವರು ತಿಳಿಸಿದರು.

ಇಂದು ಸುವರ್ಣ ಭಾರತೀ ,ಶೃಂಗೇರಿ, ವೇದಾಂತಭಾರತೀ ಹಾಗೂ ಮಿಥಿಕ್ ಸೊಸೈಟಿ ವತಿಯಿಂದ ದಕ್ಷಿಣಾಮ್ನಾಯ ಶ್ರೀ ಶೃಂಗೇರಿ ಶಾರದಾಪೀಠಾಧೀಶ್ವರರಾದ ಜಗದ್ಗುರು ಶಂಕರಾಚಾರ್ಯ ಪರಮಪೂಜ್ಯ ಶ್ರೀ ಭಾರತೀ ತೀರ್ಥ ಮಹಾಸ್ವಾಮಿಗಳವರ ಸಂನ್ಯಾಸ ಸ್ವೀಕಾರದ ಸುವರ್ಣ ಮಹೋತ್ಸವ ನಿಮಿತ್ತ ಅರಮನೆ ಮೈದಾನದಲ್ಲಿ ಇಂದು ಹಮ್ಮಿಕೊಳ್ಳಲಾದ ಸುವರ್ಣ ಭಾರತೀ ನಮ: ಶಿವಾಯ ಸ್ತೋತ್ರಮಹಾಸಮರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ನಮ: ಶಿವಾಯ ಸ್ತೋತ್ರಮಹಾಸಮರ್ಪಣೆ ಕಾರ್ಯಕ್ರಮಕ್ಕೆ ಸಹಸ್ರಾರು ಮಂದಿ ಆಗಮಿಸಿ ಸ್ತೋತ್ರ ಪಾರಾಯಣ ಮಾಡಿದ್ದಾರೆ. ನಾನು ವೈಯಕ್ತಿಕವಾಗಿ ಈ ಮಂತ್ರ ಪಾರಾಯಣ ಕೇಳಿ ಮಂತ್ರಮುಗ್ಧನಾಗಿರುತ್ತೇನೆ. ಮಂತ್ರಪಾರಾಯಣದ ಲಯ, ಸಂಯೋಜನೆ, ಆಲಿಸಿದ ನನ್ನ ಮನಸ್ಸು ಸಂತೃ?ಟಗೊಂಡಿತು. ಇದು ನಮ್ಮ ಭಾರತೀಯ ಸಂಸ್ಕೃತಿಯ ಕೊಂಡಿಯನ್ನು ಬಲಪಡಿಸುವ ಕೆಲಸವಾಗಿದೆ. ಸನಾತ ಧರ್ಮವು ತಾಳ್ಮೆ, ಅನುಕಂಪ, ಇತರರ ಕಲ್ಯಾಣಕ್ಕೆ ಹೆಸರಾಗಿದೆ. ನಾವು ನಮ್ಮ ಬಗ್ಗೆ ಅಲ್ಲದೇ ಇತರರ ಒಳಿತಿನ ಬಗ್ಗೆ ಚಿಂತಿಸಬೇಕಾಗಿದೆ ಎಂದರು.



ಶೃಂಗೇರಿ ಶಾರದ ಪೀಠಾಧೀಶ್ವರರಾದ ಪರಮಪೂಜ್ಯ ಭಾರತಿ ತೀರ್ಥ ಸ್ವಾಮಿಗಳು ಕಳೆದ ಐದು ದಶಕಗಳಿಂದ ಜನಕಲ್ಯಾಣಕ್ಕಾಗಿ ಅದ್ಭುತ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಮಾರ್ಗದರ್ಶನದಿಂದ ನಾವು ಮುನ್ನಡೆಯುತ್ತಿರುವುದು ಅದೃ?ಟವೇ ಸರಿ. ಇವರ ಆಧ್ಯಾತ್ಮಿಕ ಚಿಂತನೆಗಳು ನಮ್ಮ ಮನಸ್ಸಿಗೆ ಹಾಗೂ ವಾತಾವರಣಕ್ಕೆ ಆಹ್ಲಾದಕರ ಭಾವನೆಯನ್ನು ಉಂಟುಮಾಡುತ್ತದೆ ಎಂದರು.

ಕರ್ನಾಟಕದ ಉಪ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ರವರು ಮಾತನಾಡಿ, ಭಾರತೀ ತೀರ್ಥರು ಧರ್ಮ ಉಳಿಸುವ ಕೆಲಸ ಮಾಡಿದ್ದಾರೆ. ನಾವೆಲ್ಲರೂ ಭಕ್ತಿ ಸಾಗರದಲ್ಲಿ ಭಾಗಿಯಾಗಿದ್ದೇವೆ. ನಮ್ಮ ಪ್ರಯತ್ನ ವಿಫಲವಾಗಬಹುದು. ಪ್ರಾರ್ಥನೆ ವಿಫಲವಾಗುವುದಿಲ್ಲ. ಶೃಂಗೇರಿ ಮಠ ಧರ್ಮ ಉಳಿಸುವ ಕೆಲಸ ಮಾಡುತ್ತಿದೆ. ಇಡೀ ಸರ್ಕಾರ ಮಠದ ಜೊತೆಗೆ ಇದೆ. ನನಗೂ ಮಠಕ್ಕೂ ಗುರುಭಕ್ತನ ಸಂಬಂಧ ಎಂದರು.

ಇದೇ ಸಂದರ್ಭದಲ್ಲಿ ಸಹಸ್ರಾರು ಜನರು ಶಿವ ಪಂಚಾಕ್ಷರ ನಕ್ಷತ್ರ ಮಾಲಾ ಸ್ತೋತ್ರವನ್ನು ಸಾಮೂಹಿಕವಾಗಿ ಪಠಿಸಿದರು.

# ಬೆಂಗಳೂರಿಗೆ ತಲುಪಲು ಸಿದ್ಧವಾಗಿರುವ ಬಸ್ಸುಗಳು, ತಡೆಯುವವರು ಯಾರು?

**ಚಿತ್ರದುರ್ಗ:** ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಜನ, ಲಕ್ಷಾಂತರ ಜನ ದಿನನಿತ್ಯ ಬೆಂಗಳೂರು ತಲುಪಿ, ಜೀವನವನ್ನು ಕಟ್ಟಿಕೊಳ್ಳಲು, ಕನಸುಗಳನ್ನು ಹೊತ್ತು ಸಾಗುವವರನ್ನ, ತಡೆದು ನಿಲ್ಲಿಸುವವರು ಯಾರು?. ಅವರ ಬದುಕಿಗೆ ಆಸರೆ ನೀಡುವಂತಹ ವ್ಯವಸ್ಥೆಗಳನ್ನಾದರೂ ಗ್ರಾಮಗಳಲ್ಲಿ ಮಾಡಿದ್ದರೆ, ಇಷ್ಟೊಂದು ಜನರನ್ನ ಬೆಂಗಳೂರಿಗೆ ವಲಸೆ ಹೋಗುವುದನ್ನು ತಡೆಯಲು ಸಾಧ್ಯವಾಗುತ್ತಿತ್ತು. ಅಂತಹ ಶಕ್ತಿ ಇರುವಂತಹ ವ್ಯಕ್ತಿ ಈ ದೇಶದಲ್ಲಿ ಮತ್ತೊಮ್ಮೆ ಜನಿಸಿ ಬರಬೇಕಾಗುತ್ತದೆ, ಬೆಂಗಳೂರಿನಲ್ಲಿ ಜನಸಂದಣಿ ಹೆಚ್ಚಾಗಿ, ಸಂಕಷ್ಟಗಳ ಸರಮಾಲೆ ಸೃಷ್ಟಿಯಾಗಿದ್ದರು ಸಹ, ಜನರನ್ನ ಸೆಳೆಯುತ್ತಿರುವುದನ್ನು ನೋಡಿದರೆ ಆಶ್ಚರ್ಯವಾಗುತ್ತದೆ ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಬಾ. ಎಚ್ ಕೆ ಎಸ್ ಸ್ವಾಮಿಯವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಪ್ರತಿಯೊಂದು, ವ್ಯಾಪಾರವಿರಬಹುದು, ಶಿಕ್ಷಣ ವಿರಬಹುದು, ಆರೋಗ್ಯವಿರಬಹುದು, ಪ್ರವಾಸೋದ್ಯಮವಿರಬಹುದು, ಎಲ್ಲದಕ್ಕೂ ನಾವು ಬೆಂಗಳೂರಿನ ಆಶ್ರಯಿಸಿಕೊಂಡಿರುವುದರಿಂದ, ಬೆಂಗಳೂರಿನಲ್ಲಿ ದಿನ ದಿನ ಜನಸಂಖ್ಯೆ ಹೆಚ್ಚಾಗುತ್ತಿದ್ದು, ವಸತಿ ಸೌಕರ್ಯಗಳನ್ನು ಕಲ್ಪಿಸಲು ಸಾಧ್ಯವಾಗದೆ, ಜನರು ಮನೆ ಮೇಲೆ ಮನೆಗಳನ್ನು ಕಟ್ಟಿಕೊಂಡು, ಪಕ್ಷಿಗಳಂತೆ ಗೂಡುಗಳಲ್ಲಿ ವಾಸ ಮಾಡಿಕೊಂಡು ಸಂಚಾರಿ ದಟ್ಟಣವನ್ನ ಹೆಚ್ಚಿಸಿಕೊಂಡು, ಮಳೆ ಬಂದರೆ ನೀರು ಹರಿಯಲಾರದಂತ ಪರಿಸ್ಥಿತಿ ನಿರ್ಮಾಣ ಮಾಡಿಕೊಂಡು, ನೋಡುಗರಿಗೆ ಇದೆಂಥ ವ್ಯವಸ್ಥೆ ಸೃಷ್ಟಿಯಾಗಿದೆ ಎಂದು ನೊಂದುಕೊಳ್ಳುವಂತಾಗಿದೆ ಎಂದರು.

ನೀರಿನ ಸಮಸ್ಯೆಯಿಂದ ಒದ್ದಾಡುತ್ತಿರುವ ಬೆಂಗಳೂರಿಗೆ 400 ಕಿಲೋಮೀಟರ್ ನಿಂದ ನೀರು ಪೂರೈಸಲು ಯೋಜನೆಗಳು ಸಿದ್ಧವಾಗುತ್ತಿದ್ದಂತ ಸಮಯದಲ್ಲಿ, ಒಮ್ಮೆಲೇ ಮಳೆಗಾಲ ಬಂದು, ಊರ ತುಂಬಾ ನೀರು ನಿಂತು, ಜನರು ದೋಣಿಗಳಲ್ಲಿ ಓಡಾಡುವಂತಹ ದೃಶ್ಯ ನೋಡಿದಾಗ, ನಾವು ನಗರಗಳ ಸಂಸ್ಕೃತಿಯ ಕಡೆ ಹೆಚ್ಚು ಮೋಹಿತರಾಗುತ್ತಿದ್ದೇವೆ, ಅಲ್ಲಿರುವ ಸಂಕಷ್ಟಗಳನ್ನ ನಾವು ಗಣನೆಗೆ ತೆಗೆದುಕೊಳ್ಳದೆ, ಅಲ್ಲಿಯ ಆಕರ್ಷಣೆಯ ಬಗ್ಗೆ ಹೆಚ್ಚು ಗಮನ ಹರಿಸುತ್ತಿದ್ದು, ಬೆಂಗಳೂರಿನಲ್ಲಿ ಒತ್ತಡ ಹೆಚ್ಚಾಗುತ್ತಿದೆ, ಅವುಗಳ ನಿವಾರಣೆಗೆ ಅಧಿಕಾರಿಗಳು ದಿನನಿತ್ಯ ಒದ್ದಾಡುವ ದೃಶ್ಯವನ್ನು ನೋಡಿದರೆ, ಎಂತಹ ಪರಿಸ್ಥಿತಿ ಉದ್ಭವ ಆಗಿದೆ ಎನಿಸುತ್ತದೆ ಎಂದರು.

ಎಲ್ಲರಿಗೂ ಹೆಚ್ಚು ಸಂಬಳ, ಹೆಚ್ಚು ಆಕರ್ಷಣೀಯ ವಸತಿ ಸೌಕರ್ಯ, ಹೆಚ್ಚು ನಾಗರಿಕ ಸೌಲಭ್ಯಗಳನ್ನು ನೀಡುತ್ತಿರುವ



ನಗರಗಳ ಕಡೆ ಹೆಚ್ಚು ಜನರು ಆಕರ್ಷಿತರಾಗುತ್ತಿದ್ದಾರೆ, ಗ್ರಾಮಗಳಲ್ಲಿ ಯಾವುದೇ ವೇತನವಿಲ್ಲದೆ, ಉದ್ಯೋಗವಿಲ್ಲದೆ ಜನರು ಸಂಕಷ್ಟಕೀಡಾದಾಗ ಸಾಲ ತೀರಿಸಲು ಬೆಂಗಳೂರಿಗೆ ಹೋಗುತ್ತಿದ್ದೇವೆ, ಎಂದು ಗಂಟು ಮೂಟೆ ಕಟ್ಟಿಕೊಂಡು ಬಡವರಿಂದ ಹಿಡಿದು ಶ್ರೀಮಂತರು ಸಹ ಬೆಂಗಳೂರಿಗೆ ವಲಸೆ ಹೋಗುತ್ತಿರುವುದನ್ನು ನೋಡಿದರೆ, ನಾವು ಗ್ರಾಮೀಣ ಸಂಸ್ಕೃತಿಯನ್ನ ಮತ್ತೆ ಉಳಿಸಿಕೊಳ್ಳುವುದು ಹೇಗೆ?. ಸ್ವಾವಲಂಬಿ ಜೀವನವನ್ನು ಜನರಿಗೆ ಕಲಿಸುವುದು ಯಾವಾಗ? ಗಾಂಧೀಜಿಯವರ ಕನಸಿನ ಭಾರತವನ್ನು ಕಟ್ಟುವುದು ಯಾವಾಗ ಎನಿಸುತ್ತದೆ ಎಂದರು.

ಎಲ್ಲಾ ವಿದ್ಯಾವಂತರೂ, ಚಾಣಾಕ್ಷರು, ಅಧಿಕಾರಿಗಳು, ಓದಿದಂತವರೇ ಬೆಂಗಳೂರಿನಲ್ಲಿ ಸೇರಿಕೊಂಡರು ಸಹ, ಬೆಂಗಳೂರಿನ ವ್ಯವಸ್ಥೆಯನ್ನು ಸರಿ ಮಾಡಿಕೊಳ್ಳಲಾರದೆ ಒದ್ದಾಡುತ್ತಿದ್ದಾರೆ. ಎಷ್ಟೇ ಶ್ರೀಮಂತನಿರಲಿ, ವಿದ್ಯಾವಂತರಲ್ಲಿ, ಅವನ ಮನೆಯೂ ಸಹ ನೀರಿನಲ್ಲಿ ಮುಳುಗಡೆಯಾಗಿ, ಆತನು ಸಹ ಮನೆ ಖಾಲಿ ಮಾಡಿಕೊಂಡು ಹೊರ ಹೋಗುವ ದೃಶ್ಯ ನೋಡಿದರೆ, ಬರಿ ಜಾಣತನ, ಶಿಕ್ಷಣ ಹಣ ಇದ್ದರೆ ಒಂದು ನಗರವನ್ನು ಕಟ್ಟಲು ಸಾಧ್ಯವಿಲ್ಲ, ಅದಕ್ಕೊಂದು ಯಾವುದಾದರೂ ಆಧ್ಯಾತ್ಮಿಕ ಚಿಂತನೆಯನ್ನು ಸಹ ಅಳವಡಿಸಿ, ಜನರನ್ನ ಸರಳ ಜೀವನದ ಕಡೆಗೆ, ಗ್ರಾಮೀಣ ಬದುಕಿನಡೆಗೆ ಸೆಳೆಯುವಂತಹ ವ್ಯಕ್ತಿಗಳು ಬೇಕಾಗಿದ್ದಾರೆ. ಅಂತಹ ಶಕ್ತಿಶಾಲಿಯಾದ ವ್ಯಕ್ತಿಗಳನ್ನ ನಾವು ಮತ್ತೆ ಈ ಯುಗದಲ್ಲಿ ಕಾಣುವುದು ಅಪರೂಪವಾಗಿದೆ. ಹಾಗಾಗಿ ಜನರು ಗಾಣಕ್ಕೆ ಸಿಕ್ಕ ಕಬ್ಬಿನಂತೆ ನಗರಗಳಲ್ಲಿ ಸಿಕ್ಕಿ ಒದ್ದಾಡುತ್ತಿರುವುದನ್ನು ದಿನನಿತ್ಯ ನಾವು, ಟಿವಿಗಳಲ್ಲಿ, ಪತ್ರಿಕೆಗಳಲ್ಲಿ ಓದಿ ನಮಗೆ ನಾವೇ ಸಮಾಧಾನ ಪಟ್ಟುಕೊಂಡು ಬದುಕು ಸಾಗಿಸಬೇಕಾಗಿದೆ ಎಂದರು.

# ಜಿಎಸ್ಟಿ ರಶೀದಿ ನೀಡದ ಮಾಲೀಕರ ವಿರುದ್ಧ ಸಿಎಂ ಸಿದ್ದರಾಮಯ್ಯಗೆ ದೂರು

**ಚಾಮರಾಜನಗರ:** ಸರಕು ಸೇವಾ ತೆರಿಗೆ ಬಿಲ್ ನೀಡದೆ ಉಡಾಫೆತನ ತೋರಿದ್ದ ಪಟ್ಟಣದ ಅಮೋಘ್ ಎಂಟರ್ ಪ್ರೈಸಸ್ ಮಾರಾಟಗಾರರ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತು ವಾಣಿಜ್ಯ ತೆರಿಗೆ ಜಂಟಿ ಆಯುಕ್ತರಿಗೂ ದೂರು ಅರ್ಜಿ ನೀಡಲಾಗಿದ್ದು ಸರ್ಕಾರಕ್ಕೆ ಸೇವಾ ತೆರಿಗೆ ವಂಚಿಸುತ್ತಿದ್ದ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಮನವಿ ಮಾಡಲಾಗಿದೆ. ಸರ್ಕಾರಕ್ಕೆ ಪ್ರತಿನಿತ್ಯ ಸೇವಾ ತೆರಿಗೆ ಹಣ ವಂಚಿಸುವುದಲ್ಲದೆ ಗ್ರಾಹಕರ ಜೊತೆ ಅಸಭ್ಯವಾಗಿ ವರ್ತನೆ ಮಾಡಿದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದ ಅಮೋಘ್ ಎಂಟರ್ ಪ್ರೈಸಸ್ ಮಾಲೀಕರ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ದೂರು ನೀಡಲಾಗಿದೆ. ಸಂವಿಧಾನದ 122 ನೇ ಮಸೂದೆಯನ್ನ ಉಲ್ಲಂಘಿಸಿ ಮೌಲ್ಯವರ್ಧಿತ ತೆರಿಗೆಯನ್ನ ಸರ್ಕಾರಕ್ಕೆ ರವಾನೆ ಮಾಡದೆ ವಂಚಿಸುತ್ತಿರುವ ಮಾರಾಟಗಾರರಿಂದ ಮಾಹಿತಿ ಸಂಗ್ರಹಿಸಲು ತೆರಳಿದ್ದ ಗುಂಡ್ಲುಪೇಟೆ ತಹಸೀಲ್ದಾರ್ ರಮೇಶ್ ಬಾಬು ಅವರಿಗೆ ಸುಳ್ಳು ಮಾಹಿತಿ ನೀಡಿ ಪ್ರಕರಣವನ್ನ ತಿರುಚುವ ಕೆಲಸಕ್ಕೆ ಮುಂದಾಗಿರುವುದು ಸಾಭೀತಾಗಿದೆ ಆದರೆ ಮಾಲೀಕರು ನೀಡಿರುವ ಮಾಹಿತಿಯಂತೆ ಸಂಧಾನದ ಫೋನ್ ಕರೆಗಳು ಅನಾಮಧೇಯ ವ್ಯಕ್ತಿಯಿಂದ ಬಂದಿದ್ದೆ ಆಗಿದ್ದರೆ ಸತ್ಯತೆಯನ್ನ ಹೊರತರಬಹುದಲ್ಲವೇ ಎಂದು ಗ್ರಾಹಕರು ತಿಳಿಸಿದ್ದಾರೆ. ಕಾನೂನು ಪರಿಪಾಲನೆ ಕೇವಲ ಬಡಜನರಿಗೆ ಮಾತ್ರ ಸೀಮಿತವಾಗಿದಿಯೇ , ದೊಡ್ಡ ದೊಡ್ಡ ಕುಳಗಳಿಗೆ ಅನ್ವಯಿಸುವುದಿಲ್ಲವೇ ಎಂದು ಪ್ರಜ್ಞಾವಂತರು ಅಧಿಕಾರಿಗಳನ್ನ ಪ್ರಶ್ನಿಸುತ್ತಿದ್ದಾರೆ.

ಮೊದಲಿಗೆ ಅಂಗಡಿಗೆ ಸರಕು ಖರೀದಿಗೆ ತೆರಳಿದ್ದ ಗ್ರಾಹಕನ ಜೊತೆ ಅಸಭ್ಯವಾಗಿ ವರ್ತನೆ ಮಾಡುವ ಮೂಲಕ ಜಿಎಸ್ಟಿ ರಶೀದಿ ಬೇಕಾದ್ದೆ ಆದಲ್ಲಿ ನಾವು ಸರಕುಗಳನ್ನೇ ನೀಡುವುದಿಲ್ಲ ಬೇಕಾದರೆ ಬೇರೆ ಎಲ್ಲಾದರೂ ಖರೀದಿಸಿಕೊಳ್ಳಿ ಎಂದು ಏರು ಧ್ವನಿಯಲ್ಲಿ ಮಾತನಾಡಿದ್ದ್ಯಾಕೆ , ಹಾಗಾದರೆ ಇವರ ಬಳಿ ಜಿಎಸ್ಟಿರಹಿತ ವ್ಯವಹಾರ ಮಾಡಲೇಬೇಕು ಎಂಬ ನಿಯಮವಿದ್ದರೆ ಇವರ ವ್ಯಾಪಾರ ಮಳಿಗೆ ಮುಂಭಾಗ ಸೂಚನಾ ಫಲಕ ಅಳವಡಿಸಬಹುದಿತ್ತು , ವ್ಯಾಪಾರದ ಸಂಧರ್ಭದಲ್ಲಿ ಊಟ ತಿಂಡಿ ಸಮಯಕ್ಕೆ ವಿರಾಮ ತೆಗೆದುಕೊಳ್ಳಲಾಗುವುದಾದರೆ ಗ್ರಾಹಕನಿಗೆ ಸರಕುಗಳನ್ನ ನೀಡಿದ್ದಾದರು ಯಾಕೆ , ಊಟ ಉಪಹಾರ ಮುಗಿದ ನಂತರ ಸರಕಿಗೆ ಹಣ ಪಡೆದುಕೊಳ್ಳಬಹುದಿತ್ತಾದರು ಮುಂಚಿತವಾಗಿ ಗ್ರಾಹಕನಿಂದ 3475 - ರೂ ಗಳನ್ನ ಪಡೆದು ಬಳಿಕ ಅಸಭ್ಯ ವರ್ತನೆಗಿಳಿದ ಮಾಲೀಕನ ನಡೆಯನ್ನ ಸರಿ ಎನ್ನಬಹುದಾದರೆ ಗ್ರಾಹಕ ತನ್ನ ಹಕ್ಕನ್ನು ಪ್ರತಿಪಾದಿಸಿದ್ದು ತಪ್ಪಾಗಲು ಹೇಗೆ ಸಾಧ್ಯ. ಗ್ರಾಹಕನು ಸರಕು ಖರೀದಿಸುವ ವೇಳೆ ಮಾಲೀಕನ ವರ್ತನೆಯ ನ್ಯೂನತೆ ಕುರಿತು ಹಕ್ಕು ಪ್ರತಿಪಾದಿಸಬಹುದು, ಅನುಚಿತ ವ್ಯಾಪಾರ ಪದ್ಧತಿಯನ್ನ ತೊರೆಯಬೇಕಿದ್ದ ಮಾಲೀಕ ಏಕಾಏಕಿ ಗ್ರಾಹಕರ ಮೇಲೆರಗಿದರೆ ಹಣ ನೀಡುವವ ತನ್ನ ಹಕ್ಕನ್ನ ಪ್ರತಿಪಾದಿಸುವ ಎಲ್ಲಾ ಸ್ವಾತಂತ್ರ್ಯವನ್ನ ಹೊಂದಿರುತ್ತಾನೆ ಎಂಬುದನ್ನ ಅಮೋಘ್ ಎಂಟರ್ ಪ್ರೈಸಸ್ ಮಾಲೀಕರು ಮರೆತಂತಿದೆ.

# ಮಿರ್ಜಾ ಇಸ್ಮಾಯಿಲ್ ಕೊಡುಗೆ ಅಪಾರ

**ಚಾಮರಾಜನಗರ:** ಕನ್ನಡ ಸಾಹಿತ್ಯ ಪರಿಷತ್ತಿನ ಅಭಿವೃದ್ಧಿಗೆ ಶ್ರಮಿಸಿದ ಮೈಸೂರಿನ ದಿವಾನರಾಗಿದ್ದ ಸರ್ ಮಿರ್ಜಾ ಇಸ್ಮಾಯಿಲ್ ರವರ ಕೊಡುಗೆ ಅಪಾರವೆಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ಸಂಸ್ಕೃತಿ ಚಿಂತಕರಾದ ಸುರೇಶ್. ಎನ್ ಋಗ್ವೇದಿ ತಿಳಿಸಿದರು. ಅವರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಆಶಯದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ ಸಭಾಂಗಣದಲ್ಲಿ ನಡೆದ 141ನೆಯ ಸರ್ ಮಿರ್ಜಾ ಇಸ್ಮಾಯಿಲ್ ರವರ ಜನ್ಮದಿನದಲ್ಲಿ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ ವಿಶ್ವೇಶ್ವರಯ್ಯ ನವರಿಂದ ಸ್ಥಾಪಿಸಲ್ಪಟ್ಟಂತಹ ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಏಕೈಕ ಪ್ರಾತಿನಿಧಿಕ ಸಂಸ್ಥೆಯಾಗಿದೆ. ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಕಟ್ಟಡದ ನಿವೇಶನವನ್ನು ನೀಡಿ ಬೃಹತ್ ಮಂದಿರವನ್ನು ನಿರ್ಮಾಣ ಮಾಡಲು ಹಾಗೂ ಕನ್ನಡ ಸಾಹಿತ್ಯವನ್ನು ಹರಡಲು ಶ್ರಮಿಸಿದ ಮಹಾನ್ ವ್ಯಕ್ತಿ . ಉತ್ತಮ ಆಡಳಿತಗಾರರಾಗಿಯೂ ಕಾರ್ಯನಿರ್ವಹಿಸಿದ ಇಸ್ಮಾಯಿಲ್ ರವರು ವಿಶ್ವ ಪ್ರಸಿದ್ಧವಾದ ಮೈಸೂರು ಕೃಷ್ಣರಾಜಸಾಗರದಲ್ಲಿ ಉದ್ಯಾನವನವನ್ನು ನಿರ್ಮಿಸಿ ವಿಶ್ವಖ್ಯಾತಿಗೊಳಿಸಿದವರು. ಕೈಗಾರಿಕೆ, ನೀರಾವರಿ, ಶಿಕ್ಷಣ ,ವಸತಿ ನಿಲಯ, ರಸ್ತೆ ,ಸೇತುವೆ ಅಭಿವೃದ್ಧಿ ಹಾಗು ಹಲವು ಕ್ಷೇತ್ರಗಳಲ್ಲಿ ಸಮಗ್ರ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿದ ಇವರ ಸ್ಮರಣೆ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಡೆಯುತ್ತಿರುವುದು



ಹೆಮ್ಮೆಯಾಗಿದೆ. ಶತಮಾನದ ಹಿಂದೆಯೇ ಹಳ್ಳಿಹಳ್ಳಿಗೂ ವಿದ್ಯುತ್ ಸೌಲಭ್ಯವನ್ನು ನೀಡಿ ಸುಮಾರು 180ಕ್ಕೂ ಹೆಚ್ಚು ಹಳ್ಳಿಗಳಿಗೆ ವಿದ್ಯುತ್ ಸೌಲಭ್ಯ ನೀಡಿದ ದೂರದೃಷ್ಟಿಯ ಚಿಂತನಗಾರರು ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೊಳ್ಳೇಗಾಲ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಗರಾಜುರವರು ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತು ಕನ್ನಡದ ಅಭಿವೃದ್ಧಿಗೆ ಶ್ರಮಿಸಿದ ಸರ್ವರನ್ನು ಸ್ಮರಿಸಿಕೊಳ್ಳುವ ಮೂಲಕ ನಾಡು, ನುಡಿ, ಜಲ, ಭಾಷೆಯನ್ನು ಅಭಿವೃದ್ಧಿಗೊಳಿಸಿದ ಸರ್ವರಿಗೂ ಗೌರವ ಸಲ್ಲಿಸುವುದು ನಮ್ಮ ಕಾರ್ಯವಾಗಿದೆ. ಸರ್ ಎಂ ವಿಶ್ವೇಶ್ವರಯ್ಯನವರಂತೆ ಮೈಸೂರು ಸಂಸ್ಥಾನದಲ್ಲಿ ಕೈಗಾರಿಕೆಗಳನ್ನು ಬೆಳೆಸಿದ ಮಹಾನ್ ವ್ಯಕ್ತಿ. ಮೈಸೂರು ನಗರವನ್ನು ಸುಂದರಗೊಳಿಸಿ ವಿಶಾಲ ರಸ್ತೆಗಳ ನಿರ್ಮಾಣ ಕಟ್ಟಡಗಳ ಬೆಳವಣಿಗೆಗೆ ಇವರ ಕೊಡುಗೆ ಅಪಾರವೆಂದರು. ಚಾಮರಾಜನಗರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಲವು ಕಾರ್ಯಕ್ರಮಗಳನ್ನು ನಿರಂತರವಾಗಿ ರೂಪಿಸಿ ಕನ್ನಡದ ಮಹನೀಯರನ್ನು ಸ್ಮರಿಸಿಕೊಳ್ಳುವ, ಹಾಗೂ ಕೊಡುಗೆಗಳ ಬಗ್ಗೆ ತಿಳಿಸುವ ಕಾರ್ಯ ಮಾಡುತ್ತಿರುವುದು ಬಹಳ ಸಂತೋಷ ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಬಿ ಕೆ ಆರಾಧ್ಯರವರು ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತು ಗೌರವದ ಸಂಸ್ಥೆಯಾಗಿದೆ. ಶತಮಾನಗಳಿಂದಲೂ ಕನ್ನಡ ಭಾಷೆ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಬೆಳೆಸುವ ದಿಕ್ಕಿನಲ್ಲಿ ಕಾರ್ಯನಿರ್ವಹಿಸುತ್ತಿದ್ದು ಪ್ರತಿ ಮಂಗಳವಾರ ಸಂಜೆ ವಿಶೇಷ ಕಾರ್ಯಕ್ರಮ ನಡೆಸುವ ಮೂಲಕ ಹಾಗೂ ವಿಶೇಷ ಮಹನೀಯರ ದಿನಗಳ ಸ್ಮರಿಸುವ ಮೂಲಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಋಗ್ವೇದಿಯವರು ಉತ್ತಮ ಸೇವೆಯನ್ನು ಸಲ್ಲಿಸುತ್ತಿದ್ದಾರೆ ಎಂದು ತಿಳಿಸಿ ಪ್ರತಿಯೊಬ್ಬರು ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕ್ರಮಗಳಲ್ಲಿ ಭಾಗವಹಿಸಿ , ಕನ್ನಡದ ಕೆಲಸವನ್ನು ಸರ್ವರು ಸೇರಿ ನಿರ್ವಹಿಸೋಣ ಎಂದರು.

# ಸತತ ಪ್ರಯತ್ನವೇ ಯಶಸ್ಸಿನ ಗುಟ್ಟು

**ಮುಳಬಾಗಲು:** ತಾಲ್ಲೂಕಿನ ಎಮ್ಮೆನತ್ತ ಗ್ರಾಮದ ಅಂಜನಾದ್ರಿ ಪ್ರೌಢಶಾಲೆಯಲ್ಲಿ ಅದ್ದೂರಿಯಾಗಿ ಪ್ರತಿಭಾ-2ಕ24 ಕಾರ್ಯಕ್ರಮ ನಡೆಯಿತು. ಪವನ್ ಕಲ್ಯಾಣ್ ಫೌಂಡೇಶನ್ ಸೊಸೈಟಿಯಲ್ಲಿ ನಡೆದ ಸಮಾರಂಭದಲ್ಲಿ ವಿವಿಧ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಈ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಡಾ. ಎಂ.ಪವನ್ ಕಲ್ಯಾಣ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಚೆನ್ನಾಗಿ ಓದಬೇಕು, ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಹೆತ್ತವರಿಗೆ, ಶಿಕ್ಷಕರಿಗೆ ಹಾಗೂ ಶಾಲೆಗೆ ಒಳ್ಳೆಯ ಹೆಸರನ್ನು ತರಬೇಕು. ಸತತ ಪ್ರಯತ್ನವೇ ಯಶಸ್ಸಿನ ಗುಟ್ಟು, ಒಂದು ಗುರಿಯನ್ನು ಇಟ್ಟುಕೊಂಡು ಓದಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಹತ್ತನೇ ತರಗತಿಯ ವಿದ್ಯಾರ್ಥಿಗಳಿಗೆ ಜಾಮಿಟ್ರಿ ಬಾಕ್ಸ್, ಪ್ಯಾಡ್, ಪೆನ್ನುಗಳನ್ನು ಡಾ.ಎಂ.ಪವನ್ ಕಲ್ಯಾಣ್ ವಿತರಿಸಿದರು. ಕಾರ್ಯಕ್ರಮದಲ್ಲಿ ಡಾ. ಎಂ.ಪವನ್ ಕಲ್ಯಾಣ್ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಇದ್ದರು.



# ಹೊಸ ಎಫ್.ಎಂ ರೇಡಿಯೋ ಕೇಂದ್ರ ಸ್ಥಾಪಿಸಲು ಅವಕಾಶ

**ಬೆಂಗಳೂರು:** ಹೊಸ ಎಫ್. ಎಂ ಕೇಂದ್ರಗಳನ್ನು ಸ್ಥಾಪಿಸಲು 234 ನಗರಗಳಲ್ಲಿ 730 ಎಫ್‌ಎಂ ರೇಡಿಯೋ ಚಾನೆಲ್‌ಗಳ ಹರಾಜಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಉಪಕ್ರಮವು ಈ ಹಿಂದೆ ಖಾಸಗಿ ಎಫ್‌ಎಂ ರೇಡಿಯೊ ಕೇಂದ್ರಗಳಿಂದ ತೆರೆದಿರುವ ನಗರಗಳಲ್ಲಿನ ರೇಡಿಯೊ ಪ್ರೇಕ್ಷಕರಿಗೆ ಹೊಸ ಮತ್ತು ವರ್ಧಿತ ಆಲಿಸುವ ಅನುಭವವನ್ನು ನೀಡಲಿದೆ.

ಕರ್ನಾಟಕ ರಾಜ್ಯದ ಬಾಗಲಕೋಟ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಗದಗ ಬೆಟಿಗೇರಿ, ಹಾಸನ, ಹೊಸಪೇಟೆ, ಕೋಲಾರ, ರಾಯಚೂರು, ಶಿವಮೊಗ್ಗ, ತುಮಕೂರು, ಕೇರಳ, ಮತ್ತು ಉಡುಪಿ ಈ ಕೆಲವು ಎಫ್‌ಎಂ ರೇಡಿಯೋ ಚಾನೆಲ್‌ಗಳನ್ನು ತಲುಪಲು ನಿಗದಿಪಡಿಸಲಾಗಿದೆ ಎಂದು ತಿಳಿಸಲು ಸಂತೋ?ವಾಗಿದೆ.

2001ರಲ್ಲಿ ಸಾಧಾರಣ ಆರಂಭ ಕಂಡ ಖಾಸಗಿ ಎಫ್‌ಎಂ ರೇಡಿಯೋ 388 ಚಾನೆಲ್‌ಗಳೊಂದಿಗೆ 113 ನಗರಗಳಿಗೆ ವಿಸ್ತರಿಸಿದೆ, ಇದು ಮಾಧ್ಯಮ ಭೂದೃಶ್ಯಕ್ಕೆ ಗಮನಾರ್ಹವಾಗಿ ಕೊಡುಗೆ ನೀಡಿದೆ. ಈ ಹೊಸ ವಿಸ್ತರಣೆಯು ರೇಡಿಯೊ ವಲಯದಲ್ಲಿ ಹೊಸ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ ಮತ್ತು ದೇಶದಾದ್ಯಂತ ಕೇಳುಗರಿಗೆ ರೇಡಿಯೊ ಮೂಲಕ ಮನರಂಜನೆಯನ್ನು ತರುತ್ತದೆ.

ಭಾರತ ಸರ್ಕಾರದ ಮಾಹಿತಿ ಮತ್ತು ಪ್ರಸಾರ ಸಚಿವಾಲಯವು 234 ನಗರಗಳಾದ್ಯಂತ 730 ಚಾನೆಲ್ ಗಳ ಇ-ಹರಾಜಿಗಾಗಿ ನಿರೀಕ್ಷಿತ ಬಿಡ್ಡರ್‌ಗಳಿಂದ ಅರ್ಜಿ ಆಹ್ವಾನಿಸುವ ಮಾರ್ಗಸೂಚನೆಗಳನ್ನು ಬಿಡುಗಡೆ ಮಾಡಿದೆ. ಮಾರ್ಗಸೂಚಿಯು ಸಚಿವಾಲಯದ ವೆಬ್‌ಸೈಟ್ https://mib.gov.in/sites/default/files/NIA 14Oct2024 Final.pdf ನಲ್ಲಿ ಲಭ್ಯವಿದೆ. ಇಲ್ಲಿ ಹೊಸ ಮತ್ತು ಆಸಕ್ತ ಉದ್ಯಮಿಗಳು ಹೊಸ ಎಫ್‌ಎಂ ರೇಡಿಯೋ ಕೇಂದ್ರಗಳನ್ನು ಸ್ಥಾಪಿಸುವ ಅವಕಾಶದಲ್ಲಿ ಭಾಗವಹಿಸಲು ಅವಕಾಶವನ್ನು ಹೊಂದಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಗ್ರಾಮೀಣ ಕುಟುಂಬದವರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ಕಾರ್ಯ

**ತುಮಕೂರು:** ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಜನರ ಎಲ್ಲಾ ಭಾಗದವರಿಗೂ ಒಂದು ಆರೋಗ್ಯ ಸೇವೆ ನೀಡುವ ಲಭಿಸುವ ಅವಕಾಶಗಳನ್ನು ಕಲ್ಪಿಸಲಾಗಿದೆ. ಇಲ್ಲಿನ ರಾಷ್ಟ್ರಮಟ್ಟದ ಮತ್ತು ರಾಜ್ಯ ಮಟ್ಟದ ಎಲ್ಲಾ ಆರೋಗ್ಯ ಶಿಬಿರಗಳು, ಕಾರ್ಯಕ್ರಮಗಳು ಮತ್ತು ಸರ್ಕಾರದಿಂದ ಬರುವ ಕಾರ್ಯಕ್ರಮಗಳು ಅವರ ಮನೆ ಬಾಗಿಲಿಗೆ ಲಭಿಸುವ ಕೆಲಸ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಕಲ್ಪಿಸಲಾಗಿದೆ. ನರಸೀಪುರ ಗ್ರಾಮದ ಸುಮಾರು 500 ಕುಟುಂಬದವರನ್ನು ದತ್ತು ಪಡೆದಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಅಂಬಿಕಾ ಎಂ ಹುಲಿನಾಯ್ಕರ್‌ರವರು ತಿಳಿಸಿದರು.

ತುಮಕೂರಿನ ಊಡಿಗೆರೆಯ ತಾಲ್ಲೂಕಿನ ನರಸೀಪುರ ಗ್ರಾಮದ ಆತ್ಮರಾಮ ಸಮುದಾಯ ಭವನದಲ್ಲಿ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಸಮುದಾಯ ವೈದ್ಯಶಾಸ್ತ್ರ ವಿಭಾಗದ ವತಿಯಿಂದ ಕುಟುಂಬ ದತ್ತು ಸ್ವೀಕಾರ ಕಾರ್ಯಕ್ರಮವನ್ನು ಅ.25ರಂದು ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಸಮಾಜ ಸೇವಕರಾದ ಭೈರಣ್ಣರವರು ಮಾತನಾಡುತ್ತಾ ವೈದ್ಯ ಶಾಸ್ತ್ರ ಬಹಳ ಪುರಾತನ ವರ್ಷಗಳಿಂದ ತಿಳಿದಿದ್ದೇನೆ. ಹಿಂದಿನ ವೈದ್ಯಶಾಸ್ತ್ರದವರು ಎಲ್ಲಿ ಅನಾರೋಗ್ಯ ಹೊಂದಿರುತ್ತಿದ್ದರೋ ಅಲ್ಲಿ ಮಾತ್ರ ವೈದ್ಯಶಾಸ್ತ್ರದವರಿದ್ದರು. ದೂರಸರಿದಿದೆ. ಇಂದು ಮನೆ ಮದ್ದು ದೂರಸರಿದಿದೆ. ಪ್ರತಿಯೊಂದಕ್ಕೂ ವೈದ್ಯರ ಸೇವೆಗೆ ಅವಶ್ಯಕವಾಗಿದೆ. ಇಂದಿನ ಕಾಲದಲ್ಲಿ ವೈದ್ಯರ ಪ್ರೀತಿ ವಿಶ್ವಾಸದಿಂದ ನಗುಮುಖದಿಂದ ಚಿಕಿತ್ಸೆ ನೀಡಿದರೆ ಗುಣಮುಖರಾಗಿರುತ್ತಾರೆ. ಇಷ್ಟು ಪಟ್ಟು ಕೆಲಸ ಮಾಡಬೇಕು, ಕಷ್ಟಪಟ್ಟು ಕೆಲಸ ಮಾಡಬಾರದು. ಸುಮಾರು 500 ಕುಟುಂಬದವರನ್ನು ದತ್ತು ಪಡೆದಿರುವುದು ಹೆಮ್ಮೆಯ ವಿಷಯವಾಗಿದೆ. ದತ್ತು ಸ್ವೀಕಾರ ಪಡೆದ ನರಸೀಪುರ ಗ್ರಾಮವನ್ನು ಆಯ್ಕೆ ಮಾಡಿಕೊಂಡಿದ್ದಕ್ಕೆ ಈ ಆಯ್ಕೆಮಾಡಿಕೊಂಡಕ್ಕೆ ಡಾ.ಎಂ.ಆರ್. ಹುಲಿನಾಯ್ಕರ್ ಹಾಗೂ ಟ್ರಸ್ಟಿಯಾದ ಅಂಬಿಕಾ ಎಂ ಹುಲಿನಾಯ್ಕರ್ ಹಾಗೂ ಇದರ ಪೂರಕವಾಗಿ ಎಲ್ಲಾ ವೈದ್ಯರಿಗೂ ಕೃತಜ್ಞತೆಯನ್ನು ಸಲ್ಲಿಸುತ್ತೇನೆ. ಕಾರ್ಯಕ್ರಮದಲ್ಲಿ ಗ್ರಾಮಪಂಚಾಯತಿ ಅಧ್ಯಕ್ಷರಾದ ರಾಮಾಂಜಿನಪ್ಪರವರು ಮಾತನಾಡುತ್ತಾ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಆರೋಗ್ಯ ಸೇವೆಯ 500 ಮನೆಗಳನ್ನು ದತ್ತು ತೆಗೆದುಕೊಂಡು ವೈದ್ಯಕೀಯ ವಿದ್ಯಾರ್ಥಿಗಳು ಪ್ರತಿಯೊಂದು ಮನೆ ಮನೆಗೆ ಭೇಟಿ ನೀಡಿ ಅಲ್ಲಿರುವ ಸಮಸ್ಯೆಗಳನ್ನು ಗುರುತಿಸಿ ಆ ಸಮಸ್ಯೆಗಳನ್ನು ಪರಿಹಾರ ನೀಡುವುದು ತುಂಬಾ ಖುಷಿಯ ವಿಚಾರವಾಗಿದೆ ಎಂದು ತಿಳಿಸಿದರು.

# ಮತಿಘಟ್ಟ ಹಾಲು ಉತ್ಪಾದಕರ ಸಹಕಾರ ಸಂಘದ ಆಯ್ಕೆ

**ತಿಪಟೂರು:** ಮತಿಘಟ್ಟ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಂ.ಎಸ್ ಶಿವಸ್ವಾಮಿ ಉಪಾಧ್ಯಕ್ಷರಾಗಿ ತಮ್ಮಯ್ಯ ಅವಿರೋಧವಾಗಿ ಆಯ್ಕೆಯಾಗಿದ್ದಾರೆ,

ಈ ಸಂದರ್ಭದಲ್ಲಿ ಚುನಾವಣಾಧಿಕಾರಿ ಶಂಶದ್ ಬೇಗಂ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜ್ಞಾನರೂಪಕೇಶವಮೂರ್ತಿ, ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರಾದ ಎಂ.ಎಲ್ ರಾಜಶೇಖರಯ್ಯ, ಜಯಣ್ಣ, ಕಾಂತರಾಜು ಎಂ.ಸಿ, ರೇಣುಕಯ್ಯ, ಎಂ.ಎನ್ ಸುರೇಶ್, ಯೋಗಾನಂದ, ಅನುಸೂಯಮ್ಮ, ಲೀಲಾ, ಟಿ.ಮಹದೇವಯ್ಯ, ಬಿ.ಕುಮಾರಿ ಮತ್ತಿತ್ತರು ಹಾಜರಿದ್ದರು.





**ಪರಮ ಪೂಜ್ಯ ಶ್ರೀ1008 ಶ್ರೀ ಸುಬುಧೇಂದ್ರತೀರ್ಥಶ್ರೀಪಾದರ ಆದೇಶ ಅನುಗ್ರಹದೊಂದಿಗೆ ಬೆಂಗಳೂರಿನ ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ.ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಗುರುವಾರದಂದು ಬೆಳಗ್ಗೆ ರಾಯರ ಬೃಂದಾವನಕ್ಕೆ ವಿಶೇಷ ಪೂಜಾದಿಗಳು ಜರಗಿತು ನಂತರ ಸನ್ನಿಧಿಗೆ ಆಗಮಿಸಿದ ಸಹಸ್ರಾರು ಭಕ್ತರಿಗೆ ಅನ್ನ ಸಂತರ್ಪಣೆಯು ನೆರವೇರಿತು ಎಂದು ನಂದಕಿಶೋರಾಚಾರ್ಯರು ತಿಳಿಸಿದರು ತದನಂತರ ಸಂಜೆ ಕಾರ್ಯಕ್ರಮದಲ್ಲಿ ವಿಶೇಷ ಉತ್ಸವಗಳೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಡಾ.ಪ್ರಿಯಾ ಗಣೇಶ್ ಅವರ ನಿರ್ದೇಶನದಲ್ಲಿ ಸಮುದ್ಭವ ಕಲೆ ಮತ್ತು ಸಂಸ್ಕೃತ ಸಂಸ್ಥೆಯ ವಿದ್ಯಾರ್ಥಿಗಳಿಂದಭರತ ನಾಟ್ಯಕಾರ್ಯಕ್ರಮವು ವಿಶೇಷವಾಗಿ ಜರುಗಿತು.**

# KUWJ 2023ನೇ ಸಾಲಿನ ವಾರ್ಷಿಕ ಪ್ರಶಸ್ತಿ

**ಬೆಂಗಳೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2023ನೇ ಸಾಲಿನ ಕೆಳಕಂಡ ವಾರ್ಷಿಕ ಪ್ರಶಸ್ತಿಗಳಿಗೆ ಪತ್ರಕರ್ತರಿಂದ ಆ ವರ್ಷದ ವರದಿ/ಲೇಖನ/ಸುದ್ದಿ ಛಾಯಾಚಿತ್ರಗಳನ್ನು ಆಹ್ವಾನಿಸಲಾಗಿದೆ. ಅಧ್ಯಕ್ಷರು/ಪ್ರಧಾನ ಕಾರ್ಯದರ್ಶಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, 3ನೇ ಮಹಡಿ, ಕಂದಾಯ ಭವನ, ಬೆಂಗಳೂರು-09 ಇಲ್ಲಿಗೆ ದಿನಾಂಕ 11.11.2024 ರೊಳಗೆ ತಲುಪುವಂತೆ ತಮ್ಮ ಸ್ವ ಪರಿಚಯದೊಂದಿಗೆ ಅರ್ಜಿಯನ್ನು ಕಳುಹಿಸಿಕೊಡಬೇಕು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ತಿಳಿಸಿದ್ದಾರೆ.

**ಪ್ರಶಸ್ತಿಗಳ ವಿವರ:** 1. ಜಿ. ನಾರಾಯಣಸ್ವಾಮಿ ಪ್ರಶಸ್ತಿ (ಅತ್ಯುತ್ತಮ ಗ್ರಾಮಾಂತರ ವರದಿ), 2. ಪಟೇಲ್ ಭೈರಹನುಮಯ್ಯ ಪ್ರಶಸ್ತಿ (ಅತ್ಯುತ್ತಮ ಮಾನವೀಯ ವರದಿ), 3. ಗಿರಿಧರ್ ಪ್ರಶಸ್ತಿ (ಅತ್ಯುತ್ತಮ ಅಪರಾಧ ವರದಿ), 4. ಬಿ. ಎಸ್.ವೆಂಕಟರಾಂ ಪ್ರಶಸ್ತಿ (ಅತ್ಯುತ್ತಮ ಸ್ಕೂಪ್ ವರದಿ), 5. ಕೆ. ಎ. ನೆಟ್ಟಕಲಪ್ಪ ಪ್ರಶಸ್ತಿ (ಅತ್ಯುತ್ತಮ ಕ್ರೀಡಾ ವರದಿ), 6. ಖಾದ್ರಿ ಶಾಮಣ್ಣ ಪ್ರಶಸ್ತಿ (ಅತ್ಯುತ್ತಮ ರಾಜಕೀಯ ವಿಮರ್ಶೆ), 7. ಮಂಗಳ ಎಂ. ಸಿ. ವರ್ಗಿಸ್ ಪ್ರಶಸ್ತಿ (ವಾರ ಪತ್ರಿಕೆಯಲ್ಲಿ ಚಿತ್ರ ಲೇಖನಕ್ಕೆ), 8. ತಗಡೂರು ಕಮಲಮ್ಮ ವೀರೇಗೌಡ ಪ್ರಶಸ್ತಿ (ರೈತಾಪಿ ಜನರ ಸಮಸ್ಯೆ ವರದಿ), 9. ಆರ್.ಎಲ್.ವಾಸುದೇವರಾವ್ ಪ್ರಶಸ್ತಿ (ಅರಣ್ಯ ಕುರಿತ ಅತ್ಯುತ್ತಮ ವರದಿ), 10.ಆರ್. ಎಲ್. ವಾಸುದೇವರಾವ್ ಪ್ರಶಸ್ತಿ (ವನ್ಯ ಪ್ರಾಣಿಗಳ ಕುರಿತ ಅತ್ಯುತ್ತಮ ವರದಿ), 11.ಬಿ.ಜಿ.ತಿಮ್ಮಪ್ಪಯ್ಯ ಪ್ರಶಸ್ತಿ (ಆರ್ಥಿಕ ದುರ್ಬಲ ವರ್ಗದವರ ಕುರಿತ ಅತ್ಯುತ್ತಮ ವರದಿ), 12.ಮಂಡಿಬೆಲೆ ಶಾಮಣ್ಣ ಸ್ಮಾರಕ ಪ್ರಶಸ್ತಿ (ಗ್ರಾಮೀಣ ಜನ-ಜೀವನದ ಅತ್ಯುತ್ತಮ ವರದಿಗೆ), 13.ನಾಡಪ್ರಭು ಕೆಂಪೇಗೌಡ ಸ್ಮಾರಕ ಪ್ರಶಸ್ತಿ (ಬೆಂಗಳೂರು ಮತ್ತು ಗ್ರಾಮಾಂತರ ಜಿಲ್ಲೆ ಅಭಿವೃದ್ಧಿ), 14.ಯಜಮಾನ್ ಟಿ. ನಾರಾಯಣಪ್ಪ ಸ್ಮಾರಕ ಪ್ರಶಸ್ತಿ (ಜಿಲ್ಲಾ ಪತ್ರಿಕೆಗಳಲ್ಲಿ ಪ್ರಕಟವಾದ ಕೃಷಿ ವರದಿ), 15.ನಾಡಿಗೇರ ಕೃಷ್ಣರಾಯರ ಪ್ರಶಸ್ತಿ (ಅತ್ಯುತ್ತಮ ವಿಡಂಬನಾತ್ಮಕ ಲೇಖನಕ್ಕೆ), 16. ಅತ್ಯುತ್ತಮ ಪುಟ ವಿನ್ಯಾಸಗಾರರು (ಡೆಸ್ಕ್ ನಲ್ಲಿ ಕೆಲಸ), 17. ನ್ಯಾಯಾಲಯದ (ಕೋರ್ಟ್ ಬೀಟ್) ಅತ್ಯುತ್ತಮ ವರದಿ.18. ಸುಣ್ಣವಂಡ ಶ್ರೀನಿವಾಸ ಚಂಗಪ್ಪ ಪ್ರಶಸ್ತಿ. (ಅತ್ಯುತ್ತಮ ಸೇನಾ ವರದಿ) 19. ಕೆ.ಎನ್.ಸುಬ್ರಮಣ್ಯ ಪ್ರಶಸ್ತಿ ( ಇಂಗ್ಲೀಷ್ ಪತ್ರಿಕೆಯ ವರದಿ), 20.ಟಿ.ಕೆ. ಮಲಗೊಂಡ ಪ್ರಶಸ್ತಿ (ಅತ್ಯುತ್ತಮ ತನಿಖಾ ವರದಿ), 21. 'ಲನಚಿತ್ರ ನಟ, ನಿರ್ದೇಶಕ ದಿ. ದ್ವಾರಕೀಶ್ ಸ್ಮಾರಕ ಪ್ರಶಸ್ತಿ (ಚಲನಚಿತ್ರ ವಿಮರ್ಶಾ ವರದಿ)

**ವಿದ್ಯುನ್ಮಾನ (ಟಿವಿ)ವಿಭಾಗ:** 22. ಅತ್ಯುತ್ತಮ ತನಿಖಾ ವರದಿ, 23. ಅತ್ಯುತ್ತಮ ಸಾಮಾಜಿಕ, ಮಾನವೀಯ ವರದಿ, 24. ಅತ್ಯುತ್ತಮ ಆ್ಯಂಕರ್ ಪ್ರಶಸ್ತಿ, 25. ಅತ್ಯುತ್ತಮ ರಾಜಕೀಯ ವಿಶ್ಲೇಷಣೆ

**ಷರತ್ತುಗಳು :** 1. ಪ್ರಶಸ್ತಿಗೆ 2023 ಜನವರಿ 1 ರಿಂದ 2023 ಡಿಸೆಂಬರ್ 31 ರೊಳಗೆ ದಿನಪತ್ರಿಕೆ ಮತ್ತು ನಿಯತಕಾಲಿಕೆಗಳಲ್ಲಿ ಪ್ರಕಟವಾದ ಲೇಖನ/ವರದಿ/ವಿಶೇಷ ವರದಿ ಸುದ್ದಿ ಛಾಯಾ ಚಿತ್ರಗಳನ್ನು ಕಳುಹಿಸಬೇಕು. 2.ವರದಿ/ಲೇಖನ ಯಾವ ಪ್ರಶಸ್ತಿಗೆ ಎಂಬುದನ್ನು ಮುಖಪುಟದಲ್ಲಿ ಸ್ಪಷ್ಟವಾಗಿ ಬರೆದಿರಬೇಕು. 3. ಅನುವಾದ ಮಾಡಿದ ವರದಿ/ಲೇಖನ ಪರಿಗಣಿಸುವುದಿಲ್ಲ. ಒಬ್ಬರು ಗರಿಷ್ಠ ಮೂರು ಪ್ರಶಸ್ತಿಕ್ಕಿಂತ ಹೆಚ್ಚು ಪ್ರಶಸ್ತಿಗೆ ಅರ್ಜಿ ಸಲ್ಲಿಸುವಂತಿಲ್ಲ. 4. ರಾಜ್ಯ ಸಂಘ, ಜಿಲ್ಲಾ ಮತ್ತು ತಾಲ್ಲೂಕು ಸಂಘದ ಪದಾಧಿಕಾರಿಗಳು ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅವಕಾಶವಿಲ್ಲ. 5. ಲೇಖನ ವರದಿಗಳನ್ನು ಮೂರು ಪ್ರತಿಗಳಲ್ಲಿ (ಜೆರಾಕ್ಸ್ ಪ್ರತಿಗಳಾದರೆ ದೃಢೀಕೃತವಾದ ಪ್ರತಿ ಇರಬೇಕು.) ಕಳುಹಿಸಬೇಕು. 6. ವಿದ್ಯುನ್ಮಾನ ಮಾಧ್ಯಮದ ಪ್ರಶಸ್ತಿಗಳ ಪ್ರವೇಶಕ್ಕೆ ವರದಿ ಪ್ರಸಾರವಾದ ಕ್ಲಿಪಿಂಗ್ (ಸಿಡಿ ಅಥವಾ ಪೆನ್ಡ್ರೈವ್) ಮತ್ತು ಅದರ ಸ್ಕ್ರಿಪ್ಟ್‌ಗಳನ್ನು ಸಂಪಾದಕರ ದೃಢೀಕರಣ ಸಹಿತ ಕಳುಹಿಸಬೇಕು. 7. ಅರ್ಜಿ ಸಲ್ಲಿಸುವವರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯತ್ವದ ಗುರುತಿನ ಕಾರ್ಡ್ ಮತ್ತು ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯನ್ನು ಲಗತ್ತಿಸಬೇಕು. 8. ಲೇಖನದ ಜೊತೆಯಲ್ಲಿ ಸ್ವ ಪರಿಚಯ, ಪೂರ್ಣ ವಿಳಾಸ, ಮೊಬೈಲ್ ನಂಬರ್ ಮತ್ತು ಪಾಸ್ ಪೋರ್ಟ್ ಸೈಜ್ ಭಾವಚಿತ್ರ ಕಳುಹಿಸಬೇಕು. 9. ಈಗಾಗಲೇ ಒಂದು ಬಾರಿ ಪ್ರಶಸ್ತಿಯನ್ನು ಪಡೆದವರು, ಮತ್ತೆ ಅದೇ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಷರತ್ತುಗಳನ್ನು ಉಲ್ಲಂಘಿಸಿ ಬರುವ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಲೋಕೇಶ ಅವರು ತಿಳಿಸಿದ್ದಾರೆ.

## ನ.1 ರಂದು ರಾಜ್ಯೋತ್ಸವ ಸಮಾರಂಭ

**ಮೈಸೂರು:** ಜಿಲ್ಲಾಡಳಿತದ ವತಿಯಿಂದ ನವೆಂಬರ್ 1 ರಂದು ನಗರದ ಓವೆಲ್ ಮೈದಾನದಲ್ಲಿ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಹಮ್ಮಿಕೊಂಡಿದ್ದು, ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್. ಸಿ ಮಹದೇವಪ್ಪ ಅವರು ಧ್ವಜಾರೋಹಣ ನೆರವೇರಿಸಿ, ಭುವನೇಶ್ವರಿ ಪುತ್ಥಳಿಗೆ ಪುಷ್ಪಾರ್ಚನೆ ಮಾಡಿ ಕನ್ನಡ ರಾಜ್ಯೋತ್ಸವ ಸಂದೇಶವನ್ನು ನೀಡುವರು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಎಸ್‌ಟಿಎ ವಾರ್ಷಿಕ ಬಹುಮಾನಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ 2024-25ನೇ ಸಾಲಿನ ಕೆ.ಎಸ್ .ಟಿ.ಎ. ವಾರ್ಷಿಕ ಬಹುಮಾನ (ದಿವ್ಯಾಂಗ) ಕ್ಕೆ ಅರ್ಹರಿಂದ ಅರ್ಜಿ/ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ. ವಿಜ್ಞಾನ, ತಂತ್ರಜ್ಞಾನ, ಇಂಜಿನಿಯರಿಂಗ್ ಕೃಷಿ ಮತ್ತು ವೈದ್ಯಕೀಯ (ಸ್ಟ್ರೀಮ್) ವಿಷಯಗಳ ಸಂವಹನಕ್ಕೆ ದಿವ್ಯಾಂಗ ವ್ಯಕ್ತಿಯ ಅತ್ಯುತ್ತಮ ಪ್ರಯತ್ನಗಳನ್ನು ಗುರುತಿಸುವ ಉದ್ದೇಶದಿಂದ ಬಹುಮಾನ ನೀಡಲಾಗುತ್ತಿದ್ದು, ಅರ್ಜಿ/ನಾಮ ನಿರ್ದೇಶನವನ್ನು www.kstacademy.in ವೆಬ್ ಸೈಟ್ ಮೂಲಕ ಜನವರಿ 28, 2025 ರೊಳಗೆ ಸಲ್ಲಿಸಬೇಕು. ಆಯ್ಕೆಯಾದ ವ್ಯಕ್ತಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುತ್ತದೆ ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ವೆಬ್‌ಸೈಟ್ www.kstacademy.in ಅನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕರಿಗಳಾದ ಡಾ.ಎ.ಎಂ.ರಮೇಶ್ ತಿಳಿಸಿದ್ದಾರೆ.

## ಉಚಿತ ತಪಾಸಣೆ, ವಿಶೇಷ ಚಿಕಿತ್ಸಾ ಶಿಬಿರ

**ಮೈಸೂರು:** ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವತಿಯಿಂದ 9 ನೇ ಆಯುರ್ವೇದ ದಿನದ ಪ್ರಯುಕ್ತ ಹೊರರೋಗಿ ವಿಭಾಗದ ಸಂಖ್ಯೆ 11 ರಲ್ಲಿ ನವೆಂಬರ್ 25 ರಿಂದ ಡಿಸೆಂಬರ್ 25 ರವರೆಗೆ ಮುಟ್ಟಿನ ತೊಂದರೆಗಳ ಕುರಿತು ಉಚಿತ ಸಲಹೆ ಮತ್ತು ಚಿಕಿತ್ಸೆ ಶಿಬಿರವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸಹ ಪ್ರಾಧ್ಯಾಪಕರು ಮತ್ತು ಪ್ರಸೂತಿ ತಂತ್ರ ಮತ್ತು ಸ್ತ್ರಿ ರೋಗ ವಿಭಾಗದ ಮುಖ್ಯಸ್ಥರಾದ ಡಾ.ಸುನಿತಾ ಸಿದ್ದೇಶ್, ವೈದ್ಯಾಧಿಕಾರಿಗಳಾದ ಡಾ.ಶೈಲಜಾ, ಕನ್ಸಲ್ಟೆಂಟ್ ಸಹಾಯಕ ಪ್ರಾಧ್ಯಾಪಕರಾದ ಡಾ. ನೂರ್ ಫಾತಿಮಾ ಇವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಮ ನಿರ್ದೇಶನ ಆಹ್ವಾನ

**ಬೆಂಗಳೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾಗಿದ್ದು, ವಿಜ್ಞಾನ, ತಂತ್ರಜ್ಞಾನ, ಇಂಜಿನಿಯರಿಂಗ್ ಕೃಷಿ ಮತ್ತು ವಿಷಯಗಳ ಸಂವಹನಕ್ಕೆ ದಿವ್ಯಾಂಗ ವ್ಯಕ್ತಿಯ ಅತ್ಯುತ್ತಮ ಪ್ರಯತ್ನಗಳನ್ನು ಗುರುತಿಸುವ ಉದ್ದೇಶದಿಂದ 2024-25ನೇ ಸಾಲಿನ ಕೆ.ಎಸ್ .ಟಿ.ಎ. ವಾರ್ಷಿಕ ಬಹುಮಾನ (ದಿವ್ಯಾಂಗ)ಕ್ಕೆ ಅರ್ಹರಿಂದ ಅರ್ಜಿ/ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ. ಅರ್ಜಿ/ನಾಮ ನಿರ್ದೇಶನವನ್ನು ಸಲ್ಲಿಸಲು ಜನವರಿ 28, 2025 ಕೊನೆಯ ದಿನಾಂಕವಾಗಿರುತ್ತದೆ. ಆಯ್ಕೆಯಾದ ವ್ಯಕ್ತಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ www.kstacademy.inನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಉಪಚುನಾವಣೆ - ವೇತನ ಸಹಿತ ರಜೆ ಘೋಷಣೆ

**ಬೆಂಗಳೂರು:** ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನಸಭೆ 03 ಕ್ಷೇತ್ರಗಳಾದ 83-ಶಿಗ್ಗಾಂವ್, 95-ಸಂಡೂರು ಹಾಗೂ 185-ಚನ್ನಪಟ್ಟಣ ಕ್ಷೇತ್ರಗಳಿಗೆ ನವೆಂಬರ್ 13 ರಂದು ಉಪ ಚುನಾವಣೆಯನ್ನು ಘೋಷಿಸಿದ್ದು, ಮತದಾನ ನಡೆಯಲಿರುವ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ವೇತನ ಸಹಿತ ರಜೆ ಘೋಷಿಸಲಾಗಿದೆ. ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಜಾ ದಿನಗಳು) ಕಾಯ್ದೆಯ ಕಲಂ 3-ಎ ಹಾಗೂ 1951ರ ಪ್ರಜಾ ಪ್ರತಿನಿಧಿ ಕಾಯ್ದೆಯ ಕಲಂ.135(ಬಿ) ರಡಿ ವೇತನ ಸಹಿತ ರಜೆ ಘೋಷಿಸಲಾಗಿದೆ.

## ಕುಂದು ಕೊರತೆ ಸಭೆ

**ಬೆಂಗಳೂರು:** ನಗರ ಜಿಲ್ಲೆ, ಕರ್ನಾಟಕ ಲೋಕಾಯುಕ್ತ ಕಚೇರಿಯಿಂದ ಹಮ್ಮಿಕೊಳ್ಳಲಾಗಿದ್ದ ಬೆಂಗಳೂರು ನಗರ ಜಿಲ್ಲೆಯ ಯಲಹಂಕ ಮತ್ತು ಬೆಂಗಳೂರು ಪೂರ್ವ ತಾಲ್ಲೂಕುಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರ ಕುಂದು ಕೊರತೆ, ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ಸಭೆಯ ಎರಡನೇ ದಿನವಾದ ಇಂದು ಕರ್ನಾಟಕ ಲೋಕಯುಕ್ತ ಕಾನೂನು ಅಭಿಪ್ರಾಯ-2 ನ ಸಹಾಯಕ ನಿಬಂಧಕರಾದ ಶುಭವೀರ.ಬಿ ಅವರು ಸಾರ್ವಜನಿಕರಿಂದ ಕುಂದು ಕೊರತೆಯ ಅರ್ಜಿಗಳನ್ನು ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯದೀಶರು ಮತ್ತು ಜಿಲ್ಲಾ ಕಾನೂನು ಸೇವ ಪ್ರಾಧಿಕಾರಿದ ಸದಸ್ಯ ಕಾರ್ಯದರ್ಶಿಗಳಾದ ವರದರಾಜು.ಬಿ, ಸಿವಿಲ್ ನ್ಯಾಯದೀಶರು ಮತ್ತು ಉಪಲೋಕಾಯುಕ್ತರ ಅಪ್ತ ಕಾರ್ಯದರ್ಶಿಗಳಾದ ಕಿರಣ್ ಪಿ.ಎಂ ಪಾಟೀಲ್, ಬೆಂಗಳೂರು ಉತ್ತರ ವಿಭಾಗಧಿಕಾರಿಗಳಾದ ಪ್ರಮೋದ್ ಪಾಟೀಲ್ ಹಾಗೂ ಜಿಪಂ ಉಪ ಕಾರ್ಯದರ್ಶಿಗಳಾದ ಅನಿತಾ ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್




## ದೀಪಾವಳಿ ಕೊಡುಗೆ: 699ಕ್ಕೆ ಸಿಗಲಿದೆ ಜಿಯೋ ಭಾರತ್ 4ಜಿ ಫೋನ್

ದೇಶದ ಪ್ರಮುಖ ಉದ್ಯಮಿ ಮುಖೇಶ್ ಅಂಬಾನಿ ಅವರ ಕಂಪನಿ ರಿಲಯನ್ಸ್ ಜಿಯೋ ಈ ದೀಪಾವಳಿಗೆ ಜಿಯೋ ಭಾರತ್ 4ಜಿ ಫೋನ್ಗಳ ಬೆಲೆಯನ್ನು ಶೇ 30 ರಷ್ಟು ಕಡಿತಗೊಳಿಸಿದೆ. ಈ ಸೀಮಿತ ಅವಧಿಯ ಕೊಡುಗೆಯ ಅಡಿಯಲ್ಲಿ, 999 ನ ಜಿಯೋಭಾರತ್ ಮೊಬೈಲ್ ಫೋನ್ ಈಗ 699ರ ವಿಶೇಷ ಬೆಲೆಗೆ ಲಭ್ಯವಿದೆ. ಜಿಯೋಭಾರತ್ ಫೋನ್ ಅನ್ನು 123 ರೂ.ಗೆ ರೀಚಾರ್ಜ್ ಮಾಡಬಹುದು. ಈ ಮಾಸಿಕ ಟ್ಯಾರಿಫ್ ಯೋಜನೆಯಲ್ಲಿ ಅನಿಯಮಿತ ಉಚಿತ ಧ್ವನಿ ಕರೆಗಳು, 14 ಜಿಬಿ ಡೇಟಾ ಸಹ ಒಳಗೊಂಡಿದೆ. ಜಿಯೋದ ಮಾಸಿಕ 123ಗಳ ರೀಚಾರ್ಜ್ ಯೋಜನೆ ಇತರ ಆಪರೇಟರ್ ಗಳಿಗಿಂತ 40 ಪ್ರತಿಶತ ಅಗ್ಗವಾಗಿದೆ. ಏಕೆಂದರೆ ಇತರ ನೆಟ್ವರ್ಕ್ಗಳ ಫೀಚರ್ ಫೋನ್ಗಳ ಮಾಸಿಕ ರೀಚಾರ್ಜ್ ಕನಿಷ್ಠ 199 ಇದೆ. ಇದು ಜಿಯೋಗಿಂತ 76 ರೂಪಾಯಿ ಹೆಚ್ಚು ದುಬಾರಿಯಾಗಿದೆ. ಅಂದರೆ, ಜಿಯೋ ಗ್ರಾಹಕರಿಗೆ ಪ್ರತಿ ರೀಚಾರ್ಜ್ ನಲ್ಲಿ ತಿಂಗಳಿಗೆ ? 76 ಉಳಿಯಲಿದೆ. ತಿಂಗಳಿಗೆ 76 ರಂತೆ 9 ತಿಂಗಳಿಗೆ ಉಳಿತಾಯ ಆಗಿವ ಮೊತ್ತವು ಫೋನ್ ಬೆಲೆಗೆ ಸಮನಾಗಲಿದೆ. ಅಂದರೆ ಜಿಯೋ ಭಾರತ್ ಫೋನ್ ಉಚಿತವಾಗಿ ಸಿಕ್ಕಂತೆ ಆಗಲಿದೆ. 2ಜಿ ಯಿಂದ 4ಜಿ ಗೆ ಅಪ್ಗ್ರೇಡ್ ಆಗುವ ಸುವರ್ಣ ಅವಕಾಶವನ್ನು ಜಿಯೋ ನೀಡುತ್ತಿದೆ. 455 ಕ್ಕೂ ಹೆಚ್ಚು ಲೈವ್ ಟಿವಿ ಚಾನೆಲ್ಗಳು, ಚಲನಚಿತ್ರ ಪ್ರೀಮಿಯರ್ ಗಳು ಮತ್ತು ಹೊಸ ಚಲನಚಿತ್ರಗಳು, ವೀಡಿಯೊ ಶೋಗಳು, ಲೈವ್ ಸ್ಪೋರ್ಟ್ಸ್ ಕಾರ್ಯಕ್ರಮಗಳು, ಜಿಯೋ ಸಿನೆಮಾ ಮುಖ್ಯಾಂಶಗಳು, ಡಿಜಿಟಲ್ ಪಾವತಿಗಳು, ಕ್ಯೂಆರ್ ಕೋಡ್ ಸ್ಕ್ಯಾನ್ಗಳು ಜಿಯೋಭಾರತ್ 4 ಜಿ ಫೋನ್ನಲ್ಲಿ ಲಭ್ಯವಿದೆ. ಜಿಯೋಪೇ ಮತ್ತು ಜಿಯೋಚಾಟ್ ನಂತಹ ಪ್ರಿಲೋಡೆಡ್ ಅಪ್ಲಿಕೇಶನ್ ಗಳು ಸಹ ಈ ಫೋನ್ನಲ್ಲಿ ಲಭ್ಯವಿರುತ್ತವೆ. ಹತ್ತಿರದ ಅಂಗಡಿಗಳ ಹೊರತಾಗಿ, ಫೋನ್ ಅನ್ನು ಜಿಯೋಮಾರ್ಟ್ ಅಥವಾ ಅಮೆಜಾನ್ನಿಂದ ಸಹ ಖರೀದಿಸಬಹುದು.

## ಹಸಿ ಮೆಣಸಿನಕಾಯಿ ಚಟ್ನಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಹಸಿ ಮೆಣಸಿನ ಕಾಯಿ 20, ಬೆಳ್ಳುಳ್ಳಿ 2, ಜೀರಿಗೆ 2 ಚಮಚ, ಹುಣಸೆ ಹಣ್ಣು 50 ಗ್ರಾಂ, ಕರಿಬೇವಿನ ಸೊಪ್ಪು 1/4 ಕಪ್, ಕೊತ್ತಂಬರಿ ಸೊಪ್ಪು ಸ್ವಲ್ಪ, ಉಪ್ಪು ರುಚಿಗೆ ತಕ್ಕಷ್ಟು ಹಾಗೂ ಅಡುಗೆ ಎಣ್ಣೆ.

### ಮಾಡುವ ವಿಧಾನ

ತೊಳೆದ ಹಸಿ ಮೆಣಸಿನಕಾಯಿಯನ್ನ ಬಟ್ಟೆಯಲ್ಲಿ ಒರೆಸಿ ಬಳಿಕ ಚಾಕುವಿನಿಂದ ಸ್ವಲ್ಪ ಕೊಯ್ದುಕೊಳ್ಳಿ (ಮಧ್ಯದಲ್ಲಿ ಸೀಳಿದ್ರೆ ಸಾಕು). ಒಂದು ಪಾತ್ರೆಯಲ್ಲಿ ಎರಡು ದೊಡ್ಡ ಚಮಚ ಎಣ್ಣೆಯನ್ನ ಹಾಕಿ. ಈ ಎಣ್ಣೆ ಬಿಸಿಯಾಗುತ್ತಿದ್ದಂತೆಯೇ ಹಸಿ ಮೆಣಸಿನ ಕಾಯಿಯನ್ನ ಹಾಕಿ ಹುರಿದುಕೊಳ್ಳಿ. ಇದರಿಂದ ಕಾರದ ಅಂಶ ಸ್ವಲ್ಪ ಕಡಿಮೆಯಾಗಲಿದೆ. ಇದೀಗ ಜೀರಿಗೆ ಹಾಗೂ ಬೆಳ್ಳುಳ್ಳಿಯನ್ನ ಪಾತ್ರೆಗೆ ಹಾಕಿ. ಇವಿಷ್ಟು ಚೆನ್ನಾಗಿ ಹುರಿದು ಆದ ಬಳಿಕ ಇದಕ್ಕೆ ಹುಣಸೆ ಹಣ್ಣು, ಕೊತ್ತಂಬರಿ ಸೊಪ್ಪು ಹಾಗೂ ಕರಿಬೇವಿನಸೊಪ್ಪನ್ನ ಹಾಕಿಕೊಳ್ಳಿ. ನಿಮಗೆ ಬೇಕು ಅಂದರೆ ಸ್ವಲ್ಪ ಬೆಲ್ಲವನ್ನೂ ಹಾಕಬಹುದು. ಈ ಮಿಶ್ರಣ ತಣ್ಣಗಾದ ಮೇಲೆ ಇದಕ್ಕೆ ಉಪ್ಪನ್ನ ಹಾಕಿ ಈ ಎಲ್ಲ ಮಿಶ್ರಣವನ್ನ ಮಿಕ್ಸಿ ಜಾರಿನಲ್ಲಿ ಗ್ರೈಂಡ್ ಮಾಡಿ. ಈ ಖಾರದ ಚಟ್ನಿ ರೊಟ್ಟಿ ಹಾಗೂ ಚಪಾತಿಗೆ ಸಖತ್ ಆಗಿರುತ್ತೆ . ಇದನ್ನ ಫ್ರಿಜ್ನಲ್ಲಿ ನೀವು ಹಲವು ದಿನಗಳವರೆಗೆ ಶೇಖರಿಸಿ ಇಡಬಹುದಾಗಿದೆ.

## ಸಲ್ಮಾನ್ ಖಾನ್ ಜೊತೆ ಗುಟ್ಟಾಗಿ ಮದುವೆ



ಸಲ್ಮಾನ್ ಖಾನ್ ಮತ್ತು ಐಶ್ವರ್ಯಾ ರೈ ಅವರ ಸಂಬಂಧ ಸಾಕಷ್ಟು ಸುದ್ದಿ ಮಾಡಿದ ಸಮಯವಿತ್ತು. ಅವರ ಪ್ರೇಮಕಥೆಯು 1999 ರಲ್ಲಿ 'ಹಮ್ ದಿಲ್ ದೇ ಚುಕೇ ಸನಮ್' ಚಿತ್ರದ ಸೆಟ್ನಲ್ಲಿ ಪ್ರಾರಂಭವಾಯಿತು ಮತ್ತು ಅವರು 2001 ರಲ್ಲಿ ಬೇರ್ಪಟ್ಟರು. ಆದರೆ ಇವರಿಬ್ಬರ ಸಂಬಂಧದ ಸಂದರ್ಭದಲ್ಲಿ ಮಾಧ್ಯಮಗಳಲ್ಲಿ ಹಲವು ಸುದ್ದಿಗಳು ಪ್ರಕಟವಾಗಿದ್ದು ಅದರಲ್ಲಿ ಸಲ್ಮಾನ್ ಮತ್ತು ಐಶ್ವರ್ಯಾ ರಹಸ್ಯ ವಿವಾಹವೂ ಒಂದು. ಮದುವೆಯ ನಂತರ ಸಲ್ಮಾನ್ ಮತ್ತು ಐಶ್ವರ್ಯಾ ಹನಿಮೂನ್ಗಾಗಿ ನ್ಯೂಯಾರ್ಕ್ಗೆ ಹೋಗಿದ್ದರು ಎಂದು ಹೇಳಲಾಗಿದೆ. ಈ ಸುದ್ದಿಯ ಹಿಂದಿನ ಸತ್ಯವನ್ನು ಸ್ವತಃ ಐಶ್ವರ್ಯಾ ಹೇಳಿದ್ದಾರೆ. ಸಲ್ಮಾನ್ ಖಾನ್ ಮತ್ತು ಐಶ್ವರ್ಯಾ ರೈ ರಹಸ್ಯವಾಗಿ ಮದುವೆಯಾಗಿದ್ದಾರೆ ಎಂಬ ವದಂತಿ ಚಿತ್ರರಂಗದಲ್ಲಿ ಹರಡಿತ್ತು. ಇದನ್ನು ಇಬ್ಬರೂ ಖಚಿತಪಡಿಸಿಲ್ಲ, ಆದರೆ ಇಬ್ಬರೂ ಮದುವೆಯಾಗಿದ್ದಾರೆ ಎಂದು ಹೇಳಲಾಗುತ್ತದೆ. ಈ ನಿಕಾಹ್ ಸಮಾರಂಭವು ಲೋನಾವಾಲಾದ ಬಂಗಲೆಯಲ್ಲಿ ನಡೆಯಿತು ಮತ್ತು ಇದಕ್ಕಾಗಿ ಮುಂಬೈನಿಂದ ಖಾಜಿಯನ್ನು ಕರೆಸಲಾಯಿತು. ಐಶ್ವರ್ಯಾ ಸಲ್ಮಾನ್ ಅವರನ್ನು ಮದುವೆಯಾಗಲು ಧರ್ಮವನ್ನು ಬದಲಾಯಿಸಿದ್ದಾರೆ ಎಂಬ ಹೇಳಿಕೆಯೂ ಇತ್ತು.. ಮಾಧ್ಯಮ ವರದಿಗಳ ಪ್ರಕಾರ, ಸಲ್ಮಾನ್ ಮತ್ತು ಐಶ್ ಅವರ ಪೋಷಕರು ನಿಕಾಹ್ ಸಮಾರಂಭದಲ್ಲಿ ಭಾಗವಹಿಸಲಿಲ್ಲ. ಇಬ್ಬರೂ ಮದುವೆಯಾಗಿ ನಂತರ ತಮ್ಮ ಹನಿಮೂನ್ಗಾಗಿ ನ್ಯೂಯಾರ್ಕ್ಗೆ ತೆರಳಿದ್ದರು ಎಂದು ವರದಿಯಾಗಿದೆ. ಎಲ್ಲಾ ವದಂತಿಗಳ ನಡುವೆ ಸಲ್ಮಾನ್ ಮೌನವಾಗಿದ್ದರು, ಆದರೆ ಐಶ್ವರ್ಯಾ ಪ್ರತಿಕ್ರಿಯಿಸಿ ಸುದ್ದಿಯನ್ನು ಸಂಪೂರ್ಣವಾಗಿ ನಿರಾಕರಿಸಿದ್ದರು. ಸಂಭಾಷಣೆಯ ವೇಳೆ ಐಶ್ವರ್ಯಾ ರೈ ಸಲ್ಮಾನ್ ಜೊತೆಗಿನ ಮದುವೆಯ ಸುದ್ದಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು. ಸತ್ಯವನ್ನು ಮರೆಮಾಚುವ ಅವಶ್ಯಕತೆ ನನಗಿಲ್ಲ.. ಎಂದು ಹೇಳಿದ್ದರು. ಈ ರೀತಿ ಆಗಿದ್ದರೆ ಇಡೀ ಇಂಡಸ್ಟ್ರಿಗೆ ಗೊತ್ತಾಗುತ್ತಿರಲಿಲ್ಲವೇನೋ.. ಇಂಡಸ್ಟ್ರಿ ತುಂಬಾ ಚಿಕ್ಕದು.. ಅಮ್ಮನ ಆಯಕ್ಸಿಡೆಂಟ್ ಆದ ಮೇಲೆ ನನ್ನ ಫ್ಯಾಮಿಲಿಗೆ ನೀಡೋಕೆ ಸಮಯ ಇರಲಿಲ್ಲ.. ನಾನು ಮದುವೆಯಾಗುವುದಾದರೇ ಹೆಮ್ಮೆಯಿಂದ ಘೋಷಿಸುತ್ತೇನೆ, ಇದೆಲ್ಲವೂ ಅಸಂಬದ್ಧವಾಗಿದೆ? ಎಂದು ಹೇಳಿದ್ದರು.. ಸಂದರ್ಶನವೊಂದರಲ್ಲಿ ಐಶ್ವರ್ಯಾ ರೈ ಸಲ್ಮಾನ್ ಖಾನ್ ಜೊತೆಗಿನ ಬ್ರೇಕ್ ಅಪ್ ಬಗ್ಗೆ ಹೇಳಿದ್ದರು. ಅವನೊಂದಿಗೆ ಸಂಬಂಧದಲ್ಲಿದ್ದಾಗ ಸಾಕಷ್ಟು ತೊಂದರೆಗಳನ್ನು ಎದುರಿಸಬೇಕಾಯಿತು.. ಮದ್ಯ ಸೇವಿಸಿದ ನಂತರ ಸಲ್ಮಾನ್ ಅವರ ಅನುಚಿತ ವರ್ತನೆಯಿಂದ ತನಗೆ ನೋವಾಗಿದೆ. ಇದು ತನ್ನ ಜೀವನದ ಅತ್ಯಂತ ಕೆಟ್ಟ ಹಂತ ಎಂದು ಬಣ್ಣಿಸಿರುವ ಆಕೆ ಮೌಖಿಕ, ದೈಹಿಕ ಮತ್ತು ಭಾವನಾತ್ಮಕ ಹಿಂಸೆ, ದ್ರೋಹ ಮತ್ತು ಕೋಪವನ್ನು ಎದುರಿಸಬೇಕಾಗಿತ್ತು ಮತ್ತು ಈ ಎಲ್ಲ ವಿಷಯಗಳಿಂದಾಗಿ ಸಲ್ಮಾನ್ ಜೊತೆಗಿನ ಸಂಬಂಧವನ್ನು ಕೊನೆಗೊಳಿಸಲು ನಿರ್ಧರಿಸಿದೆ ಎಂದು ಹೇಳಿದ್ದಾರೆ. ನಂತರ ಐಶ್ವರ್ಯಾ ಅವರ ಹೆಸರು ವಿವೇಕ್ ಒಬೆರಾಯ್ ಜೊತೆಗೆ ಸೇರಿಕೊಂಡಿತು ಮತ್ತು ನಂತರ ಅವರು ಅಭಿಷೇಕ್ ಬಚ್ಚನ್ ಅವರನ್ನು ವಿವಾಹವಾದರು.

## ತೂಕ ಇಳಿಬೇಕೆಂದ್ರೆ ಫಾಲೋ ಮಾಡಿ ಈ ಟಿಪ್ಸ್



### ಹೆಲ್ತ್ ಟಿಪ್ಸ್

ಬೇಗ ತೂಕ ಇಳಿಸಿಕೊಳ್ಳಲು ಯಾವುದು ಸುಲಭ ಉಪಾಯ ಎಂಬುದು ಎಲ್ಲರ ಪ್ರಶ್ನೆ. ಆದಷ್ಟು ಬೇಗ ತೂಕ ಇಳಿಸಿಕೊಳ್ಳಲು ಎಲ್ಲರೂ ಬಯಸ್ತಾರೆ. ಅದಕ್ಕೆ ಕಸರತ್ತು, ಡಯಟ್ ಮಾಡ್ತಾರೆ ನಿಜ. ಆದ್ರೆ ಯಾವುದನ್ನೂ ನಿಯಮಿತವಾಗಿ, ಸರಿಯಾಗಿ ಮಾಡುವುದಿಲ್ಲ. ಹಾಗಾಗಿ ತೂಕ ಇಳಿಯೋದಿಲ್ಲ.

ತೂಕ ಇಳಿಸಲು ಕೆಲ ಟಿಪ್ಸ್ ಗಳನ್ನು ಸರಿಯಾಗಿ ಅನುಸರಿಸಬೇಕಾಗುತ್ತದೆ. ಸಮತೋಲನ ಆಹಾರದಲ್ಲಿ ಪ್ರೋಟೀನ್ ಮುಖ್ಯ ಪಾತ್ರವಹಿಸುತ್ತದೆ. ಪ್ರೋಟೀನ್ ತೂಕ ಹೆಚ್ಚಿಸಲು ಹಾಗೂ ತೂಕ ಇಳಿಸಲು ಎರಡಕ್ಕೂ ನೆರವಾಗುತ್ತದೆ. ಪ್ರೋಟೀನ್ ಯುಕ್ತ ಆಹಾರ ಸೇವನೆ ಮಾಡುವುದ್ರಿಂದ ನಿಮಗೆ ಬೇಗ ಹಸಿವಾಗುವುದಿಲ್ಲ. ಪ್ರೋಟೀನ್ ಸೇವನೆಯಿಂದ ದೇಹದಲ್ಲಿರುವ ಅನವಶ್ಯಕ ಕೊಬ್ಬನ್ನು ಹೊರ ಹಾಕಬಹುದು. ತೂಕ ಇಳಿಸಲು ಬಯಸುವವರು ಸರಿ ಪ್ರಮಾಣದಲ್ಲಿ ಪ್ರೋಟೀನ್ ಆಹಾರವನ್ನು ಸೇವನೆ ಮಾಡಿ. ನಾಲ್ಕು ದಿನ ಮಾಡಿ ಬಿಡಬೇಡಿ. ನಿಯಮಿತವಾಗಿ ಮಾಡುತ್ತ ಬಂದ್ರೆ ಪರಿಣಾಮ ಕಾಣಬಹುದು.

ನಿಮ್ಮ ದೇಹದಲ್ಲಿ ಮೆಟಾಬಾಲಿಸಂ ಪ್ರಮಾಣ ಸರಿಯಾಗಿದ್ದರೆ ನಿಮ್ಮ ತೂಕ ಹೆಚ್ಚಾಗುವುದಿಲ್ಲ. ಗ್ರೀನ್ ಟೀ ಸೇವನೆ, ರಾತ್ರಿ ಸರಿಯಾದ ನಿದ್ರೆ, ಹೆಚ್ಚಿನ ನೀರು ಸೇವನೆ ಮಾಡುತ್ತ ಬಂದ್ರೆ ಕೊಬ್ಬು ಕಡಿಮೆಯಾಗುತ್ತ ಬರುತ್ತದೆ. ಇದ್ರಿಂದ ಸ್ವಾಭಾವಿಕವಾಗಿ ದೇಹದ ತೂಕ ಇಳಿಯುತ್ತ ಬರುತ್ತದೆ. ಹಾಗಾಗಿ ಮೆಟಾಬಾಲಿಸಂ ಪ್ರಮಾಣವನ್ನು ಸರಿಯಾಗಿಡುವ ಆಹಾರವನ್ನು ಹೆಚ್ಚಿನ ಪ್ರಮಾಣದಲ್ಲಿ ಸೇವಿಸುತ್ತ ಬನ್ನಿ.

ಆಹಾರದಲ್ಲಿ ಸಕ್ಕರೆ, ಪಿಷ್ಟ ಹಾಗೂ ಕಾರ್ಬೋಹೈಡ್ರೇಟ್ ಪ್ರಮಾಣವನ್ನು ಕಡಿಮೆ ಪ್ರಮಾಣದಲ್ಲಿ ಸೇವನೆ ಮಾಡಿ. ಸ್ಥೂಲಕಾಯದವರು ಸಕ್ಕರೆ, ಸಿಹಿ ಪದಾರ್ಥ, ಪಿಷ್ಟ ಹಾಗೂ ಕಾರ್ಬೋಹೈಡ್ರೇಟ್ ಇರುವ ಆಹಾರವನ್ನು ಕಡಿಮೆ ಪ್ರಮಾಣದಲ್ಲಿ ಸೇವನೆ ಮಾಡಬೇಕು. ಇದರಿಂದ ಹಸಿವನ್ನು ಕಡಿಮೆ ಮಾಡುವ ಜೊತೆಗೆ ಕ್ಯಾಲೋರಿ ಪ್ರಮಾಣ ಕೂಡ ಕಡಿಮೆಯಾಗುತ್ತದೆ.

ಆಹಾರ ಹಾಗೂ ಜೀವನ ಶೈಲಿಯಲ್ಲಿ ಬದಲಾವಣೆ ಮಾಡಿಕೊಳ್ಳುವುದ್ರಿಂದ ತೂಕ ಇಳಿಸಿಕೊಳ್ಳುವುದು ಸಾಧ್ಯ. ಆದ್ರೆ ವ್ಯಾಯಾಮ ಮಾಡುವವರು ನಿಯಂತ್ರಣ ತಪ್ಪಿ ಆಹಾರ ಸೇವನೆ ಮಾಡಿದ್ರೆ, ತೂಕ ಇಳಿಯುವ ಬದಲು ಹೆಚ್ಚಾಗುತ್ತದೆ.

## ಗೋವಾ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ವೆಂಕ್ಯಾ

ಗೋವಾ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಕನ್ನಡದ 'ವೆಂಕ್ಯಾ' ಸಿನಿಮಾ ಆಯ್ಕೆಯಾಗಿದೆ. ಗೋವಾ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವು ನವೆಂಬರ್ 20ರಿಂದ 28ರ ತನಕ ನಡೆಯಲಿದೆ. ಗೋವಾದ ಪಣಜಿಯಲ್ಲಿ ನಡೆಯುವ ಚಿತ್ರೋತ್ಸವದಲ್ಲಿ ದೇಶ ವಿದೇಶದ ಕಲಾವಿದರು ಭಾಗಿಯಾಗಲಿದ್ದಾರೆ. ಜಾಗತಿಕ ಮಟ್ಟದಲ್ಲಿ ಮನ್ನಣೆ ಹೊಂದಿರುವ ಈ ಸಿನಿಮೋತ್ಸವದಲ್ಲಿ 'ವೆಂಕ್ಯಾ' ಪ್ರದರ್ಶನ ಕಾಣಲಿವೆ.

'ಡೊಳ್ಳು' ಸಿನಿಮಾ ಮೂಲಕ ನಿರ್ಮಾಣಕ್ಕಿಳಿದು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರಶಸ್ತಿ ಬಾಚಿಕೊಂಡಿದ್ದ ಪವನ್ ಒಡೆಯರ್ ಹಾಗೂ ಸಾಗರ್ ಪುರಾಣಿಕ್ ಕಾಂಬಿನೇಷನ್‌ನಲ್ಲಿ 'ವೆಂಕ್ಯಾ' ಚಿತ್ರ ಮೂಡಿ ಬಂದಿದೆ. 'ವೆಂಕ್ಯಾ' ಸಿನಿಮಾಗೆ ಸಾಗರ್ ಪುರಾಣಿಕ್ ನಿರ್ದೇಶನದ ಜೊತೆಗೆ ನಾಯಕನಾಗಿಯೂ ಬಣ್ಣ ಹಚ್ಚಿದ್ದಾರೆ. ಚಿತ್ರದಲ್ಲಿ ಸಾಗರ್ ಗೆ ಜೋಡಿಯಾಗಿ ಶಿಮ್ಲಾದ ರೂಪಾಲಿ ಸೂದ್ ಅಭಿನಯಿಸಿದ್ದಾರೆ.



ಉತ್ತರ ಕರ್ನಾಟಕ ಕಥೆಯಾಧಾರಿಸಿತ 'ವೆಂಕ್ಯಾ' ಸಿನಿಮಾವನ್ನು ಅಪೇಕ್ಷಾ ಒಡೆಯರ್ ಮತ್ತು ಪವನ್ ಒಡೆಯರ್ ನಿರ್ಮಾಣ ಮಾಡುತ್ತಿದ್ದಾ. ಪವನ್ ಸ್ನೇಹಿತರಾದ ಅವಿನಾಶ್ ವಿ ರೈ ಮತ್ತು ಮೋಹನ್ ಲಾಲ್ ಮೆನನ್ ಸಹ ನಿರ್ಮಾಣವಿರಲಿದೆ.

ಗೋವಾ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ 'ಭಾರತೀಯ ಪನೋರಮಾ' ವಿಭಾಗ ಪ್ರಮುಖವಾಗಿದೆ. ಇದರಲ್ಲಿ 25 ಕಥಾಚಿತ್ರ ಹಾಗೂ 20 ನಾನ್-ಫೀಚರ್ ಸಿನಿಮಾಗಳು ಪ್ರದರ್ಶನಕ್ಕೆ ಆಯ್ಕೆ ಆಗಿದೆ. ಇಂಡಿಯನ್ ಪನೋರಮಾ ವಿಭಾಗದ ಆರಂಭಿಕ ಸಿನಿಮಾವಾಗಿ ಬಾಲಿವುಡ್‌ನ 'ಸ್ವಾತಂತ್ರ್ಯ ವೀರ್ ಸಾವರ್ಕರ್' ಸಿನಿಮಾ ಪ್ರದರ್ಶನ ಆಗಲಿದೆ. ಎರಡನೇ ಸಿನಿಮಾವಾಗಿ ಕನ್ನಡದ 'ಕೆರೆಬೇಟೆ' ಆಯ್ಕೆ ಆಗಿದೆ. ಆಯ್ಕೆದಾದ ಸಿನಿಮಾಗಳ ಪಟ್ಟಿಯ 3ನೇ ಸ್ಥಾನದಲ್ಲಿ ಕನ್ನಡದ 'ವೆಂಕ್ಯಾ' ಚಿತ್ರವಿದೆ. ಭಾರತದ ಜನಪ್ರಿಯ ಸಿನಿಮಾಗಳನ್ನು ಕೂಡ ಆಯ್ಕೆ ಮಾಡಲಾಗಿದೆ. ಮಲಯಾಳ, ತಮಿಳು, ಮರಾಠಿ, ಬೆಂಗಾಲಿ, ತೆಲುಗು ಭಾಷೆಯ ಸಿನಿಮಾಗಳು ಪ್ರದರ್ಶನ ಕಾಣಲಿವೆ.

## ಚಳಿಯಲ್ಲೂ ಮುಖ ನಳನಳಿಸಲು ಸಲಹೆ

### ಬ್ಯೂಟಿ ಟಿಪ್ಸ್



ಚಳಿಗಾಲದಲ್ಲಿ ಸ್ಕಿನ್ ಡ್ರೈ ಆಗುವುದರಿಂದ ಡ್ರೈ ಸ್ಕಿನ್ ಅವರ ಮುಖದ ಅಂದ ಇನ್ನಷ್ಟು ಕೆಡುತ್ತದೆ. ಆದ ಕಾರಣ ಡ್ರೈ ಸ್ಕಿನ್ ನವರು ಚಳಿಗಾಲದಲ್ಲಿ ತಮ್ಮಸ್ಕಿನ್ ನನ್ನು ಕಾಪಾಡಿಕೊಳ್ಳಲು ಈ ಟಿಪ್ಸ್ ಫಾಲೋ ಮಾಡಿ. ಕಾಲು ಒಡೆಯುವುದು, ಮುಖ, ಮೈ ಚರ್ಮದಲ್ಲಿ ಉರಿ ಕಾಣಿಸಿಕೊಳ್ಳುವುದು. ತುರಿಕೆಯಂತಹ ಸಮಸ್ಯೆಗಳು ಕಾಣಿಸಿಕೊಳ್ಳುತ್ತದೆ. ಚಳಿಗಾಲದಲ್ಲಿ ಮುಖದ ಚರ್ಮವನ್ನು ಕಾಂತಿಯುತಗೊಳಿಸುವುದಕ್ಕೆ ಇಲ್ಲಿದೆ ನೋಡಿ ಟಿಪ್ಸ್. ಆಲಿವ್ ಆಯಿಲ್ ನೈಸರ್ಗಿಕವಾದ ಕ್ಲೆನ್ಸರ್ ರೀತಿ ಕೆಲಸ ಮಾಡುತ್ತದೆ. ಡ್ರೈ ಸ್ಕಿನ್ ಗೆ ಇದು ಒಳ್ಳೆಯ ಮಾಯಿಶ್ಚರೈಸರ್ ಕೂಡ ಹೌದು. ಸ್ವಲ್ಪ ಆಲಿವ್ ಆಯಿಲ್ ಅನ್ನು ತೆಗೆದುಕೊಂಡು ಮುಖಕ್ಕೆ ಚೆನ್ನಾಗಿ ಮಸಾಜ್ ಮಾಡಿ. ನಂತರ ಬಿಸಿನೀರಲ್ಲಿಒಂದು ಟವೆಲ್ ಅನ್ನು ಅದ್ದಿ ಈ ಬಟ್ಟೆಯ ಶಾಖವನ್ನು ಮುಖಕ್ಕೆ ಕೊಟ್ಟುಕೊಳ್ಳಿ. ಬಟ್ಟೆ ತಣ್ಣಗಾಗುವವರೆಗೂ ಮುಖದ ಮೇಲೆಯೇ ಇಟ್ಟುಕೊಳ್ಳಿ. ಬೆಣ್ಣೆಹಣ್ಣು ಕೂಡ ಡ್ರೈ ಸ್ಕಿನ್ ಗೆ ಹೇಳಿಮಾಡಿಸಿದ ಒಂದು ಮಾಯಿಶ್ಚರೈಸರ್. ಅರ್ಧ ಬೆಣ್ಣೆಹಣ್ಣಿನ ಮಿಶ್ರಣ ತೆಗೆದುಕೊಳ್ಳಿ, ಅದಕ್ಕೆ 1 ಟೀ ಸ್ಪೂನ್ ಆಲಿವ್ ಆಯಿಲ್ ಹಾಕಿ 1 ಟೇಬಲ್ ಸ್ಪೂನ್ ಜೇನುತುಪ್ಪ ಹಾಕಿ. ಚೆನ್ನಾಗಿ ಮಿಶ್ರಣ ಮಾಡಿ ಮುಖಕ್ಕೆ ಹಚ್ಚಿಕೊಳ್ಳಿ. 20 ನಿಮಿಷ ಬಿಟ್ಟು ಮುಖ ತೊಳೆಯಿರಿ. ವಾರದಲ್ಲಿ ಎರಡು ಬಾರಿ ಮಾಡಿ. ಸ್ನಾನ ಮಾಡುವ ನೀರಿಗೆ 1 ಕಪ್ ಓಟ್ ಮೀಲ್ ಹಾಕಿ. 10 ನಿಮಿಷ ಬಿಟ್ಟು ಈ ನೀರಿನಿಂದ ಸ್ನಾನ ಮಾಡಿದರೆ ಮೈ ಕೈಯಲ್ಲಿ ಉಂಟಾಗುವ ತುರಿಕೆ ಹಾಗೂ ಉರಿಯನ್ನು ಇದು ಶಮನ ಮಾಡುತ್ತದೆ. ಹಾಲು ಕೂಡ ಮುಖದ ಕಾಂತಿ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಹಾಲಿನಲ್ಲಿ ಲ್ಯಾಕ್ಟಿಕ್ ಆಸ್ಯಿಡ್ ಇರುತ್ತದೆ. ಚಳಿಗಾಲದಲ್ಲಿ ಒಂದು ಹತ್ತಿಯ ಉಂಡೆ ತೆಗೆದುಕೊಂಡು ಹಾಲಿಗೆ ಅದ್ದಿ ಆಗಾಗ ಮುಖಕ್ಕೆ ಹಚ್ಚುತ್ತಾ ಇರಿ ಇದರಿಂದ ಸ್ಕಿನ್ ಡ್ರೈ ಕಡಿಮೆಯಾಗಿ ಕಾಂತಿಯುತವಾಗುವುದು.

## ಬಿಲ್ಡ್ ವಿತ್ ಎಐ ಸಮಾವೇಶದಲ್ಲಿ ಭಾರತದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಎಐ ಬಳಕೆ ಹೆಚ್ಚುತ್ತಿರುವುದನ್ನು ಘೋಷಿಸಿದ ಮೆಟಾ



ಭಾರತದ ಶಿಕ್ಷಣ, ಉದ್ಯಮ, ಕೃಷಿ, ಕೌಶಲ್ಯ ಅಭಿವೃದ್ಧಿ ಕ್ಷೇತ್ರಗಳಲ್ಲಿ ಎಐ ಬಳಕೆ ಬಹಳ ಹೆಚ್ಚಿದೆ. ಎಐ ಕ್ರಾಂತಿಯನ್ನು ಮುನ್ನಡೆಸುವ ವಿಚಾರದಲ್ಲಿ ಭಾರತವು ಅಪಾರ ಸಾಮರ್ಥ್ಯವನ್ನು ಹೊಂದಿದ್ದು, ವಿವಿಧ ಕ್ಷೇತ್ರಗಳ ಅಭಿವೃದ್ಧಿಯಲ್ಲಿ ಎಐ ಮಹತ್ವದ ಪಾತ್ರ ವಹಿಸಲಿದೆ ಎಂದು ಮೆಟಾ ಸಂಸ್ಥೆ ಘೋಷಿಸಿದೆ.

ಬೆಂಗಳೂರಿನಲ್ಲಿ ನಡೆದ ಬಿಲ್ಡ್ ವಿತ್ ಎಐ ಸಮಾವೇಶದಲ್ಲಿ ಎಐ ಕುರಿತು ಚರ್ಚೆ, ಸಂವಾದಗಳು ನಡೆದುವು. ಈ ಸಮಾವೇಶದಲ್ಲಿ ಭಾಗವಹಿಸಿದ್ದ ಮೆಟಾ ಸಂಸ್ಥೆಯ ಉಪಾಧ್ಯಕ್ಷ ಮತ್ತು ಪ್ರಧಾನ ಎಐ ವಿಜ್ಞಾನಿ ಯಾನ್ ಲೆಕುನ್ ಅವರು, ''ಎಐ ಭವಿಷ್ಯವನ್ನು ರೂಪಿಸುವ ವಿಚಾರದಲ್ಲಿ ಭಾರತವು ಅಗಾಧ ಸಾಮರ್ಥ್ಯವನ್ನು ಹೊಂದಿದೆ. ಎಐ ಉತ್ಪನ್ನ ಅಭಿವೃದ್ಧಿಯಲ್ಲಿ ಮಾತ್ರವೇ ಅಲ್ಲ, ಜೊತೆಗೆ ಅತ್ಯಾಧುನಿಕ ಸಂಶೋಧನೆಯಲ್ಲಿಯೂ ಸಹ ಮುಂಚೂಣಿಯಲ್ಲಿದೆ. ದೇಶದ ಪ್ರತಿಭಾವಂತರ ತಂಡ ಮತ್ತು ಅತ್ಯಾಧುನಿಕ ಟೆಕ್ ಪರಿಸರ ವ್ಯವಸ್ಥೆಯ ಮೂಲಕ ಭಾರತವು ಈಗಾಗಲೇ ಎಐ ಕ್ಷೇತ್ರದಲ್ಲಿ ಗಮನಾರ್ಹ ದಾಪುಗಾಲು ಇಡುತ್ತಿದೆ. ವಿವಿಧ ರೀತಿಯ ಜನರಿಗೆ ಸೇವೆ ಸಲ್ಲಿಸುವ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವ ವಿಚಾರದಲ್ಲಿ ಭಾರತದ ಕೊಡುಗೆ ಮಹತ್ವದ್ದಾಗಿದೆ ಎಂದು ಹೇಳಿದರು.

ಮೆಟಾ ಸಂಸ್ಥೆಯು ಕೃಷಿ, ಶಿಕ್ಷಣ, ಕಾನೂನು ಕ್ಷೇತ್ರಗಳಲ್ಲಿ ನೆರವಾಗುವ ಎಐ ಉತ್ಪನ್ನಗಳನ್ನು ಅಭಿವೃದ್ಧಿ ಪಡಿಸಲು ಹಲವಾರು ಸ್ಟಾರ್ಟಪ್ ಗಳಿಗೆ ನೆರವು ನೀಡಿದೆ. ಜೊತೆಗೆ ಸರ್ಕಾರಿ ಕೆಲಸಗಳು ಉತ್ತಮವಾಗಿ ನಡೆಯಲು ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯ ಸರ್ಕಾರದ ಜೊತೆ ಸಹಭಾಗಿತ್ವ ಮಾಡಿಕೊಂಡಿದೆ.

**ಸರ್ಕಾರಿ ಕೆಲಸಗಳು ವೇಗವಾಗಿ ನಡೆಯಲು ಮೆಟಾ ಜೊತೆ ಆಂಧ್ರ, ಮತ್ತು ತೆಲಂಗಾಣ ಸರ್ಕಾರ ಸಹಯೋಗ**

ಬಿಲ್ಡ್ ವಿತ್ ಎಐ ಸಮಾವೇಶದ ಭಾಗವಾಗಿ ಮೆಟಾ ಸಂಸ್ಥೆಯು ಡೆವಲಪರ್ ಗಳಿಗೆ ನೆರವು ನೀಡಲು ಮತ್ತು ಮೆಟಾ ಲಾಮಾ ಓಪನ್ ಪ್ಲಾಟ್ ಫಾರ್ಮ್ ಅನ್ನು ಬಳಸಿಕೊಂಡು ಹೊಸ ಆವಿಷ್ಕಾರದಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹ ನೀಡಲು ಎಐ ಹ್ಯಾಕಥಾನ್ ಅನ್ನು ಆಯೋಜಿಸಿತ್ತು. ಈ ಹ್ಯಾಕಥಾನ್ ಗೆ 1,500ಕ್ಕೂ ನೋಂದಣಿಗಳು, 350ಕ್ಕೂ ಹೆಚ್ಚು ಪ್ರಪೋಸಲ್ ಗಳು ಬಂದಿದ್ದವು ಮತ್ತು 90ಕ್ಕೂ ಹೆಚ್ಚು ತಂಡಗಳು ಭಾಗವಹಿಸಿದ್ದವು. ಅಂತಿಮವಾಗಿ ಕ್ಯೂರ್ ಫಾರ್ಮಾ ಎಐ, ಸಿವಿಕ್ ಫಿಕ್ಸ್ ಮತ್ತು ಇವಿಎಐಸ್ಮೆಂಟ್ ಎಂಬ ತಂಡಗಳು ವಿಜೇತರಾಗಿ ಹೊರಹೊಮ್ಮಿದವು. ಶೀಬಿಲ್ಡ್ಸ್ ಎಂಬ ಮಹಿಳಾ ತಂಡವು ತೀರ್ಪುಗಾರರ ವಿಶೇಷ ಮನ್ನಣೆಗೆ ಪಾತ್ರವಾಯಿತು.

ಸಮಾವೇಶದಲ್ಲಿ ಉಪಸ್ಥಿತರಿದ್ದ ಮೆಟಾ ಇಂಡಿಯಾದ ಉಪಾಧ್ಯಕ್ಷೆ ಮತ್ತು ಮುಖ್ಯಸ್ಥೆ ಸಂಧ್ಯಾ ದೇವನಾಥನ್ ಅವರು, ''ಮೊಬೈಲ್ ಇಂಟರ್ ನೆಟ್ ಕ್ರಾಂತಿ ಮಾಡಿದಂತೆ ಎಐನಲ್ಲಿ ಕೂಡ ದಾರಿ ತೋರುವ ಸಾಮರ್ಥ್ಯವನ್ನು ಭಾರತ ಹೊಂದಿದೆ ಎಂಬುದು ಮೆಟಾ ಸಂಸ್ಥೆಯ ನಂಬಿಕೆಯಾಗಿದೆ. ನಾವು ಭಾರತದ ಬೆಳವಣಿಗೆಯಲ್ಲಿ ಜೊತೆಯಾಗಿ ನಡೆಯುತ್ತಿದ್ದೇವೆ. ಸರ್ಕಾರಿ ಇಲಾಖೆಗಳೊಂದಿಗೆ ಪಾಲುದಾರಿಕೆಯಿಂದ ಹಿಡಿದು ಲಕ್ಷಾಂತರ ಸಣ್ಣ ವ್ಯಾಪಾರಗಳನ್ನು ಬೆಳೆಯಲು ಅನುವು ಮಾಡಿಕೊಡುತ್ತಿದ್ದೇವೆ'' ಎಂದು ಹೇಳಿದರು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಆರ್ಥಿಕ ಪರಿಸ್ಥಿತಿ ಸುಧಾರಿಸುತ್ತದೆ, ಅಧಿಕ ಕೆಲಸದೊತ್ತಡ, ದಾಂಪತ್ಯ ಜೀವನ ಸುಖಮಯವಾಗಿರುತ್ತದೆ.

**ವೃಷಭ:** ವ್ಯಾಪಾರ ವ್ಯವಹಾರಗಳಲ್ಲಿ ಅಧಿಕ ಲಾಭ, ಆರೋಗ್ಯವು ಉತ್ತಮವಾಗಿರುತ್ತದೆ, ಸಣ್ಣ ಪುಟ್ಟ ಸಮಸ್ಯೆಗಳು ಎದುರಾಗುತ್ತವೆ.

**ಮಿಥುನ:** ಸಮಸ್ಯೆಗಳಿಂದ ಬಿಡುಗಡೆ, ನಿರೀಕ್ಷಿತ ಆರ್ಥಿಕ ನೆರವು, ಉದ್ಯೋಗ ಕ್ಷೇತ್ರದಲ್ಲಿ ಹೆಚ್ಚಿನ ಹೊಣೆಗಾರಿಕೆ.

**ಕರ್ಕಾಟಕ:** ವಿವಾಹ ಆಕಾಂಕ್ಷಿಗಳಿಗೆ ವಿವಾಹ ಸಾಧ್ಯತೆ, ಹೊಸ ಉದ್ಯೋಗದಲ್ಲಿ ಪ್ರಗತಿ, ಹಣ ಹೂಡಿಕೆಗೆ ಶುಭ ಸಮಯ.

**ಸಿಂಹ:** ಹೊಸ ಮನೆ ಖರೀದಿ ಯೋಗ, ಕೆಲಸದ ನಿಮಿತ್ತ ದೂರ ಪ್ರಯಾಣ, ತಂದೆ ಮಕ್ಕಳಲ್ಲಿ ಭಿನ್ನಾಭಿಪ್ರಾಯ.

**ಕನ್ಯಾ:** ಉದ್ಯೋಗ ಸ್ಥಳದಲ್ಲಿ ಕಿರಿಕಿರಿ, ಅನಿರೀಕ್ಷಿತ ಸ್ನೇಹಿತರ ಭೇಟಿ, ಸಂಗಾತಿಯಿಂದ ಆರ್ಥಿಕ ಅನುಕೂಲ.

**ತುಲಾ:** ರಾಜಕೀಯ ಕ್ಷೇತ್ರದಲ್ಲಿರುವವರಿಗೆ ಒತ್ತಡ, ಆಹಾರ ವ್ಯತ್ಯಾಸದಿಂದ ಅನಾರೋಗ್ಯ, ವಿದ್ಯಾರ್ಥಿಗಳಿಗೆ ಓದಿನ ಕಡೆ ಗಮನ ಅಗತ್ಯ.

**ವೃಶ್ಚಿಕ:** ಕೌಟುಂಬಿಕ ಸಮಸ್ಯೆ ಸರಿ ಹೋಗುತ್ತದೆ, ಉದ್ಯೋಗದಲ್ಲಿ ಒತ್ತಡ ಉಂಟಾಗುತ್ತದೆ, ಮಕ್ಕಳ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ.

**ಧನಸ್ಸು:** ಆರ್ಥಿಕ ಸಮಸ್ಯೆ ಎದುರಾಗಲಿದೆ, ಸಹೋದ್ಯೋಗಿಗಳಿಂದ ಸಹಕಾರ, ನಿರುದ್ಯೋಗಿಗಳಿಗೆ ಉದ್ಯೋಗದ ನಿರೀಕ್ಷೆ.

**ಮಕರ:** ಆರ್ಥಿಕ ವಿಷಯಗಳಲ್ಲಿ ಉತ್ತಮ ವಾರ, ಒಳ್ಳೆಯ ಮಾತಿನಿಂದ ಕುಟುಂಬ ಸಮಸ್ಯೆ ಬಗೆಹರಿಸಿಕೊಳ್ಳಿ, ಉದ್ಯೋಗದಲ್ಲಿ ಬಡ್ತಿ ಹೊಂದುವ ಸಾಧ್ಯತೆ.

**ಕುಂಭ:** ಉದ್ಯೋಗದಲ್ಲಿ ಸವಾಲುಗಳನ್ನು ಎದುರಿಸಬೇಕಾಗಬಹುದು, ಪಾಲುದಾರಿಕೆ ವ್ಯವಹಾರದಲ್ಲಿ ಜಾಗ್ರತೆ ವಹಿಸಬೇಕು, ದಾಂಪತ್ಯದಲ್ಲಿ ವೈಮನಸ್ಯ.

**ಮೀನ:** ಉದ್ಯೋಗ, ವ್ಯವಹಾರದಲ್ಲಿ ನಿರೀಕ್ಷಿತ ಫಲ, ದೈಹಿಕ ಮತ್ತು ಮಾನಸಿಕ ತೊಂದರೆ, ಕೆಲಸದಲ್ಲಿ ಅಡೆತಡೆ.

## ವಿಶ್ವ ಶ್ರಾವ್ಯ ಪರಂಪರೆ ದಿನ

ಅಕ್ಟೋಬರ್ 27 ರಂದು ಆಡಿಯೋವಿಶುವಲ್ ಹೆರಿಟೇಜ್ಗಾಗಿ ವಾರ್ಷಿಕ ವಿಶ್ವ ದಿನವು ನಮಗೆ ಆಡಿಯೋವಿಶುವಲ್ ಮೂಲಗಳನ್ನು ಆರ್ಕೈವ್ ಮಾಡುವ ಮತ್ತು ಸಂರಕ್ಷಿಸುವ ಪ್ರಾಮುಖ್ಯತೆಯನ್ನು ನೆನಪಿಸುತ್ತದೆ. ಸಂಕ್ಷಿಪ್ತವಾಗಿ ೦ಗಿ ಎಂದೂ ಕರೆಯುತ್ತಾರೆ, ಆಡಿಯೊವಿಶುವಲ್ ಐಟಂಗಳು ಚಿಕ್ಕ ಕ್ಲಿಪ್ ಅಥವಾ ಸಾಕ್ಷ್ಯಚಿತ್ರದಿಂದ ಭಾಷಣಗಳು ಅಥವಾ ಸಂಗೀತದವರೆಗೆ ಯಾವುದಾದರೂ ಆಗಿರಬಹುದು. ಈ ರೀತಿಯ ವಸ್ತುವು ನಮಗೆ ನೀಡಿದ ಪರಿಸರದ ಸಾಮಾಜಿಕ, ರಾಜಕೀಯ, ಆರ್ಥಿಕ ಮತ್ತು ಭಾಷಾ ವಾಸ್ತವತೆಗಳ ಒಳನೋಟವನ್ನು ಒದಗಿಸುತ್ತದೆ. ಆಡಿಯೋವಿಶುವಲ್ ಆರ್ಕೈವ್ಗಳು ಇತಿಹಾಸದ ಆ ಭಾಗಗಳ ಬಗ್ಗೆ ಕಲಿಯುವ ಒಂದು ಮಾರ್ಗವಾಗಿದೆ, ಅದು ಯಾವುದೇ ಕಾರಣಕ್ಕಾಗಿ ಇನ್ನು ಮುಂದೆ ಪ್ರವೇಶಿಸಲಾಗುವುದಿಲ್ಲ. ಅಕ್ಟೋಬರ್ 27, ಆದ್ದರಿಂದ ತಡವಾಗಿ ಆಗುವ ಮೊದಲು ಆಡಿಯೊವಿಶುವಲ್ ದಾಖಲೆಗಳನ್ನು ಸಂರಕ್ಷಿಸುವ ಪ್ರಾಮುಖ್ಯತೆಯ ಬಗ್ಗೆ ಎಲ್ಲರಿಗೂ ನೆನಪಿಸುವ ಒಂದು ಮಾರ್ಗವಾಗಿದೆ. ನಿರ್ಲಕ್ಷ್ಯ ಮತ್ತು ಸಂರಕ್ಷಣೆಯ ಪ್ರಯತ್ನಗಳ ಕೊರತೆಯಿಂದಾಗಿ ಇಂತಹ ಹಲವು ಮೂಲಗಳು ಈಗಾಗಲೇ ಕಳೆದುಹೋಗಿವೆ. ಆಡಿಯೋವಿಶುವಲ್ ಹೆರಿಟೇಜ್ಗಾಗಿ ಮೊದಲ ವಿಶ್ವ ದಿನವನ್ನು 2005 ರಲ್ಲಿ ಆಚರಿಸಲಾಯಿತು. ಯುನೈಟೆಡ್ ನೇಷನ್ಸ್ ಎಜುಕೇಶನಲ್, ಸೈಂಟಿಫಿಕ್ ಮತ್ತು ಕಲ್ಚರಲ್ ಆರ್ಗನೈಸೇಶನ್ (ಯುನೆಸ್ಕೋ) ಅಕ್ಟೋಬರ್ 27 ರಂದು ದಿನವನ್ನು ಅಸ್ತಿತ್ವಕ್ಕೆ ತರಲು ಆಡಿಯೋವಿಶುವಲ್ ಆರ್ಕೈವ್ಸ್ ಅಸೋಸಿಯೇಷನ್ಸ್ ಸಮನ್ವಯ ಮಂಡಳಿಯೊಂದಿಗೆ ಸಹಕರಿಸಿತು.

CCAAA ವಿಶ್ವಾದ್ಯಂತ ಸಂಸ್ಥೆಯಾಗಿದ್ದು, ಇದು ಅನೇಕ ಆಡಿಯೋವಿಶುವಲ್ ಸಂಸ್ಥೆಗಳನ್ನು ಸದಸ್ಯರನ್ನಾಗಿ ಹೊಂದಿದೆ. ಅಅ೦೦೦ ನಲ್ಲಿ ಯಾವುದೇ ವಿಶೇಷ ಸಿಬ್ಬಂದಿ ಸ್ಥಾನಗಳಿಲ್ಲ ಏಕೆಂದರೆ ನೋಂದಾಯಿತ ಸಂಘಗಳು ಪ್ರತಿಯೊಂದೂ ಮಂಡಳಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಆಯ್ಕೆ ಮಾಡುತ್ತವೆ, ಇದು ಸ್ಥಾನಗಳಿಗೆ ಸ್ವಯಂಸೇವಕರಾಗಲು ಸಿದ್ಧರಿರುವ ಜನರ ಪ್ರಕಾರ ಬದಲಾಗುತ್ತದೆ. ಅಅ೦೦೦ ಯುನೆಸ್ಕೋದ 1980 ರ ಚಲಿಸುವ ಚಿತ್ರಗಳ ರಕ್ಷಣೆ ಮತ್ತು ಸಂರಕ್ಷಣೆಗಾಗಿ ಶಿಫಾರಸು ನಂತರ ಅಸ್ತಿತ್ವಕ್ಕೆ ಬಂದಿತು. ಆರ್ಕೈವ್ಗಳನ್ನು ತುರ್ತು ಆಧಾರದ ಮೇಲೆ ಸಂರಕ್ಷಿಸಲು ಸಂಸ್ಥೆಗಳು ಮತ್ತು ಸಂಘಗಳು ಒಟ್ಟಾಗಿ ಕೆಲಸ ಮಾಡಲು ಶಿಫಾರಸು ಉಪಕ್ರಮವು ಒತ್ತಾಯಿಸಿದೆ. ಇದರ ಫಲಿತಾಂಶವು ರೌಂಡ್ ಟೇಬಲ್ ಆಫ್ ಆಡಿಯೋವಿಶುವಲ್ ರೆಕಾರ್ಡ್ಸ್ ಆಗಿತ್ತು. ಇಂಟರ್ನ್ಯಾಷನಲ್ ಫೆಡರೇಶನ್ ಆಫ್ ಲೈಬ್ರರಿ ಅಸೋಸಿಯೇಷನ್ಸ್ ಅಂಡ್ ಇನ್ಸ್ಟಿಟ್ಯೂಷನ್ಸ್ ಮತ್ತು ಇಂಟರ್ನ್ಯಾಷನಲ್ ಕೌನ್ಸಿಲ್ ಆನ್ ಆರ್ಕೈವ್ಸ್ ನಂತಹ ಹಲವಾರು ಸಂಸ್ಥೆಗಳು ದುಂಡುಮೇಜಿನ ಸಭೆಗೆ ಒಗ್ಗೂಡಿದವು. ಪ್ರತಿ ಕೆಲವು ವರ್ಷಗಳಿಗೊಮ್ಮೆ ಜಂಟಿ ತಾಂತ್ರಿಕ ವಿಚಾರ ಸಂಕಿರಣವನ್ನು (ಜೆಟಿಎಸ್) ನಡೆಸಬೇಕೆಂದು ನಿರ್ಧರಿಸಲಾಯಿತು. ಆದಾಗ್ಯೂ, ಕೆಲವೇ ವರ್ಷಗಳಲ್ಲಿ, ಒಳಗೊಂಡಿರುವ ಆರ್ಕೈವ್ ಅಸೋಸಿಯೇಷನ್ಗಳು ಹೆಚ್ಚಿನದನ್ನು ಮಾಡಬೇಕಾಗಿದೆ ಎಂದು ಅರಿತುಕೊಂಡವು ಮತ್ತು ಆದ್ದರಿಂದ CCAAA ಹುಟ್ಟಿಕೊಂಡಿತು.

# ದಾಳಿಗೆ ಪ್ರತಿದಾಳಿ ಬೇಡ : ಇರಾನ್‌ಗೆ ಅಮೆರಿಕ ಆಗ್ರಹ



**ವಾಷಿಂಗ್ಟನ್:** ಇಸ್ರೇಲ್ ಮೇಲೆ ಪ್ರತೀಕಾರ ದಾಳಿ ನಡೆಸುವುದನ್ನು ನಿಲ್ಲಿಸಿ ಹಿಂಸಾಚಾರದ ಆವರ್ತವನ್ನು ಕೊನೆಗೊಳಿಸುವಂತೆ ಅಮೆರಿಕ ಶನಿವಾರ ಇರಾನನ್ನು ಆಗ್ರಹಿಸಿದೆ. ಇಸ್ರೇಲ್ ಮೇಲಿನ ದಾಳಿಯನ್ನು ಇರಾನ್ ನಿಲ್ಲಿಸಿದರೆ ಸಂಘರ್ಷ ಇನ್ನಷ್ಟು ಉಲ್ಬಣಿಸುವುದನ್ನು ತಡೆಯಬಹುದು ಎಂದು ಅಮೆರಿಕದ ರಾಷ್ಟ್ರೀಯ ಭದ್ರತಾ ಸಮಿತಿಯ ವಕ್ತಾರ ಸೀನ್ ಸ್ಯಾವೆಟ್ ಶನಿವಾರ ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ. ಶನಿವಾರ ಇರಾನ್ನ ಮಿಲಿಟರಿ ನೆಲೆ ಹಾಗೂ ಕ್ಷಿಪಣಿ ನೆಲೆಗಳ ಮೇಲೆ ಇಸ್ರೇಲ್ ವೈಮಾನಿಕ ದಾಳಿ ನಡೆಸಿದೆ. 'ಇಸ್ರೇಲ್ನ ಪ್ರತಿಕ್ರಿಯೆ ಆತ್ಮರಕ್ಷಣೆಯ ಕಾರ್ಯವಾಗಿದ್ದು ಜನನಿಬಿಡ ಪ್ರದೇಶವನ್ನು ತಪ್ಪಿಸಿ ಮಿಲಿಟರಿ ಗುರಿಗಳ ಮೇಲೆ ಮಾತ್ರ ದಾಳಿ ನಡೆದಿದೆ. ಆದರೆ ಇಸ್ರೇಲ್ ವಿರುದ್ಧದ ಇರಾನ್ ದಾಳಿಯು ಇಸ್ರೇಲ್ನ ಅತೀ ಹೆಚ್ಚು ಜನಸಂಖ್ಯೆಯ ನಗರವನ್ನು ಗುರಿಯಾಗಿಸಿತ್ತು' ಎಂದವರು ಹೇಳಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಅಮೆರಿಕ ಪಾಲ್ಗೊಂಡಿಲ್ಲ. ರಾಜತಾಂತ್ರಿಕತೆಯನ್ನು ವೇಗಗೊಳಿಸುವುದು ಮತ್ತು ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆಯನ್ನು ತಗ್ಗಿಸುವುದು ನಮ್ಮ ಗುರಿಯಾಗಿದೆ ಎಂದವರು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ್ದಾರೆ. ಅಧ್ಯಕ್ಷ ಜೋ ಬೈಡನ್ ಹಾಗೂ ಅವರ ರಾಷ್ಟ್ರೀಯ ಭದ್ರತಾ ತಂಡವು ಇತ್ತೀಚಿನ ದಿನಗಳಲ್ಲಿ ಇಸ್ರೇಲ್ನೊಂದಿಗೆ ಸಂಪರ್ಕದಲ್ಲಿದ್ದು ನಾಗರಿಕ ಹಾನಿಯ ಕಡಿಮೆ ಅಪಾಯದ ಪ್ರಮಾಣಾನುಗುಣವಾದ ಪ್ರತಿದಾಳಿ ನಡೆಸಲು ಉತ್ತೇಜಿಸಿದೆ ಎಂದು ಅಮೆರಿಕದ ಉನ್ನತ ಅಧಿಕಾರಿಯನ್ನು ಉಲ್ಲೇಖಿಸಿ ಮಾಧ್ಯಮಗಳು ವರದಿ ಮಾಡಿವೆ.

# ಇಂಡೋನೇಷ್ಯಾದಲ್ಲಿ 700,000 ವರ್ಷಗಳಷ್ಟು ಹಳೆಯದಾದ ಸಣ್ಣ 'ಹಾಬಿಟ್' ಮಾನವ ಪಳೆಯುಳಿಕೆಗಳು ಪತ್ತೆ!



**ಇಂಡೋನೇಷ್ಯಾ:** ಲಿಯಾಂಗ್ ಬುವಾ ಗುಹೆಯಿಂದ ಸುಮಾರು 72 ಕಿಲೋಮೀಟರ್ ದೂರದಲ್ಲಿರುವ ಮಾತಾ ಮೆಂಗೆ ಎಂಬ ಸ್ಥಳದಲ್ಲಿ ಹೊಸ ಪಳೆಯುಳಿಕೆಗಳು ಕಂಡುಬಂದಿವೆ. ಈ ಅವಶೇಷಗಳು 700,000 ವರ್ಷಗಳಷ್ಟು ಹಳೆಯವು.

ಅಂತರರಾಷ್ಟ್ರೀಯ ವಿಜ್ಞಾನಿಗಳ ತಂಡವು ಮೂಳೆಗಳನ್ನು ವಿಶ್ಲೇಷಿಸಲು ಸಹಾಯ ಮಾಡಿತು ಮತ್ತು ಅವರ ಸಂಶೋಧನೆಯ ಫಲಿತಾಂಶಗಳನ್ನು ಮಂಗಳವಾರ ನೇಚರ್ ಕಮ್ಯುನಿಕೇಷನ್ಸ್‌ನಲ್ಲಿ ಪ್ರಕಟಿಸಲಾಗಿದೆ.

ಮೂಳೆಗಳು ಹೋಮೋ ಫ್ಲೋರೆಸಿಯೆನ್ಸಿಸ್ನ ಪೂರ್ವಜರನ್ನು ಪ್ರತಿನಿಧಿಸುತ್ತವೆ ಎಂದು ಅಧ್ಯಯನವು ಕಂಡುಹಿಡಿದಿದೆ, ಅವರು ಎತ್ತರದಲ್ಲಿ ಇನ್ನೂ ಕುಳ್ಳಗಿದ್ದರು. ಭಾಗಶಃ ದವಡೆ ಮೂಳೆ, ಆರು ಹಲ್ಲುಗಳು ಮತ್ತು ಎಚ್ಚರಿಕೆಯಿಂದ ಪುನರ್ನಿರ್ಮಿಸಿದ ತೋಳಿನ ಮೂಳೆಯಿಂದ, ಸಂಶೋಧಕರು ಹಾಬಿಟ್ ಪೂರ್ವಜರು ತಮ್ಮ ವಂಶಸ್ಥರಿಗಿಂತ ಸುಮಾರು 2.4 ಇಂಚು ಕುಳ್ಳಗಿದ್ದರು ಎಂದು ಅಂದಾಜಿಸಲು ಸಾಧ್ಯವಾಯಿತು. ಗಾತ್ರದಲ್ಲಿನ ಅಸಮಾನತೆಯು ಆಧುನಿಕ ಮಾನವರಲ್ಲಿ ಕಂಡುಬರುವಂತೆ ಪ್ರಭೇದಗಳೊಳಗಿನ ನೈಸರ್ಗಿಕ ವ್ಯತ್ಯಾಸಕ್ಕೆ ಇಳಿಯಬಹುದು, ಆದರೆ ಫಲಿತಾಂಶಗಳು ಸ್ಪಷ್ಟವಾಗಿ ತೋರಿಸುವುದೇನೆಂದರೆ ಹೋಮೋ ಫ್ಲೋರೆಸಿಯೆನ್ಸಿಸ್ ತನ್ನ ಸಣ್ಣ ಗಾತ್ರವನ್ನು ಗಮನಾರ್ಹವಾಗಿ ದೀರ್ಘಾವಧಿಯಲ್ಲಿ ಉಳಿಸಿಕೊಂಡಿದೆ. ಇದು ಮುಖ್ಯವಾಗಿದೆ ಏಕೆಂದರೆ ಮಾನವರ ಈ ಜನಾಂಗವು ಏಕೆ ಅಥವಾ ಹೇಗೆ ಚಿಕ್ಕದಾಗಿ ಬಂದಿತು ಎಂದು ವಿಜ್ಞಾನಿಗಳಿಗೆ ಇನ್ನೂ ತಿಳಿದಿಲ್ಲ. ಒಂದು ಸಿದ್ಧಾಂತವು ಹೋಬಿಟ್ ಗಳು ಹೋಮೋ ಎರೆಕ್ಟಸ್ ಎಂದು ಕರೆಯಲ್ಪಡುವ ಹಿಂದಿನ, ಎತ್ತರದ ಮಾನವ ಜಾತಿಯಿಂದ ಕುಗ್ಗಿವೆ ಎಂದು ಸೂಚಿಸುತ್ತದೆ, ಇದು ಆಫ್ರಿಕಾದಿಂದ ವಲಸೆ ಬಂದ ಮೊದಲ ಆರಂಭಿಕ ಮಾನವ ಜಾತಿ ಎಂದು ನಂಬಲಾಗಿದೆ.

# ಪ್ಯಾಲೆಸ್ತೀನಿಯರಿಗೆ ಶ್ರದ್ಧಾಂಜಲಿ – ಮೈಕ್ರೋಸಾಫ್ಟ್‌ನಿಂದ ಇಬ್ಬರು ಉದ್ಯೋಗಿಗಳು ಕಿಕ್ ಔಟ್!

**ವಾಷಿಂಗ್ಟನ್:** ಇಸ್ರೇಲ್ ಮತ್ತು ಹಮಾಸ್ ನಡುವಿನ ಇತ್ತೀಚಿನ ಸಂಘರ್ಷದ ಸಮಯದಲ್ಲಿ ಗಾಜಾದಲ್ಲಿ ಕೊಲ್ಲಲ್ಪಟ್ಟ ಪ್ಯಾಲೆಸ್ತೀನಿಯರಿಗೆ ಗೌರವ ಸೂಚಿಸಲು ವಾಷಿಂಗ್ಟನ್ನ ರೆಡ್ಮಂಡ್ನಲ್ಲಿರುವ ಕಂಪನಿಯ ಪ್ರಧಾನ ಕಚೇರಿಯಲ್ಲಿ ಅನಧಿಕೃತ ಜಾಗರಣೆಯನ್ನು ಆಯೋಜಿಸಲಾಗಿತ್ತು. ಈ ಕಾರಣಕ್ಕೆ ಇಬ್ಬರು ಉದ್ಯೋಗಿಗಳನ್ನು ಮೈಕ್ರೋಸಾಫ್ಟ್ ಕಂಪನಿ ವಜಾಗೊಳಿಸಿದೆ. ಜೊತೆಗೆ ಅಬ್ದೆಲ್ರಹ್ಮಾನ್ ಮೊಹಮ್ಮದ್ ಮತ್ತು ಹೊಸಮ್ ನಾಸ್ರ್, ಎಂಬ ಈ ಇಬ್ಬರು ಉದ್ಯೋಗಿಗಳು, ನೋ ಅಜೂರ್ ಫಾರ್ ಅಪಾರ್ತೀಡ್ ಎಂಬ ಗುಂಪಿನ ಭಾಗವಾಗಿದ್ದರು ಎಂದು ತಿಳಿದು ಬಂದಿದೆ. ಈ ಗುಂಪು ಮೈಕ್ರೋಸಾಫ್ಟ್ ಕ್ಲೌಡ್-ಕಂಪ್ಯೂಟಿಂಗ್ ತಂತ್ರಜ್ಞಾನವನ್ನು ಇಸ್ರೇಲಿ ಸರ್ಕಾರಕ್ಕೆ ಮಾರಾಟ ಮಾಡುವುದನ್ನು ವಿರೋಧಿ ಹೋರಾಟ ನಡೆಸುತ್ತಿದೆ. ಹೀಗಾಗಿ ಇದನ್ನು ಗಮನಿಸಿದ ಮೈಕ್ರೋಸಾಫ್ಟ್ ಕಂಪನಿ, ಇದೇ ಕಾರಣವನ್ನು ನೀಡಿ ಇಬ್ಬರು ಉದ್ಯೋಗಿಗಳನ್ನು ವಜಾಗೊಳಿಸಿದೆ.



# ಮುಂಬೈ ಬಾಂದ್ರಾ ರೈಲು ನಿಲ್ದಾಣದಲ್ಲಿ ಕಾಲ್ತುಳಿತ: 9 ಮಂದಿಗೆ ಗಾಯ

**ಮುಂಬೈ:** ಬಾಂದ್ರಾ ರೈಲು ನಿಲ್ದಾಣದಲ್ಲಿ ಕಾಲ್ತುಳಿತ ಉಂಟಾಗಿ 9 ಮಂದಿ ಗಾಯಗೊಂಡಿದ್ದಾರೆ. ಉತ್ತರ ಪ್ರದೇಶದ ಗೋರಖ್‌ಪುರಕ್ಕೆ ತೆರಳುತ್ತಿದ್ದ ರೈಲನ್ನು ಹತ್ತಲು ಪ್ರಯಾಣಿಕರು ಯತ್ನಿಸಿದಾಗ ನೂಕುನುಗ್ಗಲು ಸೃಷ್ಟಿಯಾಗಿದೆ. ಗಾಯಗೊಂಡವರ ಪೈಕಿ 7 ಮಂದಿಯ ಆರೋಗ್ಯ ಸ್ಥಿರವಾಗಿದ್ದು ಇಬ್ಬರ ಸ್ಥಿತಿ ಗಂಭೀರವಾಗಿದೆ. ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಉತ್ತರ ಪ್ರದೇಶಕ್ಕೆ ತೆರಳಲು ರೈಲನ್ನು ಹತ್ತುವ ಸಂದರ್ಭದಲ್ಲಿ ಕಾಲ್ತುಳಿತ ಉಂಟಾಗಿದೆ ಎಂದು ಬೃಹನ್ಮುಂಬೈ ಮುನ್ಸಿಪಲ್ ಕಾರ್ಪೊರೇಷನ್ ತಿಳಿಸಿದೆ. ಬಾಂದ್ರಾದಿಂದ ಗೋರಖ್‌ಪುರಕ್ಕೆ ಹೋಗುವ ರೈಲು ಸಂಖ್ಯೆ 22921 ನಿಲ್ದಾಣದ ಪ್ಲಾಟ್‌ಫಾರ್ಮ್ ಸಂಖ್ಯೆ 1ಕ್ಕೆ ಬಂದಿತ್ತು. ಗೋರಖ್‌ಪುರದ ಸಾಪ್ತಾಹಿಕ ರೈಲು ಭಾನುವಾರ ಬೆಳಿಗ್ಗೆ 5:10ಕ್ಕೆ ಹೊರಡಬೇಕಿತ್ತು. ಆದರೆ ರೈಲು 5:56ಕ್ಕೆ ನಿಲ್ದಾಣಕ್ಕೆ ಬಂದಿದೆ. ಮೊದಲೇ ಭಾರೀ ಸಂಖ್ಯೆಯಲ್ಲಿ ಪ್ರಯಾಣಿಕರು ಜಮಾಯಿಸಿದ್ದರಿಂದ ನೂಕುನುಗ್ಗಲು ಉಂಟಾಗಿ ಈ ಘಟನೆ ನಡೆದಿದೆ. ಗಾಯಗೊಂಡವರನ್ನು ರೈಲ್ವೇ ಪೊಲೀಸ್ ಸಿಬ್ಬಂದಿ ಮತ್ತು ಇತರ ಪ್ರಯಾಣಿಕರು ಸ್ಟ್ರೆಚರ್ ಗಳಲ್ಲಿ ಎತ್ತಿಕೊಂಡು ಸಾಗಿಸಿದ್ದಾರೆ. ಸದ್ಯ ರೈಲ್ವೆ ನಿಲ್ದಾಣದಲ್ಲಿ ಪರಿಸ್ಥಿತಿ ನಿಯಂತ್ರಣದಲ್ಲಿದೆ ಮತ್ತು ಗಾಯಾಳುಗಳನ್ನು ಭಾಭಾ ಆಸ್ಪತ್ರೆಗೆ ಕರೆದೊಯ್ಯಲಾಗಿದೆ ಎಂದು ಬಿಎಂಸಿ ಹೇಳಿದೆ.



# ಮಹಾರಾಷ್ಟ್ರ ಚುನಾವಣಾ ಅಖಾಡಕ್ಕೆ ಇಳಿದ ಬಿಜೆಪಿ



**ಮಹಾರಾಷ್ಟ್ರ:** ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ಎಲ್ಲಾ ರಾಜಕೀಯ ಪಕ್ಷಗಳು ತಮ್ಮ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಗೆಲ್ಲುವ ರಣತಂತ್ರ ರೂಪಿಸುತ್ತಿದೆ.

ಇದೀಗ ಬಿಜೆಪಿ ಮಹಾರಾಷ್ಟ್ರ ಚುನಾವಣೆಗೆ 40 ಆರಂಭಿಕ ಪ್ರಚಾರಕರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ ಪಿಎಂ ನರೇಂದ್ರ ಮೋದಿ, ಬಿಜೆಪಿ ಅಧ್ಯಕ್ಷ ಜೆ.ಪಿ ನಡ್ಡಾ, ಹಲವಾರು ಕೇಂದ್ರ ಸಚಿವರು ಮತ್ತು ಬಿಜೆಪಿ ನೇತೃತ್ವದ ರಾಜ್ಯ ಮುಖ್ಯಮಂತ್ರಿಗಳು ಇದ್ದಾರೆ.

ಮಹಾರಾಷ್ಟ್ರದ ಸ್ಟಾರ್ ಪ್ರಚಾರಕರಾಗಿರುವ ಕೇಂದ್ರ ಸಚಿವರೆಂದರೆ, ಅಮಿತ್ ಶಾ, ರಾಜನಾಥ್ ಸಿಂಗ್, ನಿತಿನ್ ಗಡ್ಕರಿ, ಅಶ್ವಿನಿ ವೈಷ್ಣವ್, ಭೂಪೇಂದ್ರ ಯಾದವ್, ಪಿಯೂಷ್ ಗೋಯಲ್, ಜ್ಯೋತಿರಾದಿತ್ಯ ಸಿಂಧಿಯಾ, ಮುರಳೀಧರ್ ಮೊಹೋಲ್ ಮತ್ತು ಇತರರು.

ಉತ್ತರ ಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್, ಹರಿಯಾಣದ ನಯಾಬ್ ಸಿಂಗ್ ಸೈನಿ, ಗೋವಾದ ಪ್ರಮೋದ್ ಸಾವಂತ್, ಅಸ್ಸಾಂನ ಹಿಮಂತ ಬಿಸ್ವ ಶರ್ಮಾ ಮತ್ತು ಇತರ ಬಿಜೆಪಿ ನೇತೃತ್ವದ ರಾಜ್ಯದ ಹಲವಾರು ಮುಖ್ಯಮಂತ್ರಿಗಳು ಮಹಾರಾಷ್ಟ್ರ ಚುನಾವಣೆಗಳಿಗೆ ಪ್ರಚಾರ ನಡೆಸಲಿದ್ದಾರೆ. ಮಹಾರಾಷ್ಟ್ರದ ಸ್ಟಾರ್ ಪ್ರಚಾರಕರಲ್ಲಿ ಮೋಹನ್ ಯಾದವ್, ನಾರಾಯಣ ರಾಣೆ, ವಿಷ್ಣು ದೇವ ಸಾಯಿ, ಮಾಜಿ ಸಂಸದೆ ಮತ್ತು ಮಾಜಿ ಕೇಂದ್ರ ಸಚಿವ ಸ್ಮೃತಿ ಇರಾನಿ, ನವನೀತ್ ರಾಣಾ ಮತ್ತು ಪಂಕಜಾ ಮುಂಡೆ ಸೇರಿದಂತೆ ಇತರ ಬಿಜೆಪಿ ನಾಯಕರು ಸೇರಿದ್ದಾರೆ. 40 ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿ ಮಹಾರಾಷ್ಟ್ರ ಬಿಜೆಪಿ ನಾಯಕರು ಮತ್ತು ಸಿಎಂ ದೇವೇಂದ್ರ ಫಡ್ನವಿಸ್, ರಾಜ್ಯ ಪಕ್ಷದ ಅಧ್ಯಕ್ಷ ಚಂದ್ರಶೇಖರ್ ಬವಾಂಕುಲೆ, ಮುಂಬೈ ಬಿಜೆಪಿ ಮುಖ್ಯಸ್ಥ ಆಶಿಶ್ ಶೆಲಾರ್ ಮತ್ತು ಇತರರು ಸೇರಿದಂತೆ ವಿಧಾನಸಭಾ ಚುನಾವಣಾ ಅಭ್ಯರ್ಥಿಗಳು ಸಹ ಸೇರಿದ್ದಾರೆ.

# ತೈವಾನ್‌ಗೆ 2 ಶತಕೋಟಿ ಡಾಲರ್ ಮೊತ್ತದ ಶಸ್ತ್ರಾಸ್ತ್ರ ಮಾರಾಟಕ್ಕೆ ಅಮೆರಿಕ ಅನುಮೋದನೆ

**ವಾಷಿಂಗ್ಟನ್:** ಅತ್ಯಾಧುನಿಕ ಕ್ಷಿಪಣಿ, ರೇಡಾರ್ ವ್ಯವಸ್ಥೆ ಸೇರಿದಂತೆ ತೈವಾನ್ಗೆ 2 ಶತಕೋಟಿ ಡಾಲರ್ ಮೊತ್ತದ ಶಸ್ತ್ರಾಸ್ತ್ರ ಮಾರಾಟದ ಪ್ಯಾಕೇಜ್ಗೆ ಅಮೆರಿಕದ ವಿದೇಶಾಂಗ ಇಲಾಖೆ ಶುಕ್ರವಾರ ಅನುಮೋದನೆ ನೀಡಿದೆ. ಸಂಸತ್ನ ಒಪ್ಪಿಗೆ ಪಡೆದಿರುವ ಮಾರಾಟ ಪ್ರಕ್ರಿಯೆಯಲ್ಲಿ 1.16 ಶತಕೋಟಿ ಡಾಲರ್ ಮೊತ್ತದ ಯುದ್ಧ ವಿಮಾನ ಹೊಡೆದುರುಳಿಸುವ ವ್ಯವಸ್ಥೆಗಳು, ಕ್ಷಿಪಣಿಗಳು, 828 ದಶಲಕ್ಷ ಡಾಲರ್ ಮೊತ್ತದ ರೇಡಾರ್ ವ್ಯವಸ್ಥೆಗಳು ಸೇರಿವೆ. ಅಮೆರಿಕ ವಾಯುಪಡೆಯ ಸರಬರಾಜುಗಳಿಂದ ಇವನ್ನು ಪೂರೈಸಲಾಗುತ್ತದೆ. ತೈವಾನ್ ಅನ್ನು ರಾಜತಾಂತ್ರಿಕವಾಗಿ ಅಮೆರಿಕ ಅಧಿಕೃತವಾಗಿ ಮಾನ್ಯ ಮಾಡಿಲ್ಲವಾದರೂ ಅದು ತೈವಾನ್ನ ಪ್ರಮುಖ ಪಾಲುದಾರ ಮತ್ತು ಶಸ್ತ್ರಾಸ್ತ್ರಗಳ ಪ್ರಮುಖ ಪೂರೈಕೆದಾರನಾಗಿದೆ. ಅಮೆರಿಕದ ಈ ನಡೆಗೆ ಚೀನಾ ತೀವ್ರ ವಿರೋಧ ವ್ಯಕ್ತಪಡಿಸಿದ್ದು ತೈವಾನ್ಗೆ ಶಸ್ತ್ರಾಸ್ತ್ರ ಪೂರೈಸದಂತೆ ಆಗ್ರಹಿಸಿದೆ. ಸೆಪ್ಟೆಂಬರ್ ನಲ್ಲಿ ತೈವಾನ್ಗೆ ಮಿಲಿಟರಿ ಉಪಕರಣಗಳ ಮಾರಾಟಕ್ಕೆ ಅನುಮೋದನೆ ನೀಡಿರುವುದಕ್ಕೆ ಪ್ರತೀಕಾರವಾಗಿ ಅಮೆರಿಕದ ರಕ್ಷಣಾ ಸಾಮಾಗ್ರಿ ಉತ್ಪಾದಿಸುವ ಸಂಸ್ಥೆಗಳ ಮೇಲೆ ಚೀನಾ ನಿರ್ಬಂಧ ಜಾರಿಗೊಳಿಸಿತ್ತು.



# ಮಹಾರಾಷ್ಟ್ರದಲ್ಲಿ ಎಎಪಿ ಸ್ಪರ್ಧಿಸಲ್ಲ, ಮಹಾ ವಿಕಾಸ್ ಅಘಾಡಿ ಒಕ್ಕೂಟಕ್ಕೆ ಬೆಂಬಲ

**ಮುಂಬೈ:** ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ ಸ್ಪರ್ಧಿಸುವುದಿಲ್ಲ. ಮಹಾ ವಿಕಾಸ್ ಅಘಾಡಿ ಒಕ್ಕೂಟದ ಪರ ಪ್ರಚಾರ ನಡೆಸಲಿದೆ ಎಂದು ಎಎಪಿ ನಾಯಕ ಸಂಜಯ್ ಸಿಂಗ್ ತಿಳಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಅವರು, ಮಹಾರಾಷ್ಟ್ರ ಚುನಾವಣೆಯಲ್ಲಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರು ಎಂವಿಎ ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ. ಆಮ್ ಆದ್ಮಿ ಪಕ್ಷವು ಮಹಾರಾಷ್ಟ್ರದಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದಾರೆ. ಮಹಾರಾಷ್ಟ್ರದಲ್ಲಿ ಅರವಿಂದ್ ಕೇಜ್ರಿವಾಲ್ ಪ್ರಚಾರ ಮಾಡುತ್ತಿರುವ ಬಗ್ಗೆ ಶಿವಸೇನೆ (ಯುಬಿಟಿ) ಮತ್ತು ಎನ್‌ಸಿಪಿ-ಎಸ್‌ಪಿ ಪಕ್ಷವನ್ನು ಸಂಪರ್ಕಿಸಿವೆ. ಜಾರ್ಖಂಡ್ ವಿಧಾನಸಭಾ ಚುನಾವಣೆಯಲ್ಲಿ ಹೇಮಂತ್ ಸೋರೆನ್ ಅವರ ಆಡಳಿತಾರೂಢ ಜಾರ್ಖಂಡ್ ಮುಕ್ತಿ ಮೋರ್ಚಾ ಪರ ಪ್ರಚಾರ ಮಾಡಲು ಅರವಿಂದ್ ಕೇಜ್ರಿವಾಲ್ ಕೂಡ ಸಿದ್ಧರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಎಂವಿಎ ಒಕ್ಕೂಟವು ಉದ್ಧವ್ ಠಾಕ್ರೆ ಅವರ ಶಿವಸೇನೆ (ಯುಬಿಟಿ), ಶರದ್ ಪವಾರ್ ಅವರ ಎನ್‌ಸಿಪಿ-ಎಸ್‌ಪಿ ಮತ್ತು ಕಾಂಗ್ರೆಸ್ ಅನ್ನು ಒಳಗೊಂಡಿದೆ.

ಮಹಾರಾಷ್ಟ್ರದಲ್ಲಿ 288 ವಿಧಾನಸಭಾ ಸ್ಥಾನಗಳಿದ್ದು, ನ.20 ರಂದು ಮತದಾನ ನಡೆಯಲಿದೆ. ಜಾರ್ಖಂಡ್‌ನಲ್ಲಿ ನ.13 ಮತ್ತು 20 ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, ಎರಡೂ ರಾಜ್ಯಗಳ ಮತ ಎಣಿಕೆ ನವೆಂಬರ್ 23 ರಂದು ನಡೆಯಲಿದೆ.ಎಎಪಿ ಮತ್ತು ಎಂವಿಎ ಘಟಕಗಳು ಬಿಜೆಪಿಯನ್ನು ಎದುರಿಸಲು 2024 ರ ಲೋಕಸಭಾ ಚುನಾವಣೆಯ ಮೊದಲು ರಚಿಸಲಾದ ಭಾರತೀಯ ರಾಷ್ಟ್ರೀಯ ಅಭಿವೃದ್ಧಿ ಅಂತರ್ಗತ ಒಕ್ಕೂಟದ (ಭಾರತ) ಭಾಗವಾಗಿದೆ.

# ಕೋಲ್ಕತ್ತಾದ ಸ್ಟ್ರೀಟ್ ಫುಡ್ ರುಚಿ ನೋಡಿ ಲಂಡನ್‌ನಲ್ಲಿ ಫುಡ್ ಸ್ಟಾಲ್ ತೆರೆದ ವ್ಯಕ್ತಿ!

**ಲಂಡನ್:** ಬ್ರಿಟಿಷ್ ವ್ಯಕ್ತಿಯೊಬ್ಬ ಕೋಲ್ಕತ್ತಾದ ಬೀದಿ ಬದಿಯ ಆಹಾರ ಸವಿದು, ಅದರ ರುಚಿಗೆ ಮಾರು ಹೋಗಿ ಅದರಿಂದ ಸ್ಫೂರ್ತಿ ಪಡೆದು ಲಂಡನ್ನಲ್ಲಿ ಕೋಲ್ಕತ್ತಾದ ಫೇಮಸ್ ಜಲ್ ಮುರಿ ಸ್ಟಾಲ್ ತೆಗೆದಿದ್ದಾನೆ. ಬ್ರಿಟನ್ ವ್ಯಕ್ತಿಯ ಸ್ಟಾಲ್ಗೆ 10 ವರ್ಷ ತುಂಬಿದೆ. ಹೌದು, ಬ್ರಿಟಿಷ್ ವ್ಯಕ್ತಿ ಆಂಗಸ್ ಡೆನೂನ್ ಅವರು ವ್ಯಾನ್ ಅನ್ನೇ ಫುಡ್ ಸ್ಟಾಲ್ ರೀತಿ ನವೀಕರಿಸಿ, ಅದರಲ್ಲಿ ಎವೆರಿಬಡಿ ಲವ್ ಲವ್ ಝಲ್ ಮುರಿ ಎಕ್ಸ್‌ಪ್ರೆಸ್ ಎಂದು ಬರೆದಿದ್ದಾರೆ. ಅವರ ಈ ಸ್ಟಾಲ್ಗೆ ಲಂಡನ್ನಲ್ಲಿ ಹಲವಾರು ಅಭಿಮಾನಿಗಳಿದ್ದಾರೆ. ಕುತೂಹಲಕಾರಿ ವಿಚಾರವೆಂದರೆ ಆಹಾರ ಬರಹಗಾರ ಮತ್ತು ಇತಿಹಾಸಕಾರ ಪೃಥಾ ಸೇನ್ ಪ್ರಕಾರ ಜಲ್ ಮುರಿ ಎರಡನೇ ವಿಶ್ವಸಮರದ ಸಮಯದಲ್ಲಿ ಬ್ರಿಟಿಷ್ ಆಳ್ವಿಕೆಯ ಹಿಂದಿನ ರಾಜಧಾನಿಯಾಗಿದ್ದ ಕೋಲ್ಕತ್ತಾದ ಬೀದಿಗಳಲ್ಲಿ ಮೊದಲು ಜನಪ್ರಿಯವಾಗಿತ್ತು. ಯುದ್ಧದ ಸಮಯದಲ್ಲಿ ಆಗಿನ ಕಲ್ಕತ್ತಾ ಮಿಲಿಟರಿ ಕಾರ್ಯಾಚರಣೆಗಳಲ್ಲಿ ಪ್ರಮುಖ ಪಾತ್ರವನ್ನು ವಹಿಸಿತ್ತು. ಆ ಸಮಯದಲ್ಲಿ ಬಿಹಾರ ಮತ್ತು ಉತ್ತರ ಪ್ರದೇಶದಿಂದ ಕಾರ್ಮಿಕರ ದೊಡ್ಡ ಒಳಹರಿವು ಇತ್ತು. ಬ್ರಿಟಿಷ್ ಸೈನಿಕರು, ಅಮೇರಿಕನ್ ಜಿಐಗಳು ಮತ್ತು ಬಂಗಾಳಿ ಬಾಬುಗಳು ಝಲ್ ಮುರಿ ಆಹಾರವನ್ನು ತುಂಬಾ ಇಷ್ಟಪಡುತ್ತಿದ್ದರು ಎಂದು ಸೇನ್ ತಿಳಿಸಿದ್ದಾರೆ.



# ರೀಲ್ ಹುಚ್ಚಾಟಕ್ಕೆ ಮತ್ತೊಂದು ಅವಘಡ – 200 ಅಡಿ ಆಳದ ಕಂದಕಕ್ಕೆ ಬಿದ್ದ ಯುವತಿ

**ಹರಿದ್ವಾರ:** ಈ ರೀಲ್ಸ್ ಕ್ರೇಜ್ ನಿಂದ ಸಂಭವಿಸುವ ಅವಘಡಗಳು, ಅವಾಂತರಗಳು ಒಂದೆರೆಡಲ್ಲ. ಹರಿದ್ವಾರದ ಮಾನಸಾ ದೇವಿ ಹಿಲ್ಸ್‌ನಲ್ಲಿ ಇಂದು ಯುವತಿಯೊಬ್ಬಳು ರೀಲ್ಸ್ ಮಾಡಲು ಹೋಗಿ, ಆಯ ತಪ್ಪಿ ಸುಮಾರು 200 ಅಡಿ ಆಳದ ಕಂದಕಕ್ಕೆ ಬಿದ್ದ ಘಟನೆ ನಡೆದಿದೆ. ಮೊಬೈಲ್ನಲ್ಲಿ ರೀಲ್ಸ್ ರೆಕಾರ್ಡ್ ಮಾಡುವಾಗ ಈ ಯುವತಿ 200 ಅಡಿ ಆಳವಾದ ಕಂದಕಕ್ಕೆ ಬಿದ್ದಿದ್ದಾಳೆ. ತಕ್ಷಣವೇ ಸ್ಥಳದಲ್ಲಿದ್ದ ಪ್ರವಾಸಿಗರು ಆಕೆಯನ್ನು ಆಯಂಬುಲೆನ್ಸ್‌ನಲ್ಲಿ ರವಾನಿಸಿದ್ದು,ಸದ್ಯ ಗಂಭೀರ ಸ್ಥಿತಿಯಲ್ಲಿದ್ದ ಆಕೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ರೀಲ್ಸ್ ಹುಚ್ಚಾಟದಿಂದ ಈ ರೀತಿಯ ಹಲವು ಅವಘಡಗಳು ಘಟಿಸಿದ್ದರೂ, ಕೆಲ ಜನರು ಮಾತ್ರ ಇದ್ರಿಂದ ಬುದ್ಧಿ ಕಲಿಯುತ್ತಿಲ್ಲ. ಈ ಘಟನೆ ಎಲ್ಲೆಂದರಲ್ಲಿ ರೀಲ್ಸ್ ಮಾಡುವ ಅಪಾಯಗಳ ಬಗ್ಗೆ ಮತ್ತೊಂದು ಎಚ್ಚರಿಕೆ ಮೂಡಿಸುತ್ತದೆ. ಈ ಘಟನೆಯಲ್ಲಿ ಗಾಯಗೊಂಡ ಯುವತಿಯನ್ನು ಮುಜಾಫರ್ನಗರ 28 ವರ್ಷದ ರೇಶು ಎಂದು ಗುರುತಿಸಲಾಗಿದ್ದು, ಪೂಜ್ಯ ಮಾನಸಾ ದೇವಿ ದೇವಸ್ಥಾನಕ್ಕೆ ಎಂದು ಕುಟುಂಬದೊಂದಿಗೆ ಹರಿದ್ವಾರಕ್ಕೆ ಬಂದಿದ್ದಳು ಎಂದು ತಿಳಿದು ಬಂದಿದೆ



# ಇಸ್ರೇಲ್ ವಾಯುನೆಲೆ ಮೇಲೆ ಡ್ರೋನ್ ದಾಳಿ

**ಲೆಬನಾನ್:** ಇಸ್ರೇಲ್ ಸೇನೆ ಮೇಲೆ ಹಿಜ್ಬುಲ್ಲಾ ಬಂಡುಕೋರ ಸಂಘಟನೆ ಮತ್ತೆ ದಾಳಿ ನಡೆಸಿದೆ. ನಿನ್ನೆ ಇರಾನ್ ಮೇಲೆ ಇಸ್ರೇಲ್ ದಾಳಿ ಮಾಡಿದ ಬೆನ್ನಲ್ಲೇ, ಇಂದು ಇಸ್ರೇಲ್ ಸೇನೆಯನ್ನು ಗುರಿಯಾಗಿಸಿಕೊಂಡು ಹಿಜ್ಬುಲ್ಲ ವಾಯು ದಾಳಿ ನಡೆಸಿರುವುದಾಗಿ ಹೇಳಿಕೊಂಡಿದೆ.ಇಸ್ರೇಲ್ ನ ದಕ್ಷಿಣ ಟೆಲ್ ಅವಿವ್ನಲ್ಲಿರುವ ವಾಯುನೆಲೆ ಮೇಲೆ ಡ್ರೋನ್ ದಾಳಿ ನಡೆಸಿದ್ದೇವೆ ಎಂದು ಹಿಜ್ಬುಲ್ಲಾ ಸಂಘಟನೆ ಹೇಳಿದೆ.



ಇತ್ತೀಚಿನ ಒಂದು ತಿಂಗಳಿನಿಂದ ಇಸ್ರೇಲ್ ಮೇಲೆ ಯುದ್ಧ ಸಾರಿರುವ ಹಿಜ್ಬುಲ್ಲಾ ಇದುವರೆಗೂ ಗಡಿ ಪ್ರದೇಶಗಳ ಮೇಲೆ ದಾಳಿ ನಡೆಸುತ್ತಿತ್ತು. ಆದ್ರೆ ಇದೇ ಮೊದಲ ಬಾರಿಗೆ ಇಸ್ರೇಲ್ನ ಪ್ರಮುಖ ಪ್ರದೇಶವಾದ ವಾಯುನೆಲೆಯನ್ನು ಗುರಿಯಾಗಿಸಿಕೊಂಡು ದಾಳಿ ಮಾಡಿದೆ.

ಕೇವಲ ಡ್ರೈನ್ ದಾಳಿ ಮಾತ್ರವಲ್ಲದೆ, ದಕ್ಷಿಣ ಲೆಬನಾನ್ನಲ್ಲಿ ಕಾರ್ಯಾಚರಣೆ ನಡೆಸುತ್ತಿರುವ ಇಸ್ರೇಲ್ ಪಡೆಗಳ ಮೇಲೆ ಕ್ಷಿಪಣಿ ದಾಳಿ ನಡೆಸಿರುವುದಾಗಿ ಹಿಬ್ಬುಲ್ಲಾ ಹೇಳಿದೆ. ಈ ಮೂಲಕ ಇಸ್ರೇಲ್ ಮತ್ತು ಹಿಬ್ಬುಲ್ಲ ನಡುವಿನ ಸಮರ ಮತ್ತಷ್ಟು ತಾರಕಕ್ಕೇರಿದೆ.

# ಬಾಂಗ್ಲಾದೇಶದಲ್ಲಿ 100ಕ್ಕೂ ಹೆಚ್ಚು ಹಿಂದೂ ಪೊಲೀಸರನ್ನು ಕೆಲಸದಿಂದ ವಜಾ!



**ಢಾಕಾ (ಬಾಂಗ್ಲಾದೇಶ):** ಬಾಂಗ್ಲಾದೇಶದಲ್ಲಿ ಶೇಖ್ ಹಸೀನಾ ಅವರನ್ನು ಆಡಳಿತದಿಂದ ಪದಚ್ಯುತಗೊಳಿಸಿ ಪಲಾಯನ ಮಾಡಲು ಅನಿವಾರ್ಯಗೊಳಿಸಿದ ನಂತರ ಹಿಂದೂಗಳ ಮೇಲಿನ ಅತ್ಯಾಚಾರ ಕಡಿಮೆಯಾಗಿಲ್ಲ. ಇಲ್ಲಿನ ಮಹಾವಿದ್ಯಾಲಯಗಳಲ್ಲಿ ಹಿಂದೂ ಪ್ರಾಧ್ಯಾಪಕರುಗಳಿಗೆ ಬಲವಂತವಾಗಿ ರಾಜೀನಾಮೆ ನೀಡುವಂತೆ ಅನಿವಾರ್ಯಗೊಳಿಸಿದ ನಂತರ, ಈಗ ಹಿಂದೂಗಳನ್ನು ಸರಕಾರಿ ಉದ್ಯೋಗದಿಂದ ವಜಾಗೊಳಿಸಲಾಗುತ್ತಿದೆ.

'ವಾಯ್ಸ್ ಆಫ್ ಬಾಂಗ್ಲಾದೇಶ' ಈ 'ಎಕ್ಸ್' ಖಾತೆಯು ನೀಡಿದ ವರದಿ ಪ್ರಕಾರ, ಇದುವರೆಗೂ 100 ಕ್ಕೂ ಅಧಿಕ ಹಿಂದೂ ಪೊಲೀಸ್ ಅಧಿಕಾರಿಗಳನ್ನು ವಜಾ ಮಾಡಲಾಗಿದೆ.

ಈ ಮಾಹಿತಿಯ ನಂತರ ಸಾಮಾಜಿಕ ಜಾಲತಾಣಗಳಲ್ಲಿ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿವೆ. ಅದರಲ್ಲಿ ಬಾಂಗ್ಲಾದೇಶದಲ್ಲಿ ಸಂಪೂರ್ಣ ನರಸಂಹಾರದ ಸಿದ್ಧತೆಗಳು ನಡೆಯುತ್ತಿದೆ ಎಂದು ಹೇಳಲಾಗುತ್ತಿದೆ. ಅದರಲ್ಲಿ ಮೊದಲ ಹೆಜ್ಜೆಯಾಗಿ ಪೊಲೀಸ್ ಮತ್ತು ಸೇನೆಯನ್ನು ಮುಗಿಸುವ ಕಾರ್ಯ ಪ್ರಾರಂಭವಾಗಿದೆ.



# ಅಲ್ಪಸಂಖ್ಯಾತರ ಹಕ್ಕುಗಳಿಗಾಗಿ ಒತ್ತಾಯಿಸಿ ಬೃಹತ್ ಪ್ರತಿಭಟನೆ

ಬಾಂಗ್ಲಾದೇಶ: ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ವ್ಯವಹಾರ ಸಚಿವಾಲಯ ತೆರೆಯುವುದು ಸೇರಿದಂತೆ ಪ್ರಮುಖ 8 ಬೇಡಿಕೆಗಳನ್ನು ಮಧ್ಯಂತರ ಸರ್ಕಾರ ಈಡೇರಿಸುವಂತೆ ಒತ್ತಾಯಿಸಿ ಸಹಸ್ರಾರು ಹಿಂದೂಗಳು ಬೃಹತ್ ಪ್ರತಿಭಟನೆ ನಡೆಸಿದರು.

ಚಿತ್ತಗಾಂಗ್ ನ ಐತಿಹಾಸಿಕ ಲಾಲ್ದಿಘಿ ಮೈದಾನದಲ್ಲಿ ಜಮಾಯಿಸಿದ್ದ ಪ್ರತಿಭಟನಾಕಾರರು ತಮ್ಮ ಬೇಡಿಕೆ ಈಡೇರುವವರೆಗೂ ಪ್ರತಿಭಟನೆ ಮುಂದುವರೆಸುವುದಾಗಿ ಎಚ್ಚರಿಕೆ ನೀಡಿದರು.

ಬಾಂಗ್ಲಾದೇಶ ಸನಾತನ ಜಾಗರಣ್ ಮಂಚ್ ಆಯೋಜಿಸಿದ ಪ್ರತಿಭಟನೆ ಇತ್ತೀಚಿಗಿನ ಅತಿದೊಡ್ಡ ಪ್ರತಿಭಟನೆಯಾಗಿದೆ. ತಮ್ಮ ಬೇಡಿಕೆ ಈಡೇರಿಸದಿದ್ದರೆ ಢಾಕಾಕ್ಕೆ ಮೆರವಣಿಗೆ ನಡೆಸುವುದಾಗಿ ಪ್ರತಿಭಟನಾಕಾಕರು ಎಚ್ಚರಿಕೆ ನೀಡಿದ್ದಾರೆ.

ಗುರುವಾರ ಬಾಂಗ್ಲಾದೇಶದ ಪರಿಸರ ಸಚಿವ ಸೈಯದಾ ರಿಜ್ವಾನಾ ಹಸನ್ , ಹಿಂದೂ ಸಮುದಾಯದ ಬೇಡಿಕೆ ಈಡೇರಿಸುವ ಹೇಳಿಕೆ ನೀಡಿದ್ದರು. ದುರ್ಗಾ ಪೂಜೆಗಾಗಿ ಎರಡು ದಿನಗಳ ರಜೆಯನ್ನು ಜಾರಿಗೊಳಿಸುವುದಾಗಿ ಘೋಷಿಸಿದೆ.

# ರಷ್ಯಾದಲ್ಲಿ ಸೇನಾ ನಿಯೋಜನೆ ಅಂತಾರಾಷ್ಟ್ರೀಯ ಕಾನೂನನ್ನು ಉಲ್ಲಂಘಿಸುವುದಿಲ್ಲ: ಉತ್ತರ ಕೊರಿಯಾ

**ಉತ್ತರ ಕೊರಿಯಾ:** ಉಕ್ರೇನ್ನಲ್ಲಿ ತನ್ನ ಯುದ್ಧ ಪ್ರಯತ್ನಗಳಿಗೆ ಸಹಾಯ ಮಾಡಲು ರಷ್ಯಾಕ್ಕೆ ಸೈನ್ಯವನ್ನು ಕಳುಹಿಸುವುದು ಅಂತರರಾಷ್ಟ್ರೀಯ ಕಾನೂನಿನ ಉಲ್ಲಂಘನೆಯಾಗುವುದಿಲ್ಲ ಎಂದು ಉತ್ತರ ಕೊರಿಯಾ ಶುಕ್ರವಾರ ಹೇಳಿದೆ.

ಇಂತಹ ಕ್ರಮವು ಅಂತರರಾಷ್ಟ್ರೀಯ ಕಾನೂನುಗಳಿಗೆ ಅನುಗುಣವಾಗಿರುತ್ತದೆ ಎಂದು ಉಪ ವಿದೇಶಾಂಗ ಸಚಿವರನ್ನು ಉಲ್ಲೇಖಿಸಿ ಉತ್ತರ ಕೊರಿಯಾದ ಕೆಸಿಎನ್‌ಎ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಉತ್ತರ ಕೊರಿಯಾದ ಉಪ ವಿದೇಶಾಂಗ ಸಚಿವ ಕಿಮ್ ಜಾಂಗ್ ಗ್ಯು ಅವರು ದೇಶದ ರಕ್ಷಣಾ ಸಚಿವಾಲಯ ನಿರ್ವಹಿಸುವ ವಿಷಯಗಳಲ್ಲಿ ಭಾಗಿಯಾಗಿಲ್ಲ ಎಂದು ಹೇಳಿದರು, ಆದರೆ ವಿಶ್ವ ಮಾಧ್ಯಮಗಳು ಮಾತನಾಡುತ್ತಿರುವ ವಿಷಯವಿದ್ದರೆ, ಅದು ಅಂತರರಾಷ್ಟ್ರೀಯ ಕಾನೂನಿನ ನಿಯಮಗಳಿಗೆ ಅನುಗುಣವಾಗಿರುತ್ತದೆ ಎಂದು ನಾನು ಭಾವಿಸುತ್ತೇನೆ ಎಂದು ಹೇಳಿದರು.



ಉತ್ತರ ಕೊರಿಯಾದ ಉಪ ವಿದೇಶಾಂಗ ಸಚಿವ ಕಿಮ್ ಜಾಂಗ್ ಗ್ಯು ಅವರು ದೇಶದ ರಕ್ಷಣಾ ಸಚಿವಾಲಯ ನಿರ್ವಹಿಸುವ ವಿಷಯಗಳಲ್ಲಿ ಭಾಗಿಯಾಗಿಲ್ಲ ಎಂದು ಹೇಳಿದರು, ಆದರೆ ವಿಶ್ವ ಮಾಧ್ಯಮಗಳು ಮಾತನಾಡುತ್ತಿರುವ ವಿಷಯವಿದ್ದರೆ, ಅದು ಅಂತರರಾಷ್ಟ್ರೀಯ ಕಾನೂನಿನ ನಿಯಮಗಳಿಗೆ ಅನುಗುಣವಾಗಿರುತ್ತದೆ ಎಂದು ನಾನು ಭಾವಿಸುತ್ತೇನೆ ಎಂದು ಹೇಳಿದರು.

ರಷ್ಯಾದ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಉತ್ತರ ಕೊರಿಯಾ ತನ್ನ ದೇಶಕ್ಕೆ ಸೈನ್ಯವನ್ನು ಕಳುಹಿಸಿದೆಯೇ ಎಂದು ನಿರಾಕರಿಸಲು ನಿರಾಕರಿಸಿದರು. ಉತ್ತರ ಕೊರಿಯಾದ ಸೈನಿಕರ ಚಲನವಲನಗಳನ್ನು ತೋರಿಸುವ ಉಪಗ್ರಹ ಚಿತ್ರಗಳ ಬಗ್ಗೆ ವರದಿಗಾರರೊಬ್ಬರು ಕೇಳಿದಾಗ, ಪುಟಿನ್ ತಮಾಷೆಯಾಗಿ ಹೇಳಿದರು, ಚಿತ್ರಗಳು ಗಂಭೀರ ವಿಷಯ. ಚಿತ್ರಗಳು ಇದ್ದರೆ, ಅವು ಏನನ್ನಾದರೂ ಪ್ರತಿಬಿಂಬಿಸುತ್ತವೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಲ್ಲಿ ಟಿಕೆಟ್ ದರ
## 200 ರೂ.ಗೆ ನಿಗದಿಪಡಿಸುವಂತೆ ಮನವಿ

**ಬೆಂಗಳೂರು:** ಎಲ್ಲಾ ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಲ್ಲಿ ಟಿಕೆಟ್ ದರ 200 ರೂ.ಗೆ ನಿಗದಿಪಡಿಸಿ ಸರ್ಕಾರದಿಂದ ಆದೇ ಹೊರಡಿಸುವಂತೆ ಚಲನಚಿತ್ರ ವಾಣಿಜ್ಯ ಮಂಡಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದೆ.

ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸುರೇಶ್, ಸಾ.ರಾ ಗೋವಿಂದು ನೇತೃತ್ವದ ನಿಯೋಗ ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನ ಭೇಟಿ ಮಾಡಿ, ಟಿಕೆಟ್ ದರ 200 ರೂ.ಗೆ ನಿಗದಿಪಡಿಸುವಂತೆ ಮನವಿ ಮಾಡಿದೆ.

ಈ ಸಂಬಂಧ ಮಾಧ್ಯಮಗಳೊಂದಿಗೆ ಮಾತನಾಡಿರುವ ಸಾ.ರಾ ಗೋವಿಂದು, ಇತ್ತೀಚೆಗೆ ಮಲ್ಟಿಪ್ಲೆಕ್ಸ್ ಸೇರಿದಂತೆ ಚಿತ್ರಮಂದಿರಗಳಲ್ಲಿ ಪ್ರವೇಶ ದರ ದುಬಾರಿಯಾಗಿದ್ದು, ಸಾವಿರದಿಂದ ಒಂದೂವರೆ ಸಾವಿರ ರೂಪಾಯಿವರೆಗೂ ಟಿಕೆಟ್ ದರ ನಿಗದಿಪಡಿಸಲಾಗುತ್ತಿದೆ. ಇದರಿಂದ ಕನ್ನಡ ಪ್ರೇಕ್ಷಕರಿಗೆ ಹೊರೆಯಾಗಿರುತ್ತದೆ. ಹಾಗಾಗಿ ಟಿಕೆಟ್ ದರ 200 ರೂ. ಮೀರದಂತೆ ನಿಗದಿಪಡಿಸುವಂತೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯಿಂದ ಸಿಎಂಗೆ ಮನವಿ ಪತ್ರ ಸಲ್ಲಿಸಿದ್ದೇವೆ ಎಂದು ತಿಳಿಸಿದ್ದಾರೆ.

ಈ ಹಿಂದೆ ಇದೇ ರೀತಿ ಮನವೊಗೆ ವಾರ್ತಾ ಇಲಾಖೆಯ ಮೂಲಕ ಆದೇಶ ಹೊರಡಿಸಲಾಗಿತ್ತು. ಈ ಆದೇಶವನ್ನು ಪ್ರಶ್ನಿಸಿ ಅಧಿಕಾರ ವ್ಯಾಪ್ತಿಗೆ ಒಳಪಡುವುದಿಲ್ಲವೆಂದು ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳ ಮಾಲೀಕರು ನ್ಯಾಯಾಲಯದಲ್ಲಿ ತಡೆಯಾಜ್ಞೆ ತಂದಿದ್ದಾರೆ. ತಡೆಯಾಜ್ಞೆ ತೆರವುಗೊಳಿಸಿ ಸರ್ಕಾರ ಟಿಕೆಟ್ ದರ ನಿಗದಿಪಡಿಸಬೇಕೆಂದು ಮನವಿ ಮಾಡಿದ್ದೇವೆ ಎಂದಿದ್ದಾರೆ.

ದುಬಾರಿ ಪ್ರವೇಶದರದಿಂದ ಚಿತ್ರಮಂದಿರದಲ್ಲಿ ಚಿತ್ರ ವೀಕ್ಷಿಸಲು ಪ್ರೇಕ್ಷಕರು ಗಣನೀಯ ಪ್ರಮಾಣದಲ್ಲಿ ಕುಂಠಿತಗೊಂಡು ಚಿತ್ರ ನಿರ್ಮಾಣಕ್ಕೆ ಹಾಕಿದ ಬಂಡವಾಳ ವಾಪಸ್ ಪಡೆಯಲು ಕಷ್ಟಸಾಧ್ಯವಾಗುತ್ತಿದೆ. ಹಾಗಾಗಿ ಕೂಡಲೇ 200 ರೂ. ಮೀರದಂತೆ ಪ್ರವೇಶದರ ನಿಗದಿಪಡಿಸಲು ಕೋರಿದ್ದೇವೆ. ಈಗಾಗಲೇ ನೆರೆರಾಜ್ಯಗಳಾದ ತೆಲಂಗಾಣ, ಆಂಧ್ರಪ್ರದೇಶ ಮತ್ತು ಚೆನ್ನೈ ಮಲ್ಟಿಪ್ಲೆಕ್ಸ್‌ಗಳಲ್ಲಿ 150 ರೂ. ನಿಂದ 200 ರೂ. ಪ್ರವೇಶದರ ನಿಗದಿಪಡಿಸಲಾಗಿದೆ. ನಮ್ಮಲ್ಲೂ ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಲ್ಲಿ 150 ರೂ.ನಿಂದ 200 ರೂ.ಗೆ ಟಿಕೆಟ್ ದರ ನಿಗದಿ ಮಾಡಿ ಸರ್ಕಾರದಿಂದಲೇ ಆದೇಶ ಹೊರಡಿಸುವಂತೆ ಪತ್ರದಲ್ಲಿ ಉಲ್ಲೇಖಿಸಿರುವುದಾಗಿ ತಿಳಿಸಿದ್ದಾರೆ.



# ಅಪ್ಸರೆಯಂತೆ ಮಿಂಚಿದ ಸಿಂಡ್ರೆಲಾ ರಾಧಿಕಾ ಪಂಡಿತ್

ಸ್ಯಾಂಡಲ್‌ವುಡ್ ನಟಿ ರಾಧಿಕಾ ಪಂಡಿತ್ ಅವರು ವೈಯಕ್ತಿಕ ಬದುಕಿನಲ್ಲಿ ತೊಡಗಿಸಿಕೊಂಡಿದ್ದಾರೆ. ಅದೆಷ್ಟೇ ಬ್ಯುಸಿಯಾಗಿದ್ರೂ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ನಟಿ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ರಾಧಿಕಾ ಚೆಂದದ ಫೋಟೋವೊಂದನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ವೈಟ್ ಕಲರ್ ಲೆಹೆಂಗಾದಲ್ಲಿ ಅವರು ರಾಧಿಕಾ ಪಂಡಿತ್ ಅಪ್ಸರೆಯಂತೆ ಕಂಗೊಳಿಸಿದ್ದಾರೆ. ವಿವಿಧ ಭಂಗಿಯಲ್ಲಿ ನಟಿ ಪೋಸ್ ನೀಡಿದ್ದಾರೆ. ನೆಚ್ಚಿನ ನಟಿಯ ಚೆಂದದ ಲುಕ್ ನೋಡಿ 'ರಾಜಕುಮಾರಿ' ಎಂದು ರಾಧಿಕಾರನ್ನು ಫ್ಯಾನ್ಸ್ ಬಣ್ಣಿಸಿದ್ದಾರೆ. ಒಟ್ನಲ್ಲಿ ರಾಧಿಕಾ ನಯಾ ಲುಕ್ ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಅಂದಹಾಗೆ, ಪತಿ ಯಶ್ ಇಂದು ನ್ಯಾಷನಲ್ ಸ್ಟಾರ್ ಆಗಿ ಹೆಸರು ಮಾಡಿರೋದ್ದಕ್ಕೆ ನಟನ ಪರಿಶ್ರಮದ ಜೊತೆ ರಾಧಿಕಾ ಬೆಂಬಲ ಕೂಡ ಸಾಕಷ್ಟಿದೆ. ಯಶ್ ಪ್ರತಿ ಹೆಜ್ಜೆಯಲ್ಲೂ ರಾಧಿಕಾ ಜೊತೆಯಾಗಿ ಸಾಥ್ ನೀಡುತ್ತಲೇ ಬಂದಿದ್ದಾರೆ. ಯಶ್ ಕೂಡ ಸಾಕಷ್ಟು ಬಾರಿ ಸಂದರ್ಶನಗಳಲ್ಲಿ ನನ್ನ ಯಶಸ್ಸಿಗೆ ಪತ್ನಿಯೇ ಶಕ್ತಿ ಎಂದು ರಾಧಿಕಾ ಅವರ ಬೆಂಬಲದ ಬಗ್ಗೆ ಹೆಮ್ಮೆಯಿಂದ ಮಾತನಾಡಿದ್ದಾರೆ.

ಸ್ಟಾರ್ ನಟಿಯಾಗಿದ್ದಾಗಲೇ ಹಸೆಮಣೆ ಏರಿದ ನಟಿ ರಾಧಿಕಾ ಪಂಡಿತ್ ಸಾಕಷ್ಟು ಸೂಪರ್ ಹಿಟ್ ಚಿತ್ರಗಳನ್ನು ಕೊಟ್ಟಿದ್ದಾರೆ. ಇಂದಿಗೂ ಮೊಗ್ಗಿನ ಮನಸು, ಮಿಸ್ಟರ್ ಮಿಸೆಸ್ ರಾಮಾಚಾರಿ, ದೊಡ್ಮನೆ ಹುಡುಗ, ಲವ್ ಗುರು ಸೇರಿದಂತೆ ಹಲವು ಸೂಪರ್ ಚಿತ್ರಗಳನ್ನು ನೀಡಿದ್ದಾರೆ.

ಮದುವೆ ಬಳಿಕವೂ ರಾಧಿಕಾ ಫಿಟ್ ಆಗಿದ್ದಾರೆ. ಯಾವ ಯುವ ನಟಿಯರಿಗೂ ಕಮ್ಮಿಯಿಲ್ಲದಂತೆ ಮಿಂಚುವ ರಾಧಿಕಾ, ಮತ್ತೆ ಸಿನಿಮಾಗೆ ಕಮ್‌ಬ್ಯಾಕ್ ಮಾಡಬೇಕು ಅಭಿಮಾನಿಗಳ ಆಸೆ. ಅದಕ್ಕಾಗಿ ಫ್ಯಾನ್ಸ್ ಎದುರು ನೋಡ್ತಿದ್ದಾರೆ.

ಇನ್ನೂ ಹಲವು ವರ್ಷಗಳ ಪ್ರೀತಿಗೆ 2016ರಲ್ಲಿ ಯಶ್ ಮತ್ತು ರಾಧಿಕಾ ಮದುವೆಯ ಮುದ್ರೆ ಒತ್ತಿದರು. ಇವರ ದಾಂಪತ್ಯಕ್ಕೆ ಇಬ್ಬರೂ ಮಕ್ಕಳು ಸಾಕ್ಷಿಯಾಗಿದ್ದಾರೆ.

# ಕೇದಾರನಾಥನದಲ್ಲಿ 'ಕಣ್ಣಪ್ಪ' ಟೀಮ್



ದೊಡ್ಡ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿರುವ ಕಣ್ಣಪ್ಪ ಸಿನಿಮಾ ಇದೀಗ ವಿಶೇಷ ಕೈಂಕರ್ಯದಲ್ಲಿ ತೊಡಗಿಸಿಕೊಂಡಿದೆ. ಹಿರಿಯ ನಟ ಮೋಹನ್ ಬಾಬು, ವಿಷ್ಣು ಮಂಚು ಮತ್ತು ಕಣ್ಣಪ್ಪ ಸಿನಿಮಾ ತಂಡ, ಕೇದಾರನಾಥ, ಬದರಿನಾಥ್ ಮತ್ತು ಋಷಿಕೇಶಕ್ಕೆ ಭೇಟಿ ನೀಡಿದ್ದಾರೆ. ಈ ಮೂಲಕ 12 ಜ್ಯೋತಿರ್ಲಿಂಗಗಳ ದರ್ಶನಕ್ಕೆ ಮುಂದಾಗಿದ್ದಾರೆ.

ನಟ ಮೋಹನ್ ಬಾಬು, ಅವರ ಪುತ್ರ ವಿಷ್ಣು ಮಂಚು, ನಿರ್ಮಾಪಕ ಮುಖೇಶ್ ಕುಮಾರ್ ಮತ್ತು ನಟ ಅರ್ಪಿತ್ ರಂಕಾ ಅವರ ಜತೆಗೆ ಕೇದಾರನಾಥ, ಬದರಿನಾಥ್ ಮತ್ತು ಋಷಿಕೇಶದ ಶಿವನ ದೇವಾಲಯಗಳಿಗೆ ಭೇಟಿ ನೀಡಿ, ಆಧ್ಯಾತ್ಮಿಕ ಯಾತ್ರೆಯನ್ನು ಕೈಗೊಂಡರು. ಭವ್ಯವಾದ ಹಿಮಾಲಯದ ನಡುವೆ ನೆಲೆಸಿರುವ ಶಿವನಿಗೆ ಸಮರ್ಪಿತವಾದ ಹನ್ನೆರಡು ಜ್ಯೋತಿರ್ಲಿಂಗಗಳಲ್ಲಿ ಒಂದಾದ ಕೇದಾರನಾಥಕ್ಕೆ ತಂಡವು ಭೇಟಿ ನೀಡಿತು. ಬಳಿಕ ಬದರಿನಾಥದಲ್ಲಿ ಪ್ರಾರ್ಥನೆ ಸಲ್ಲಿಸಿ, ಋಷಿಕೇಶಕ್ಕೆ ಭೇಟಿ ನೀಡಿದರು. ಈ ಯಾತ್ರೆಯ ಬಗ್ಗೆ ಮಾತನಾಡಿರುವ ವಿಷ್ಣು ಮಂಚು, ''ಕಣ್ಣಪ್ಪ ಸಿನಿಮಾ ಬಿಡುಗಡೆಗೂ ಮುನ್ನ ಎಲ್ಲ 12 ಜ್ಯೋತಿರ್ಲಿಂಗ ಪುಣ್ಯ ಕ್ಷೇತ್ರಗಳಿಗೆ ತೆರಳುವುದು ನಮ್ಮ ಗುರಿ. ಅದರಂತೆ ಮೊದಲಿಗೆ ಕೇದಾರನಾಥನ ದರ್ಶನ ಪಡೆದಿದ್ದೇವೆ. ಮುಂಬರುವ ದಿನಗಳಲ್ಲಿ ಇನ್ನುಳಿದ 10 ಜ್ಯೋತಿರ್ಲಿಂಗಗಳನ್ನು ದರ್ಶನ ಮಾಡಲಿದ್ದೇವೆ. ಅದೇ ರೀತಿ ಶೀಘ್ರದಲ್ಲಿಯೇ ಈ ನಮ್ಮ ಸಿನಿಮಾ ರಿಲೀಸ್ ಆಗಲಿದೆ. ದಿ ಲಾರ್ಡ್ ಆಫ್ ದಿ ರಿಂಗ್ಸ್‌ನಂತಹ ಮಹಾಕಾವ್ಯ ಕಥೆಗಳಿಂದ ಸ್ಫೂರ್ತಿ ಪಡೆದ ಈ ಸಿನಿಮಾ, ದೃಶ್ಯವೈಭವದ ಮೂಲಕವೇ ಎಲ್ಲರನ್ನು ಬೆರಗುಗೊಳಿಸುತ್ತದೆ. ಹೆಸರಾಂತ ಹಾಲಿವುಡ್ ಛಾಯಾಗ್ರಾಹಕ ಶೆಲ್ಡನ್ ಚೌ ಅವರು ನ್ಯೂಜಿಲೆಂಡ್‌ನ ರಮಣೀಯ ಪ್ರದೇಶಗಳಲ್ಲಿ ದೃಶ್ಯಗಳನ್ನು ಸೆರೆಹಿಡಿದಿದ್ದಾರೆ. ಮುಖೇಶ್ ಕುಮಾರ್ ಸಿಂಗ್ ನಿರ್ದೇಶನದ ಈ ಚಿತ್ರದಲ್ಲಿ ಮೋಹನ್‌ಲಾಲ್, ಪ್ರಭಾಸ್, ಅಕ್ಷಯ್ ಕುಮಾರ್, ಮೋಹನ್ ಬಾಬು ಶರತ್‌ಕುಮಾರ್, ಬ್ರಹ್ಮಾನಂದಂ ಮತ್ತು ಕಾಜಲ್ ಅಗರ್ವಾಲ್ ಸೇರಿದಂತೆ ದೊಡ್ಡ ತಾರಾಗಣವಿದೆ. 24 ಫ್ರೇಮ್ಸ್ ಫ್ಯಾಕ್ಟರಿ ಮತ್ತು ಎವಿಎ ಎಂಟರ್‌ಟೈನ್‌ಮೆಂಟ್ ಬ್ಯಾನರ್‌ನಲ್ಲಿ ಕಣ್ಣಪ್ಪ ಸಿನಿಮಾವನ್ನು ನಿರ್ಮಾಣ ಮಾಡಲಾಗುತ್ತಿದೆ. ಬಿಗ್‌ಬಜೆಟ್‌ನ ಈ ಸಿನಿಮಾದ ಬಹುಪಾಲು ಚಿತ್ರೀಕರಣವನ್ನು ನ್ಯೂಜಿಲೆಂಡ್‌ನಲ್ಲಿ ಶೂಟ್ ಮಾಡಲಾಗಿದೆ.

# ದೇವಬಾಗ್ ಕಡಲ ತೀರದಲ್ಲಿ ನಟ ರಮೇಶ್ ಅರವಿಂದ್



**ಕಾರವಾರ: ಸಿನಿಮಾ ನಿರೂಪಣೆ, ಪ್ರೊಡಕ್ಷನ್ ಎಂದು ಸದಾ ಬ್ಯೂಸಿಯಾಗಿರುವ ನಟ ರಮೇಶ್ ಅರವಿಂದ್ ಉತ್ತರ ಕನ್ನಡ ಜಿಲ್ಲೆಯ ಪ್ರವಾಸ ಕೈಗೊಂಡಿದ್ದಾರೆ. ಕುಟುಂಬದ ಜೊತೆ ಪ್ರವಾಸ ಕೈಗೊಂಡಿರುವ ರಮೇಶ್ ಅರವಿಂದ್ ದಾಂಡೇಲಿಯ ಟ್ರಿಪ್ ಬಳಿಕ ಕಾರವಾರದ ದೇವಬಾಗ್ ರೆಸಾರ್ಟ್ ನಲ್ಲಿ ವಾಸ್ತವ್ಯ ಹೂಡಿದ್ದಾರೆ,. ನಿನ್ನೆ ಬೆಳಗ್ಗೆ ಕಾರವಾರಕ್ಕೆ ಬಂದಿಳಿದ ಅವರು ದೇವಬಾಗ್ ಕಡಲತೀರದಲ್ಲಿ ಸುತ್ತಾಡಿದ್ದಾರೆ. ಬಳಿಕ ಬೋಟ್ ಮೂಲಕ ಕೂರ್ಮಗಡ ದ್ವೀಪ ಹಾಗೂ ಸುತ್ತಮುತ್ತಲ ಕಡಲ ಸೌಂದರ್ಯವನ್ನು ಆಸ್ವಾದಿಸಿದರು.**

### 12 ವರ್ಷಗಳ ಬಳಿಕ ಭಾರತದಲ್ಲಿ ಟೆಸ್ಟ್ ಸರಣಿ ಗೆಲುವು
# ಇತಿಹಾಸ ಸೃಷ್ಟಿಸಿದ ಕಿವೀಸ್



ಅಗ್ರ ಕ್ರಮಾಂಕದ ಬ್ಯಾಟರ್‌ಗಳ ಕಳಪೆ ಪ್ರದರ್ಶನದಿಂದಾಗಿ ಭಾರತ ತಂಡ ಬೆಲೆತೆತ್ತಿದೆ. 2ನೇ ಟೆಸ್ಟ್ ಪಂದ್ಯದಲ್ಲೂ ಭಾರತಕ್ಕೆ ಹೀನಾಯ ಸೋಲಾಗಿದ್ದು, ಕಿವೀಸ್ 113 ರನ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಇದರೊಂದಿಗೆ 12 ವರ್ಷಗಳ ಬಳಿಕ ಭಾರತದಲ್ಲಿ ಟೆಸ್ಟ್ ಸರಣಿ ಗೆದ್ದ ತಂಡ ಎಂಬ ಹೆಗ್ಗಳಿಕೆಗೆ ಕಿವೀಸ್ ಪಾತ್ರವಾಗಿದೆ.

ಪುಣೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ 2ನೇ ಟೆಸ್ಟ್ ಪಂದ್ಯದಲ್ಲಿ 359 ರನ್‌ಗಳ ಗುರಿ ಬೆನ್ನಟ್ಟಿದ ಟೀಂ ಇಂಡಿಯಾ 245 ರನ್‌ಗಳಿಗೆ ಸರ್ವಪತನ ಕಂಡು ಸೋಲೊಪ್ಪಿಕೊಂಡಿದೆ. ಈ ಮೂಲಕ 1983ರ ಬಳಿಕ ಒಂದೇ ವರ್ಷದಲ್ಲಿ 3 ಟೆಸ್ಟ್ ಪಂದ್ಯ ಸೋತ ಅಪಖ್ಯಾತಿ ಪಡೆದಿದೆ. 1969ರಲ್ಲಿ ಒಂದೇ ವರ್ಷದಲ್ಲಿ 4 ಟೆಸ್ಟ್ ಹಾಗೂ 1983ರಲ್ಲಿ 3 ಟೆಸ್ಟ್ ಸೋತಿದ್ದ ಭಾರತ, 2024ರಲ್ಲಿ 3 ಟೆಸ್ಟ್ ಕಳೆದುಕೊಂಡಿದೆ.

301 ರನ್‌ಗಳ ಮುನ್ನಡೆಯೊಂದಿಗೆ ಮೂರನೇ ದಿನದ ಆಟ ಆರಂಭಿಸಿದ ಕಿವೀಸ್ 2ನೇ ಇನ್ನಿಂಗ್ಸ್‌ನಲ್ಲಿ 255 ರನ್ ಗಳಿಸಿ, ಭಾರತಕ್ಕೆ 359 ರನ್‌ಗಳ ಗುರಿ ನೀಡಿತ್ತು. ಬೃಹತ್ ಮೊತ್ತದ ಗುರಿ ಬೆನ್ನಟಿದ ಭಾರತ ಕಿವೀಸ್ ಸ್ಪಿನ್ ದಾಳಿಗೆ ಮಕಾಡೆ ಮಲಗಿತು. ಕಿವೀಸ್ ಸ್ಪಿನ್ ಮಾಂತ್ರಿಕ ಮಿಚೆಲ್ ಸ್ಯಾಂಟ್ನರ್, ಗ್ಲೆನ್ ಫಿಲಿಪ್ಸ್ ಅವರ ದಾಳಿಗೆ ತತ್ತರಿಸಿ ರನ್ ಕದಿಯಲು ತಿಣುಕಾಡಿತ್ತು. ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ ಹೊರತುಪಡಿಸಿ ಉಳಿದ ಅಗ್ರ ಕ್ರಮಾಂಕದ ಬ್ಯಾಟರ್‌ಗಳು ಅಲ್ಪಮೊತ್ತಕ್ಕೆ ಪೆವಿಲಿಯನ್ ಸೇರಿಕೊಂಡರು. ಇದು ಟೀಂ ಇಂಡಿಯಾ ಸೋಲಿಗೆ ಕಾರಣವಾಯಿತು.

ಭಾರತದ ಪರ ಯಶಸ್ವಿ ಜೈಸ್ವಾಲ್ 77 ರನ್ (65 ಎಸೆತ, 3 ಸಿಕ್ಸರ್, 9 ಬೌಂಡರಿ), ಶುಭಮನ್ ಗಿಲ್ 23 ರನ್, ವಿರಾಟ್ ಕೊಹ್ಲಿ 17 ರನ್, ವಾಷಿಂಗ್ಟನ್ ಸುಂದರ್ 21 ರನ್, ಸರ್ಫರಾಜ್ ಖಾನ್ 9 ರನ್, ರವಿಚಂದ್ರನ್ ಅಶ್ವಿನ್ 18 ರನ್, ನಾಯಕ ರೋಹಿತ್ ಶರ್ಮಾ 8 ರನ್ ಗಳಿಸಿ ಪೆವಿಲಿಯನ್‌ಗೆ ಮರಳಿದರು. ಕೊನೆಯವರೆಗೂ ಏಕಾಂಗಿ ಹೋರಾಟ ನಡೆಸಿದ ರವೀಂದ್ರ ಜಡೇಜಾ 84 ಎಸೆತಗಳಲ್ಲಿ 42 ರನ್ ಗಳಿಸಿದ್ದರು. ಆದ್ರೆ ಸಿಕ್ಸರ್ ಸಿಡಿಸುವ ಭರದಲ್ಲಿ ಬೌಂಡರಿ ಲೈನ್‌ಬಳಿ ಕ್ಯಾಚ್‌ಗೆ ತುತ್ತಾದರು.

ಮಿಂಚಿದ ಮಿಚೆಲ್: ಮೊದಲ ಇನ್ನಿಂಗ್ಸ್‌ನಲ್ಲಿ ಟೀಂ ಇಂಡಿಯಾ ವಿರುದ್ಧ 19.3 ಓವರ್‌ಗಳಲ್ಲಿ 53 ರನ್ ಬಿಟ್ಟುಕೊಟ್ಟು 7 ವಿಕೆಟ್ ಕಬಳಿಸಿದ್ದ ಸ್ಪಿನ್ನರ್ ಮಿಚೆಲ್ ಸ್ಯಾಂಟ್ನರ್ 2ನೇ ಇನ್ನಿಂಗ್ಸ್‌ನಲ್ಲೂ ಭಾರತದ ಬ್ಯಾಟರ್‌ಗಳ ಮೇಲೆ ಹಿಡಿತ ಸಾಧಿಸಿದರು. 29. ಓವರ್‌ಗಳಲ್ಲಿ 104 ರನ್ ಬಿಟ್ಟುಕೊಟ್ಟು 6 ವಿಕೆಟ್ ಪಡೆದು ಮಿಂಚಿದರು. ಇದರೊಂದಿಗೆ ಅಜಾಝ್ ಪಟೇಲ್ 2 ವಿಕೆಟ್, ಗ್ಲೆನ್ ಫಿಲಿಪ್ಸ್ 1 ವಿಕೆಟ್ ಪಡೆದರು.

2ನೇ ಇನ್ನಿಂಗ್ಸ್‌ನಲ್ಲಿ ಕಿವೀಸ್ ಸವಾಲಿನ ಮೊತ್ತ: ದ್ವಿತೀಯ ಇನ್ನಿಂಗ್ಸ್‌ನಲ್ಲಿ ಆರಂಭಿಕ ಸಂಕಷ್ಟದ ಹೊರತಾಗಿಯೂ ಕಿವೀಸ್ 255 ರನ್‌ಗಳ ಸವಾಲಿನ ಮೊತ್ತ ಪೇರಿಸಿತ್ತು. ನಾಯಕ ಲಾಥಮ್ 86 ರನ್ (133 ಎಸೆತ, 10 ಬೌಂಡರಿ) ಗಳಿಸಿದ್ರೆ, ವಿಲ್ ಯಂಗ್ 23 ರನ್, ಡೆವೋನ್ ಕಾನ್ವೆ 17 ರನ್, ಡೇರಿಲ್ ಮಿಚೆಲ್ 18 ರನ್ ಹಾಗೂ ರಚಿನ್ ರವೀಂದ್ರ 9 ರನ್, ಟಾಮ್ ಬ್ಲಂಡೆಲ್ 41 ರನ್, ಗ್ಲೆನ್ ಫಿಲಿಪ್ಸ್ 48 ರನ್‌ಗಳ ಕೊಡುಗೆ ನೀಡಿದರು.

ಸುಂದರ್ ಸೂಪರ್: ಮೊದಲ ಇನ್ನಿಂಗ್ಸ್‌ನಲ್ಲಿ 7 ವಿಕೆಟ್ ಕಬಳಿಸಿ ಟೀಂ ಇಂಡಿಯಾಕ್ಕೆ ಆಧಾರವಾಗಿದ್ದ ಆಫ್ ಸ್ಪಿನ್ನರ್ ವಾಷಿಂಗ್ಟನ್ ಸುಂದರ್ 2ನೇ ಇನ್ನಿಂಗ್ಸ್‌ನಲ್ಲೂ ತಮ್ಮ ಬೌಲಿಂಗ್ ದಾಳಿಯಲ್ಲಿ ಹಿಡಿತ ಸಾಧಿಸಿದರು. 19. ಓವರ್‌ಗಳಲ್ಲಿ 56 ರನ್ ಬಿಟ್ಟುಕೊಟ್ಟು 4 ವಿಕೆಟ್ ಪಡೆದರು, ಒದರೊಂದಿಗೆ ರವೀಂದ್ರ ಜಡೇಜಾ 3 ವಿಕೆಟ್ ಹಾಗೂ ಅಶ್ವಿನ್ 1 ವಿಕೆಟ್ ಪಡೆದರು.

ಮೊದಲ ಇನ್ನಿಂಗ್ಸ್‌ನಲ್ಲೂ ಭಾರತ ಕಳಪೆ ಬ್ಯಾಟಿಂಗ್:

ಮೊದಲ ಇನ್ನಿಂಗ್ಸ್‌ನಲ್ಲಿ ಕಿವೀಸ್ ಸ್ಪಿನ್ನರ್ ಮಿಚೆಲ್ ಸ್ಯಾಂಟ್ನರ್ ದಾಳಿಗೆ ತತ್ತರಿಸಿದ ಭಾರತದ ಬ್ಯಾಟರ್‌ಗಳು ರನ್ ಕದಿಯಲು ತಿಣುಕಾಡಿದರು. ಯಶಸ್ವಿ ಜೈಸ್ವಾಲ್, ಶುಭಮನ್ ಗಿಲ್ ತಲಾ 30 ರನ್ ಗಳಿಸಿದ್ರೆ ರವೀಂದ್ರ ಜಡೇಜಾ 38 ರನ್ ಗಳಿಸಿದ್ರು. ಇನ್ನುಳಿದಂತೆ ರಿಷಭ್ ಪಂತ್ 18 ರನ್, ಸರ್ಫರಾಜ್ ಖಾನ್ 11 ರನ್, ರವಿಚಂದ್ರನ್ ಅಶ್ವಿನ್ 4 ರನ್, ಆಕಾಶ್ ದೀಪ್ 6 ರನ್ ಗಳಿಸಿದ್ರೆ, ವಾಷಿಂಗ್ಟನ್ ಸುಂದರ್ 18 ರನ್ ಗಳಿಸಿ ಅಜೇಯರಾಗುಳಿದರು. ನಾಯಕ ರೋಹಿತ್ ಶರ್ಮಾ, ಜಸ್ಪ್ರೀತ್ ಬುಮ್ರಾ ಶೂನ್ಯ ಸುತ್ತಿದರು.

# ಜಾರ್ಖಂಡ್ ವಿಧಾನಸಭಾ ಚುನಾವಣೆ ರಾಯಭಾರಿಯಾಗಿ ಧೋನಿ ನೇಮಕ



ಮುಂಬರುವ ಜಾರ್ಖಂಡ್ ವಿಧಾನಸಭಾ ಚುನಾವಣೆ ರಾಯಭಾರಿಯಾಗಿ ಕ್ರಿಕೆಟಿಗ ಮಹೇಂದ್ರ ಸಿಂಗ್ ಧೋನಿಯವರನ್ನು ಚುನಾವಣಾ ಆಯೋಗ ಆಯ್ಕೆ ಮಾಡಿದೆ.

ನ.13 ಹಾಗೂ ನ.20ರಂದು ಎರಡು ಹಂತಗಳಲ್ಲಿ ನಡೆಯಲಿರುವ ಜಾರ್ಖಂಡ್ ವಿಧಾನಸಭಾ ಚುನಾವಣೆಗೆ ಭಾರತ ಕ್ರಿಕೆಟ್ ತಂಡದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಅವರನ್ನು ರಾಯಭಾರಿಯಾಗಿ ನೇಮಕ ಮಾಡಲಾಗಿದೆ.

ಜಾರ್ಖಂಡ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಜಾರ್ಖಂಡ್ ಮುಖ್ಯ ಚುನಾವಣಾಧಿಕಾರಿ ಕೆ.ರವಿಕುಮಾರ್ ಮಾತನಾಡಿ, ವಿಧಾನಸಭಾ ಚುನಾವಣೆಗೆ ಧೋನಿ ತಮ್ಮ ಫೋಟೋವನ್ನು ಬಳಸಲು ಚುನಾವಣಾ ಆಯೋಗಕ್ಕೆ ಒಪ್ಪಿಗೆ ನೀಡಿದ್ದಾರೆ. ಜೊತೆಗೆ ಇನ್ನ್ಯಾವುದೇ ವಿವರ ಬೇಕಾದಲ್ಲಿ ಅವರ ಒಪ್ಪಿಗೆಯ ಮೇರೆಗೆ ತೆಗೆದುಕೊಳ್ಳಲಾಗುವುದು. ಖಘಾಇಇಕ (ಸಿಸ್ಟಮ್ಯಾಟಿಕ್ ವೋಟರ್ಸ್ ಎಜುಕೇಶನ್ ಮತ್ತು ಎಲೆಕ್ಟೋರಲ್ ಪಾರ್ಟಿಸಿಪೇಷನ್) ಕಾರ್ಯಕ್ರಮದ ಅಡಿಯಲ್ಲಿ ಮತದಾರರಲ್ಲಿ ಜಾಗೃತಿ ಮೂಡಿಸಲು ಧೋನಿ ಭಾಗಿಯಾಗಲಿದ್ದಾರೆ. ವಿಶೇಷವಾಗಿ ಮತದಾರರಲ್ಲಿ ಮತ ಚಲಾಯಿಸುವಂತೆ ಪ್ರೋತ್ಸಾಹಿಸುತ್ತಾರೆ ಎಂದು ಚುನಾವಣಾ ಆಯೋಗ ಆಶಿಸುತ್ತದೆ ಎಂದರು. ನ.13 ರಂದು ಮೊದಲ ಹಂತದಲ್ಲಿ ಒಟ್ಟು 43 ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಈಗಾಗಲೇ ಶುಕ್ರವಾರ (ಅ.25ರಂದು) ನಾಮಪತ್ರ ಸಲ್ಲಿಕೆ ಪೂರ್ಣಗೊಂಡಿದೆ. ನಾಮಪತ್ರ ಸಲ್ಲಿಸಿದವರ ಪೈಕಿ ಮಾಜಿ ಮುಖ್ಯಮಂತ್ರಿ ಚಂಪೈ ಸೊರೇನ್ ಅವರು ಸರೈಕೆಲಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ.

ಆಲ್ ಜಾರ್ಖಂಡ್ ಸ್ಟೂಡೆಂಟ್ಸ್ ಯೂನಿಯನ್ ಪಕ್ಷದ ಅಧ್ಯಕ್ಷ ಮತ್ತು ಜಾರ್ಖಂಡ್‌ನ ಮಾಜಿ ಉಪಮುಖ್ಯಮಂತ್ರಿ ಸುದೇಶ್ ಮಹತೋ ಅವರು ಸಿಲ್ಲಿ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದ್ದು, ಮುಂಬರುವ ಜಾರ್ಖಂಡ್ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ, ಎಜೆಎಸ್‌ಯು, ಜನತಾ ದಳ ಮತ್ತು ಲೋಕ ಜನಶಕ್ತಿ ಪಕ್ಷ ಜೊತೆ ಮೈತ್ರಿ ಮಾಡಿಕೊಂಡು ಸ್ಪರ್ಧಿಸಲಿದೆ. ಬಿಜೆಪಿ 68, ಎಜೆಎಸ್‌ಯು 10, ಜೆಡಿಯು 2 ಮತ್ತು ಎಲ್‌ಜೆಪಿ 1 ಸ್ಥಾನಗಳಲ್ಲಿ ಸ್ಪರ್ಧಿಸಲಿವೆ. ಒಟ್ಟು 81 ಸ್ಥಾನಗಳಿಗೆ ನ.13 ಮತ್ತು ನ.20 ರಂದು ಎರಡು ಹಂತಗಳಲ್ಲಿ ಜಾರ್ಖಂಡ್ ವಿಧಾನಸಭೆ ಚುನಾವಣೆ ನಡೆಯಲಿದ್ದು, ನ.23 ರಂದು ಫಲಿತಾಂಶ ಪ್ರಕಟಿಸಲಿದೆ.

### ಬೆಂಗಳೂರಿನ 10 ಮಾಲ್‌ಗಳಲ್ಲಿ ಆಹಾರ ಗುಣಮಟ್ಟ ಪರೀಕ್ಷಾ ಕೇಂದ್ರ
# ಆಹಾರ ಇಲಾಖೆಯಿಂದ ಮಹತ್ವದ ಹೆಜ್ಜೆ



**ಬೆಂಗಳೂರು:** ರಾಜ್ಯದಲ್ಲಿ ಕಬಾಬ್, ಕಾಟನ್ ಕ್ಯಾಂಡಿಯಲ್ಲಿ ಕೃತಕ ಬಣ್ಣ ಬಳಕೆಗೆ ನಿಷೇಧ ವಿಧಿಸಿ ಆದೇಶ ಹೊರಡಿಸಿದ್ದ ಆರೋಗ್ಯ ಇಲಾಖೆ ಈಗ ಮತ್ತೊಂದು ಹೆಜ್ಜೆ ಇಟ್ಟಿದೆ. ಇನ್ಮುಂದೆ ಆಹಾರದ ಗುಣಮಟ್ಟ ಮತ್ತು ಸುರಕ್ಷತೆ ಬಗ್ಗೆ ಗೊಂದಲ ಇರುವವರು ಇನ್ಮುಂದೆ ಆಹಾರ ಪರೀಕ್ಷೆಗೆ ಒಳಪಡಿಸಬಹುದು.

ಬೆಂಗಳೂರಲ್ಲಿ ಕಳೆದ ಎರಡು ತಿಂಗಳಿಂದ ಆಹಾರ ಹಾಗೂ ಆರೋಗ್ಯ ಇಲಾಖೆ ಅಸುರಕ್ಷಿತ ಆಹಾರಗಳ ಮೇಲೆ ಸಮರ ಸಾರಿದೆ. ಆಹಾರ ಮತ್ತು ಗುಣಮಟ್ಟ ಸುರಕ್ಷತಾ ಇಲಾಖೆ ಮೇಲಿಂದ ಮೇಲೆ ಬೆಂಗಳೂರಿನ ಹೋಟೆಲ್, ರೆಸ್ಟೋರೆಂಟ್‌ಗಳ ಮೇಲೆ ದಾಳಿ ನಡೆಸುತ್ತಿದೆ. ಕಾಟನ್ ಕ್ಯಾಂಡಿಯಿಂದ ಶುರುವಾದ ನಿಷೇಧದ ಪಟ್ಟಿ ಟೊಮೆಟೊ ಸಾಸ್ ತನಕ ಬಂದು ನಿಂತಿದೆ. ಇದೀಗ ಮತ್ತೊಂದು ಮಹತ್ವದ ಹೋರಾಟ ಮಾಡಲು ಆಹಾರ ಇಲಾಖೆ ಮುಂದಾಗಿದೆ.

ಸಿಲಿಕಾನ್ ಸಿಟಿಯಲ್ಲಿ ಜನ ವೀಕೆಂಡ್ ಬಂದರೆ ಸಾಕು ಮಾಲ್‌ಗಳತ್ತ ಮುಖ ಮಾಡ್ತಾರೆ. ಮಾಲ್‌ಗಳ ಫುಡ್ ಕೋರ್ಟ್‌ಗಳಲ್ಲಿ ತಯಾರಾಗುವ ಆಹಾರವನ್ನು ಇನ್ಮುಂದೇ ಜನರೇ ಪರೀಕ್ಷಿಸಿ ನೋಡಬಹುದಾಗಿದೆ. ಆಹಾರದ ಗುಣಮಟ್ಟ, ಆಹಾರ ಕಲುಷಿತಗೊಂಡಿರುವ ಪ್ರಮಾಣ ಪರೀಕ್ಷೆ ಪತ್ತೆ ಮಾಡುವ ಪರೀಕ್ಷೆ ಕೇಂದ್ರವನ್ನು ಬೆಂಗಳೂರಿನ 10 ಮಾಲ್‌ಗಳಲ್ಲಿ ಸ್ಥಾಪನೆ ಮಾಡಿದೆ. ನಿನ್ನೆ ಬೆಂಗಳೂರಿನ ಮಾಲ್ ಆಫ್ ಏಷ್ಯಾದಲ್ಲಿ ಆಹಾರ ತಪಾಸಣಾ ರ್‍ಯಾಪಿಡ್ ಟೆಸ್ಟಿಂಗ್ ಕಿಟ್ಸ್‌ಗಳಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಿದರು. ಆಹಾರಗಳಲ್ಲಿ ಹಾಕುವ ಪ್ರಾಥಮಿಕ ಆಹಾರಗಳ ಪರೀಕ್ಷಾ ವಿಧಾನವನ್ನ ಪರಿಶೀಲಿಸಿದರು.

ಬೆಂಗಳೂರಿನ 10 ಮಾಲ್‌ಗಳಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಆಹಾರ ಪದಾರ್ಥಗಳ ಕಲಬೆರಕೆ ಪತ್ತೆ ಹಚ್ಚುವ ಪರೀಕ್ಷಾ ಕೇಂದ್ರಗಳನ್ನ ಸ್ಥಾಪಿಸಲಾಗಿದೆ. ಸಾರ್ವಜನಿಕರು ಮಾಲ್‌ಗಳಲ್ಲಿ ಪ್ರತಿ ದಿನ ಬಳಸುವ ಆಹಾರ ಪದಾರ್ಥಗಳಾದ ಕಾಫೀ, ಟೀ, ಬೇಳೆ ಕಾಳುಗಳು, ಸಕ್ಕರೆ, ಅಡುಗೆ ಎಣ್ಣೆ, ಟೀ-ಪುಡಿ, ಉಪ್ಪು, ಹಾಲು ಮತ್ತು ಹಾಲಿನ ಉತ್ಪನ್ನಗಳಾದ ತುಪ್ಪ, ಪನೀರ್, ಬೆಣ್ಣೆ ಹಾಗೂ ತರಕಾರಿ ಇತರೆ ಆಹಾರ ಸಾಮಗ್ರಿಗಳ ಗುಣಮಟ್ಟವನ್ನು ತ್ವರಿತ ಪರೀಕ್ಷೆಗಳಿಂದ ಖಚಿತಪಡಿಸಿಕೊಳ್ಳಬಹುದಾಗಿದೆ.

ಇದರಿಂದ ಜನರಿಗೆ ಆಹಾರ ಧಾನ್ಯಗಳ ಬಗ್ಗೆ ಅನುಮಾನ ಬಂದರೆ, ಈ ಟೆಸ್ಟಿಂಗ್ ಕೇಂದ್ರದಲ್ಲಿ ಬಗೆಹರಿಸಿಕೊಳ್ಳಬಹುದು. ಗುಣಮಟ್ಟವಲ್ಲದ ಆಹಾರ ಪದಾರ್ಥಗಳನ್ನು ಮಾರಿದರೆ ಆಹಾರ ಹಾಗೂ ಗುಣಮಟ್ಟ ಇಲಾಖೆಯೂ ಕಠಿಣ ಕ್ರಮ ಕೈಗೊಳ್ಳಲು ಮುಂದಾಗಿದೆ.

# ರೈತರಿಗೆ ವಕ್ಫ್ ಬೋರ್ಡ್ ನೋಟಿಸ್



**ಶಿವಮೊಗ್ಗ:** ವಿಜಯಪುರದಲ್ಲಿ ರೈತರ ಆಸ್ತಿಗೆ ವಕ್ಫ್ ಆಡಳಿತ ಮಂಡಳಿ ನೋಟಿಸ್ ನೀಡಿದ್ದರ ಬಗ್ಗೆ ಕಂದಾಯ ಇಲಾಖೆ ಪರಿಶೀಲನೆ ನಡೆಸಲಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದ್ದಾರೆ. ನಗರದಲ್ಲಿ ನೂತನ ಪೊಲೀಸ್ ಸಮುದಾಯ ಭವನ ಉದ್ಘಾಟಿಸಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ವಿಜಯಪುರದ ರೈತರಿಗೆ ವಕ್ಫ್ ಆಡಳಿತ ಮಂಡಳಿ ನೋಟಿಸ್ ನೀಡಿದ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಕಂದಾಯ ಇಲಾಖೆಯ ಅಧಿಕಾರಿಗಳು ಹಳೆಯ ದಾಖಲೆಗಳನ್ನು ಪರಿಶೀಲನೆ ಮಾಡಿ ಕ್ರಮಕೈಗೊಳ್ಳುತ್ತಾರೆ ಎಂದು ತಿಳಿಸಿದ್ದಾರೆ. ಮೂರು ಕ್ಷೇತ್ರಗಳ ಉಪಚುನಾವಣೆ ವಿಚಾರವಾಗಿ, ಎಲ್ಲಾ ಕ್ಷೇತ್ರಗಳಲ್ಲೂ ನಾವು ಗೆಲ್ಲುತ್ತೇವೆ. ಬಿಜೆಪಿ ಹಾಗೂ ಜೆಡಿಎಸ್ ಒಂದಾಗಿದ್ದರೂ ಸಹ ರಾಜ್ಯದಲ್ಲಿ ಕಾಂಗ್ರೆಸ್ ಜನಪರ ಕೆಲಸ ಮಾಡ್ತಿದೆ. ಬಡ ಜನರಿಗೆ ಆರ್ಥಿಕವಾಗಿ ಮೇಲೆತ್ತುವ ಕೆಲಸ ಮಾಡುತ್ತಿದ್ದೇವೆ ಎಂದಿದ್ದಾರೆ. ಶಿಗ್ಗಾಂವಿಯಲ್ಲಿ ಬಂಡಾಯದ ವಿಚಾರವಾಗಿ, ಖಾದ್ರಿ ಅವರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು. ಈ ಹಿಂದೆ ಚುನಾವಣೆಗೆ ಸ್ಪರ್ಧೆ ಮಾಡಿದ್ದರು. ಅವರ ಮನವೊಲಿಸುತ್ತೇವೆ, ಅವರು ನಾಮಪತ್ರ ವಾಪಸ್ ತೆಗೆದುಕೊಳ್ಳುತ್ತಾರೆ ಎಂದು ಸ್ಪಷ್ಟಪಡಿದ್ದಾರೆ.

# ಬೆಳಗಾವಿ ಬಿಮ್ಸ್ ಆಸ್ಪತ್ರೆಯ ಮತ್ತೊಂದು ಅದ್ವಾನ ಬಯಲಿಗೆ

**ಬೆಳಗಾವಿ:** ಕಳೆದ 3 ತಿಂಗಳಲ್ಲಿ ನಗರದ ಬಿಮ್ಸ್ ಆಸ್ಪತ್ರೆಯಲ್ಲಿ 41 ಶಿಶುಗಳು ಸಾವನ್ನಪ್ಪಿರುವಂತಹ ಆತಂಕಕಾರಿ ವಿಚಾರ ಬಯಲಾಗಿದೆ. ಆದರೆ ಶಿಶುಗಳ ಸಾವನ್ನಪ್ಪುತ್ತಿದ್ದರೂ ಬಿಮ್ಸ್ ಆಡಳಿತ ಮಂಡಳಿ ತಲೆಕೆಡಿಸಿಕೊಂಡಿಲ್ಲ. ಮಕ್ಕಳ ಸಾವಿನ ಬಗ್ಗೆ ಕಾರಣ ಹೇಳಿ ವೈದ್ಯರು ನುಣುಚಿಕೊಳ್ಳುತ್ತಿದ್ದಾರೆ. ಹೌದು.. ಬೆಳಗಾವಿಯ ಬಿಮ್ಸ್ ಆಸ್ಪತ್ರೆಯಲ್ಲಿ ನಿತ್ಯ ಸುಮಾರು ಇಪ್ಪತ್ತರಿಂದ ಮೂವತ್ತು ಹೆರಿಗೆ ಆಗುತ್ತವೆ. ತಿಂಗಳಿಗೆ 800 ವರೆಗೂ ಇಲ್ಲಿ ಹೆರಿಗೆ ಆಗುತ್ತಿದ್ದು, ಆದರೆ ಮೂರು ತಿಂಗಳಲ್ಲಿ ಬರೋಬ್ಬರಿ 41 ಶಿಶುಗಳು ಸಾವನ್ನಪ್ಪಿರುವುದು ಬೆಳಕಿಗೆ ಬಂದಿದೆ. ಖುದ್ದು ಸಾವಿನ ಕುರಿತು ಆಸ್ಪತ್ರೆಯ ಆಡಳಿತ ಮಂಡಳಿಯವರೇ ಒಪ್ಪಿಕೊಂಡಿದ್ದು ಹೀಗಾಗಿ ಜನರಿಗೆ ಸಾಕಷ್ಟು ಆತಂಕ ಹುಟ್ಟುವಂತೆ ಮಾಡಿದೆ.



ಬಿಮ್ಸ್ ಆಸ್ಪತ್ರೆಯಲ್ಲಿ ತಿಂಗಳುವಾರು ಎಷ್ಟು ಶಿಶುಗಳು ಸಾವನ್ನಪ್ಪಿ ಎಂದು ನೋಡುವುದಾದರೆ ಆಗಸ್ಟ್ ತಿಂಗಳಲ್ಲಿ 12, ಸೆಪ್ಟಂಬರ್‌ನಲ್ಲಿ 18 ಮತ್ತು ಅಕ್ಟೋಬರ್‌ನಲ್ಲಿ 11 ಶಿಶುಗಳು ಮೃತಪಟ್ಟಿವೆ. ಹಾಗಾದರೆ ಮೂರು ತಿಂಗಳಲ್ಲಿ ಹೆಚ್ಚು ಶಿಶುಗಳ ಮರಣಕ್ಕೆ ಕಾರಣವೇನು ಅಂತ ನೋಡಿದಾಗ ಆಸ್ಪತ್ರೆಯಲ್ಲಿರುವ ಏರ್ ಕಂಪ್ರೆಸರ್ ಕೆಟ್ಟು ಹೋಗಿದ್ದು ಅನ್ನೋ ವಿಚಾರ. ಆಸ್ಪತ್ರೆಯಲ್ಲಿ ಎರಡು ಏರ್ ಕಂಪ್ರೆಸರ್ ಇದ್ದು ಎರಡರ ಪೈಕಿ ಒಂದು ಮೂರು ತಿಂಗಳ ಹಿಂದೆ ಕೆಟ್ಟು ಹೋಗಿದ್ದು ಅದನ್ನ ಸರಿ ಕೂಡ ಮಾಡಿಲ್ಲ. ಇದರಿಂದ ಆಕ್ಸಿಜನ್ ಸರಿಯಾಗಿ ಸಿಗದೇ ಹೆಚ್ಚು ಕಂದಮ್ಮಗಳು ಸಾವಾಗಿರುವ ಶಂಕೆ ಕೂಡ ವ್ಯಕ್ತವಾಗುತ್ತಿದೆ. ಈ ವಿಚಾರವನ್ನ ಬಿಮ್ಸ್ ಆಸ್ಪತ್ರೆಯ ನಿರ್ದೇಶಕ ಡಾ. ಅಶೋಕ ಶೆಟ್ಟಿ ಅವರನ್ನ ಕೇಳಿದರೆ ಮಕ್ಕಳು ಮೃತಪಟ್ಟಿರುವುದು ನಿಜ. ಅದರ ಬಗ್ಗೆ ತನಿಖೆ ಮಾಡುತ್ತೇವೆ. ಒಂದು ಏರ್ ಕಂಪ್ರೆಸರ್ ಕೆಟ್ಟಿದ್ದು ಅದು ಪದೇ ಪದೇ ಹಾಳಾಗ್ತಿದ್ದು ಹೀಗಾಗಿ ಹೊಸದೊಂದು ಮಷಿನ್ ತೆಗೆದುಕೊಳ್ಳಲು ಹೊಸದೊಂದು ಟೆಂಡರ್ ಕರೆದಿದ್ದಾಗಿ ಹೇಳಿದ್ದಾರೆ. ಅವಧಿಪೂರ್ವ ಪ್ರಸವ, ಶಿಶುಗಳ ತೂಕ ಕಡಿಮೆ ಸೇರಿ ಹಲವು ಕಾರಣಗಳಿಂದ ಮಕ್ಕಳು ಮೃತಪಟ್ಟಿದ್ದು ಅಂತಾ ವೈದ್ಯರು ಸಬೂಬು ಕೂಡ ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com